ಸಂಪುಟ: 05 ಸಂಚಿಕೆ: 158 ಪುಟಗಳು: 08 ಗುರುವಾರ 21 ಆಗಸ್ಟ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಒಂದು ಸಾಮಾನ್ಯ ಕೆಲಸವನ್ನು ಅತ್ಯುತ್ತಮವಾಗಿ ಮಾಡುವುದರಿಂದ ಶ್ರೇಷ್ಠ ಪ್ರತಿಫಲ ದೊರಕುತ್ತದೆ..

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ದಲಿತ ಸಿಎಂ ಕೂಗು ತಪ್ಪಿಸಲು ಒಳ ಮೀಸಲಾತಿ ಜಾರಿ: ಬೊಮ್ಮಾಯಿ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಕುರ್ಚಿ ಉಳಿಸಿಕೊಳ್ಳಲು ಹಾಗೂ ದಲಿತ ಮುಖ್ಯಮಂತ್ರಿ ಕೂಗು ತಪ್ಪಿಸಲು ಸುಪ್ರೀಂ ಕೋರ್ಟ್ ಆದೇಶ ತಿರಸ್ಕಾರ ಮಾಡಿ ಅವಕಾಶ ವಂಚಿತ ಸಮುದಾಯಗಳಿಗೆ ಅನ್ಯಾಯ ಮಾಡಿದ್ದಾರೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದರು. ಜನಸಂಖ್ಯೆ ಆಧಾರದಲ್ಲಿ ಕಾಲಕಾಲಕ್ಕೆ ಮೀಸಲಾತಿ ಪರಿಷ್ಕರಿಸುವಂತೆ ಸಂವಿಧಾನದಲ್ಲಿ ಸ್ಪಷ್ಟವಾಗಿ ಹೇಳಲಾಗಿದೆ. ರಾಜ್ಯದಲ್ಲಿ ಕೇವಲ ಆರು ಜಾತಿಯಿಂದ ಪ್ರಾರಂಭವಾದಂತಹ ಪರಿಶಿಷ್ಟ ಜಾತಿ ಪಟ್ಟಿಗೆ ಈಗ 101 ಜಾತಿಗಳು ಸೇರಿವೆ. ಕಾಂಗ್ರೆಸ್ ಸರ್ಕಾರ ಜಾತಿಗಳನ್ನು ಸೇರಿಸಿಕೊಂಡು ಹೋಯಿತು. ಆದರೆ, ಅದಕ್ಕೆ ಅನುಗುಣವಾಗಿ ಮೀಸಲಾತಿ ಹೆಚ್ಚಳ ಮಾಡುವ ಪ್ರಯತ್ನ ಮಾಡಲಿಲ್ಲ. ಇದು ಸಮುದಾಯಕ್ಕೆ ಮಾಡಿರುವ ದೊಡ್ಡ ದ್ರೋಹ' ಎಂದರು.

## ಕೋಲ, ನೇಮೋತ್ಸವಕ್ಕೆ ಪೊಲೀಸರಿಂದ ಅಡ್ಡಿ: ಬಿಜೆಪಿ ಆರೋಪ

• ಉದಯವಾಹಿನಿ, ಬೆಂಗಳೂರು

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ರಾತ್ರಿ ವೇಳೆ ನಡೆಯುವ ಕೋಲ, ನೇಮೋತ್ಸವ, ಯಕ್ಷಗಾನ ಇತರ ಧಾರ್ಮಿಕ ಚಟುವಟಿಕೆಗಳಿಗೆ ಪೊಲೀಸರು ಅಡ್ಡಿಯನ್ನು ಮಾಡುತ್ತಿದ್ದಾರೆ ಎಂದು ಬಿಜೆಪಿ ಸದಸ್ಯರು ವಿಧಾನಸಭೆಯಲ್ಲಿ ದೂರಿದರು. ಶೂನ್ಯವೇಳೆಯಲ್ಲಿ ಬಿಜೆಪಿಯ ವೇದವ್ಯಾಸ ಕಾಮತ್ ಅವರು ಈ ವಿಷಯ ಪ್ರಸ್ತಾಪಿಸಿದರು. 'ನಮ್ಮ ಪ್ರದೇಶದಲ್ಲಿ ಹಬ್ಬದ ದಿನಗಳಲ್ಲಿ ಪೊಲೀಸರು ತುಂಬಾ ತೊಂದರೆ ಕೊಡುತ್ತಿದ್ದಾರೆ. ಕೋಲ, ಯಕ್ಷಗಾನ, ಮೊಸರುಕುಡಿಕೆ, ಹುಲಿವೇಷ ಇತ್ಯಾದಿಗಳಲ್ಲಿ ಮೈಕ್‌ಗಳನ್ನು ಬಳಸಲು ಬಿಡುತ್ತಿಲ್ಲ. ಹಾಕಿದರೆ ಶಬ್ದದ ಮಿತಿ ಹೆಚ್ಚಾಯಿತು ಎಂದು ಮೈಕ್‌ಗಳನ್ನು ಕಿತ್ತುಕೊಂಡು ಹೋಗಿ ಆಯೋಜಕರು ಮತ್ತು ಸೌಂಡ್ ಸಿಸ್ಟಂ ನಿರ್ವಹಿಸುವ ವ್ಯಕ್ತಿಗಳ ಮೇಲೆ ಪ್ರಕರಣ ದಾಖಲಿಸುತ್ತಿದ್ದಾರೆ' ಎಂದು ಹೇಳಿದರು. ರಾತ್ರಿ 10.30 ರ ಬಳಿಕ ಯಾವುದೇ ಕಾರ್ಯಕ್ರಮ ನಡೆಸಬಾರದು ಎನ್ನುತ್ತಾರೆ. ಕೋಲ ಮತ್ತು ನೇಮೋತ್ಸವಗಳು ನಡೆಯುವುದೇ ರಾತ್ರಿ ವೇಳೆ. ಇದಕ್ಕೆ ನ್ಯಾಯಾಲಯದ ಆದೇಶವನ್ನು ಪ್ರಸ್ತಾಪಿಸಿ ಇಂತಹ ಉತ್ಸವಗಳಿಗೆ ಅವಕಾಶ ನೀಡುತ್ತಿಲ್ಲ' ಎಂದರು.

## ಕೋವಿಡ್ ಪರೀಕ್ಷೆ ಹೆಸರಿನಲ್ಲಿ 258 ಕೋಟಿ ಅಕ್ರಮ: ಸಿಎಜಿ ವರದಿ

• ಉದಯವಾಹಿನಿ, ಬೆಂಗಳೂರು

ಕೋವಿಡ್ ಅವಧಿಯಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ತಪಾಸಣೆ ಹೆಸರಿನಲ್ಲಿ 258.80 ಕೋಟಿಯನ್ನು ಅಕ್ರಮವಾಗಿ ವೆಚ್ಚ ಮಾಡಿದೆ ಎಂದು ಭಾರತದ ಮಹಾಲೇಖಪಾಲರ (ಸಿಎಜಿ) ವರದಿ ಹೇಳಿದೆ.

ವಿಧಾನ ಸಭೆಯಲ್ಲಿ' ಮಂಡಿಸಲಾದ 'ಕಟ್ಟಡ ಮತ್ತು ಇತರ ಕಲ್ಯಾಣ ಕಾರ್ಮಿಕರ ಕಲ್ಯಾಣ ವರದಿ'ಯಲ್ಲಿ ಈ ಮಾಹಿತಿ ಇದೆ. 2020ರಿಂದ 2022ರ ಮಧ್ಯೆ, ಬಿಜೆಪಿ ಸರ್ಕಾರದ ಅವಧಿಯಲ್ಲಿ ಈ ಅಕ್ರಮ ನಡೆದಿದೆ. ಕೋವಿಡ್‌ನ ಮೊದಲ ಅಲೆಯ ಸಂದರ್ಭದಲ್ಲಿ (2020ರ ಜುಲೈ) ಮಂಡಳಿಯು ತನ್ನ ಸದಸ್ಯ ಕಾರ್ಮಿಕರ ಆರೋಗ್ಯ ತಪಾಸಣೆ ನಡೆಸಲು ಸುಮಾರು 258.80 ಕೋಟಿ ಮೊತ್ತದ ಯೋಜನೆ ರೂಪಿಸಿ ಆರ್ಥಿಕ ಇಲಾಖೆಗೆ ಪ್ರಸ್ತಾವ ಸಲ್ಲಿಸಿತ್ತು. ಈ ಪ್ರಸ್ತಾವದಲ್ಲಿ ಹಲವು ನ್ಯೂನತೆಗಳಿವೆ ಎಂದು ಇಲಾಖೆಯು ಪ್ರಸ್ತಾವವನ್ನು ತಿರಸ್ಕರಿಸಿತ್ತು ಎಂಬ ಮಾಹಿತಿ ವರದಿಯಲ್ಲಿದೆ.

## 2 ಕೋಟಿ ಒಳಗಿನ ಕಾಮಗಾರಿ: ಸುತ್ತೋಲೆ ಮಾರ್ಪಾಡಿಗೆ ಶಿಫಾರಸು

• ಉದಯವಾಹಿನಿ, ಬೆಂಗಳೂರು

ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಗುತ್ತಿಗೆದಾರರು ಟೆಂಡರ್‌ನಲ್ಲಿ ಭಾಗವಹಿಸಲು ಅವಕಾಶ ಮಾಡಿಕೊಡಬೇಕು. ಆದ್ದರಿಂದ, 2 ಕೋಟಿ ಒಳಗಿನ ಕಾಮಗಾರಿಗಳನ್ನು 'ಪ್ಯಾಕೇಜ್ ಅಡಿ ಮಾಡಬಾರದು ಎಂದು ಆರ್ಥಿಕ ಇಲಾಖೆ ಸುತ್ತೋಲೆ ಹೊರಡಿಸಬೇಕು ಎಂದು ಎಸ್‌ಸಿಎಸ್‌ಟಿ ಕಲ್ಯಾಣ ಸಮಿತಿ ಶಿಫಾರಸು ಮಾಡಿದೆ. ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ವರದಿಯನ್ನು ಸಮಿತಿ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ವಿಧಾನಸಭೆಯಲ್ಲಿ ಬುಧವಾರ ಮಂಡಿಸಿದರು. 2025-26 ನೇ ಸಾಲಿನ ಬಜೆಟ್‌ನಲ್ಲಿ 2 ಕೋಟಿಗಳವರೆಗಿನ ಕಾಮಗಾರಿಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಗುತ್ತಿಗೆದಾರಿಗೆ ಮೀಸಲಾತಿ ಒದಗಿಸುವುದನ್ನು ಘೋಷಿಸಲಾಗಿತ್ತು.

ಈ ಸಂಬಂಧ ವಿವಿಧ ಕಾಮಗಾರಿಗಳಿಗೆ ಟೆಂಡರ್ ಆಹ್ವಾನಿಸುವಾಗ ಶೇ 23.01 ರಷ್ಟು ಮೀಸಲಾತಿ ನೀಡಲಾಗುತ್ತದೆ. ಆಗ ಕೆಳ ವರ್ಗದ ಗುತ್ತಿಗೆದಾರರು ಟೆಂಡರ್‌ನಲ್ಲಿ ಭಾಗವಹಿಸಲು ಅವಕಾಶ ನೀಡಬೇಕು ಎಂದು ಸೂಚಿಸಿದೆ.

**ಪ್ರತಿಪಕ್ಷಗಳ ಪ್ರಬಲ ವಿರೋಧದ ನಡುವೆ ಲೋಕಸಭೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಮೂರು ವಿವಾದಾತ್ಮಕ ಮಸೂದೆಗಳನ್ನು ಮಂಡಿಸಿದರು. ಗಂಭೀರ ಕ್ರಿಮಿನಲ್ ಆರೋಪಗಳ ಮೇಲೆ ೩೦ ದಿನಗಳ ಕಾಲ ಜೈಲುವಾಸ ಅನುಭವಿಸಿದ್ದರೆ ಪ್ರಧಾನಮಂತ್ರಿ, ಕೇಂದ್ರ ಸಚಿವ, ಮುಖ್ಯಮಂತ್ರಿಗಳು ಅಥವಾ ಕೇಂದ್ರ ಸಹಾಯಕ ಸಚಿವರನ್ನು ಪದಚ್ಯುತಗೊಳಿಸುವ ಮಸೂದೆ ಮಂಡಿಸಲಾಗಿದೆ.**

**ಪಿಎಂ-ಸಿಎಂಗಳ ಪದಚ್ಯುತಿ ಮಸೂದೆ ಮಂಡಿಸಿದ ಶಾ**

**ಪೇಪರ್ ಹರಿದು ಗೃಹಸಚಿವರ ಮೇಲೆ ಎಸೆದ ಓವೈಸಿ!**

# ಪದಚ್ಯುತಿ ಮಸೂದೆ ಮಂಡನೆ ಪ್ರತಿಪಕ್ಷಗಳು ಖಂಡನೆ





**1** ಪ್ರಧಾನಿ ಪದಚ್ಯುತಿಗೆ' ಮಸೂದೆ ಸಂವಿಧಾನಕ್ಕೆ ವಿರುದ್ಧ

**2** ಈ ಮಸೂದೆಗಳು ಪ್ರಜಾಪ್ರಭುತ್ವ ಮತ್ತು ಸಂವಿಧಾನಕ್ಕೆ ವಿರುದ್ಧವಾಗಿವೆ : ಪ್ರಿಯಾಂಕಾ ಗಾಂಧಿ

**3** ಸರ್ಕಾರವು ಅನಿಯಂತ್ರಿತವಾಗಿ ವರ್ತಿಸಲು ಇದು ಅನುವು ಮಾಡಿಕೊಡುತ್ತದೆ

## ಪ್ರಧಾನಿ ಪದಚ್ಯುತಿ' ಮಸೂದೆ ಸಂವಿಧಾನಕ್ಕೆ ವಿರುದ್ಧ ; ಕೇಂದ್ರದ ವಿರುದ್ಧ ಮುಗಿಬಿದ್ದ ಪ್ರತಿಪಕ್ಷಗಳು

• ಉದಯವಾಹಿನಿ, ನವದೆಹಲಿ

ಸಚಿವರು ವಿಧೇಯಕ ಮಂಡಿಸುತ್ತಿದ್ದಂತೆ ವಿರೋಧ ಪಕ್ಷದ ಸದಸ್ಯರು ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದರು. ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕೆಲವರು ಮಸೂದೆಗಳ ಪ್ರತಿಗಳನ್ನು ಹರಿದು ಹಾಕಿ ಅಮಿತ್ ಶಾ ಮೇಲೆ ಎಸೆದರು.

ಎಐಎಂಐಎಂನ ಅಸಾದುದ್ದೀನ್ ಓವೈಸಿ ಮತ್ತು ಕಾಂಗ್ರೆಸ್‌ನ ಮನೀಷ್ ತಿವಾರಿ ಮತ್ತು ಕೆಸಿ ವೇಣುಗೋಪಾಲ್ ಸೇರಿದಂತೆ ಸೇರಿದಂತೆ ಹಲವು ವಿರೋಧ ಪಕ್ಷಗಳ ಸದಸ್ಯರು ಮಸೂದೆ ವಿರುದ್ಧ ಮಾತನಾಡಿದರು. ಉದ್ದೇಶಿತ ವಿಧೇಯಕ ಸಂವಿಧಾನ ಮತ್ತು ಒಕ್ಕೂಟ ವ್ಯವಸ್ಥೆಗೆ ವಿರುದ್ಧವಾಗಿದೆ ಎಂದು ಆರೋಪಿಸಿದರು.




ತರಾತುರಿಯಲ್ಲಿ ಮಸೂದೆ ಮಂಡಿಸಲಾಗುತ್ತಿದೆ ಎಂಬ ಟೀಕೆಗಳನ್ನು ತಳ್ಳಿಹಾಕಿದ ಅಮಿತ್ ಶಾ, ಅವುಗಳನ್ನು ಸಂಸತ್ತಿನ ಜಂಟಿ ಸಮಿತಿಗೆ ಕಳುಹಿಸಲಾಗುವುದು, ಅಲ್ಲಿ ಪ್ರತಿಪಕ್ಷಗಳು ಸೇರಿದಂತೆ ಉಭಯ ಸದನಗಳ ಸದಸ್ಯರು ತಮ್ಮ ಸಲಹೆಗಳನ್ನು ನೀಡಲು ಅವಕಾಶವಿದೆ ಎಂದು ಹೇಳಿದರು. ಅಮಿತ್ ಶಾ ಗುಜರಾತ್‌ನಲ್ಲಿ ಗೃಹ ಸಚಿವರಾಗಿದ್ದಾಗ ಆಗಿದ್ದ ಬಂಧನ ವಿಚಾರವನ್ನು ಪ್ರಸ್ತಾಪಿಸಿದ ವೇಣುಗೋಪಾಲ್, ರಾಜಕೀಯದಲ್ಲಿ ಅವರ ನೈತಿಕತೆಯನ್ನು ಪ್ರಶ್ನಿಸುತ್ತಿದ್ದಂತೆಯೇ ಅವರಿಗೆ ತಿರುಗೇಟು ನೀಡಿದ ಹಿರಿಯ ಬಿಜೆಪಿ ನಾಯಕರು, ಅಮಿತ್ ಶಾ ಬಂಧನಕ್ಕೂ ಮೊದಲೇ ನೈತಿಕತೆ ಹಿನ್ನೆಲೆಯಲ್ಲಿ ರಾಜೀನಾಮೆ ನೀಡಿದ್ದರು. ಆರೋಪ ಮುಕ್ತರಾದ ನಂತರವೇ ಸರ್ಕಾರಕ್ಕೆ ಸೇರಿಕೊಂಡರು ಎಂದು ವಿರೋಧ ಪಕ್ಷಗಳ ವಿರುದ್ಧ ಮುಗಿಬಿದ್ದರು. ಗಂಭೀರ ಆರೋಪ ಎದುರಿಸುತ್ತಿದ್ದರೂ ಸಂವಿಧಾನಿಕ ಹುದ್ದೆಯಲ್ಲಿ ನಾಚಿಕೆಯಿಲ್ಲದೆ ನಾವು ಮುಂದುವರೆಯುವುದಿಲ್ಲ ಎಂದು ಅಮಿತ್ ಶಾ ಹೇಳಿದರು.

**ಈ ಮಸೂದೆಯಲ್ಲಿರುವ ಅಂಶಗಳೇನು:** ಸತತವಾಗಿ 30 ದಿನಗಳ ಕಾಲ ಅಧಿಕಾರದಲ್ಲಿರುವ ಸಚಿವರನ್ನು ಬಂಧಿಸಿ ಬಂಧನದಲ್ಲಿಟ್ಟಾಗ. ಐದು ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ಅವಧಿಗೆ ಜೈಲು ಶಿಕ್ಷೆಗೆ ಗುರಿಯಾಗಬಹುದಾದ ಯಾವುದೇ ಕಾನೂನಿನ ಅಡಿ ಅಪರಾಧ ಎಸಗಲಾಗಿದೆ ಎಂಬ ಆರೋಪದ ಮೇಲೆ, ಪ್ರಧಾನಿಯವರ ಸಲಹೆಯ ಮೇರೆಗೆ ರಾಷ್ಟ್ರಪತಿಗಳು ಅವರನ್ನು ತಮ್ಮ ಹುದ್ದೆಯಿಂದ ತೆಗೆದುಹಾಕುತ್ತಾರೆ. ಅಧಿಕಾರದಲ್ಲಿರುವ ಆರೋಪಿತರನ್ನು ಕಸ್ಟಡಿಗೆ ತೆಗೆದುಕೊಂಡ ನಂತರ ಮೂವತ್ತೊಂದನೇ ದಿನದೊಳಗೆ ಅವರನ್ನು ಆ ಸ್ಥಾನದಿಂದ ತೆಗೆದು ಹಾಕಬೇಕು ಎಂಬುದು ಮಸೂದೆಯ ಉದ್ದೇಶವಾಗಿದೆ.

ಪ್ರಧಾನಿಗಳು ಅಂತಹ ಸಚಿವರನ್ನು ಪದಚ್ಯುತಗೊಳಿಸಲು ಮೂವತ್ತೊಂದನೇ ದಿನದೊಳಗೆ ರಾಷ್ಟ್ರಪತಿಗಳಿಗೆ ಶಿಫಾರಸು ಮಾಡದಿದ್ದರೆ, 31ನೇ ದಿನದಿಂದ ಜಾರಿಗೆ ಬರುವಂತೆ ತನ್ನಿಂದ ತಾನೆ ಪದಚ್ಯುತರಾಗಲಿದ್ದಾರೆ ಎಂದು ವಿಧೇಯಕದಲ್ಲಿ ಹೇಳಲಾಗಿದೆ. ಪ್ರಧಾನ ಮಂತ್ರಿಯವರು ಅಧಿಕಾರದಲ್ಲಿರುವಾಗ ಸತತ 30 ದಿನಗಳ ಕಾಲ ಬಂಧನಕ್ಕೊಳಗಾಗಿ ಕಸ್ಟಡಿಯಲ್ಲಿದ್ದರೆ, ಐದು ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ಅವಧಿಗೆ ಜೈಲು ಶಿಕ್ಷೆ ವಿಧಿಸಬಹುದಾದ ಯಾವುದೇ ಕಾನೂನಿನಡಿ ಅಪರಾಧ ಎಸಗಿದ ಆರೋಪದ ಮೇಲೆ, ಅಂತಹ ಬಂಧನ ಮತ್ತು ಬಂಧನದ ನಂತರ ಮೂವತ್ತೊಂದನೇ ದಿನದೊಳಗೆ ರಾಜೀನಾಮೆ ನೀಡಬೇಕು ಮತ್ತು ಅವರು ರಾಜೀನಾಮೆ ನೀಡದಿದ್ದರೆ, ಅದರ ನಂತರದ ದಿನದಿಂದ ಜಾರಿಗೆ ಬರುವಂತೆ ಅವರು ಪ್ರಧಾನ ಮಂತ್ರಿ ಸ್ಥಾನದಲ್ಲಿ ಮುಂದುವರೆಯಲು ಸಾಧ್ಯವಾಗುವುದಿಲ್ಲ.

ಕೇಂದ್ರಾಡಳಿತ ಪ್ರದೇಶಗಳ ಸರ್ಕಾರ (ತಿದ್ದುಪಡಿ) ಮಸೂದೆ 2025 ರ ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆಯ ಪ್ರಕಾರ, ಗಂಭೀರ ಕ್ರಿಮಿನಲ್ ಆರೋಪಗಳ ಕಾರಣದಿಂದಾಗಿ ಬಂಧಿಸಲ್ಪಟ್ಟ ಮತ್ತು ಬಂಧನದಲ್ಲಿರುವ ಮುಖ್ಯಮಂತ್ರಿ ಅಥವಾ ಸಚಿವರನ್ನು ತೆಗೆದುಹಾಕಲು ಕೇಂದ್ರಾಡಳಿತ ಪ್ರದೇಶಗಳ ಸರ್ಕಾರ ಕಾಯ್ದೆ, 1963 (1963ರ 20) ಅಡಿಯಲ್ಲಿ ಯಾವುದೇ ನಿಬಂಧನೆ ಇಲ್ಲ.

### ರಾಜ್ಯ ಸರ್ಕಾರ ಪತನಕ್ಕೆ ಹೊಸ ಮಸೂದೆ

ವಿರೋಧಪಕ್ಷಗಳು ಅಧಿಕಾರದಲ್ಲಿರುವ ರಾಜ್ಯ ಸರ್ಕಾರಗಳನ್ನು ಉರುಳಿಸಲು ಕೇಂದ್ರ ಸರ್ಕಾರ ಹೊಸ ಮಸೂದೆ ತರುತ್ತಿದೆ' ಎಂದು ತೃಣಮೂಲ ಕಾಂಗ್ರೆಸ್ ಸಂಸದರು ಕೇಂದ್ರದ ವಿರುದ್ಧ ಹರಿಹಾಯ್ದಿದ್ದಾರೆ. ಕನಿಷ್ಠ 5 ವರ್ಷಗಳ ಜೈಲು ಶಿಕ್ಷೆಗೆ ಗುರಿಯಾಗುವಂಥ ಯಾವುದೇ ಗಂಭೀರ ಕ್ರಿಮಿನಲ್ ಆರೋಪದಲ್ಲಿ ಬಂಧಿತರಾಗಿ 30 ದಿನಗಳ ಕಾಲ ಜೈಲಿನಲ್ಲಿದ್ದರೆ ಅಂಥವರ ಅಧಿಕಾರ 31ನೇ ದಿನ ರದ್ದಾಗಲಿದೆ ಎಂಬುದು ಈ ಮಸೂದೆಯ ವಿಶೇಷ. ಪ್ರಧಾನಿ, ಮುಖ್ಯಮಂತ್ರಿ ಇಲ್ಲವೆ ಸಚಿವರು ಗಂಭೀರ ಆರೋಪ ಹೊತ್ತು ಸತತ 30 ದಿನ ಬಂಧನದಲ್ಲಿದ್ದರೆ ಅವರನ್ನು ಪದಚ್ಯುತಗೊಳಿಸಲು ಅವಕಾಶ ಕಲ್ಪಿಸುವ ಮಸೂದೆಯನ್ನು ಕೇಂದ್ರ ಸರ್ಕಾರ ಮಂಡಿಸಲು ಮುಂದಾಗಿರುವ ಹಿನ್ನೆಲೆಯಲ್ಲಿ ಈ ಪ್ರತಿಕ್ರಿಯೆ ನೀಡಿದೆ. ರಾಜ್ಯಸಭೆಯ ಟಿಎಂಸಿ ಸಂಸದ ಸಾಕೇತ್ ಗೋಖಲೆ, 'ರಾಜ್ಯ ಸರ್ಕಾರಗಳನ್ನು ಉರುಳಿಸಲು ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಹೊಸ ತಂತ್ರವನ್ನು ರೂಪಿಸಿದ್ದಾರೆ' ಎಂದು ಆರೋಪಿಸಿದ್ದಾರೆ.

### ವಿರೋಧ ಪಕ್ಷಗಳ ತೀವ್ರ ಆಕ್ಷೇಪ

ಈ ಕಾನೂನುಗಳ ಬಗ್ಗೆ ವಿರೋಧ ಪಕ್ಷಗಳು ತೀವ್ರವಾಗಿ ಆಕ್ಷೇಪ ವ್ಯಕ್ತಪಡಿಸಿವೆ. ಕೇಂದ್ರ ಸರ್ಕಾರವು ಉದ್ದೇಶಪೂರ್ವಕವಾಗಿ ಬಿಜೆಪಿ ಅಲ್ಲದ ಸರ್ಕಾರಗಳನ್ನು ಕೆಡವಲು ಈ ಕಾನೂನುಗಳನ್ನು ತರುತ್ತಿದೆ ಎಂದು ಅವು ಆರೋಪಿಸಿವೆ. ಕೇಂದ್ರದ ತನಿಖಾ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಂಡು ವಿರೋಧ ಪಕ್ಷದ ಮುಖ್ಯಮಂತ್ರಿಗಳನ್ನು ಬಂಧಿಸಿ, ಅವರನ್ನು ಅಧಿಕಾರದಿಂದ ತೆಗೆಯಲು ಈ ತಂತ್ರ ರೂಪಿಸಲಾಗಿದೆ ಎಂದು ವಿರೋಧ ಪಕ್ಷದ ನಾಯಕರು ಹೇಳಿದ್ದಾರೆ. ಈ ಮಸೂದೆಗಳನ್ನು ಲೋಕಸಭೆಯಲ್ಲಿ ಮಂಡಿಸಿದರೆ, ತೀವ್ರ ಪ್ರತಿಭಟನೆ ಮಾಡುವುದಾಗಿ ವಿರೋಧ ಪಕ್ಷದ ಸಂಸದರೊಬ್ಬರು ಎಚ್ಚರಿಕೆ ನೀಡಿದ್ದಾರೆ. ನಾವು ಈ ಮಸೂದೆಗಳನ್ನು ಪರಿಚಯಿಸಲು ಬಿಡುವುದಿಲ್ಲ. ಮೇಜನ್ನು ಮುರಿದು ಮಸೂದೆಯನ್ನು ಹರಿದು ಹಾಕುತ್ತೇವೆ ಎಂದು ಅವರು ಹೇಳಿದ್ದಾರೆ.

### ಮಸೂದೆ ಹರಿದು, ಅಮಿತ್ ಶಾ ಮೇಲೆ ಎಸೆದ ಓವೈಸಿ

ಇನ್ನು ಲೋಕಸಭೆಯಲ್ಲಿ ಹಾಜರಿದ್ದ ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಓವೈಸಿ ಗರಂ ಆದ್ರು. ಲೋಕಸಭೆಯಲ್ಲಿ ಗದ್ದಲದ ಮಧ್ಯೆ, ಮಸೂದೆಯ ಪೇಪರ್ ಹರಿದು ಗೃಹ ಸಚಿವ ಅಮಿತ್ ಶಾ ಅವರತ್ತ ಕಾಗದದ ತುಂಡುಗಳನ್ನು ಎಸೆದರು.

## ಕೆ ಎನ್ ರಾಜಣ್ಣ ರಾಜೀನಾಮೆ ಬಳಿಕ ಡಿಕೆ ಶಿವಕುಮಾರ್ ಆಕ್ಟೀವ್

**ಡಿಕೆಶಿ ಕಾಲೆಳೆದ ಆರ್ ಅಶೋಕ್**

• ಉದಯವಾಹಿನಿ, ಬೆಂಗಳೂರು

ಕೆ ಎನ್ ರಾಜಣ್ಣ ಅವರನ್ನು ಸಚಿವ ಸ್ಥಾನದಿಂದ ವಜಾ ಮಾಡಿದ ನಂತರದಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಅವರು ಫುಲ್ ಆಕ್ಟೀವ್ ಆಗಿದ್ದಾರೆ ಎಂದು ವಿಪಕ್ಷ ನಾಯಕ ಆರ್ ಅಶೋಕ್ ಕಾಲೆಳೆದರು. ಬುಧವಾರ ಒಳ ಮೀಸಲಾತಿ ಕುರಿತಾಗಿ ಸಿಎಂ ಸಿದ್ದರಾಮಯ್ಯ ಹೇಳಿಕೆ ನೀಡಿದ ಬಳಿಕ ಚರ್ಚೆಗೆ ಅವಕಾಶ ಕೊಡಬೇಕು ಎಂದು ಬಿಜೆಪಿ ನಾಯಕರು ಪಟ್ಟು ಹಿಡಿದರು. ಆದರೆ ಈ ಸಂದರ್ಭದಲ್ಲಿ ಸ್ಪೀಕರ್ ಅದಕ್ಕೆ ಅವಕಾಶ ನೀಡಿಲ್ಲ.

ಒಳ ಮೀಸಲಾತಿ ಚರ್ಚೆಯ ಸಂದರ್ಭದಲ್ಲಿ ಪದೇ ಪದೇ ಎದ್ದು ನಿಂತು ಮಾತನಾಡುತ್ತಿದ್ದ ಕಾಂಗ್ರೆಸ್ ಸದಸ್ಯ ಬಸಂತಪ್ಪ ಅವರಿಗೆ ಸ್ಪೀಕರ್ ಯು.ಟಿ ಖಾದರ್ ತರಾಟೆಗೆ ತೆಗೆದುಕೊಂಡರು. ''ಪದೇ ಪದೇ ಎದ್ದು ನಿಂತು ಮಾತನಾಡುತ್ತಿದ್ದರು. ಕಾಂಗ್ರೆಸ್ ಸದಸ್ಯ ಬಸಂತಪ್ಪ ಅವರು ಏಕೆ ಸುಮ್ಮನೆ ಎದ್ದು ನಿಲ್ಲುತ್ತೀರಿ, ಏನಾಗುತ್ತಿದೆ ನಿಮಗೆ ಸೀಟು ಸರಿ ಇಲ್ಲವೇ ಬದಲಾವಣೆ ಮಾಡಬೇಕಾ ಪ್ರತಿಯೊಂದಕ್ಕೆ ಎದ್ದು ನಿಲ್ಲುತ್ತೀರಿ'' ಎಂದು ಪ್ರಶ್ನಿಸಿದರು.



**ಸ್ಪೀಕರ್ ಸಾಕ್ಷಿ ಗುಡ್ಡೆ ಏನಿದೆ:** ಇದೇ ವೇಳೆ ಸ್ಪೀಕರ್ ತಮ್ಮ ಸಾಕ್ಷಿ ಗುಡ್ಡೆಯನ್ನು ಉಳಿಸಬೇಕು ಎಂದು ಆರ್ ಅಶೋಕ್ ಕಾಲೆಳೆದರು.

ಇದಕ್ಕೆ ಪ್ರತಿಕ್ರಿಯೆ ನೀಡಿದ ಡಿಕೆ ಶಿವಕುಮಾರ್, ಸ್ಪೀಕರ್ ಖಾದರ್ ಸದನಕ್ಕೆ ಹೊಸ ಕಳೆ ಕೊಟ್ಟಿದ್ದಾರೆ. ಎಲ್ಲಾ ಕಡೆ ಬಣ್ಣ ಹೊಡೆಯಲಾಗಿದೆ. ವಿಧಾನಭೆಯಲ್ಲಿ ಶಿಸ್ತು ತರಲಾಗಿದೆ. ಖಾದರ್ ಉತ್ತಮ ಸ್ಪೀಕರ್ ಇದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು.

**ತಕ್ಕಡಿ ಸರಿ ಇಲ್ಲ!:** ಸ್ಪೀಕರ್ ಪೀಠದ ಮೇಲೆ ತಕ್ಕಡಿ ಇದೆ. ಅದು ಸಮಾನವಾಗಿದೆ. ಆದರೆ ಸ್ಪೀಕರ್ ತಕ್ಕಡಿ ಕಾಂಗ್ರೆಸ್ ಪರವಾಗಿ ವಾಲುತ್ತಿದೆ ಎಂದು ಸುರೇಶ್ ಕುಮಾರ್ ಅಸಮಾಧಾನ ವ್ಯಕ್ತಪಡಿಸಿದರು. ಈ ವೇಳೆ ಕೆಜಿ ಬೋಪಯ್ಯ ಅವರು ಸ್ಪೀಕರ್ ಆಗಿದ್ದಾಗ ತಕ್ಕಡಿ ಹೇಗಿತ್ತು ಬೋಪಯ್ಯ ಸ್ಪೀಕರ್ ಆಗಿದ್ದಾಗ ತಕ್ಕಡಿ ಸಂಪೂರ್ಣ ವಾಲಿತ್ತು ಆಪರೇಷನ್ ಕಮಲದ ಸಂದರ್ಭದಲ್ಲಿ ತಕ್ಕಡಿ ಎಲ್ಲಿ ಹೋಗಿತ್ತು ಎಂದು ಎಂಬಿ ಪಾಟೀಲ್ ಪ್ರಶ್ನಿಸಿದರು.

**ಬಿಜೆಪಿ ಸಭಾತ್ಯಾಗ:** ಇನ್ನು ಒಳ ಮೀಸಲಾತಿ ವಿಚಾರವಾಗಿ ಚರ್ಚೆಗೆ ಅವಕಾಶ ಕೊಡದೆ ಇರುವ ನಿಟ್ಟಿನಲ್ಲಿ ಆಡಳಿತ ಪಕ್ಷದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿ ಬಿಜೆಪಿ ಸದಸ್ಯರು ಸಭಾತ್ಯಾಗ ಮಾಡಿದರು. ಸ್ಪೀಕರ್ ಖಾದರ್ ಮನವಿಗೆ ಸ್ಪಂದಿಸದೆ ಚರ್ಚೆಗೆ ಅವಕಾಶ ನೀಡಿ ಎಂದು ಪಟ್ಟು ಹಿಡಿದರು. ಆದರೆ ಅವಕಾಶ ಸಿಗದೆ ಇದ್ದ ಹಿನ್ನಲೆಯಲ್ಲಿ ಸಭಾತ್ಯಾಗ ಮಾಡಿದರು.

# ಎಸ್‌ಸಿ ಒಳ ಮೀಸಲಾತಿ : ದಶಕಗಳ ಬೇಡಿಕೆ ಈಡೇರಿದರೂ ಆಕ್ರೋಶ

■ ಪ್ರವರ್ಗಗಳ ಸಂಖ್ಯೆ ಮೂರಕ್ಕೆ ಇಳಿದಿದ್ದೇಕೆ ಯಾರಿಗೆ ಲಾಭ ಯಾರಿಗೆ ನಷ್ಟ ಸಿದ್ದರಾಮಯ್ಯ ಸರ್ಕಾರದಿಂದ ಎಸ್‌ಸಿ ಒಳ ಮೀಸಲಾತಿ ಜಾರಿ

• ಉದಯವಾಹಿನಿ, ಬೆಂಗಳೂರು

ಪರಿಶಿಷ್ಟ ಜಾತಿಗಳು ಅಂದ್ರೇ ಎಸ್‌ಸಿ ಸಮುದಾಯದ ಸುಮಾರು ಮೂರು ದಶಕಗಳ ಒಳ ಮೀಸಲು ಹಕ್ಕೊತ್ತಾಯ, ನಿರೀಕ್ಷೆ ಕೊನೆಗೂ ಸಾಕಾರಗೊಂಡಿದೆ. ಪರಿಶಿಷ್ಟ ಜಾತಿಗಳನ್ನು ಮೂರು ಭಾಗವಾಗಿ ವರ್ಗೀಕರಿಸಿ ಲಭ್ಯವಿರುವ ಒಟ್ಟು ಶೇ.17 ಎಸ್‌ಸಿ ರಿಸರ್ವೇಶನ್ ಅನ್ನು ಹಂಚಿಕೆ ಮಾಡುವ ನಿರ್ಧಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರ ಒಕೆ ಎಂದಿದೆ. ಆದರೆ, ಸರ್ಕಾರದ ನಿರ್ಧಾರಕ್ಕೆ ವಿರೋಧ ಕೂಡ ಜೋರಾಗಿ ಕೇಳಿಬರುತ್ತಿದೆ.

ಮೀಸಲು ಪ್ರಮಾಣವನ್ನು ಬಲಗೈ ಶೇ.6, ಎಡಗೈ ಶೇ.6 ಹಾಗೂ ಸ್ಪೃಶ್ಯ ಜಾತಿಗಳಿಗೆ ಶೇ.5ರಂತೆ ಹಂಚಿಕೆ ಮಾಡುವ ನಿರ್ಧಾರವನ್ನು ವಿಶೇಷ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಳ್ಳಲಾಗಿದೆ. ಇದರೊಂದಿಗೆ ತೆಲಂಗಾಣ ಬಳಿಕ ಪರಿಶಿಷ್ಟ ಜಾತಿಗಳಿಗೆ ಒಳಮೀಸಲು ಜಾರಿ ಮಾಡಿದ 2ನೇ ರಾಜ್ಯ ಕರ್ನಾಟಕವಾಗಿದೆ. ಜತೆಗೆ ಪರಿಶಿಷ್ಟರಿಗೆ ಒಳ ಮೀಸಲು ಗ್ಯಾರಂಟಿಯನ್ನೂ ನೀಡಿದಂತಾಗಿದೆ. ಆದರೆ, ನ್ಯಾ. ನಾಗಮೋಹನ್ ದಾಸ್ ವರದಿಯನ್ನು ಬದಲಾವಣೆ ಮಾಡಿ ಜಾರಿಗೆ ತರುತ್ತಿರುವುದಕ್ಕೆ ತೀವ್ರ ಆಕ್ರೋಶ ಕೂಡ ವ್ಯಕ್ತವಾಗುತ್ತಿದೆ.

ಈ ಬದಲಾವಣೆಯಿಂದ ಒಳ ಮೀಸಲಾತಿಗೆ ಅರ್ಥ ಇಲ್ಲ ಎನ್ನುವ ಮಾತುಗಳು ವ್ಯಾಪಕವಾಗಿ ಕೇಳಿ ಬರುತ್ತಿವೆ. ಈಗ ನೀಡುತ್ತಿರುವ ಒಳ ಮೀಸಲಿನಿಂದ ಯಾವುದೇ ವ್ಯತ್ಯಾಸ ಆಗಲ್ಲ, ಮತ್ತೆ ಬಲಗೈಗೆ ಹೆಚ್ಚಿನ ಮನ್ನಣೆ ಸಿಗಲಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

**ಜಾರಿಗೆ ತರುತ್ತಿರುವುದಕ್ಕೆ ತೀವ್ರ ಆಕ್ರೋಶ**



**ಆಯೋಗದಿಂದ ಮೀಸಲಾತಿ ಹಂಚಿಕೆ ಹೇಗಾಗಿತ್ತು**

| | | | | | |
|---|---|---|---|---|---|
| 1 | ಪ್ರವರ್ಗ-ಎ | 59 | 5,22,099 | 4.97% | 1% |
| 2 | ಪ್ರವರ್ಗ-ಬಿ | 18 | 36,69,246 | 34.91% | 6% |
| 3 | ಪ್ರವರ್ಗ-ಸಿ | 17 | 30,08,633 | 28.63% | 5% |
| 4 | ಪ್ರವರ್ಗ-ಡಿ | 04 | 28,34,939 | 26.97% | 4% |
| 5 | ಪ್ರವರ್ಗ-ಇ | 03 | 4,74,954 | 4.52% | 1% |
| ಒಟ್ಟು | | 101 | 1,05,09,871 | 100% | 17% |

**ಐದು ಪ್ರವರ್ಗಗಳನ್ನು ಮೂರಕ್ಕೆ ಇಳಿಸಿದ ಸರ್ಕಾರ!**

ಹೌದು, ಸಿದ್ದರಾಮಯ್ಯ ಸರ್ಕಾರ ಒಳಮೀಸಲಾತಿಗೆ ಒಪ್ಪಿಗೆ ನೀಡಿದ್ದು, ಪರಿಶಿಷ್ಟ ಜಾತಿಗಳಲ್ಲಿ ಮೂರು ವರ್ಗ ಮಾಡಿ ಶೇ.17ರಷ್ಟು ಮೀಸಲಾತಿಯನ್ನು ಹಂಚಿದೆ. ಎಸ್‌ಸಿಪಿ/ಟಿಎಸ್‌ಪಿ ಜಾರಿಯಾಗಿ ದಶಕ ಕಳೆದ ಬೆನ್ನಲ್ಲೇ ದಲಿತ ಸಮುದಾಯದ ವಿಚಾರದಲ್ಲಿ ರಾಜ್ಯ ಸರ್ಕಾರ ಕೈಗೊಂಡಿರುವ ಮತ್ತೊಂದು ಐತಿಹಾಸಿಕ ತೀರ್ಮಾನ ಇದಾಗಿದೆ. ನ್ಯಾಯಮೂರ್ತಿ ನಾಗಮೋಹನದಾಸ್ ಏಕಸದಸ್ಯ ಆಯೋಗವು ಕಳೆದ ಆ.4 ರಂದು ಸಲ್ಲಿಸಿದ್ದ ವರದಿಯಲ್ಲಿ ಪರಿಶಿಷ್ಟ ಜಾತಿಗೆ ಸೇರಿದ 101 ಜಾತಿಗಳನ್ನು 5 ವರ್ಗೀಕರಣ ಮಾಡಿ ಮೀಸಲು ಹಂಚಿಕೆ ಮಾಡಿತ್ತು. ಈ ವರದಿ ಶಿಫಾರಸು ಆಧರಿಸಿ ಮಂಗಳವಾರ ರಾತ್ರಿ ಸಿಎಂ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ವಿಶೇಷ ಸಂಪುಟ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿ, ಜಾತಿಗಳ ವರ್ಗೀಕರಣವನ್ನು ಮೂರಕ್ಕೆ ಕುಗ್ಗಿಸಲಾಯಿತು. ಇದು ಈಗ ವಿವಾದ ಸೃಷ್ಟಿಸಿದೆ. ಸರ್ಕಾರ ತಾನು ಐತಿಹಾಸಿಕ ನಿರ್ಧಾರ ತೆಗೆದುಕೊಂಡಿದೆ ಎಂದು ಹೇಳಿಕೊಳ್ಳುತ್ತಿದ್ದು, ನಾಯಕರು ಕೂಡ ಎಲ್ಲರನ್ನೂ ಜೊತೆಗೆ ಕರೆದುಕೊಂಡು ಹೋಗುವ ನಿರ್ಧಾರ.

ಎಲ್ಲರಿಗೂ ಈ ನಿರ್ಧಾರ ಒಪ್ಪಿತವಾಗಿದೆ ಎನ್ನುತ್ತಿದ್ದಾರೆ. ಆದರೆ, ಆಯೋಗ ನೀಡಿದ ಪ್ರಸ್ತಾವನೆಯಲ್ಲಿ ಐದರಿಂದ ಮೂರಕ್ಕೆ ಕುಗ್ಗಿಸುವಂಗಿದ್ದರೆ, ಸಮಿತಿ, ಆಯೋಗವನ್ನು ಏಕೆ ಮಾಡಬೇಕಿತ್ತು, ನೀವೇ ನೇರವಾಗಿ ಒಳಮೀಸಲು ಜಾರಿ ತರಬಹುದಿತ್ತಲ್ಲ ಎಂಬ ಪ್ರಶ್ನೆಗಳು ಕೇಳಿಬರುತ್ತಿವೆ.

### ಸರ್ಕಾರದಿಂದ ಜಾತಿಗಳ ವರ್ಗೀಕರಣ ಹೇಗಿದೆ

ಜಾತಿಗಳ ವರ್ಗೀಕರಣವನ್ನು ಯಾವ ರೀತಿ ವರ್ಗೀಕರಣ ಮಾಡಲಾಗಿದೆ ಎಂಬುದನ್ನು ಗಮನಿಸಿದರೆ, ಒಳಮೀಸಲಿಗೆ ಪ್ರಮುಖ ಹಕ್ಕುದಾರರಾಗಿದ್ದ ಪರಿಶಿಷ್ಟ ಎಡಗೈ - ಮಾದಿಗ ವರ್ಗೀಕರಣದಲ್ಲಿ 18 ಜಾತಿಗಳನ್ನು ತರಲಾಗಿದೆ. ಈ ವರ್ಗೀಕರಣದಲ್ಲಿ ಒಟ್ಟು ಜನಸಂಖ್ಯೆ 36,69,246 ಅಂದ್ರೇ ಶೇ.34.91ರಷ್ಟಿದ್ದು, ಈ ವರ್ಗಕ್ಕೆ ನ್ಯಾ. ನಾಗಮೋಹನದಾಸ್ ಆಯೋಗದ ಶಿಫಾರಸ್ಸಿನಂತೆ ಶೇ.6 ಮೀಸಲು ಪ್ರಮಾಣವನ್ನು ಕಲ್ಪಿಸಲಾಗಿದೆ. ಇನ್ನು, ಪರಿಶಿಷ್ಟ ಬಲಗೈ - ಛಲವಾದಿ ಸಮುದಾಯಕ್ಕೆ ನ್ಯಾ.ನಾಗಮೋಹನ ದಾಸ್ ಆಯೋಗ ಶಿಫಾರಸ್ಸು ಮಾಡಿದ್ದ ಶೇ.5 ಮೀಸಲನ್ನು ಶೇ.6 ಕ್ಕೆ ಏರಿಕೆ ಮಾಡಲಾಗಿದೆ. ಅಂದರೆ, ಆಯೋಗವು ಶೇ.1 ಮೀಸಲು ಪ್ರಮಾಣ ನಿಗದಿಯೊಂದಿಗೆ 5ನೇ ಪ್ರವರ್ಗದಲ್ಲಿ ಗುರುತಿಸಿದ್ದ ಆದಿ ದ್ರಾವಿಡ, ಆದಿ ಕರ್ನಾಟಕ, ಆದಿ ಆಂಧ್ರ ಈ ಮೂರು ಜಾತಿಗಳನ್ನು ಬಲಗೈ ವರ್ಗೀಕರಣಕ್ಕೆ ಸೇರ್ಪಡೆ ಮಾಡಲಾಗಿದೆ. ಬಲಗೈ ಪ್ರವರ್ಗದಲ್ಲಿ ಗುರುತಿಸಲಾಗಿರುವ 17 ಉಪಜಾತಿಗಳ ಗುಂಪಿಗೆ ಈ ಮೂರು ಜಾತಿಗಳನ್ನೂ ತರಲಾಗಿದೆ. ಇನ್ನು, ಪರಿಶಿಷ್ಟರಲ್ಲೇ ಸ್ಪೃಶ್ಯ ಜಾತಿಗಳಾಗಿ ಗುರುತಿಸಿಕೊಂಡಿರುವ ಲಂಬಾಣಿ, ಭೋವಿ, ಕೊರಮ, ಕೊರಚ ಈ ನಾಲ್ಕು ಜಾತಿಗಳಿಗೆ ಶೇ.4 ಮೀಸಲು ಪ್ರಮಾಣವನ್ನು ನ್ಯಾ. ನಾಗಮೋಹನದಾಸ್ ಆಯೋಗ ಶಿಫಾರಸ್ಸು ಮಾಡಿತ್ತು. ಪರಿಶಿಷ್ಟರಲ್ಲಿ 28,34,939 ಜನಸಂಖ್ಯೆ ಅಂದ್ರೇ ಶೇ.26.97 ಇದೆ ಎಂದು ಗುರುತಿಸಲಾದ ಈ ಪ್ರವರ್ಗಕ್ಕೆ 59 ಸಣ್ಣ ಜಾತಿಗಳನ್ನು ಸೇರ್ಪಡೆ ಮಾಡುವ ತೀರ್ಮಾನವನ್ನು ಸಂಪುಟ ಕೈಗೊಂಡಿದೆ. ಈ ಮೂಲಕ ಅವುಗಳಿಗೆ ನಿಗದಿಯಾಗಿದ್ದ ಶೇ.1ರಷ್ಟು ಮೀಸಲನ್ನು ಸೇರಿಸಿ ಸ್ಪೃಶ್ಯ ಜಾತಿಗಳಿಗೆ ಶೇ.5 ಮೀಸಲಾತಿ ನೀಡಲಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,015/Gram24ct ₹9,180/Gram22ct ಬೆಳ್ಳಿ: ₹115.00/Gram

# ನಮ್ಮ ಮೆಟ್ರೋ ಹಳದಿ ಮಾರ್ಗ 10 ರಿಂದ 12 ಕಿ ಮೀ ವಿಸ್ತರಿಸಲು ಸರ್ಕಾರ ಮುಂದು

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ಹಳದಿ ಮಾರ್ಗ ಆರಂಭವಾಗಿದ್ದು, ಪ್ರಯಾಣಿಕರಿಂದ ಅತ್ಯುತ್ತಮ ಸ್ಪಂದನೆ ವ್ಯಕ್ತವಾಗಿದೆ. ನಿತ್ಯ 50 ರಿಂದ 60 ಸಾವಿರಕ್ಕೂ ಅಧಿಕ ಮಂದಿ ಪ್ರಯಾಣ ನಡೆಸುತ್ತಿದ್ದಾರೆ. ಸದ್ಯ ಈ ಹಳದಿ ಮಾರ್ಗವನ್ನು 10 ರಿಂದ 12 ಕಿ.ಮೀವರೆಗೂ ವಿಸ್ತರಣೆ ಮಾಡಲು ಸರ್ಕಾರ ಮುಂದಾಗಿದೆ. ಇದಕ್ಕಾಗಿ ಈಗಾಗಲೇ ಹೈದರಾಬಾದ್ ಮೂಲಕ ಸಂಸ್ಥೆಗೆ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸುವ ಜವಾಬ್ದಾರಿ ನಡೆದಿದೆ. ಮಾರ್ಗ ಸಮೀಕ್ಷೆ ಕಾರ್ಯಗಳು ನಡೆಯುತ್ತಿವೆ. ಎಲ್ಲಾ ಅಂದುಕೊಂಡಂತೆ ಆದರೆ, ಆರ್ ವಿ ರಸ್ತೆಯಿಂದ ಬೊಮ್ಮಸಂದ್ರವರೆಗೂ ಇರುವ ಹಳದಿ ಮಾರ್ಗವು ಚಂದಾಪುರ ಮೂಲಕ ಅತ್ತಿಬೆಲೆವರೆಗೂ ವಿಸ್ತರಣೆಯಾಗಲಿದೆ. ಮೆಟ್ರೋ ಹಳದಿ ವಿಸ್ತರಣೆ ಬಗ್ಗೆ ವಿಧಾನಸಭೆಯಲ್ಲಿ ಡಿಸಿಎಂ ಡಿಕೆಶಿ ಮಾತನಾಡಿದ್ದಾರೆ. ಈಗಾಗಲೇ ಹಳದಿ ಮಾರ್ಗದಲ್ಲಿ ಆರ್.ವಿ.ರಸ್ತೆಯಿಂದ ಬೊಮ್ಮಸಂದ್ರವರೆಗೆ ಮೆಟ್ರೋ ರೈಲು ಸೇವೆಗೆ ಚಾಲನೆ


ಉದಯವಾಹಿನಿ ಚಿತ್ರ

ನೀಡಲಾಗಿದೆ. ಅಲ್ಲಿಂದ 10-12 ಕಿ.ಮೀ. ದೂರಕ್ಕೆ ಮೆಟ್ರೋ ಮಾರ್ಗ ವಿಸ್ತರಿಸಲು ಡಿಪಿಆರ್ ಸಿದ್ಧಪಡಿಸಲಾಗುತ್ತಿದೆ, ಎಂದು ಹೇಳಿದ್ದಾರೆ.

**ಸೂರ್ಯ ಸಿಟಿ ಅಂತಾರಾಷ್ಟ್ರೀಯ ಸ್ಟೇಡಿಯಂಗೆ ಲಿಂಕ್:** ಸೂರ್ಯ ಸಿಟಿ ಬಳಿಯೇ ಅಂತಾರಾಷ್ಟ್ರೀಯ ಕ್ರೀಡಾಂಗಣ ನಿರ್ಮಿಸಲು ತೀರ್ಮಾನಿಸಲಾಗಿದೆ. ಹಾಗಾಗಿ, ಅಲ್ಲಿಯವರೆಗೆ ಮೆಟ್ರೋ ರೈಲು ಮಾರ್ಗ ನಿರ್ಮಾಣ ಸಂಬಂಧ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸುವ ಕೆಲಸವನ್ನು ಹೈದರಾಬಾದ್‌ನ ಆರ್.ವಿ.ಅಸೋಸಿಯೇಟ್ಸ್ ಸಂಸ್ಥೆಗೆ ವಹಿಸಲಾಗಿದೆ. ಈ ಮಾರ್ಗವನ್ನು ಜಿಗಣಿ, ಬನ್ನೇರುಘಟ್ಟ ಮಾರ್ಗವಾಗಿ ತೆಗೆದುಕೊಂಡು ಹೋಗಲು ಡಿಪಿಆರ್ ಸಿದ್ಧಪಡಿಸಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದರು.

### ನಮ್ಮ ಮೆಟ್ರೋ ಹಳದಿ ಮಾರ್ಗದಲ್ಲಿ ನಿರೂಪಕಿ ದಿ.ಅಪರ್ಣಾ ಧ್ವನಿ

ನಮ್ಮ ಮೆಟ್ರೋದ ನೇರಳೆ ಮತ್ತು ಹಸಿರು ಮಾರ್ಗದಲ್ಲಿ ಕನ್ನಡ ಇಂಗ್ಲಿಷ್ ಭಾಷೆಯಲ್ಲಿ ಮೆಟ್ರೋ ಸೂಚನೆಗಳನ್ನು ನೀಡುವ ಮೂಲಕ ಪ್ರಯಾಣಿಕರ ಗಮನಸೆಳೆದಿದ್ದ ನಿರೂಪಕಿ ದಿ.ಅಪರ್ಣಾ ವಸ್ತಾರೆ ಅವರ ಧ್ವನಿಯನ್ನೇ ಹಳದಿ ಮಾರ್ಗದಲ್ಲೂ ಕೇಳಬಹುದಾಗಿದೆ. ಅಪರ್ಣಾ ನಿಧನದ ಬಳಿಕ ಅವರ ಧ್ವನಿಯನ್ನು ಎಐ ಮೂಲಕ ಹಳದಿ ಮಾರ್ಗದ ಮೆಟ್ರೋಗಳಿಗೆ ನೀಡುವಂತೆ ಅನೇಕ ಕನ್ನಡಿಗರು ಬೇಡಿಕೆ ಇಟ್ಟಿದ್ದರು. ಆದರೆ, ಅವರು ನಿಧನರಾಗುವ ಕೆಲವು ತಿಂಗಳ ಹಿಂದೆ ಹಳದಿ ಮೆಟ್ರೋ ಮಾರ್ಗದ ಸೂಚನೆಗಳಿಗೆ ಧ್ವನಿ ಮುದ್ರಣ ನೀಡಿದ್ದರು ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದ್ದಾರೆ.

## ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಘೋಷಿಸಿ ರಾಜ್ಯ ಸರ್ಕಾರ ನುಡಿದಂತೆ ನಡೆದಿದೆ

• ಉದಯವಾಹಿನಿ, ಬೆಂಗಳೂರು

ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಘೋಷಿಸಿ ರಾಜ್ಯ ಸರ್ಕಾರ ನುಡಿದಂತೆ ನಡೆದಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ. ಹೆಚ್. ಸಿ. ಮಹಾದೇವಪ್ಪ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಸಚಿವರು, ಪರಿಶಿಷ್ಟ ಜಾತಿ ಸಮುದಾಯಗಳ ಸುದೀರ್ಘ ಬೇಡಿಕೆ ಅನುಗುಣವಾಗಿ ನಮ್ಮ ಸರ್ಕಾರವು ಸೂಕ್ತವಾಗಿ ಚಿಂತಿಸಿ ಚುನಾವಣಾ ಪ್ರಣಾಳಿಕೆಯಲ್ಲಿ ನುಡಿದಂತೆ ಒಳ ಮೀಸಲಾತಿ ವರ್ಗೀಕರಣವನ್ನು ಜಾರಿ ಮಾಡುವ ನಿರ್ಣಯವನ್ನು ಕ್ಯಾಬಿನೆಟ್ ಸಭೆಯಲ್ಲಿ ಕೈಗೊಂಡಿದೆ ಎಂದು ತಿಳಿಸಿದ್ದಾರೆ. ಇಂತಹ ಮಹತ್ವದ ನಿರ್ಧಾರಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಪಕ್ಷಕ್ಕೆ ಅಭಿನಂದನೆಗಳು. ಇದರಿಂದ ಶೋಷಿತ ಸಮುದಾಯಗಳು ಐಕ್ಯತೆಯಿಂದ ಹೆಜ್ಜೆ ಇಡಬೇಕಾದ ಜವಾಬ್ದಾರಿಯು ಸಹಜವಾಗಿ ಹೆಚ್ಚಾಗಿದೆ ಎಂದು ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ದಲಿತ ಸಮುದಾಯಕ್ಕೆ ಒಳ ಮೀಸಲಾತಿ ಬಹುತೇಕ ಅಂತಿಮವಾಗಿದೆ. ಎಲ್ಲಾ ಪರಿಶಿಷ್ಟ ಜಾತಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ವೈಜ್ಞಾನಿಕವಾಗಿ ಒಳ ಮೀಸಲಾತಿಯನ್ನು ಜಾರಿಗೊಳಿಸುವ ತೀರ್ಮಾನವಾಗಿದೆ.

## ರಸ್ತೆ ಗುಂಡಿ ಮುಚ್ಚುವ ಕಾರ್ಯ ವೇಗಗೊಳಿಸಿ: ಅಧಿಕಾರಿಗಳಿಗೆ ಸೂಚನೆ

### ನಗರದಲ್ಲಿ ರಸ್ತೆ ಗುಂಡಿ ಮುಚ್ಚಲು ಅನುಸರಿಸಬೇಕಾದ ಪ್ರಮಾಣಿತ ಕಾರ್ಯಾಚರಣೆ

• ಉದಯವಾಹಿನಿ, ಬೆಂಗಳೂರು

ಮಳೆಯಿಂದಾಗಿ ನಗರದೆಲ್ಲೆಡೆ ಉಂಟಾಗಿರುವ ರಸ್ತೆ ಗುಂಡಿಗಳನ್ನು ಶೀಘ್ರಗತಿಯಲ್ಲಿ ಮುಚ್ಚುವಂತೆ ಅಧಿಕಾರಿಗಳಿಗೆ ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ ರಾವ್ ಅವರು ಸೂಚನೆ ನೀಡಿದ್ದಾರೆ. ರಸ್ತೆ ಗುಂಡಿಗಳನ್ನು ಮುಚ್ಚುವ ಸಲುವಾಗಿ ಸರ್. ಪುಟ್ಟಣ್ಣ ಚೆಟ್ಟಿ ಪುರಭವನದಲ್ಲಿ ಬಿಬಿಎಂಪಿ ಎಂಜಿನಿಯರ್‌ಗಳಿಗೆ ಆಯೋಜಿಸಿದ್ದ ತರಬೇತಿ ಕಾರ್ಯಾಗಾರವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಪ್ರಮಾಣಿತ ಕಾರ್ಯಾಚರಣೆ ವಿಧಾನ ಎಸ್‌ಒಪಿ ಅನುಸರಿಸಿ ರಸ್ತೆ ಗುಂಡಿಗಳನ್ನು ಶೀಘ್ರಗತಿಯಲ್ಲಿ ಮುಚ್ಚುವಂತೆ, ಗುಂಡಿ ಮುಚ್ಚುವ ವಿಚಾರದಲ್ಲಿ ಗುಣಮಟ್ಟ ಕಾಯ್ದುಕೊಳ್ಳುವಂತೆ ಸೂಚಿಸಿದರು. ಮಳೆ ಬರುತ್ತಿರುವ ಹಿನ್ನೆಲೆಯಲ್ಲಿ ಪರಿಣಾಮಕಾರಿಯಾಗಿ ರಸ್ತೆ ಗುಂಡಿಗಳನ್ನು ಮುಚ್ಚಲು ಸಮಸ್ಯೆ ಆಗುತ್ತಿದೆ.

ಈ ಪೈಕಿ ಮಳೆ ಬೀಳುವ ಸಮಯದಲ್ಲಿ ಕೋಲ್ಡ್ ಮಿಕ್ಸ್, ಇಕೋಫಿಕ್ಸ್ ಬಳಸಿಕೊಂಡು ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಅಧಿಕಾರಿಗಳಿಗೆ ಸೂಚಿಸಿದರು. ರಸ್ತೆ ಗುಂಡಿಗಳನ್ನು ಯಾವ ರೀತಿ ಮುಚ್ಚಬೇಕು ಎಂಬುದರ ಕುರಿತು ಈಗಾಗಲೇ ತರಬೇತಿ ಮೂಲಕ ಮಾಹಿತಿ ನೀಡಲಾಗಿದ್ದು, ಆಯಾ ವಲಯಗಳಲ್ಲಿ


ಉದಯವಾಹಿನಿ ಚಿತ್ರ

ಯೋಜನೆ ರೂಪಿಸಿಕೊಂಡು ತ್ವರಿತಗತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಜೊತೆಗೆ ಅಗತ್ಯವಿರುವ ಕಡೆ ಜೆಟ್ ಪ್ಯಾಚರ್ ಯಂತ್ರ ಬಳಸಿ ರಸ್ತೆ ಗುಂಡಿಗಳನ್ನು ಮುಚ್ಚಲು ಸೂಚಿಸಿದರು. ಪ್ರಮಾಣಿತ ಕಾರ್ಯಾಚರಣೆ ವಿಧಾನ ಪ್ರಕಾರ ರಸ್ತೆ ಗುಂಡಿ ಮುಚ್ಚುವ ಕೆಲಸ ಮಾಡಬೇಕು. ಈ ಸಂಬಂಧ ಗುಣನಿಯಂತ್ರಣ ವಿಭಾಗದಿಂದ ಗುಣಮಟ್ಟ ಪರಿಶೀಲನೆ ಮಾಡಬೇಕು.

ವಲಯ ಆಯುಕ್ತರು, ವಲಯ ಜಂಟಿ ಆಯುಕ್ತರು, ಮುಖ್ಯ ಅಭಿಯಂತರರು ರಸ್ತೆ ಗುಂಡಿಗಳನ್ನು ಮುಚ್ಚುವ ವೇಳೆ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು. ಈ ಸಂಬಂಧ ನಿರಂತರವಾಗಿ ಮೇಲ್ವಿಚಾರಣೆ ಮಾಡಲು ಸೂಚಿಸಿದರು. ನಗರದಾದ್ಯಂತ ಸ್ವಚ್ಛತಾ ಕಾರ್ಯ ಪರಿಣಾಮಕಾರಿಯಾಗಿ ನಡೆಸಲು ಆಯಾ ವಲಯಗಳಲ್ಲಿ ವಾರ್ಡ್‌ವಾರು ಒಂದು ವಾರದ ಸ್ವಚ್ಛತೆ ಮಾಡುವ ಸ್ಥಳಗಳ ವೇಳಾಪಟ್ಟಿಯನ್ನು ಸಿದ್ಧಪಡಿಸಬೇಕು. ಆ ವೇಳಾಪಟ್ಟಿಯ ಅನುಸಾರ ಶಿಲ್ಪಿ ಆ್ಯಂಡ್ ಟ್ರ್ಯಾಕ್ಟರ್‌ಗಳ ಮೂಲಕ ಪಾದಚಾರಿ ಮಾರ್ಗ ಸ್ವಚ್ಛತೆ, ತ್ಯಾಜ್ಯ, ಕಟ್ಟಡ ಭಗ್ನಾವಶೇಷ ತೆರವು ಕಾರ್ಯವನ್ನು ಪ್ರಾರಂಭಿಸಲು ಸೂಚಿಸಿದರು. ಕಾರ್ಯಾಗಾರದ ಸಂದರ್ಭದಲ್ಲಿ ಗುಂಡಿಗಳನ್ನು ತುಂಬುವ ಕುರಿತು ಪ್ರಾತ್ಯಕ್ಷಿಕೆಯನ್ನು ನಡೆಸಲಾಯಿತು.

ನಗರದಲ್ಲಿ ರಸ್ತೆ ಗುಂಡಿ ಮುಚ್ಚಲು ಅನುಸರಿಸಬೇಕಾದ ಪ್ರಮಾಣಿತ ಕಾರ್ಯಾಚರಣೆ ವಿಧಾನ (ಎಸ್‌ಒಪಿ) ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ಎಲ್ಲಾ ಎಂಜಿನಿಯರ್‌ಗಳಿಗೆ ಸಮಗ್ರ ಮಾಹಿತಿ ನೀಡಲಾಯಿತು. ಧೂಳು ಸ್ವಚ್ಛಗೊಳಿಸಿ, ಸ್ಪ್ರೇ ಮಾಡಿ, ಗುಂಡಿಗಳನ್ನು ಮುಚ್ಚಲು ಸೂಚಿಸಿದರು.

### ರಸ್ತೆ ಕಾಮಗಾರಿಯನ್ನು ತ್ವರಿತಗೊಳಿಸಿ

ಬೆಂಗಳೂರು ಜಕ್ಕೂರು ರಸ್ತೆಯಿಂದ ರಾಷ್ಟ್ರೀಯ ಹೆದ್ದಾರಿವರೆಗೆ ರಾಜಕಾಲುವೆ ಬಫರ್‌ವಲಯದಲ್ಲಿ ತ್ವರಿತವಾಗಿ ರಸ್ತೆ ನಿರ್ಮಿಸುವಂತೆ ಬಿಬಿಎಂಪಿ ಆಯುಕ್ತ ಮಹೇಶ್ವರ್‌ರಾವ್ ಸೂಚಿಸಿದರು. ಯಲಹಂಕ ವಲಯ ವ್ಯಾಪ್ತಿಯಲ್ಲಿ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಅವರು, ಯಲಹಂಕ ವಲಯದಲ್ಲಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಹಾದು ಹೋಗಲಿದ್ದು, ಅದಕ್ಕೆ ಸಂಪರ್ಕ ಕಲ್ಪಿಸುವ ಪರ್ಯಾಯ ರಸ್ತೆಗಳನ್ನು ನಿರ್ಮಿಸುವ ಸಲುವಾಗಿ ಕ್ರಮ ವಹಿಸಬೇಕಿದೆ ಎಂದು ಹೇಳಿದರು. ಯಲಹಂಕ ಕೋಗಿಲು ಜಂಕ್ಷನ್ ನಿಂದ ಜಕ್ಕೂರು ಕೆರೆವರೆಗೆ ಹೊಸದಾಗಿ ಸುಮಾರು 15 ಮೀಟರ್‌ಅಗಲದ ರಾಜಕಾಲುವೆ ಹಾಗೂ ರಸ್ತೆ ನಿರ್ಮಾಣ ಮಾಡಲಾಗುತ್ತಿದೆ. ಅದಕ್ಕೆ ಜಕ್ಕೂರು ರಸ್ತೆಯಿಂದ ಜಲಮಂಡಳಿ ತ್ಯಾಜ್ಯ ನೀರು ಸಂಸ್ಕರಣಾ ಘಟಕ ಮೂಲಕ ಸಂಪರ್ಕ ಕಲ್ಪಿಸುವ ಸಲುವಾಗಿ ಪರಿಶೀಲಿಸಲು ಸೂಚಿಸಿದರು.

## 5 ಕೋಟಿ ರೂ ಮೌಲ್ಯದ ಡ್ರಗ್ಸ್ ವಶಕ್ಕೆ; ಆಫ್ರಿಕಾ ಮೂಲದ ಇಬ್ಬರ ಬಂಧನ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, 5.50 ಕೋಟಿ ಮೌಲ್ಯದ ನೈಸರ್ಗಿಕ ಹಾಗೂ ಸಿಂಥೆಟಿಕ್ ಡ್ರಗ್ಸ್ ಅನ್ನು ಜಪ್ತಿ ಮಾಡಿ ಆಫ್ರಿಕಾ ಮೂಲಕ ಇಬ್ಬರು ಆರೋಪಿಗಳನ್ನು ಬಂಧನಕ್ಕೊಳಪಡಿಸಿದ್ದಾರೆ. ಎಲೆಕ್ಟ್ರಾನಿಕ್ ಸಿಟಿ, ಎಚ್‌ಎಸ್‌ಆರ್ ಲೇಔಟ್, ಕೋರಮಂಗಲ, ಸಂಪಿಗೆಹಳ್ಳಿ, ಯಲಹಂಕ ಠಾಣೆ ಪೊಲೀಸರು, ಸಿಸಿಬಿಯ ಮಾದಕ ದ್ರವ್ಯ ನಿಗ್ರಹ ದಳದ ಪೊಲೀಸರು ನಗರದ ಹಲವೆಡೆ ಕಾರ್ಯಾಚರಣೆ ನಡೆಸಿದ್ದು, ಆಫ್ರಿಕಾದ ಪ್ರಜೆ ಜೋಯಲ್ ಕಬಾಂಗ್ (28), ಮೂರು ವರ್ಷಗಳ ಹಿಂದೆ ವಿದ್ಯಾರ್ಥಿ ವೀಸಾದಲ್ಲಿ ಬೆಂಗಳೂರಿಗೆ ಆಗಮಿಸಿದ್ದ ಈತನ ಸ್ನೇಹಿತೆ ಜೋಯ್ ಸಂಡೇ (22) ಎಂಬುವವರನ್ನು ಬಂಧಿಸಿದ್ದಾರೆ.

ಆ.15ರ ಸಂಜೆ ಬೆಟ್ಟದಾಮಸಪುರದಲ್ಲಿ ಆರೋಪಿಗಳು ಸಿಕ್ಕಿಬಿದ್ದಿದ್ದಾರೆ. ಅವರಿಂದ 2.150 ಕೆಜಿ ಎಂಡಿಎಂಎ ವಶಕ್ಕೆ ಪಡೆದು ಬಂಧಿಸಲಾಗಿದೆ ಎಂದು ಪೊಲೀಸ್ ಆಯುಕ್ತರು ಸೀಮಂತ್ ಕುಮಾರ್ ಸಿಂಗ್ ಹೇಳಿದ್ದಾರೆ.

ಜೋಯಲ್ ಕಾಬೊಂಗ್ 12 ವರ್ಷಗಳ ಹಿಂದೆ ವಿದ್ಯಾರ್ಥಿ ವೀಸಾದ ಅಡಿ ಭಾರತಕ್ಕೆ ಬಂದಿದ್ದ. ಜೋಯ್ ಸಂಡೆ ಸಹ ವಿದ್ಯಾರ್ಥಿ ವೀಸಾ ಪಡೆದು ಮೂರು ವರ್ಷಗಳ ಹಿಂದೆ ಭಾರತಕ್ಕೆ ಬಂದಿದ್ದಳು. ಇಬ್ಬರ ವೀಸಾದ ಅವಧಿ ಅಂತ್ಯವಾದ ಬಳಿಕವೂ ಬೆಂಗಳೂರಿನಲ್ಲೇ ಉಳಿದಿದ್ದರು. ಇಬ್ಬರೂ ಅಕ್ರಮವಾಗಿ ನೆಲಸಿ, ಡ್ರಗ್ಸ್ ಮಾರಾಟ ದಂಧೆಯಲ್ಲಿ ತೊಡಗಿದ್ದರು ಎಂದು ತಿಳಿಸಿದ್ದಾರೆ.

## ಪುನರ್ವಸತಿ ಕಾರ್ಯಕರ್ತರ ಗೌರವಧನ 1,000 ರೂ. ಹೆಚ್ಚಳ

• ಉದಯವಾಹಿನಿ, ಬೆಂಗಳೂರು

ಗ್ರಾಮೀಣ ಪುನರ್ವಸತಿ ಯೋಜನೆಯಡಿ ಪುನರ್ವಸತಿ ಕಾರ್ಯಕರ್ತರನ್ನು ನಿಯಮಾನುಸಾರ ಗೌರವಧನದ ಆಧಾರದ ಮೇಲೆ ನೇಮಕ ಮಾಡಿಕೊಂಡಿದ್ದು, ಅವರನ್ನು ಖಾಯಂಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ ಎಂದು ಮಹಿಳಾ, ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದರು.

ವಿಧಾನಸೌಧದಲ್ಲಿ ನಡೆಯುತ್ತಿರುವ ಮುಂಗಾರು ಅಧಿವೇಶನದ 7ನೇ ದಿನವಾದ ವಿಧಾನಸಭೆಯಲ್ಲಿ ಪ್ರಶ್ನೋತ್ತರ ವೇಳೆ ಮೈಸೂರಿನ ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್ ಶ್ರೀವತ್ಸ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಗ್ರಾಮೀಣ, ನಗರ ಪುನರ್ವಸತಿ ಕಾರ್ಯಕರ್ತರ


ಉದಯವಾಹಿನಿ ಚಿತ್ರ

ಮಾಸಿಕ ಗೌರವಧನವನ್ನು 9 ಸಾವಿರ ರೂಪಾಯಿಯಿಂದ 10 ಸಾವಿರ ರೂಪಾಯಿಗಳಿಗೆ ಹಾಗೂ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರ ಮಾಸಿಕ ಗೌರವಧನವನ್ನು 15 ಸಾವಿರ ರೂಪಾಯಿಯಿಂದ 16 ಸಾವಿರ ರೂಪಾಯಿಗೆ ಹೆಚ್ಚಿಸಲಾಗಿದೆ ಎಂದರು.

**ಪ್ರಸ್ತುತ 5,601 ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು, 450 ನಗರ ಪುನರ್ವಸತಿ ಕಾರ್ಯಕರ್ತರು, 172 ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಗ್ರಾಮೀಣ ಪುನರ್ವಸತಿ ಯೋಜನೆಯಡಿಯಲ್ಲಿ ಗೌರವಧನ ಆಧಾರದ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ವಿಕಲಚೇತನ ಗ್ರಾಮೀಣ, ನಗರ ಪುನರ್ವಸತಿ ಕಾರ್ಯಕರ್ತರು ಮೈಸೂರಿನ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.**

## ಅಟಲ್ ಭೂ ಜಲ ಯೋಜನೆಯಲ್ಲಿ ಭ್ರಷ್ಟಾಚಾರ ಆರೋಪ



• ಉದಯವಾಹಿನಿ, ಬೆಂಗಳೂರು

ಅಟಲ್ ಭೂ- ಜಲ ಯೋಜನೆಯಲ್ಲಿ ಭ್ರಷ್ಟಾಚಾರ ನಡೆದಿದ್ದು, ತನಿಖೆ ನಡೆಸುವಂತೆ ಆಗ್ರಹಿಸಿ ರಾಜ್ಯ ರೈತ ಸಂಘ, ಹಸಿರು ಸೇನೆಯ (ಪ್ರೊ.ನಂಜುಂಡಸ್ವಾಮಿ ಸ್ಥಾಪಿತ) ಚಿಕ್ಕಬಳ್ಳಾಪುರ ಜಿಲ್ಲೆ, ಬಾಗೇಪಲ್ಲಿ ತಾಲ್ಲೂಕು ಘಟಕದ ನೇತೃತ್ವದಲ್ಲಿ ನಗರದ ಸ್ವಾತಂತ್ರ್ಯ ಉದ್ಯಾನದಲ್ಲಿ ಪ್ರತಿಭಟನೆ ನಡೆಯಿತು. ರಾಜ್ಯದ 14 ಜಿಲ್ಲೆಗಳ, 41 ತಾಲ್ಲೂಕಿನ 1,199 ಗ್ರಾಮಗಳಲ್ಲಿ ಈ ಯೋಜನೆ ಅನುಷ್ಠಾನಗೊಂಡಿದೆ. ಗ್ರಾಮಸಭೆಗಳನ್ನು ನಡೆಸದೆ ನಕಲಿ ದಾಖಲಾತಿಗಳನ್ನು ಸೃಷ್ಟಿಸಿ ಭ್ರಷ್ಟಾಚಾರ ನಡೆಸಲಾಗಿದೆ. ಹಲವು ಕಡೆ ಭ್ರಷ್ಟಾಚಾರ ನಡೆದಿದ್ದು, ತನಿಖೆ ನಡೆಸಬೇಕು' ಎಂದು ಪ್ರತಿಭಟನಕಾರರು ಆಗ್ರಹಿಸಿದರು. ವಿಶ್ವಬ್ಯಾಂಕ್, ಕೇಂದ್ರ ಸರ್ಕಾರದ ಅನುದಾನದೊಂದಿಗೆ ದೇಶದ ವಿವಿಧ ರಾಜ್ಯಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಕ್ಕೆ ತರಲಾಗಿತ್ತು. ರಾಜ್ಯದಲ್ಲೂ ಈ ಯೋಜನೆ ಜಾರಿಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿದರು. ಪ್ರತಿಭಟನೆಯ ನೇತೃತ್ವವನ್ನು ಸೇನೆಯ ರಾಜ್ಯ ಘಟಕದ ಅಧ್ಯಕ್ಷ ವಿ.ಆರ್.ನಾರಾಯಣರೆಡ್ಡಿ, ಹಳ್ಳಿಕೆರೆ ಹುಂಡಿ ಭಾಗ್ಯರಾಜ್, ಲಕ್ಷ್ಮಣ್, ಸಿ.ವಿ. ಶ್ರೀಕಾಂತ್ ರೆಡ್ಡಿ ವಹಿಸಿದ್ದರು.

## ವಯನಾಡ್ ಲೋಕಸಭಾ ಕ್ಷೇತ್ರದ ಮೆಪ್ಪಾಡಿಗೆ ಸರ್ಕಾರದಿಂದ 10 ಕೋಟಿ ಹಣ

• ಉದಯವಾಹಿನಿ, ಬೆಂಗಳೂರು

ನಮ್ಮ ದುಡ್ಡು, ಕೇರಳಕ್ಕೆ ನೆರವು. ಇದು ರಾಜ್ಯ ಸರ್ಕಾರದ ನಿಲುವು. ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ಕ್ಷೇತ್ರಕ್ಕೆ ಕರ್ನಾಟಕ ಸರ್ಕಾರ ನೆರವು ನೀಡುತ್ತಿದೆ. ಪೂರಕ ಅಂದಾಜಿನಲ್ಲಿ ಕೇರಳ ರಾಜ್ಯದ ವಯನಾಡ್ ಜಿಲ್ಲೆಯ ಮೆಪ್ಪಾಡಿ ಭೂಕುಸಿತ ಕಾರಣದಿಂದ ಹಾನಿಗೊಳಗಾದವರ ಪುನರ್ವಸತಿಗೆ 10 ಕೋಟಿ ರೂ. ಕೊಡಲಾಗಿದೆ. ಭೂಕುಸಿತದಿಂದ ಹಾನಿಗೊಳಗಾದ 100 ಕುಟುಂಬಗಳಿಗೆ ಪುನರ್ವಸತಿ ಕಲ್ಪಿಸಲು 10 ಕೋಟಿ ಅನುದಾನ ಎಂದು ಉಲ್ಲೇಖಿಸಿದ್ದಾರೆ. ಕಂದಾಯ ಇಲಾಖೆ ಅಡಿಯಲ್ಲಿ ಬರುವ ಎಸ್‌ಡಿಆರ್‌ಎಫ್ ಅನುದಾನ ನೀಡುತ್ತಿರುವುದಾಗಿ ಉಲ್ಲೇಖಿಸಿದೆ.

ಆದರೆ ಪ್ರಿಯಾಂಕ ಗಾಂಧಿ ಸಂಸದೆಯಾಗಿರುವ ವಯನಾಡ್ ಕ್ಷೇತ್ರದ ಮೆಪ್ಪಾಡಿ ಹಾನಿಗೆ ರಾಜ್ಯ ಸರ್ಕಾರ ಹಣ ನೀಡುತ್ತಿರುವುದು ಚರ್ಚೆಗೆ ಗ್ರಾಸವಾಗಿದೆ

## ಭೂ ಸ್ವಾದೀನ ವಿವಾದ: ಆನೇಕಲ್ ತಾಲ್ಲೂಕು ಕಚೇರಿಗೆ ರೈತರ ಮುತ್ತಿಗೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಐಎಡಿಬಿ) ತನ್ನ ಭೂಸ್ವಾಧೀನ ಯೋಜನೆಗಳನ್ನು ಕೈಬಿಡಬೇಕೆಂದು ಒತ್ತಾಯಿಸಿ ಬೆಂಗಳೂರಿನ ಹೊರವಲಯದಲ್ಲಿರುವ ಆನೇಕಲ್ ತಾಲ್ಲೂಕು ಕಚೇರಿಗೆ ನೂರಾರು ರೈತರು ಮುತ್ತಿಗೆ ಹಾಕಿದರು. ಸರ್ಜಾಪುರದಲ್ಲಿ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಸ್ವಿಫ್ಟ್ ಸಿಟಿ (ಸ್ಟಾರ್ಟ್‌ಅಪ್‌ಗಳು, ಕಾರ್ಯಸ್ಥಳಗಳು, ನಾವೀನ್ಯತೆ, ಹಣಕಾಸು ಮತ್ತು ತಂತ್ರಜ್ಞಾನ) ಯೋಜನೆಗೆ ಕೆಐಎಡಿಬಿ ಇತ್ತೀಚೆಗೆ ಅಂತಿಮ ಸ್ವಾಧೀನ ಆದೇಶವನ್ನು ಹೊರಡಿಸಿದ ನಂತರ ಈ ಪ್ರತಿಭಟನೆ ನಡೆದಿದೆ.

ತಾಲ್ಲೂಕು ಕಚೇರಿಗೆ ಮೆರವಣಿಗೆ ನಡೆಸುವ ಮೊದಲು, ರೈತರು ಆನೇಕಲ್ ಪಟ್ಟಣದಲ್ಲಿ ನಮ್ಮ ಭೂಮಿ, ನಮ್ಮ ಹಕ್ಕು ಎಂಬ ಘೋಷಣೆಗಳನ್ನು ಕೂಗುತ್ತಾ ಬೃಹತ್ ರ್ಯಾಲಿ ನಡೆಸಿದರು. ಪೊಲೀಸರು ಕಚೇರಿಯ ದ್ವಾರಗಳನ್ನು ಮುಚ್ಚುವ ಮೂಲಕ ಅವರನ್ನು ತಡೆಯಲು ಪ್ರಯತ್ನಿಸಿದರು, ಆದರೆ ಜನಸಂದಣಿ ಹೆಚ್ಚುತ್ತಿದ್ದಂತೆ, ರೈತರು ಒಳಗೆ ನುಗ್ಗಿ ಮುಖ್ಯ ದ್ವಾರದಲ್ಲಿ ಜಮಾಯಿಸಿದರು. ನೂರಾರು ಪ್ರತಿಭಟನಾಕಾರರು ತಾಲ್ಲೂಕು ಕಚೇರಿಯನ್ನು ಪ್ರವೇಶಿಸಲು ಪ್ರಯತ್ನಿಸಿದಾಗ ಉದ್ವಿಗ್ನತೆ ಉಂಟಾಯಿತು. ಆದಾಗ್ಯೂ, ಪೊಲೀಸರು ಪರಿಸ್ಥಿತಿಯನ್ನು ನಿಯಂತ್ರಿಸುವಲ್ಲಿ ಯಶಸ್ವಿಯಾದರು ಮತ್ತು ರೈತರನ್ನು ತಡೆದರು. ನಂತರ ಭದ್ರತೆಗಾಗಿ ಹೆಚ್ಚುವರಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಯಿತು. ಸರ್ಕಾರ ತನ್ನ ಸ್ವಾಧೀನ ಯೋಜನೆಯನ್ನು ಹಿಂತೆಗೆದುಕೊಳ್ಳದಿರಲು ನಿರ್ಧರಿಸಿದರೆ ಪ್ರತಿಭಟನೆ ತೀವ್ರಗೊಳಿಸುವುದಾಗಿ ರೈತರು ಎಚ್ಚರಿಸಿದ್ದಾರೆ.


## ಗೃಹಲಕ್ಷ್ಮೀ ಯೋಜನೆಯಿಂದ 2 ಲಕ್ಷ ಮಂದಿ ಅನರ್ಹರು ಹೊರಕ್ಕೆ

• ಉದಯವಾಹಿನಿ, ಬೆಂಗಳೂರು

ಗೃಹಲಕ್ಷ್ಮೀ ಯೋಜನೆ ಫಲಾನುಭವಿಗಳಲ್ಲಿ ಅನರ್ಹರನ್ನ ಮಹಿಳಾ, ಮಕ್ಕಳ ಕಲ್ಯಾಣ ಇಲಾಖೆ ಪತ್ತೆ ಹಚ್ಚಿದೆ. ತೆರಿಗೆ ಪಾವತಿ ಮಾಡ್ತಾ ಇದ್ದ 2 ಲಕ್ಷ ಮಂದಿಯನ್ನ ಅನರ್ಹರು ಎಂದು ಪರಿಗಣಿಸಿ ಯೋಜನೆಯಿಂದ ಕೈಬಿಡಲು ಇಲಾಖೆ ಮುಂದಾಗಿದೆ.

ಟ್ಯಾಕ್ಸ್ ಪೇಯರ್ ಅಂತಾ ಪರಿಗಣಿಸಿ ಅನರ್ಹರನ್ನ ಪತ್ತೆ ಹಚ್ಚಲಾಗಿದೆ. ಸದ್ಯ 1.28 ಕೋಟಿ ಗೃಹಲಕ್ಷ್ಮೀ ಫಲಾನುಭವಿಗಳು ಇದ್ದು, ಪ್ರತಿ ತಿಂಗಳು ಕೂಡ ಅನರ್ಹರನ್ನ ಇಲಾಖೆ ಅಧಿಕಾರಿಗಳು ಪತ್ತೆ ಹಚ್ಚುತ್ತಿದ್ದಾರೆ. ಆದಾಯ ತೆರಿಗೆ ಮಾಹಿತಿ ಜೊತೆಗೆ ತೆರಿಗೆ ಪಾವತಿ ಮಾಹಿತಿ ಆಧರಿಸಿ ಅನರ್ಹರು ಅಂತಾ ಪರಿಗಣನೆಗೆ ತೆಗೆದುಕೊಳ್ಳಲಾಗಿದೆ.

ಸ್ತ್ರೀ ಶಕ್ತಿ ಸಂಘ ಮಾದರಿಯಲ್ಲಿ



ಉದಯವಾಹಿನಿ ಚಿತ್ರ

ಗೃಹಲಕ್ಷ್ಮೀ ಸಂಘಗಳನ್ನ ಮಾಡೋದಕ್ಕೆ ಇಲಾಖೆ ಸಿದ್ಧತೆ ನಡೆಸಿದ್ದು, ಗೃಹಲಕ್ಷ್ಮೀ ಸಂಘಗಳ ರಚನೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಸರ್ಕಾರ ಪ್ರಸ್ತಾವನೆಯನ್ನ ಒಪ್ಪಿದ್ರೆ ಗೃಹಲಕ್ಷ್ಮೀ ಸಂಘಗಳ ರಚನೆ ಪ್ರಕ್ರಿಯೆ ಶುರುವಾಗಲಿದೆ. ಗೃಹಲಕ್ಷ್ಮೀ ಯೋಜನೆಯಡಿ ಮನೆ ಯಜಮಾನಿಯರು ಪ್ರತಿ ತಿಂಗಳು ಪಡೆಯುವ ಎರಡು ಸಾವಿರ ರೂ.ಗಳನ್ನು ಸಂಘಗಳಲ್ಲಿ ಹೂಡಿಕೆ ಮಾಡಿ, ಸ್ವ-ಉದ್ಯೋಗದೊಂದಿಗೆ ಮತ್ತಷ್ಟು ಹಣ ಸಂಪಾದಿಸಿ ಆರ್ಥಿಕವಾಗಿ ಸಬಲಗೊಳಿಸಲು ಸಂಘಗಳು ನೆರವಾಗಲಿವೆ.

4ರಿಂದ 10 ಮಂದಿಗೆ ಒಂದು ಸಂಘ ರಚಿಸಲು ಉದ್ದೇಶಿಸಲಾಗಿದೆ

## ಶೇ. 80 ರಷ್ಟು ನವೀಕರಿಸಬಹುದಾದ ಇಂಧನ ಉತ್ಪಾದನೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕವು ಅತಿ ಹೆಚ್ಚು ನವೀಕರಿಸಬಹುದಾದ ಇಂಧನ ಉತ್ಪಾದನೆಯಲ್ಲಿ 143 ಮಿಲಿಯನ್ ಯೂನಿಟ್ (MU) ದಾಖಲಿಸಿದೆ, ಇದು ಒಟ್ಟು 179 MU ಉತ್ಪಾದನೆಯಲ್ಲಿ ಶೇಕಡಾ 80ಕ್ಕೆ ಏರಿಕೆಯಾಗಿದೆ. ಈ ಪಾಲಿನಲ್ಲಿ ಗರಿಷ್ಠ ಪವನ ಶಕ್ತಿಯಿಂದ (65.8 MU), ಜಲವಿದ್ಯುತ್ ಮತ್ತು ಸೌರಶಕ್ತಿ ಕ್ರಮವಾಗಿ 55.3 MU ಮತ್ತು 22.6 MU ಕೊಡುಗೆ ನೀಡಿದೆ ಎಂದು ಇಂಧನ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

ಮೊನ್ನೆ ಆಗಸ್ಟ್ 18 ರಂದು, ಕರ್ನಾಟಕದ ಗ್ರಿಡ್‌ನ ಶೇಕಡಾ 80ರಷ್ಟು ಹಸಿರು ಬಣ್ಣದ್ದಾಗಿತ್ತು. ಇತರ ರಾಜ್ಯಕ್ಕೆ ಹೋಲಿಸಿದರೆ ಅತ್ಯಧಿಕವಾಗಿದೆ. ಈ ವರ್ಷದ ಸರಾಸರಿ ವಾರ್ಷಿಕ ಬೇಡಿಕೆ ಕಳೆದ ವರ್ಷಕ್ಕಿಂತ ಸುಮಾರು ಶೇಕಡಾ 15ರಷ್ಟು ಹೆಚ್ಚಿದ್ದರೂ, ಪ್ರಸ್ತುತ ಬಳಕೆ 21 ಮಿಲಿಯನ್ ಯೂನಿಟ್‌ಗಳಷ್ಟು ಕಡಿಮೆಯಾಗಿದೆ ಎಂದು ಇಂಧನ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ತಿಳಿಸಿದ್ದಾರೆ. ಆಗಸ್ಟ್ 18 ರಂದು ಕರ್ನಾಟಕದ



ವಿದ್ಯುತ್ ಬಳಕೆ 179.03 ಎಂಯು ಆಗಿದ್ದು, ಕಳೆದ ವರ್ಷ ಆಗಸ್ಟ್ 18ರಂದು 200.35 MU ಆಗಿತ್ತು ಎಂದು ಇಂಧನ ಇಲಾಖೆಯ ದಾಖಲೆ ತೋರಿಸುತ್ತದೆ. ಆಗಸ್ಟ್ 18 ರಂದು ಗರಿಷ್ಠ ವಿದ್ಯುತ್ ಬಳಕೆ 9,729 ಮೆಗಾ ವ್ಯಾಟ್ ಆಗಿತ್ತು, ಕಳೆದ ವರ್ಷ ಇದೇ ದಿನ 9,853 MW ಆಗಿತ್ತು. ಮಳೆ ಮತ್ತು ತಾಪಮಾನದಲ್ಲಿನ ಕುಸಿತದಿಂದಾಗಿ ವಿದ್ಯುತ್ ಬೇಡಿಕೆ ಕಡಿಮೆಯಾದ ಕಾರಣ, ರಾಜ್ಯವು ಹೆಚ್ಚಿದ ಉತ್ಪಾದನೆಯನ್ನು ಆರ್ಥಿಕವಾಗಿ ಬಳಸಿಕೊಳ್ಳಲು ಸಾಧ್ಯವಾಗಲಿಲ್ಲ. ಮಳೆಯಿಂದಾಗಿ ಒಟ್ಟಾರೆ ಬೇಡಿಕೆ ಕಡಿಮೆಯಾದ ಕಾರಣ ಹೆಚ್ಚುವರಿ ವಿದ್ಯುತ್‌ನ್ನು ಗ್ರಿಡ್‌ಗೆ ಮಾರಾಟ ಮಾಡಲು, ಲಾಭಗಳಿಸಲು ಸಾಧ್ಯವಾಗಲಿಲ್ಲ.

# ವೃತ್ತಿಪರತೆ-ಕರ್ತವ್ಯ ನಿಷ್ಠೆ ನನ್ನನ್ನು ಕೈ ಹಿಡಿದು ನಡೆಸಿವೆ: ಕೆ.ವಿ.ಪ್ರಭಾಕರ್

### ಈ ಸನ್ಮಾನ ಸಮಾಜವಾದದ ಆಲದ ಮರ ಸಿದ್ದರಾಮಯ್ಯ ಅವರಿಗೆ ಅರ್ಪಣೆ: ಧನ್ಯತೆ ಅರ್ಪಿಸಿದ ಕೆವಿಪಿ

• ಉದಯವಾಹಿನಿ, ಬೆಂಗಳೂರು

ಪತ್ರಕರ್ತನಾಗಿ ಸಮಾಜವನ್ನು ಬಿಡಿ-ಬಿಡಿಯಾಗಿ ನೋಡುತ್ತಿದ್ದ ನಾನು ಸಮಾಜವಾದದ ಆಲದ ಮರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಗರಡಿಯಲ್ಲಿ ಇಡಿ ಇಡಿಯಾಗಿ ಗ್ರಹಿಸುವುದನ್ನು ಕಲಿತೆ. ಹೀಗಾಗಿ ಇಲ್ಲಿ ನನಗೆ ಸಲ್ಲುವ ಎಲ್ಲಾ ಸನ್ಮಾನ, ಗೌರವಗಳನ್ನು ನಾನು ಆಲದ ಮರಕ್ಕೇ ಅರ್ಪಿಸುತ್ತೇನೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ನುಡಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಗಾಂಧಿ ಭವನದಲ್ಲಿ ಆಯೋಜಿಸಿದ್ದ ಪ್ರಭಾಭಿನಂದನಂ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಹಿಂದುಳಿದ ಕೆಳ ಮಧ್ಯಮ ವರ್ಗದ ಕುಟುಂಬದಿಂದ ಬಂದ ನನಗೆ ಬದುಕಿನ ಆಯ್ಕೆಗಳೇ ಇರಲಿಲ್ಲ. ಹೀಗಾಗಿ ನನ್ನ ಪಾಲಿಗೆ ಒದಗಿ ಬಂದಿದ್ದನ್ನು ಪ್ರಾಮಾಣಿಕವಾಗಿ ಒಪ್ಪಿಕೊಳ್ಳುತ್ತಾ, ಬಂದದ್ದೆಲ್ಲವನ್ನೂ ಬಂದ ಹಾಗೆಯೇ ಸ್ವೀಕರಿಸುತ್ತಾ ಮುಂದೆ ಸಾಗಿ ಈಗ ನಿಮ್ಮ ಮುಂದೆ ಧನ್ಯತೆಯಿಂದ ನಿಂತಿದ್ದೇನೆ. ನಾನು ಸಾಗಿಬಂದ ಹಾದಿಯನ್ನು ಹಿಂದಿರುಗಿ ನೋಡಿದಾಗ ವೃತ್ತಿಪರತೆ ಮತ್ತು ಕರ್ತವ್ಯ ಪ್ರಜ್ಞೆ ಇಲ್ಲಿಯವರೆಗೂ ನನ್ನನ್ನು ಬೆರಳಿಡಿದು ನಡೆಸಿದೆ ಎಂದು ಭಾವಿಸುತ್ತೇನೆ. ನಾನು ಕನ್ನಡ ಪ್ರಭ ಬಿಟ್ಟು 2013 ರಲ್ಲಿ ಮುಖ್ಯಮಂತ್ರಿಗಳ ನೆರಳಿಗೆ



ಉದಯವಾಹಿನಿ ಚಿತ್ರ

ಬಂದೆ. ಪತ್ರಿಕಾ ವೃತ್ತಿಯ ಸಾಧ್ಯತೆಗಳನ್ನೆಲ್ಲಾ ಇಲ್ಲಿ ಪ್ರಯೋಗಿಸತ್ತಾ ಹೋದೆ. ಆದರೆ, ಪತ್ರಿಕಾ ಕಚೇರಿಯಲ್ಲಿ ಇದ್ದ ಸಮಯದ ಮಿತಿ ಇಲ್ಲದೆ ಇಲ್ಲಿ ಕೆಲಸ ಮಾಡುವ ಅನಿವಾರ್ಯತೆ ಇತ್ತು. ಈ ಸಂದರ್ಭದಲ್ಲಿ ಇಡೀ ರಾಜ್ಯದ ಪತ್ರಕರ್ತ ಸಮುದಾಯ ನನ್ನ ಸಹಕಾರ ನೀಡಿದ್ದಕ್ಕೆ ಕೃತಜ್ಞತೆ ಅರ್ಪಿಸುತ್ತೇನೆ ಎಂದರು.

ನಾನು ಮುಖ್ಯಮಂತ್ರಿಗಳ ಮಾಧ್ಯಮ ಸಂಯೋಜಕ ಆಗಿದ್ದ ಸಂದರ್ಭದಲ್ಲಿ, ಮಾಧ್ಯಮ ಸಲಹೆಗಾರರಾಗಿದ್ದ ದಿನೇಶ್ ಅಮೀನ್ ಮಟ್ಟು ಅವರು ಕೆಲಸ ಕಲಿಯಲು ಕೊಟ್ಟ ಅವಕಾಶ, ನೀಡಿದ ಪ್ರೋತ್ಸಾಹ ನನ್ನ ಆತ್ಮವಿಶ್ವಾಸವನ್ನು ಹೆಚ್ಚಿಸಿತು. ಈ ಆತ್ಮವಿಶ್ವಾಸ ಒಂದು ಸಂಗತಿಯನ್ನು ಹಲವು ಕೋನಗಳಿಂದ ಅರ್ಥ ಮಾಡಿಕೊಳ್ಳುವುದನ್ನು ಕಲಿಸಿತು. ಬಿಡುವಿಲ್ಲದ ಪ್ರಯಾಣ, ನಿದ್ದೆ ಇಲ್ಲದ ರಾತ್ರಿಗಳು, ಮನೆ-ಮಕ್ಕಳಿಗೆ ಸಮಯ ಕೊಡಲು ಸಾಧ್ಯವಿಲ್ಲದಾದಾಗ, ರಾಜಕಾರಣ/ಒಳ ರಾಜ ಕಾರಣ ಕೆಲವೊಮ್ಮೆ ನನ್ನ ಆತ್ಮವಿಶ್ವಾಸವನ್ನು ಅಲ್ಲಾಡಿಸಿ ಪತ್ರಿಕೆ ಕೆಲಸ ಬಿಟ್ಟು ತಪ್ಪು ಮಾಡಿದ್ನಾ ಅಂತಲೂ ಅನ್ನಿಸಿದ್ದಿದೆ. ಇಂಥಾ ಘಳಿಗೆಗಳಲ್ಲಿ ಮಾನ್ಯ ಮುಖ್ಯಮಂತ್ರಿಗಳೇ ದಿನಕ್ಕೆ 16-18 ಗಂಟೆ ಕೆಲಸ ಮಾಡುವಾಗ ಅದರ ಮುಂದೆ ನನ್ನದೇನು ಎಂದುಕೊಂಡು ಮತ್ತೆ ಚಾರ್ಜ್ ಆಗುತ್ತಿದ್ದೆ ಎನ್ನುವುದನ್ನು ಕೆವಿಪಿ ನೆನಪು ಮಾಡಿಕೊಂಡೆ ಎಂದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಬಳಿಕ

**ತಾಳ್ಮೆ ಕಲಿತಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯರಿಂದ ಪತ್ರಿಕಾ ವೃತ್ತಿಯೇ ನನ್ನ ಪ್ರಪಂಚ. ಪತ್ರಕರ್ತರೇ ನನ್ನ ಒಡನಾಡಿಗಳು. ತಾಳ್ಮೆ, ಸಹನೆಯ ಪಾಸ್ ವರ್ಡ್ ಮುಖ್ಯಮಂತ್ರಿ ಸಿದ್ದರಾಮಯ್ಯ. ನಾನು ಇವರಿಂದ ಸಹನೆಯನ್ನು ಕಲಿತೆ ಎಂದರು.**

ಶಿವಾನಂದ ತಗಡೂರು ಅವರು ಪತ್ರಕರ್ತ ಸಮುದಾಯದ ರಾಶಿ ರಾಶಿ ಸಮಸ್ಯೆಗಳನ್ನು ಪ್ರತೀ ದಿನ ನನ್ನ ಬಳಿಗೆ ತರುತ್ತಿದ್ದರು.

ಸರ್ಕಾರದಿಂದ, ಇಲಾಖೆಯಿಂದ ಆಗಬೇಕಾದ ಮತ್ತು ಬಾಕಿ ಇರುವ ಕೆಲಸಗಳ ಬಗ್ಗೆ ಕ್ರಿಯಾಶೀಲ ಒತ್ತಡ ಹೇರುತ್ತಿದ್ದರು. ಅದನ್ನೆಲ್ಲಾ ನಾನು ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಕಾರ್ಯದರ್ಶಿಗಳಾದ ಕಾವೇರಿ ಮೇಡಂ ಅವರ ಮುಂದಿಡುತ್ತಿದ್ದೆ. ಇವರಿಬ್ಬರೂ ಅತ್ಯಂತ ಸಹೃದಯತೆಯಿಂದ ಸಹಕಾರ ನೀಡಿದರು.

ಆಡಳಿತಾತ್ಮಕ, ತಾಂತ್ರಿಕ ಅಡೆತಡೆಗಳನ್ನು ನನ್ನೊಂದಿಗೆ ಚರ್ಚಿಸಿ ಸಕಾರಾತ್ಮಕ ಪರಿಹಾರ ಕಂಡುಕೊಳ್ಳಲು ಒಂದು ತಂಡವಾಗಿ ಕೆಲಸ ಮಾಡಿದೆವು. ಇದರ ಒಟ್ಟು ಪರಿಣಾಮದಲ್ಲಿ ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್, ಆರೋಗ್ಯ ಸಂಜೀವಿನಿ, ಮಾಸಾಶನದ ಹೆಚ್ಚಳ ಸೇರಿ ಹಲವು ಅನುಕೂಲಗಳು ಪತ್ರಕರ್ತ ಸಮುದಾಯದ ಅಂಗೈ ತಲುಪುವಂತಾಯಿತು. ಹೀಗಾಗಿ ಇವತ್ತಿನ ಈ ಸನ್ಮಾನ ಮತ್ತು ಗೌರವದಲ್ಲಿ ಅವರದ್ದೂ ದೊಡ್ಡ ಪಾಲು ಇದೆ ಧನ್ಯತೆ ಅರ್ಪಿಸಿದರು.

ಹೀಗೆ ನನಗೆ ನೆರಳಾದವರು, ಜೊತೆ ನಿಂತವರ ಪಾಲಿನ ಗೌರವಗಳನ್ನು ಅರ್ಪಿಸಿದ ಬಳಿಕವೂ ಇವತ್ತಿನ ಈ ಸನ್ಮಾನದ ಭಾರ ನನ್ನ ಮೇಲೆ ಸದಾ ಇರುತ್ತದೆ. ಇದು ನನ್ನ ಹೊಣೆಗಾರಿಕೆಯನ್ನು ಹೆಚ್ಚಿಸಿದೆ. ಪತ್ರಕರ್ತರು ತಮ್ಮ ವೃತ್ತಿಪರ ಅಗತ್ಯಗಳಿಗಾಗಿ ಪ್ರತಿಭಟನೆ ಮಾಡುವ ಅಗತ್ಯವೇ ಬಾರದಂತೆ ನಾನು ಕೆಲಸ ಮಾಡಬೇಕು ಎಂದು ಮಾಧ್ಯಮ ಸಲಹೆಗಾರ ಆದ ದಿನವೇ ನಿರ್ಧರಿಸಿದ್ದೆ. ಪತ್ರಕರ್ತ ಸಮುದಾಯದ ಹಿತಕ್ಕಾಗಿ ಶ್ರಮಿಸುತ್ತಾ ಈ ಭಾರವನ್ನು ನಾನು ಇಳಿಸಿಕೊಳ್ಳಲು ಪ್ರಯತ್ನಿಸುತ್ತೇನೆ ಎಂದರು. ಇಲ್ಲಿಯವರೆಗೂ ನಾನು ನಡೆದು ಬಂದಿದ್ದೇನೆ. ನನ್ನ ಮುಂದಿನ ನಡೆಯಲ್ಲೂ ನೀವೆಲ್ಲಾ ನನ್ನ ಜೊತೆಗಿರುತ್ತೀರಿ ಎಂದು ನಂಬಿದ್ದೇನೆ. ಈ ಭರವಸೆಯೊಂದಿಗೆ ನನ್ನ ಧನ್ಯತೆಯ ಮಾತುಗಳನ್ನು ಮುಗಿಸುತ್ತೇನೆ. ವಿಧಾನಸೌಧದ ನನ್ನ ಕಚೇರಿ ಕೊಠಡಿ ಸಂಖ್ಯೆ 204 ಪತ್ರಕರ್ತರಿಗಾಗಿ ಸದಾ ತೆರೆದಿರುತ್ತದೆ ಎಂದು ವಿವರಿಸಿದರು. ಹಿರಿಯ ಲೇಖಕ, ಪತ್ರಕರ್ತ ಜಿ.ಎನ್.ಮೋಹನ್ ಅವರು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ರಾಜ್ಯ ಪತ್ರಕರ್ತರ ಸಂಘದ ಅಧ್ಯಕ್ಷರಾದ ಶಿವಾನಂದ ತಗಡೂರು ಅವರೂ ಸನ್ಮಾನಿತರಾದರು. KUWJ ರಾಜ್ಯ ಮತ್ತು ಎಲ್ಲಾ ಜಿಲ್ಲೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಹೈನುಗಾರರ ಸಮಸ್ಯೆಗಳಿಗೆ ಕಿವಿಯಾದ ಬಮೂಲ್

## ಗ್ರಾಹಕರು, ವಿತರಕರ ಕುಂದುಕೊರತೆ ನಿವಾರಣೆಗೆ ಸಹಾಯವಾಣಿ, ಸಮಸ್ಯೆಗಳಿಗೆ ಸ್ಪಂದನೆ ನೀಡುವ ಭರವಸೆ

• ಉದಯವಾಹಿನಿ, ರಾಮನಗರ

ಹೈನುಗಾರರು ಎದುರಿಸುವ ಹಲವು ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವ ಮಹತ್ವಾಕಾಂಕ್ಷೆಯೊಂದಿಗೆ ಬೆಂಗಳೂರು ಹಾಲು ಒಕ್ಕೂಟ ಬಮೂಲ್ ಸಹಾಯವಾಣಿ ಆರಂಭಿಸಿದೆ. ರಾಜ್ಯದಲ್ಲಿ ಅತಿಹೆಚ್ಚು ಹಾಲು ಉತ್ಪಾದನೆ ಮಾಡುತ್ತಿರುವ ಹಾಲು ಒಕ್ಕೂಟವಾಗಿರುವ ಬಮೂಲ್ ರೈತರು ಮಾತ್ರವಲ್ಲದೆ ಗ್ರಾಹಕರು ಮತ್ತು ವಿತರಕರ ಅಹವಾಲುಗಳನ್ನೂ ಸಹಾಯವಾಣಿ ಮೂಲಕ ಸಹ ಆಲಿಸುತ್ತಿದೆ. ಬಮೂಲ್ ಹಾಲು ಉತ್ಪಾದಕರಿಗೆ ಸೌಲಭ್ಯ ನೀಡುವಲ್ಲಿ ರಾಜ್ಯದಲ್ಲೇ ಮೊದಲ ಸ್ಥಾನದಲ್ಲಿದೆ. ಇದೀಗ ಸಹಾಯವಾಣಿಯ ಮೂಲಕ ಇನ್ನಷ್ಟು ಪರಿಣಾಮಕಾರಿಯಾಗಿ ತನ್ನ ಸೇವೆ ನೀಡಲು ಮುಂದಾಗಿದೆ.

**ಸಹಾಯವಾಣಿ 79964400500:** ಬೆಂಗಳೂರು ನಗರ, ಬೆಂಗಳೂರು ದಕ್ಷಿಣ, ಗ್ರಾಮಾಂತರ ಜಿಲ್ಲೆಯನ್ನು ಒಳಗೊಂಡಿರುವ ಬಮೂಲ್ ಲಕ್ಷಾಂತರ ರೈತರು, ಗ್ರಾಹಕರು ತಮ್ಮ ಕುಂದುಕೊರತೆ ಪರಿಹರಿಸಿಕೊಳ್ಳಲು, ಒಕ್ಕೂಟಕ್ಕೆ ಸಂಬಂಧಿಸಿದ ಮಾಹಿತಿ ಪಡೆದುಕೊಳ್ಳಲು ಸಮರ್ಪಕ ವ್ಯವಸ್ಥೆ ಇದುವರೆಗೆ ಇರಲಿಲ್ಲ.

ಸಹಾಯವಾಣಿ ಮೂಲಕ ಈ ಕೊರತೆಯನ್ನು ನೀಗಿಸಲಾಗುತ್ತಿದೆ. ಸಹಾಯವಾಣಿಗೆ ಸ್ವಾತಂತ್ರ್ಯ ದಿನದಂದು ಚಾಲನೆ ನೀಡಲಾಗಿದೆ. 7996400500 ದೂರವಾಣಿ ಸಂಖ್ಯೆಯ ಮೂಲಕ ರೈತರು, ವಿತರಕರು ಮತ್ತು ಗ್ರಾಹಕರು ಸಹಾಯವಾಣಿ ಸಂಪರ್ಕಿಸಿ ತಮ್ಮ ದೂರನ್ನು ದಾಖಲಿಸಬಹುದಾಗಿದೆ. ಹೀಗೆ ದಾಖಲಿಸಲಾದ ದೂರಿಗೆ 24 ಗಂಟೆಯಲ್ಲಿ ಪರಿಹಾರ ದೊರೆಯಲಿದ್ದು, ನಂತರ ಪರಿಹಾರದ ಬಗ್ಗೆಯೂ ಮಾಹಿತಿ ದೊರೆಯಲಿದೆ. ಬಮುಲ್ ಸಹಾಯವಾಣಿಗೆ ರೈತರು, ವಿತರಕರು, ಗ್ರಾಹಕರು ಕರೆಮಾಡಿದಲ್ಲಿ ಅವರು ನೀಡುವ ದೂರನ್ನು ಸಹಾಯವಾಣಿಯ ಸಿಬ್ಬಂದಿ ನಮೂದು ಮಾಡಿಕೊಳ್ಳುತ್ತಾರೆ. ಸಹಾಯವಾಣಿಗೆ ಬಂದಿರುವ ದೂರು ಶೇಖರಣೆ, ತಾಂತ್ರಿಕ ವಿಭಾಗಕ್ಕೆ ಸೇರಿದ್ದಾಗಿದೆಯೇ ಅಥವಾ ಮಾರುಕಟ್ಟೆ ವಿಭಾಗಕ್ಕೆ ಸೇರಿದ್ದ, ಉತ್ಪಾದನಾ ವಿಭಾಗಕ್ಕೆ ಸೇರಿದ್ದ ಎಂದು ತಿಳಿದುಕೊಂಡು ಸಂಬಂಧಿಸಿದ ವಿಭಾಗಕ್ಕೆ ದೂರನ್ನು ರವಾನೆ ಮಾಡುತ್ತಾರೆ. ಆಯಾ ವಿಭಾಗದವರು ಈ ದೂರನ್ನು ಪರಿಶೀಲಿಸಿ ಅದಕ್ಕೆ ಪ್ರತಿಕ್ರಿಯೆ ನೀಡಬೇಕಾಗುತ್ತದೆ.

**ನಿತ್ಯ ನೂರು ದೂರು:** ಬಮೂಲ್ ಸಹಾಯವಾಣಿಗೆ ಆರಂಭದಲ್ಲೇ ಉತ್ತಮ ಸ್ಪಂದನೆ ದೊರೆತಿದೆ. ಪ್ರತಿದಿನ ನೂರಕ್ಕೂ ಹೆಚ್ಚು ಮಂದಿ ಸಹಾಯವಾಣಿಗೆ ಕರೆಮಾಡಿ ತಮ್ಮ ಅಹವಾಲು ಸಲ್ಲಿಸುತ್ತಿದ್ದು, ಎಲ್ಲಾದೂರುಗಳನ್ನು ಆದ್ಯತೆ ಮೇರೆಗೆ ಪರಿಹರಿಸಲಾಗುತ್ತಿದೆ ಎಂದು ಬಮೂಲ್ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಪಶು ವೈದ್ಯಕೀಯ ಸೇವೆ, ಹಾಲು ಸಂಗ್ರಹಣೆಯಲ್ಲಿ ಡೇರಿಗಳು ಎಸಗುವ ಲೋಪ, ರೈತರಿಗೆ ಬೋನಸ್, ಹಾಲಿನ ಹಣ ಪಾವತಿಯಲ್ಲಿ ಆಗುವ ಲೋಪ ಸೇರಿದಂತೆ ಒಕ್ಕೂಟದ ವ್ಯಾಪ್ತಿಯಲ್ಲಿನ ಯಾವುದೇ ಸಮಸ್ಯೆಗೆ ಸಹಾಯವಾಣಿಯನ್ನು ಸಂಪರ್ಕಿಸಬಹುದು. ಇನ್ನು ಬೆಂಗಳೂರು ಹಾಲು ಒಕ್ಕೂಟದ ವ್ಯಾಪ್ತಿಯಲ್ಲಿ ಹಾಲು ಹಾಗೂ ಹಾಲಿನ ಉತ್ಪನ್ನಗಳನ್ನು ಖರೀದಿಮಾಡುವ ಗ್ರಾಹಕರು ಬೆಲೆ ವ್ಯತ್ಯಾಸ, ಇನ್ನಿತರ ಲೋಪಗಳ ಬಗ್ಗೆ ಕರೆಮಾಡಿ ತಮ್ಮ ದೂರು ಸಲ್ಲಿಸಬಹುದು. ವಿತರಕರು ಸಹ ಒಕ್ಕೂಟದ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಂದ ಆಗುತ್ತಿರುವ ಲೋಪದೋಷದ ಬಗ್ಗೆ ದೂರು ಸಲ್ಲಿಸಬಹುದಾಗಿದೆ.



ಉದಯವಾಹಿನಿ ಚಿತ್ರ

ದೂರು ಸಲ್ಲಿಸ ಬಹುದು

> ಹೈನುಗಾರರು, ಗ್ರಾಹಕರು, ವಿತರಕರು ತಮ್ಮ ಕುಂದು ಕೊರತೆಗಳ ಬಗ್ಗೆ 79964400500 ಸಹಾಯವಾಣಿಗೆ ಕರೆ ಮಾಡಿ ದೂರು ಅಹವಾಲು ಸಲ್ಲಿಸಬಹುದು. ಇದರಿಂದ ಸಮಸ್ಯೆಗೆ ತ್ವರಿತ ಪರಿಹಾರ ದೊರೆಯಲಿದೆ. ವ್ಯವಸ್ಥೆ ಸುಧಾರಣೆಗೂ ಇದು ನೆರವಾಗಲಿದ್ದು, ಸಹಾಯವಾಣಿ ಸೌಲಭ್ಯ ಸದುಪಯೋಗ ಮಾಡಿಕೊಳ್ಳಬೇಕು.
>
> -ಡಿ.ಕೆ.ಸುರೇಶ್
> ಬೆಂಗಳೂರು ಹಾಲು ಒಕ್ಕೂಟದ ಅಧ್ಯಕ್ಷ

**ಪ್ರಮುಖ ಅಂಶಗಳು**

- ಬಮೂಲ್ ವ್ಯಾಪ್ತಿಯಲ್ಲಿ1.11 ಲಕ್ಷ ಸಕ್ರಿಯ ಹೈನುಗಾರರು
- 3 ಸಾವಿರಕ್ಕೂ ಅಧಿಕ ವಿತರಕರು
- 2295 ಹಾಲು ಉತ್ಪಾದಕ ಸಹಕಾರ ಸಂಘಗಳಿವೆ.
- ಸಹಾಯವಾಣಿ ಬೆಳಗ್ಗೆ 7 ರಿಂದ ಸಂಜೆ 7ವರೆಗೆ ಕಾರ್ಯ ನಿರ್ವಹಿಸಲಿದೆ.
- ಸಹಾಯವಾಣಿಯಲ್ಲಿ10 ಲೈನ್‌ಗಳು, ಅಗತ್ಯ ಸಿಬ್ಬಂದಿ ನಿಯೋಜನೆ.
- ಪ್ರತಿಯೊಂದು ಕರೆಯ ಧ್ವನಿಮುದ್ರಣ, ಪ್ರತ್ಯೇಕ ತಂತ್ರಾಂಶ ಅಭಿವೃದ್ಧಿ.
- ಒಕ್ಕೂಟದ ಅಧ್ಯಕ್ಷರು ಮತ್ತು ನಿರ್ದೇಶಕರಿಂದ ದೂರುಗಳ ಪರಾಮರ್ಶೆ

# ಯೂರಿಯಾಗೆ ರೈತರ ಸಾಲು

• ಉದಯವಾಹಿನಿ, ತಿಪಟೂರು

ನಗರ ಹಾಗೂ ತಾಲ್ಲೂಕಿನ ಪ್ರಾಥಮಿಕ ಕೃಷಿ ಸಹಕಾರ ಸಂಘಗಳಲ್ಲಿ ಯೂರಿಯಾ ದೊರೆಯದ ಕಾರಣ ರೈತರು ಪರದಾಡುತ್ತಿದ್ದು, ಸರ್ಕಾರಿ ಸಂಘಗಳಲ್ಲೇ ಗೊಬ್ಬರ ಕೊರತೆಯಿಂದ ರೈತರು ಖಾಸಗಿ ಕೃಷಿ ಕೇಂದ್ರಗಳಿಗೆ ಮುಗಿಬಿದ್ದರು. ನಗರದ ಅಮರ್‌ನಾಥ್ ಕೃಷಿ ಕೇಂದ್ರದಲ್ಲಿ ಯೂರಿಯಾಕ್ಕಾಗಿ ನೂರಾರು ರೈತರು ತಾಸುಗಟ್ಟಲೇ ಮಳೆ ನಡುವೆಯೇ ಸಾಲಿನಲ್ಲಿ ನಿಂತಿದ್ದರು. ಗ್ರಾಮಾಂತರ ಪ್ರದೇಶದ ಪ್ರಾಥಮಿಕ ಕೃಷಿ ಸಹಕಾರ ಸಂಘಗಳಲ್ಲಿ ಯೂರಿಯಾ ಸಿಗದ ಕಾರಣ ಹಾಗೂ ಮಳೆ ಸ್ವಲ್ಪ ಬಿಡುವು ಕೊಟ್ಟ ಕಾರಣ ರಾಗಿ ಬಿತ್ತನೆ ಹಾಗೂ ಮೇಲುಗೊಬ್ಬರವಾಗಿ ಬಳಸಲು ಯೂರಿಯಾಕ್ಕೆ ಮುಗಿಬಿದ್ದರು. ಆದರೆ ಸರಬರಾಜು ಕುಂಠಿತಗೊಂಡಿರುವುದರಿಂದ ರೈತರ ಕೋಪ ಹಾಗೂ ಹತಾಶೆ ಹೆಚ್ಚುತ್ತಿದೆ.

ಸರ್ಕಾರಿ ಸಹಕಾರ ಸಂಘಗಳು ಗೊಬ್ಬರ ಪೂರೈಸಲು ವಿಫಲವಾಗಿರುವುದರಿಂದ ದುಪ್ಪಟ್ಟ ಬೆಲೆಗೆ ಮಾರಾಟ ಮಾಡಿದರು. ಒಂದು ಆಧಾರ್ ಕಾರ್ಡ್‌ಗೆ ಕೇವಲ ಎರಡು ಚೀಲ ಗೊಬ್ಬರ ನೀಡಲಾಗುತ್ತಿದ್ದು, ಪ್ರತಿ ಚೀಲದ ಬೆಲೆ 300 ನಿಗದಿಪಡಿಸಲಾಗಿದೆ. ಗೊಬ್ಬರ ಕೊರತೆಯಿಂದಾಗಿ ಬೆಳೆಗಾರರು ಆತಂಕ ವ್ಯಕ್ತಪಡಿಸಿದ್ದು, ತಕ್ಷಣವೇ ಸರಬರಾಜು ಹೆಚ್ಚಿಸಬೇಕು ಎಂದು ಆಗ್ರಹಿಸಿದ್ದಾರೆ.

ಯೂರಿಯಾ ಸಿಗುತ್ತದೆ ಎಂದು ತಿಳಿದಾಗ ಆತುರದಲ್ಲಿ ಬಂದು ಸಾಲಿನಲ್ಲಿ ನಿಂತಿದ್ದು ಕೇವಲ ಎರಡು ಚೀಲಗಳನ್ನು ನೀಡುತ್ತಿದ್ದಾರೆ. ದೊಡ್ಡ ಪ್ರಮಾಣದ ರೈತರಿಗೆ ತೊಂದರೆಯಾಗುತ್ತಿದೆ. ನಾವುಗಳು ಹೊಲದಲ್ಲಿ ಕೆಲಸ ಮಾಡಬೇಕೊ, ರಸಗೊಬ್ಬರಕ್ಕಾಗಿ ಅಲೆಯಬೇಕೊ ಗೊತ್ತಿಲ್ಲ ಎನ್ನುತ್ತಾರೆ ಸಾಸಲು ಬಸವರಾಜು.

ರೈತನ ಹೊಲ ಹಸಿರಾಗಬೇಕಾದರೆ ಮೊದಲು ಸರ್ಕಾರದ ಮನಸ್ಸು ಹಸಿರಾಗಬೇಕು. ಮುಂಗಾರು ಪ್ರಾರಂಭವಾಗುತ್ತಿದ್ದಂತೆ ಪ್ರತಿ ವರ್ಷವೂ ರೈತರು ರಸಗೊಬ್ಬರಕ್ಕೆ ಅಲೆದಾಡಬೇಕಿದೆ. ಸಹಕಾರ ಸಂಘಗಳು ಹೆಸರಿಗಷ್ಟೇ ರೈತರ ಬೆಂಬಲಕ್ಕಿದೆ ಎಂದು ಹೇಳುತ್ತಾರೆ. ಕೃಷಿ ಅಧಿಕಾರಿಗಳು ಸರಿಯಾಗಿ ನಿರ್ವಹಣೆ ಮಾಡಿದರೆ ಯಾವುದೇ ಅನಾಹುತಗಳು ಇರುವುದಿಲ್ಲ ಎಂದು ಹೊಲದಮನೆ ಹರೀಶ್ ಹೇಳಿದರು.



ಉದಯವಾಹಿನಿ ಚಿತ್ರ

> ಪ್ರತಿ ರೈತ ರಸಗೊಬ್ಬರ ಪಡೆದಾಗ ಬಿಲ್ ಪಡೆಯಬೇಕು. ಒಂದು ಎಕರೆ ರಾಗಿಗೆ 22 ಕೆ.ಜಿ ಅಗತ್ಯ. ಈಗಾಗಲೇ ಸಾರ್ಥವಳ್ಳಿ ಬುರಡೇಘಟ್ಟ ಹಾಲ್ಕುರಿಕೆ ಸಹಕಾರ ಸಂಘಗಳಲ್ಲಿ ನೀಡಲಾಗುತ್ತಿದೆ. ಗೊಬ್ಬರಕ್ಕೆ ಯಾವುದೇ ತೊಂದರೆಯಿಲ್ಲ.
>
> -ಪವನ್ ಸಹಾಯಕ ಕೃಷಿ ನಿರ್ದೇಶಕ

# ಕಾವೇರಿ ಚಳವಳಿ ಖ್ಯಾತಿಯ ಮಂಡ್ಯ ಜಿಲ್ಲಾ ರೈತ ಹಿತರಕ್ಷಣಾ ಸಮಿತಿ ಪುನರ್ ರಚನೆ

• ಉದಯವಾಹಿನಿ, ಮಂಡ್ಯ

ಕಾವೇರಿ ನದಿ ನೀರಿಗಾಗಿ ನಡೆಸಿದ ಚಳವಳಿಯಿಂದ ಖ್ಯಾತಿ ಪಡೆದಿರುವ ಮಂಡ್ಯ ಜಿಲ್ಲಾ ರೈತ ಹಿತರಕ್ಷಣಾ ಸಮಿತಿಯನ್ನು ಪುನರ್ ರಚನೆ ಮಾಡಿ, ಪದಾಧಿಕಾರಿಗಳನ್ನು ಅಧಿಕೃತವಾಗಿ ಬುಧವಾರ ಘೋಷಿಸಲಾಯಿತು.

ನಗರದ ಪ್ರವಾಸಿ ಮಂದಿರದಲ್ಲಿ ಬುಧವಾರ ನಡೆದ ಸಭೆಯಲ್ಲಿ ನೂತನ ಸಮಿತಿಯ ಅಧ್ಯಕ್ಷ ಜಿ.ಬಿ.ಶಿವಕುಮಾರ್ ಮಾತನಾಡಿ, 1991-92ನೇ ಸಾಲಿನಲ್ಲಿ ಸಂಸ್ಥಾಪಕ ರಾಜ್ಯ ಘಟಕದ ಅಧ್ಯಕ್ಷ ಜಿ.ಮಾದೇಗೌಡ ನೇತೃತ್ವದಲ್ಲಿ ಕಾವೇರಿ ನದಿ ನೀರಿನ ವಿಚಾರವಾಗಿ ಪಕ್ಷಾತೀತವಾಗಿ ಈ ಸಮಿತಿ ಸ್ಥಾಪನೆಯಾಗಿತ್ತು. ಮಂಡ್ಯದಲ್ಲಿ ರಾಷ್ಟ್ರಮಟ್ಟದ ಸಭೆ ನಡೆಸಿ, ಈ ಸಮಿತಿಗೆ ಮಾದೇಗೌಡರು ಘನತೆ ತಂದುಕೊಟ್ಟಿದ್ದರು. ಈಗ ಜಿ.ಮಾದೇಗೌಡರು, ಸಮಿತಿಯ ಕೆಲವು ಸದಸ್ಯರು ನಿಧನರಾದ ಕಾರಣ ಸಮಿತಿಯನ್ನು ಮತ್ತೆ ಗಟ್ಟಿಗೊಳಿಸಿ, ಹೋರಾಟ ನಡೆಸಲು ಪುನರ್ ರಚನೆ ಮಾಡಿ, ಪದಾಧಿಕಾರಿಗಳನ್ನು ನೇಮಿಸಿದ್ದೇವೆ ಎಂದರು.

ಹಿರಿಯ ಉಪಾಧ್ಯಕ್ಷರಾಗಿ ಎಂ.ಬಿ.ಬೋರೇಗೌಡ, ಕೆ.ಬೋರಯ್ಯ, ಬಿ.ಶಿವಲಿಂಗಯ್ಯ, ಉಪಾಧ್ಯಕ್ಷರಾಗಿ ಎಸ್.ಕೆಂಪೇಗೌಡ, ಕೆ.ಎನ್.ಗುರುಪ್ರಸಾದ್, ಸದಸ್ಯರಾಗಿ ಸಿ.ಮಂಜುನಾಥ್, ಸಿ.ಬಿ.ಮಂಜುನಾಥ್, ಎಲ್. ಸುರೇಶ್ ಅವರನ್ನು ನೇಮಕ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಕಾಯಂ ಸದಸ್ಯರಾಗಿ ಜಿಲ್ಲೆಯ ಹಾಲಿ ಮತ್ತು ಮಾಜಿ ಸಂಸತ್ ಸದಸ್ಯರು, ವಿಧಾನಸಭಾ ಸದಸ್ಯರು, ವಿಧಾನ ಪರಿಷತ್ ಸದಸ್ಯರು, ಜಿಲ್ಲೆಯ ರಾಜಕೀಯ ಪಕ್ಷಗಳ ಹಾಲಿ ಜಿಲ್ಲಾ ಘಟಕದ ಅಧ್ಯಕ್ಷರು, ಜಿಲ್ಲೆಯ ಪ್ರಗತಿಪರ ಹೋರಾಟ ಸಂಘಟನೆಗಳ ಅಧ್ಯಕ್ಷರು ಇರುತ್ತಾರೆ ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

# ಜ್ಞಾನೇಶ್ ಕುಮಾರ್‌ನ ಕಿತ್ತೊಗೆಯಿರಿ: ಕಾಂಗ್ರೆಸ್ ಪ್ರತಿಭಟನೆ

• ಉದಯವಾಹಿನಿ, ಮೈಸೂರು

ನಗರ ಯುವ ಕಾಂಗ್ರೆಸ್ ಸಮಿತಿ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಸ್ಟಾಪ್ ವೋಟ್ ಚೋರಿ ಅಭಿಯಾನದ ಭಾಗವಾಗಿ ಗ್ರಾಮಾಂತರ ಬಸ್ ನಿಲ್ದಾಣದಲ್ಲಿ ಕೆಎಸ್‌ಆರ್‌ಟಿಸಿ ಬಸ್‌ಗಳಿಗೆ ಸ್ಟಾಪ್ ಮತ ಕಳ್ಳತನ ಎಂಬ ಬರಹವುಳ್ಳ ಪೋಸ್ಟರ್ ಅಂಟಿಸಿದರು. ಬೆಳಿಗ್ಗೆ ಬಸ್ ನಿಲ್ದಾಣದ ಮುಂಭಾಗ ಜಮಾಯಿಸಿದ ಸದಸ್ಯರು, ಬಿಜೆಪಿ ವಿರುದ್ಧ ಧಿಕ್ಕಾರ ಕೂಗಿದರು. ಹತ್ತಿರದಲ್ಲಿರುವ ಬಸ್, ಆಟೋಗಳಿಗೆ ಸ್ಟಿಕ್ಕರ್ ಅಂಟಿಸಿದರು. ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಮಾತನಾಡಿ, ಬಿಜೆಪಿಯು ದೇಶದಲ್ಲಿ ಮತ ಕಳ್ಳತನ ಮಾಡಿ 18 ರಾಜ್ಯದಲ್ಲಿ ಅಧಿಕಾರ ಹಿಡಿದಿದೆ. ವಿಧಾನಸಭಾ ಚುನಾವಣೆಯಲ್ಲೂ ಇದೇ ರೀತಿಯ ತಂತ್ರ ಬಳಸಿ ಗೆದ್ದಿದ್ದಾರೆ. ಈ ಬಗ್ಗೆ ಮಹಾದೇವಪುರ ಕ್ಷೇತ್ರದಲ್ಲಿ ನಡೆದ ಮತ ಕಳ್ಳತನದ ದಾಖಲೆಗಳನ್ನು ರಾಹುಲ್ ಗಾಂಧಿ ನೀಡಿದರೂ, ಅಫಿಡವಿಟ್ ಮೂಲಕ ಸಲ್ಲಿಸಬೇಕು ಎಂದು ಚುನಾವಣಾ ಆಯೋಗ ತಿಳಿಸಿರುವುದು ದೇಶದ ದುರಂತ' ಎಂದರು.

ಚುನಾವಣಾ ಆಯೋಗದ ಆಯುಕ್ತ ಜ್ಞಾನೇಶ್ ಕುಮಾರ್ ಬಿಜೆಪಿ ಪಕ್ಷದ ಏಜೆಂಟ್‌ರಂತೆ ವರ್ತಿಸುತ್ತಿದ್ದಾರೆ. ರಾಹುಲ್ ಗಾಂಧಿ ನೀಡಿದ ದೂರನ್ನು ಸ್ವೀಕರಿಸಿ ಸ್ವಯಂ ಪ್ರೇರಿತ ತನಿಖೆ ನಡೆಸಬೇಕಾದವರು, ಅನಗತ್ಯ ದಾಖಲೆ ಕೇಳುತ್ತಿದ್ದಾರೆ. ಜ್ಞಾನೇಶ್ ಕುಮಾರ್ ಅವರನ್ನು ಕಿತ್ತೊಗೆಯಬೇಕು ಎಂದು ಆಗ್ರಹಿಸಿದರು. ಬೆಂಗಳೂರಿನ ಸಮಾವೇಶದಲ್ಲಿ ದಾಖಲೆ ಬಿಡುಗಡೆ ಮಾಡಿ ದೂರು ನೀಡಿದರೂ, ಚುನಾವಣಾ ಆಯೋಗ ಕ್ರಮವಹಿಸಿಲ್ಲ. ಈ ಬಗ್ಗೆ ರಾಹುಲ್ ಗಾಂಧಿ ಬಿಹಾರದಲ್ಲಿ ಯಾತ್ರೆ ಆರಂಭಿಸಿದ್ದು ಅದನ್ನು ದೇಶದಾದ್ಯಂತ ಮುಂದುವರಿಸಬೇಕು. ಸುಪ್ರೀಂ ಕೋರ್ಟ್ ಮಧ್ಯಪ್ರವೇಶಿಸಿ ಸುಮೊಟೊ ದಾಖಲಿಸಿಕೊಂಡು ತನಿಖೆಗೆ ಆದೇಶಿಸಬೇಕು ಎಂದು ಒತ್ತಾಯಿಸಿದರು. ಮಹಾರಾಷ್ಟ್ರದ ಚುನಾವಣೆಯಲ್ಲಿ 5 ರಿಂದ 6 ಗಂಟೆ ಸಮಯದಲ್ಲಿ 90 ಸಾವಿರ ಮತದಾನ ಆಗುತ್ತದೆ. ಸಮೀಕ್ಷೆಗಳು ಕಾಂಗ್ರೆಸ್ ಗೆಲ್ಲುತ್ತದೆ ಎಂದು ತಿಳಿಸಿದರೂ, ಬಿಜೆಪಿ ಇವಿಯಂ ಕಳ್ಳತನ ಮಾಡಿ ಗೆಲುವು ಸಾಧಿಸಿದೆ. ಇದು ಜನಾಂದೋಲನವಾಗಿ ಮಾರ್ಪಡಬೇಕಿದೆ. ಇಲ್ಲದಿದ್ದರೆ ಬಿಜೆಪಿಯ ಸರ್ವಾಧಿಕಾರ ಮುಂದುವರೆಯುತ್ತದೆ ಎಂದರು. ಕಳೆದ ಲೋಕಸಭಾ ಚುನಾವಣೆಯಲ್ಲಿ ಮೈಸೂರು, ಕೊಡಗು ಕ್ಷೇತ್ರದಲ್ಲಿ ಬಿಜೆಪಿಯು 292 ಬೂತ್‌ನಲ್ಲಿ 1.45 ಲಕ್ಷ ಮತ ಕಳ್ಳತನ ಮಾಡಿದೆ. ಚಾಮರಾಜ, ಕೃಷ್ಣರಾಜ, ಮಡಿಕೇರಿ, ವಿರಾಜಪೇಟೆಯಲ್ಲಿ ಮತ ಕಳ್ಳತನವಾಗಿದ್ದು, 3 ತಿಂಗಳಲ್ಲಿ ಸಂಪೂರ್ಣ ಮಾಹಿತಿ ಜನರ ಮುಂದಿಡುತ್ತೇವೆ ಎಂದು ಹೇಳಿದರು.





ಉದಯವಾಹಿನಿ ಚಿತ್ರ

# ದೋಣಿ ಸಂಚಾರ ಸ್ಥಗಿತ; ಪ್ರವಾಸಿಗರಿಗೆ ನಿರ್ಬಂಧ

• ಉದಯವಾಹಿನಿ, ಕುಶಾಲನಗರ

ಕೊಡಗು ಜಿಲ್ಲೆಯ ಪ್ರಮುಖ ಪ್ರವಾಸಿ ಕೇಂದ್ರವಾದ ದುಬಾರೆ ಸಾಕಾನೆ ಶಿಬಿರದ ಬಳಿ ಹರಿಯುವ ಕಾವೇರಿ ನದಿಯಲ್ಲಿ ಸತತ ಮಳೆಯಿಂದಾಗಿ ನೀರಿನ ಮಟ್ಟದಲ್ಲಿ ಏರಿಕೆ ಕಂಡು ಬಂದಿರುವ ಹಿನ್ನೆಲೆಯಲ್ಲಿ ದುಬಾರೆ ಸಾಕಾನೆ ಶಿಬಿರ ವ್ಯಾಪ್ತಿಯಲ್ಲಿ ಪ್ರವಾಸಿಗರಿಗೆ ನಿರ್ಬಂಧ ಹೇರಲಾಗಿದೆ. ಕಾವೇರಿ ನದಿ ಮೈದುಂಬಿ ಹರಿಯುತ್ತಿರುವ ಹಿನ್ನೆಲೆಯಲ್ಲಿ ದೋಣಿ ಸಂಚಾರವನ್ನು ಸ್ಥಗಿತಗೊಳಿಸಲಾಗಿದೆ. ಆನೆ ಶಿಬಿರಕ್ಕೂ ಪ್ರವಾಸಿಗರಿಗೆ ಪ್ರವೇಶ ಬಂದ್ ಮಾಡಲಾಗಿದೆ ಎಂದು ಕುಶಾಲನಗರ ವಲಯ ಅರಣ್ಯ ಅಧಿಕಾರಿ ರಕ್ಷಿತ್ ಆದೇಶ ಹೊರಡಿಸಿದ್ದು, ಮುಂದಿನ ಆದೇಶದವರೆಗೆ ನಿರ್ಬಂಧ ಹೇರಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಂಪರ್ಕ ಕಡಿತದಿಂದ ಗಿರಿಜನರ ಪರದಾಟ:** ಪ್ರತಿ ವರ್ಷ ಮಳೆಗಾಲದಲ್ಲಿ ಮೈದುಂಬಿ ಹರಿಯುವ ಕಾವೇರಿ ನದಿಯಿಂದ ದುಬಾರೆ ಸಂಪರ್ಕ ಕಡಿತಗೊಳ್ಳುತ್ತಿದ್ದು, ದುಬಾರೆ ಅರಣ್ಯ ಪ್ರದೇಶದಲ್ಲಿ ವಾಸಿಸುವ ಹತ್ತಾರು ಕುಟುಂಬಗಳು ಪರದಾಡುವಂತ ಪರಿಸ್ಥಿತಿ ಉಂಟಾಗುತ್ತಿದೆ. ಮಳೆಗಾಲದಲ್ಲಿ ತುಂಬಿ ಹರಿಯುವ ಕಾವೇರಿ ನದಿಯಲ್ಲಿ ದೋಣಿ ಸಂಚಾರ ತುಂಬ ಅಪಾಯಕಾರಿ. ಈ ಭಾಗದಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ತೂಗು ಸೇತುವೆ ನಿರ್ಮಾಣ ಮಾಡಬೇಕು ಎಂಬ ಗ್ರಾಮಸ್ಥರ ಬಹು ವರ್ಷಗಳ ಬೇಡಿಕೆ ಇದುವರೆಗೂ ಈಡೇರಿಲ್ಲ. ದುಬಾರೆಯಲ್ಲಿರುವ ಸುಮಾರು 40 ರಿಂದ 50 ಗಿರಿಜನ ಕುಟುಂಬಗಳಿಗೆ ಮಳೆಗಾಲದಲ್ಲಿ ಜೀವನ ನಿರ್ವಹಣೆ ನರಕಯಾತನೆಯಾಗಿದೆ. ಈ ಕುಟುಂಬಗಳು ಜೀವನೋಪಾಯಕ್ಕಾಗಿ ನಂಜರಾಯಪಟ್ಟಣ, ರಂಗಸಮುದ್ರ, ಹೊಸಪಟ್ಟಣ ಗ್ರಾಮಗಳನ್ನು ಅವಲಂಬಿಸಿದ್ದಾರೆ.

ಗಿರಿಜನರು ಪ್ರತಿಯೊಂದು ಕೆಲಸ ಕಾರ್ಯಗಳಿಗೂ ಕೂಲಿ, ಕೆಲಸಕ್ಕಾಗಿ ಆಸ್ಪತ್ರೆ, ಆಹಾರ ಸಾಮಾಗ್ರಿ, ಖರೀದಿಗೆ ಹಾಗೂ ಶಿಕ್ಷಣಕ್ಕೆ ಅವರು ನಂಜರಾಯಪಟ್ಟಣ ಬರಬೇಕಾಗಿದೆ. ಗಿರಿಜನರು ತಮ್ಮ ದಿನನಿತ್ಯದ ಕೆಲಸ ಕಾರ್ಯಗಳಿಗೆ ಯಾಂತ್ರಿಕ ದೋಣಿಗಳ ಮೂಲಕವೇ ಸಂಚಾರ ಮಾಡಬೇಕಾದ ಅನಿವಾರ್ಯತೆ ಇದೆ. ಪಿರಿಯಾಪಟ್ಟಣ ತಾಲ್ಲೂಕಿನ ಚಾಮರಾಯನಕೋಟೆ ಮುತ್ತಿನ ಮುಳ್ಳುಸೋಗೆ ಅವರ್ತಿ ಹನುಮಂತ ಪುರ ಕಣಗಾಲ್ ಹಾಗೂ ಕೊಡಗಿನ ಕಣಿವೆ ರಾಮಪುರ ಭುವನಗಿರಿ ಹಕ್ಕೆ ಹುಲುಸೆ ಗ್ರಾಮಗಳ ಜನರಿಗೆ ತೊಂದರೆ ಉಂಟಾಗುತ್ತದೆ.

ಪಿರಿಯಾಪಟ್ಟಣ ತಾಲ್ಲೂಕಿನ ಗಡಿಗ್ರಾಮಗಳ ವಿದ್ಯಾರ್ಥಿಗಳಿಗೆ ಕೂಡೂರು ಕೈಗಾರಿಕಾ ಬಡಾವಣೆಗೆ ಹೋಗುವ ಕಾರ್ಮಿಕರಿಗೆ ಇದರಿಂದ ತುಂಬ ತೊಂದರೆಯಾಗುತ್ತದೆ. ಹಾನಿಯಾಗಿರುವ ತೂಗು ಸೇತುವೆಯನ್ನು ದುರಸ್ತಿ ಪಡಿಸಲು ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.



ಉದಯವಾಹಿನಿ ಚಿತ್ರ

**ಕಣಿವೆ ತೂಗು ಸೇತುವೆಗೆ ಹಾನಿ**

ಕಣಿವೆ ರಾಮಲಿಂಗೇಶ್ವರ ದೇವಾಲಯ ಬಳಿ ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ತೂಗು ಸೇತುವೆ ಕೊಡಗು ಹಾಗೂ ಮೈಸೂರು ಜಿಲ್ಲೆಯ ಗಡಿ ಗ್ರಾಮಗಳ ಜನರಿಗೆ ತುಂಬ ಅನುಕೂಲ ಉಂಟಾಗಿದೆ. ಆದರೆ ಈ ತೂಗು ಸೇತುವೆ ಹಾನಿಯಾಗಿದ್ದು ಅಪಾಯಕಾರಿ ಸೇತುವೆ ಮೇಲೆಯೆ ನಿತ್ಯ ನೂರಾರು ಜನರು ಸಂಚಾರ ಮಾಡುತ್ತಿದ್ದಾರೆ.

# 258 ಎಕರೆಯಲ್ಲಿ ವಸತಿ ರಹಿತರಿಗೆ ಸೂರು: ಶಾಸಕ

• ಉದಯವಾಹಿನಿ, ರಾಮನಗರ

ಕ್ಷೇತ್ರದಲ್ಲಿ ಕಳೆದ 25 ವರ್ಷಗಳಿಂದಲೂ ಬಡವರಿಗೆ ಸೂರು ಒದಗಿಸುವ ಕೆಲಸವಾಗಿಲ್ಲ. ಹಿಂದೆ ಸಿ.ಎಂ. ಲಿಂಗಪ್ಪ ಅವರು ಶಾಸಕರಾಗಿದ್ದಾಗ ನಿವೇಶನ ಹಂಚಿದ್ದನ್ನು ಬಿಟ್ಟರೆ ಮತ್ತೆ ನೀಡಿಲ್ಲ. ಹಾಗಾಗಿ, ಕ್ಷೇತ್ರದ ವಸತಿ ರಹಿತರಿಗೆ ಸೂರು ಒದಗಿಸುವ ಸಲುವಾಗಿ 258 ಎಕರೆ ಸರ್ಕಾರಿ ಜಮೀನು ಗುರುತಿಸಲಾಗಿದೆ ಎಂದು ಶಾಸಕ ಎಚ್.ಎ. ಇಕ್ಬಾಲ್ ಹುಸೇನ್ ಹೇಳಿದರು.

ತಾಲ್ಲೂಕಿನ ಬಿಳಗುಂಬ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ದೊಡ್ಡಮಣ್ಣುಗುಡ್ಡೆ ಪ್ರದೇಶದಲ್ಲಿ ಹಿಂದೆ ನಿರ್ಮಿಸಿರುವ ವಸತಿ ಕಟ್ಟಡಗಳನ್ನು ಇತ್ತೀಚೆಗೆ ಅಧಿಕಾರಿಗಳೊಂದಿಗೆ ಪರಿಶೀಲಿಸಿ ಮಾತನಾಡಿದ ಅವರು, ನಾನು ಶಾಸಕನಾದ ಬಳಿಕ ವಸತಿ ವ್ಯವಸ್ಥೆ ಇಲ್ಲದವರಿಗೆ ವಸತಿ ಒದಗಿಸುವ ಸಲುವಾಗಿ 258 ಎಕರೆ ಜಾಗ ಗುರುತಿಸಲಾಗಿದೆ. ಈ ಪೈಕಿ 196 ಎಕರೆಯಲ್ಲಿ ಅಭಿವೃದ್ಧಿ ಕಾಮಗಾರಿ ನಡೆಸಲಾಗುತ್ತಿದೆ ಎಂದರು. ವಸತಿ ರಹಿತರಿಗೆ ವಿತರಿಸುವುದಕ್ಕಾಗಿ ದೊಡ್ಡಮಣ್ಣುಗುಡ್ಡೆಯಲ್ಲಿ ನಿರ್ಮಿಸಿರುವ ವಸತಿ ಕಟ್ಟಡಗಳು ಪಾಳುಬಿದ್ದಿವೆ. ಈ ಕಟ್ಟಡಗಳ ಕಿಟಕಿ, ಬಾಗಿಲು, ಸುಣ್ಣ, ಬಣ್ಣ, ವಿದ್ಯುತ್, ಮೂಲಸೌಕರ್ಯ ಒದಗಿಸಿ ಅಭಿವೃದ್ಧಿಪಡಿಸಲು ಸರ್ಕಾರ 3 ಕೋಟಿ ಹಣ ನೀಡಿದೆ. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಹಕಾರದಿಂದ ಇದು ಸಾಧ್ಯವಾಯಿತು ಎಂದು ತಿಳಿಸಿದರು. ದೊಡ್ಡಮಣ್ಣುಗುಡ್ಡೆ ದೊಡ್ಡಿ ಸರ್ವೆ ನಂಬರ್‌ಗಳಲ್ಲಿ ಮುಂಚೆ ರೈತರ ಬೇರೆ ಬೇರೆ ನಂಬರ್ ಬರುತ್ತಿದ್ದವು.

ಆದರೆ, ಈಗ ಪೂರ್ಣವಾಗಿ ಎಲ್ಲಾ ಜಮೀನನ್ನು ಸರ್ವೆ ನಂ. 1 ಎಂದು ನಮೂದಿಸಲಾಗಿದೆ. ಇದರಿಂದ ರೈತರಿಗೆ ಸಮಸ್ಯೆ ಉಂಟಾಗಿದೆ ಇದನ್ನು ಪರಿಹರಿಸಿ ಕೊಡಬೇಕು ಎಂದು ಸ್ಥಳೀಯ ರೈತರು ಶಾಸಕರ ಬಳಿ ತಮ್ಮ ಅಳಲು ತೋಡಿಕೊಂಡರು.



ಉದಯವಾಹಿನಿ ಚಿತ್ರ

**ಶಾಸಕರಿಗೆ ಶಾಕ್**

ವಸತಿ ಕಟ್ಟಡಗಳನ್ನು ವೀಕ್ಷಿಸಿದ ಶಾಸಕ ಹುಸೇನ್ ಶಾಕ್ ಆದರು. ಮಳೆ-ಗಾಳಿಯಿಂದಾಗಿ ಪಾಳು ಬಿದ್ದ ಕಟ್ಟಡಗಳಲ್ಲಿ ಗಬ್ಬು ವಾಸನೆ ಸೂಸುತ್ತಿದ್ದವು. ಮದ್ಯದ ಬಾಟಲಿಗಳು, ಪಾಕೆಟ್‌ಗಳು ದರ್ಶನವಾಯಿತು. ಆದರೂ, ಶಾಸಕರು ಕಟ್ಟಡಗಳು ಸುಸ್ಥಿತಿಯಲ್ಲಿ ಇವೆಯೇ ಎಂಬುದನ್ನು ಪರಿಶೀಲಿಸಿದರು.

# ಸರ್ಕಾರಿ ಕಚೇರಿಗಳಲ್ಲಿ ಭ್ರಷ್ಟಾಚಾರ: ರೈತ ಸಂಘ ಪ್ರತಿಭಟನೆ

• ಉದಯವಾಹಿನಿ, ಕೆ.ಆರ್.ಪೇಟೆ

ಪಟ್ಟಣದ ಮಿನಿವಿಧಾನಸೌಧದ ಆವರಣ ಹಸಿರುಮಯವಾಗಿತ್ತು. ತಾಲ್ಲೂಕಿನ ವಿವಿಧೆಡೆಯಿಂದ ಹಸಿರು ಟವಲ್ ಹೊದ್ದು ಬಂದ ರೈತರು ತಾಲ್ಲೂಕಿನ ಸರ್ಕಾರಿ ಕಚೇರಿಗಳಲ್ಲಿ ನಡೆಯುತ್ತಿರುವ ವ್ಯಾಪಕ ಭ್ರಷ್ಟಾಚಾರ ಖಂಡಿಸಿದರು. ತಾಲ್ಲೂಕು ಕಚೇರಿ ಸೇರಿದಂತೆ ಬಹುತೇಕ ಸರ್ಕಾರಿ ಕಚೇರಿಗಳಲ್ಲಿ ಭ್ರಷ್ಟಾಚಾರ ಹೆಚ್ಚಾಗಿದ್ದು, ಸಾರ್ವಜನಿಕರ ಕೆಲಸ ಕಾರ್ಯ ಮಾಡಿಕೊಡಲು ಅನಗತ್ಯ ವಿಳಂಬ ಮಾಡಲಾಗುತ್ತಿದೆ. ಈ ಬಗ್ಗೆ ತಹಶೀಲ್ದಾರ್ ಸೇರಿದಂತೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದರೂ ಕ್ರಮ ಕೈಗೊಂಡಿಲ್ಲ ಎಂದು ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಎ.ಎಲ್.ಕೆಂಪೂಗೌಡ ದೂರಿದರು.

ಮುಖಂಡ ಮುದುಗೆರೆ ರಾಜೇಗೌಡ, ಗೋಮಾಳದ ಜಮೀನುಗಳನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿರುವ ಬಗ್ಗೆ ಲಿಖಿತ ದೂರು ನೀಡಿದರೂ ತಹಶೀಲ್ದಾರರು ಗಮನಹರಿಸಿಲ್ಲ. ಸರ್ಕಾರದ ಆಸ್ತಿ ಸಂರಕ್ಷಿಸಬೇಕಾದ ಅಧಿಕಾರಿಗಳ ನಡೆ ಅನುಮಾನಕ್ಕೆ ಕಾರಣವಾಗಿದೆ ಎಂದರು.

ಪಟ್ಟಣದ ಎಪಿಎಂಸಿ ಆವರಣದಲ್ಲಿನ 0.19ಗುಂಟೆ ಜಮೀನನ್ನು ಖಾಸಗಿಯವರಿಗೆ ಖಾತೆ ಮಾಡಿಕೊಡಲಾಗಿದೆ. ತೇಗನಹಳ್ಳಿಯಲ್ಲಿ ಪ್ರಭಾವಿಯೊಬ್ಬರು ಸರ್ವೆ ನಂ-77ರ ಗೋಮಾಳದಲ್ಲಿನ ಸರ್ಕಾರಿ ಕೆರೆಯನ್ನು ಒತ್ತುವರಿ ಮಾಡಿ ರೆಸಾರ್ಟ್ ಮಾಡಿದ್ದಾರೆ. ಆದರೂ ಕ್ರಮ ವಹಿಸಿಲ್ಲ ಎಂದು ಆರೋಪಿಸಿದರು.

ರೈತ ಸಂಘದ ರಾಜ್ಯ ಉಪಾಧ್ಯಕ್ಷ ಮಂದಗೆರೆ ಜಯರಾಮು, ಕಾವೇರಿ ನೀರಾವರಿ ನಿಗಮದಿಂದ ವಿತರಣಾ ನಾಲೆ-54ರಲ್ಲಿ ನಡೆದಿರುವ ಆಧುನಿಕ ಕಾಮಗಾರಿ ಕಳಪೆಯಾಗಿದೆ. ಕಾಮಗಾರಿಗೆ ಮುನ್ನವೇ ಹಣ ಡ್ರಾ ಮಾಡಲಾಗಿದೆ ಹೇಮಾವತಿ ಎಡದಂಡೆ ಆಧುನೀಕರಣ ಕಾಮಗಾರಿ ಅವ್ಯವಹಾರದಿಂದ ಕೂಡಿದೆ. ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.





ಉದಯವಾಹಿನಿ ಚಿತ್ರ

## ದಾಖಲೆ ಪರಿಶೀಲನೆ ನೆಪದಲ್ಲಿ ಪರಿಹಾರ ನೀಡಲು ವಿಳಂಬ; ಆರ್ಥಿಕ ಸಂಕಷ್ಟದಲ್ಲಿರುವ ಮಾವು ಬೆಳೆಗಾರರು

# ತೋತಾಪುರಿ ಮಾವಿಗೆ ಇನ್ನು ಸಿಗದ ಪರಿಹಾರ

• ಉದಯವಾಹಿನಿ, ಕೋಲಾರ

ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಮಾವು ಬೆಳೆಗಾರರಿಂದ ಮಾವು ಖರೀದಿಸಿ ತಿಂಗಳು ಕಳೆಯುತ್ತಿದ್ದರೂ ಸರಕಾರ ಘೋಷಿಸಿದ 4 ರೂ. ಪರಿಹಾರ ಹಣ ಬೆಳೆಗಾರರಿಗೆ ಸಕಾಲಕ್ಕೆ ದೊರೆಯದಂತಾಗಿದೆ. ಸೂಕ್ತ ಮಾರುಕಟ್ಟೆ ದೊರೆಯದೆ ಸಂಕಷ್ಟದಲ್ಲಿದ್ದ ಮಾವು ಬೆಳೆಗಾರರ ಹಿತರಕ್ಷಣೆಗೆ ಧಾವಿಸಿದ್ದ ಕೇಂದ್ರ ಹಾಗೂ ರಾಜ್ಯ ಸರಕಾರಗಳು ಪ್ರತಿ ಕೆ.ಜಿ ತೋತಾಪುರಿ ಮಾವಿಗೆ 4 ರೂ. ಪರಿಹಾರವನ್ನು ಘೋಷಿಸಿದ್ದವು. ಖರೀದಿ ಪ್ರಕ್ರಿಯೆ ಮುಗಿದು ತಿಂಗಳಾಗುತ್ತಿದ್ದರೂ ಬೆಳೆಗಾರರಿಗೆ ಪರಿಹಾರ ಸಂದಾಯವಾಗದಿರುವುದು ಬೇಸರಕ್ಕೆ ಕಾರಣವಾಗಿದೆ.

**ಪರಿಶೀಲನೆ ನೆಪದಲ್ಲಿ ಪರಿಹಾರ ವಿಳಂಬ:** ಕೋಲಾರ ಜಿಲ್ಲೆಯಲ್ಲಿ ಜೂನ್ 25ರಿಂದ ಜುಲೈ 24ರವರೆಗೆ 14 ಸಾವಿರ ಬೆಳೆಗಾರರಿಂದ ಬರೋಬ್ಬರಿ 10 ಲಕ್ಷ ಕ್ವಿಂಟಾಲ್‌ಗೂ ಹೆಚ್ಚಿನ ಮಾವು ಖರೀದಿಸಲಾಗಿತ್ತು. ರೈತರಿಗೆ ಅಂದಾಜು 41 ಕೋಟಿಗೂ ಹೆಚ್ಚಿನ ಪರಿಹಾರ ಬಿಡುಗಡೆಯಾಗಬೇಕಿದೆ. ಆದರೆ, ಪರಿಶೀಲನೆ ನೆಪದಲ್ಲಿ ಪರಿಹಾರ ಬಿಡುಗಡೆ ವಿಳಂಬವಾಗುತ್ತಿದ್ದು, ಬೆಳೆಗಾರರು ತೊಂದರೆ ಅನುಭವಿಸುವಂತಾಗಿದೆ.

ಮಾವು ಮಾರಾಟ ಸಂದರ್ಭದಲ್ಲಿಯೂ ರೈತರು ತಮ್ಮ ಹೆಸರುಗಳನ್ನು ನೋಂದಾಯಿಸಿ ಕೊಳ್ಳಲು, ಚೆಕ್‌ಪೋಸ್ಟ್‌ನಲ್ಲಿ ಪ್ರವೇಶಪತ್ರ, ವೇಬ್ರಿಡ್ಜ್ ಚೀಟಿ, ಎಪಿಎಂಸಿ ಮಂಡಿ, ಸಂಸ್ಕರಣಾ ಘಟಕಗಳ ಬಿಲ್ಲು, ಆಧಾರ್ ಸೇರಿದಂತೆ ಇತರ ಅಗತ್ಯ ದಾಖಲೆಗಳನ್ನು ಸಲ್ಲಿಸಲು ಪರದಾಡಿದ್ದರು. ಮಾವಿಗೆ ಸೂಕ್ತ ಬೆಲೆ ಸಿಗದ ಕಾರಣದಿಂದಾಗಿ ಮಾವು ಬೆಳೆಗಾರರು ಪ್ರಸಕ್ತ ಸಾಲಿನಲ್ಲಿ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದರು. ಈಗ ಸರಕಾರ ಪರಿಹಾರ ಬಿಡುಗಡೆಯಲ್ಲಿ ವಿಳಂಬಧೋರಣೆ ಅನುಸರಿಸುತ್ತಿರುವುದು ಸಹ ಬೆಳೆಗಾರರ ಆಕ್ರೋಶಕ್ಕೆ ಕಾರಣವಾಗಿದೆ.

**ನಿತ್ಯ 400 ಬಿಲ್‌ಗೆ ಪರಿಹಾರ ಬಿಡುಗಡೆ:** ಮಾವು ಅಭಿವೃದ್ಧಿ ಮಂಡಳಿಯಿಂದ ಮಾವು ಬೆಳೆಗಾರರಿಗೆ ಪರಿಹಾರ ಹಣ ಬಿಡುಗಡೆಯಾಗುತ್ತಿದೆ. ನಿತ್ಯ 400 ಬಿಲ್‌ಗಳಿಗೆ ಹಣ ಮಂಜೂರು ಮಾಡಲಾಗುತ್ತಿದೆ. ಜಿಲ್ಲೆಯಲ್ಲಿಒಟ್ಟು 22 ಸಾವಿರ ಬಿಲ್‌ಗಳನ್ನು ಸೃಜಿಸಿದ್ದು, ಈವರೆಗೆ 4 ಸಾವಿರ ಬಿಲ್‌ಗಳಿಗೆ ಮಾತ್ರವೇ ಪರಿಹಾರ ಬಿಡುಗಡೆಯಾಗಿದೆ. ಉಳಿದ 18 ಸಾವಿರ ಬಿಲ್‌ಗಳಿಗೆ ಪರಿಹಾರ ನೀಡಲು 45 ದಿನಗಳು ಬೇಕಾಗಲಿದೆ. ಬೆಳೆಗಾರರು ಸಲ್ಲಿಸಿರುವ ಬಿಲ್‌ಮಾಹಿತಿಯನ್ನು ಸಂಪೂರ್ಣವಾಗಿ ಪರಿಶೀಲಿಸಿದ ಬಳಿಕ ಬಿಲ್ ಪಾವತಿಸಲಾಗುತ್ತಿದ್ದು, ಈವರೆಗೆ 4 ಸಾವಿರ ಬಿಲ್‌ಗಳಿಗೆ 9 ಕೋಟಿ ರೂ. ಪಾವತಿಸಲಾಗಿದೆ. ಶೀಘ್ರವೇ ಎಲ್ಲಾ ಬೆಳೆಗಾರರಿಗೆ ಬಿಲ್ ಪಾವತಿಯಾಗಲಿದೆ ಎಂದು ಶ್ರೀನಿವಾಸಪುರ ಎಪಿಎಂಸಿಯ ಕಾರ್ಯದರ್ಶಿ ರವಿಕುಮಾರ್ ಹೇಳಿದರು. ಗ್ಯಾರಂಟಿ ಯೋಜನೆಗಳಲ್ಲಿಲ ಕ್ಷಾಂತರ ಫಲಾನುಭವಿಗಳಿಗೆ ಸಾವಿರಾರು ಕೋಟಿಗಳನ್ನು ಒಂದೇ ಬಾರಿಗೆ ಹಣ ವರ್ಗಾವಣೆ ಮಾಡಲಾಗುತ್ತದೆ. ಆದರೆ, ಮಾವು ಬೆಳೆಗಾರರಿಗೆ 41 ಕೋಟಿ ರೂ. ಬಿಡುಗಡೆ ಮಾಡಲು ವಿಳಂಬ ಧೋರಣೆ ಅನುಸರಿಸುತ್ತಿದ್ದು, ಕೂಡಲೇ ಎಲ್ಲಾ ಬೆಳೆಗಾರರಿಗೆ ಪರಿಹಾರ ಬಿಡುಗಡೆ ಮಾಡಬೇಕು ಎಂದು ಮಾವು ಬೆಳೆಗಾರರಾದ ಟಿ.ಎನ್.ರಮೇಶ್ ಹೇಳಿದರು.



**ರೈತರ ಆಕ್ರೋಶಕ್ಕೆ ಕಾರಣ**

ಕೋಲಾರದಲ್ಲಿ ಈ ಬಾರಿ ಉತ್ತಮವಾಗಿ ಮಾವು ಬೆಳೆ ಬಂದಿತ್ತು. ಆದರೆ, ಅದಕ್ಕೆ ತಕ್ಕ ಬೆಲೆ ಸಿಗದೆ ಬೆಳೆಗಾರರು ಪ್ರತಿಭಟನೆ ನಡೆಸಿದ್ದರು. ಅದಾದ ನಂತರ ಸರ್ಕಾರ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಮಾವು ಖರೀದಿಸಿ ತಿಂಗಳು ಕಳೆದರೂ, ಪರಿಹಾರ ವಿತರಣೆಯಲ್ಲಿ ವಿಳಂಬವಾಗಿದೆ. 14 ಸಾವಿರ ರೈತರಿಂದ 10 ಲಕ್ಷ ಕ್ವಿಂಟಾಲ್ ಮಾವು ಖರೀದಿಸಲಾಗಿದ್ದು, 41 ಕೋಟಿ ರೂ. ಪರಿಹಾರ ನೀಡಬೇಕಿದೆ. ಆದರೆ, ಪರಿಶೀಲನೆ ಮಾಡುವ ಕುಂಟು ನೆಪದಲ್ಲಿ ವಿಳಂಬವಾಗುತ್ತಿರುವುದು ರೈತರ ಆಕ್ರೋಶಕ್ಕೆ ಕಾರಣವಾಗಿದೆ.

- ನೋಂದಣಿ ಮಾಡಿಕೊಂಡ ರೈತರು: 14,993
- ಖರೀದಿಸಿದ ಮಾವು: 10.23 ಲಕ್ಷ (ಕ್ವಿಂಟಾಲ್)
- ಬಿಡುಗಡೆಯಾಗಬೇಕಿರುವ ಪರಿಹಾರ: 41.35 ಕೋಟಿ ರೂ.
- ಸೃಜಿಸಿರುವ ಬಿಲ್‌ಗಳು: 22 ಸಾವಿರ
- ಬೆಳೆಗಾರರಿಗೆ ಪಾವತಿಯಾದ ಮೊತ್ತ: 9 ಕೋಟಿ ರೂ. (ಆ.16ರವರೆಗೆ)
- ಈವರೆಗೆ ಪಾವತಿಯಾದ ಬಿಲ್‌ಗಳು: 4 ಸಾವಿರ



## ಮಿನಿ ನ್ಯೂಸ್

### ಕಾರೊಂದು ಬೈಕ್‌ಗೆ ಡಿಕ್ಕಿ ಹೊಡೆದು ಅಣ್ಣ-ತಂಗಿ ದುರಂತ ಸಾವು

• ಉದಯವಾಹಿನಿ, ಕೋಲಾರ

ಕಾರೊಂದು ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಅಣ್ಣ-ತಂಗಿ ಸಾವನ್ನಪ್ಪಿರುವ ದುರಂತ ಘಟನೆ ತಾಲ್ಲೂಕಿನ ಶ್ರೀನಿವಾಸಪುರ ರಸ್ತೆಯಲ್ಲಿರುವ ವೀರಾಪುರ ಗೇಟ್ ಬಳಿಯ ನಡೆದಿದೆ. ಕೋಲಾರ ತಾಲ್ಲೂಕಿನ ಕೊಂಡೇನಹಳ್ಳಿ ನಿವಾಸಿಗಳಾದ ಯಶಸ್ವಿನಿ ಬಾಯಿ (16), ಹರ್ಷಿತ್ ಸಿಂಗ್ (20) ಮೃತ ಅಣ್ಣ-ತಂಗಿ ಎಂದು ಗುರುತಿಸಲಾಗಿದೆ. ಕಾಲೇಜಿಗೆ ತಂಗಿಯ ಪ್ರವೇಶ ಅರ್ಜಿ ನೀಡಿ ಮನೆಗೆ ಬೈಕ್‌ನಲ್ಲಿ ಅಣ್ಣ-ತಂಗಿ ಬರುವಾಗ ವೀರಾಪುರ ಗೇಟ್ ಬಳಿಯ ಮಹರ್ಷಿ ಶಾಲೆ ಬಳಿ ಇನ್ನೋವಾ ಕಾರು ಡಿಕ್ಕಿ ಹೊಡೆದಿದೆ. ತಂದೆ, ತಾಯಿ ಇಬ್ಬರು ಕೂಲಿ ಕೆಲಸ ಮಾಡಿ ತನ್ನಿಬ್ಬರು ಮಕ್ಕಳಿಗೆ ವಿದ್ಯಾಭ್ಯಾಸ ಕೊಡಿಸುತ್ತಿದ್ದರು. ಯಶಸ್ವಿನಿ ಬಾಯಿ ಪಿಯು ವಿದ್ಯಾರ್ಥಿನಿಯಾದರೆ, ಹರ್ಷಿತ್ ಸಿಂಗ್ ಪದವಿ ವ್ಯಾಸಂಗ ಮಾಡುತ್ತಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಹರ್ಷಿತ್ ಕಾಲೇಜು ಮುಗಿಸಿಕೊಂಡು ತಂಗಿ ಯಶಸ್ವಿನಿಯನ್ನು ಕಾಲೇಜಿಗೆ ದಾಖಲು ಮಾಡಿ ವಾಪಸ್ ತೆರಳುವ ವೇಳೆ ಈ ಅಪಘಾತ ಸಂಭವಿಸಿದೆ. ಪ್ರತಿನಿತ್ಯ ಅಣ್ಣ-ತಂಗಿ ಇಬ್ಬರು ಬಸ್‌ನಲ್ಲೇ ಕಾಲೇಜಿಗೆ ತೆರಳುತ್ತಿದ್ದರು. ಆದ್ರೆ ತಂಗಿ ಕಾಲೇಜು ದಾಖಲಾತಿಗೆ ಕೆಲವು ದಾಖಲೆಗಳನ್ನ ಮರೆತಿದ್ದರು. ಈ ವೇಳೆ ಯಶಸ್ವಿನಿ ಹಾಗೂ ಹರ್ಷಿತ್ ಮನೆಯಿಂದ ಬೈಕ್‌ನಲ್ಲಿ ಹೋಗಿ ದಾಖಲೆ ಕೊಟ್ಟು ವಾಪಸ್ ಮನೆಗೆ ತೆರಳುವ ವೇಳೆ ಅಪಘಾತ ನಡೆದಿದ್ದು, ಯಶಸ್ವಿನಿ ಸ್ಥಳದಲ್ಲೇ ಸಾವನ್ನಪ್ಪಿದರೆ, ಆಸ್ಪತ್ರೆಯಲ್ಲಿ ಹರ್ಷಿತ್ ಸಿಂಗ್ ಮೃತಪಟ್ಟಿದ್ದಾನೆ. ಇದೀಗ ಇಬ್ಬರು ಮಕ್ಕಳನ್ನು ಕಳೆದುಕೊಂಡ ಪೋಷಕರು, ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.

### ಮತ ಕಳ್ಳತನ ನಿಲ್ಲಿಸಿ ಸ್ಟಿಕ್ಕರ್ ಅಭಿಯಾನ

• ಉದಯವಾಹಿನಿ, ಬಾಗೇಪಲ್ಲಿ

ಮತ ಕಳ್ಳತನ ನಿಲ್ಲಿಸಿ ಸ್ಟಿಕ್ಕರ್ ಅಭಿಯಾನಕ್ಕೆ ಬಾಗೇಪಲ್ಲಿ ವಿಧಾನಸಭಾಕ್ಷೇತ್ರದ ವ್ಯಾಪ್ತಿಯಲ್ಲಿ ಯುವ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಬಾಲೇನಹಳ್ಳಿ ರಮೇಶ್, ಕಾಂಗ್ರೆಸ್ ಮುಖಂಡರು ಮಂಗಳವಾರ ಬಸ್ ನಿಲ್ದಾಣದಲ್ಲಿ ಚಾಲನೆ ನೀಡಿದರು. ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ನವೀನ್ ರಾಜ್ ಮಾತನಾಡಿ, ರಾಷ್ಟ್ರವ್ಯಾಪಿ ಮತ ಕಳ್ಳತನ ನಿಲ್ಲಿಸಿ. ಅಭಿಯಾನ ಹಮ್ಮಿಕೊಳ್ಳಲಾಗಿದೆ. ಮತ ಕಳ್ಳತನದ ಬಗ್ಗೆ ಕಾಂಗ್ರೆಸ್ ಯುವನಾಯಕ ರಾಹುಲ್ ಗಾಂಧಿ, ಸಂಪೂರ್ಣವಾಗಿ ಅಧ್ಯಯನ ಮಾಡಿ ಮತದಾನದ ಅಂಕಿ ಅಂಶಗಳನ್ನು ವಿಶ್ಲೇಷಿಸಿ ದಾಖಲೆಗಳ ಸಮೇತ ಮುಂದೆ ಜನರ ಮುಂದೆ ಬಯಲಿಗೆ ಎಳೆದಿದ್ದಾರೆ. ದೇಶದಾದ್ಯಂತ ಮತ ಅಕ್ರಮ ಬಯಲಿಗೆ ಎಳೆಯಲು ಕಾಂಗ್ರೆಸ್, ಮತಕಳ್ಳತನ ನಿಲ್ಲಿಸಿ ಎಂದು ಸ್ಟಿಕ್ಕರ್ ಅಭಿಯಾನ ಮಾಡಿ ಜನಜಾಗೃತಿ ಮೂಡಿಸುತ್ತಿದೆ ಎಂದರು.

### ಮೊಬೈಲ್ ದರೋಡೆ: 7 ವರ್ಷ ಸಜೆ

• ಉದಯವಾಹಿನಿ, ತುಮಕೂರು

ತಾಲ್ಲೂಕಿನ ದೇವರಾಯನದುರ್ಗದ ಬಳಿ ಪ್ರವಾಸಿಗರಿಗೆ ಡ್ರಾಗರ್ ತೋರಿಸಿ ಮೊಬೈಲ್ ಕಿತ್ತುಕೊಂಡು ಪರಾರಿಯಾಗಿದ್ದ ಬಿ.ಎಸ್.ಪುನೀತ್ ಎಂಬಾತನಿಗೆ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ 7 ವರ್ಷ ಜೈಲು ಶಿಕ್ಷೆ ವಿಧಿಸಿದೆ. 2020ರ ಡಿ. 18ರಂದು ಅಮಿತ್, ದಿಲೀಪ್ ಚೌದರಿ ಎಂಬುವರು ದೇವರಾಯನದುರ್ಗದ ಬಳಿ ಫೋಟೊ ತೆಗೆದುಕೊಳ್ಳುತ್ತಿದ್ದರು. ಇದೇ ಸಮಯದಲ್ಲಿ ಅಲ್ಲಿಗೆ ಬಂದ ಪುನೀತ್ ಮತ್ತು ಕಾನೂನು ಸಂಘರ್ಷಕ್ಕೆ ಒಳಪಟ್ಟ ಬಾಲಕ ಮೊಬೈಲ್ ನೀಡುವಂತೆ ಬೆದರಿಕೆ ಹಾಕಿದ್ದರು.

ಪುನೀತ್ ದಿಲೀಪ್ ಕುತ್ತಿಗೆ ಬಳಿ ಡ್ರಾಗರ್ ಇಟ್ಟು ಮೊಬೈಲ್‌ಕಿತ್ತುಕೊಂಡಿದ್ದ. ಈ ಕುರಿತು ಕ್ಯಾತ್ಸಂದ್ರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪ್ರಧಾನ ಜಿಲ್ಲಾ, ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶ ಬಿ.ಜಯಂತಕುಮಾರ್ ವಾದ ಪ್ರತಿವಾದ ಆಲಿಸಿ ಆರೋಪ ಸಾಬೀತಾದ ಕಾರಣ ಪುನೀತ್‌ಗೆ ಶಿಕ್ಷೆ ವಿಧಿಸಿದ್ದಾರೆ.

### ಸಹಕಾರಿ ಕ್ಷೇತ್ರದಲ್ಲಿ ರಾಜಕೀಯ ಹಸ್ತಕ್ಷೇಪ ಸಲ್ಲದು: ಶಾಸಕ

• ಉದಯವಾಹಿನಿ, ಹುಣಸೂರು

ಸಹಕಾರ ಕ್ಷೇತ್ರದಲ್ಲಿ ಸರ್ಕಾರದ, ರಾಜಕೀಯ ಹಸ್ತಕ್ಷೇಪ ಇರಬಾರದು. ಇದರಿಂದ ಸಹಕಾರ ತತ್ವ ಸಿದ್ಧಾಂತಕ್ಕೆ ಧಕ್ಕೆ ಆಗಲಿದೆ ಎಂದು ಶಾಸಕ ಜಿ.ಡಿ. ಹರೀಶ್ ಗೌಡ ಅಭಿಪ್ರಾಯಪಟ್ಟರು. ವಿಧಾನಸಭೆ ಅಧಿವೇಶನದಲ್ಲಿ ಕರ್ನಾಟಕ ಸಹಕಾರ ಸಂಘಗಳ ತಿದ್ದುಪಡಿ ವಿಧೇಯಕ ಸಂಬಂಧ ಮಾತನಾಡಿ, ವಿಧೇಯಕ ತಿದ್ದುಪಡಿ 2024ರಲ್ಲೇ ಬಂದಿದ್ದು, ಕೆಲವು ತಿದ್ದುಪಡಿ ಮಾಡಿ ಮತ್ತೆ ಸದನಕ್ಕೆ ತರಲಾಗಿದೆ. ಸಹಕಾರ ಕ್ಷೇತ್ರದಲ್ಲಿ ಮೀಸಲಾತಿ ಜಾರಿಗೊಳಿಸುವುದನ್ನು ಸ್ವಾಗತಿಸುತ್ತೇನೆ. ಆದರೆ, ಯಾವ ರೀತಿಯಲ್ಲಿ ಮೀಸಲಾತಿ ಅನುಷ್ಠಾನಕ್ಕೆ ತರಲಾಗುವುದು ಎಂಬ ಬಗ್ಗೆ ಸರ್ಕಾರ ಸ್ಪಷ್ಟನೆ ನೀಡಬೇಕು ಎಂದರು.

ಸ್ಥಳೀಯ ಸಂಸ್ಥೆಗಳಲ್ಲಿ ಈಗಾಗಲೇ ಮೀಸಲಾತಿ ಜಾರಿಯಲ್ಲಿದ್ದು, ಚುನಾವಣೆಗಳು ಹೇಗೆ ನಡೆಯುತ್ತವೆ ಎಂಬುದು ಎಲ್ಲರಿಗೂ ತಿಳಿದಿದೆ. ಈ ಪರಿಸ್ಥಿತಿಯಲ್ಲಿ ಸರ್ಕಾರವು ಸಹಕಾರಿ ಸಂಘಗಳಿಗೆ ಅನುದಾನ ನೀಡದೆ, ಸಹಕಾರ ಕ್ಷೇತ್ರದಲ್ಲಿ ಮೀಸಲಾತಿಯನ್ನು ಯಾವ ಆಧಾರದಲ್ಲಿ ಅನುಷ್ಟಾನಕ್ಕೆ ತರಲಿದೆ ಎಂದು ಪ್ರಶ್ನಿಸಿದರು. ಶಾಸಕರ ಪ್ರಶ್ನೆಗೆ ಸಹಕಾರಿ ಸಚಿವ ಎಚ್.ಕೆ. ಪಾಟೀಲ್ ಉತ್ತರಿಸಿ, ಸಹಕಾರಿ ಕ್ಷೇತ್ರ, ರೈತರಿಗೆ ಸೀಮಿತವಾಗುವ ಬದಲಿಗೆ ಮೀಸಲಾತಿಯಿಂದ ಸಾಮಾಜಿಕ ನ್ಯಾಯದ ಪರಿಕಲ್ಪನೆಯಲ್ಲಿ ಸಹಕಾರಿ ಕ್ಷೇತ್ರ, ಬೆಳೆಯಬೇಕಿದೆ ಎಂದರು.

### 50 ಲಕ್ಷದ ಕಾಮಗಾರಿಗೆ ಚಾಲನೆ

• ಉದಯವಾಹಿನಿ, ಹಂಪಾಪುರ

ಕ್ಷೇತ್ರದ ಅಭಿವೃದ್ಧಿಗಾಗಿ ಹಗಲಿರುಳು ದುಡಿಯುತ್ತಿರುವ ವ್ಯಕ್ತಿಗೆ ಜನರು ಪ್ರಾಧಾನ್ಯ ನೀಡಬೇಕಿದೆ ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದರು. ಹಳ್ಳದಮನುಗನಹಳ್ಳಿ ಗ್ರಾಮದಲ್ಲಿ ಚರಂಡಿ, ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಈಚೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಸರ್ಕಾರದಿಂದ ಮುಖ್ಯಮಂತ್ರಿಯ ವಿಶೇಷ ಅನುದಾನ ಯೋಜನೆಯಡಿ 50 ಲಕ್ಷ ಅನುದಾನ ಪಡೆದು ಗ್ರಾಮದಲ್ಲಿ ಚರಂಡಿ ಮತ್ತು ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿದ್ದೇನೆ, ಉಳಿದ ರಸ್ತೆಗಳನ್ನು ಕಾಂಕ್ರೀಟ್ ರಸ್ತೆಗಳನ್ನಾಗಿ ಪೂರ್ಣಗೊಳಿಸುತ್ತೇನೆ. ಗ್ರಾಮಸ್ಥರ ಬೇಡಿಕೆಯಾದ ಗದ್ದಿಗೆ ಮುಖ್ಯ ರಸ್ತೆಯಿಂದ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆಯನ್ನು ಶೀಘ್ರದಲ್ಲೇ ಡಾಂಬರೀಕರಣ ಮಾಡಿಸುತ್ತೇನೆ ಎಂದು ಭರವಸೆ ನೀಡಿದರು.

ಗ್ರಾಮಸ್ಥರ ಮನವಿಗಳನ್ನು ಸ್ವೀಕರಿಸಿ ಕೆಲವು ಸಮಸ್ಯೆಗಳಿಗೆಕ್ರಮ ಕೈಗೊಳ್ಳುವಂತೆ ಸ್ಥಳದಲ್ಲೇ ಅಧಿಕಾರಿಗಳಿಗೆ ಸೂಚಿಸಿದರು. ಮೈಸೂರು ಜಿಲ್ಲೆಯ ಕೆಎಸ್‌ಆರ್‌ಟಿಸಿ ಡಿಸಿ ಅವರಿಗೆ ಕರೆ ಮಾಡಿ ಗ್ರಾಮದಲ್ಲಿನ ಬಸ್ ಸಂಚಾರದ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ತುರ್ತು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಅಂತರಾಳದಿಂದ.. EDITORIAL

# ಮತದಾರರ ಪಟ್ಟಿಯಲ್ಲಿ ಅಕ್ರಮ- ಆರೋಪಗಳ ನಿರ್ಲಕ್ಷ್ಯ ಸರಿಯಲ್ಲ

ಆ ಆರೋಪಗಳಿಗೆ ಉತ್ತರ ನೀಡುವುದಕ್ಕಾಗಿ ನಡೆಸಿದ ಸುದ್ದಿಗೋಷ್ಠಿಯಲ್ಲಿ, ಸೂಕ್ತ ಸಮಜಾಯಿಷಿ ನೀಡುವುದು ಆಯುಕ್ತರಿಗೆ ಸಾಧ್ಯವಾಗಿಲ್ಲ. ರಾಹುಲ್ ಗಾಂಧಿ ಮಾತ್ರವಲ್ಲದೆ, ಇತರರೂ ಮತದಾರರ ಪಟ್ಟಿಯ ವಿಶ್ವಾಸಾರ್ಹತೆಯ ಬಗ್ಗೆ ಪ್ರಶ್ನೆಗಳನ್ನು ಎತ್ತಿದ್ದರು. ಆ ಎಲ್ಲಾ ಪ್ರಶ್ನೆಗಳಿಗೆ ಆಯೋಗ ಸೂಕ್ತ ಉತ್ತರ ನೀಡುತ್ತದೆಂದು ನಿರೀಕ್ಷಿಸಲಾಗಿತ್ತು. ಆದರೆ, ಜ್ಞಾನೇಶ್ ಕುಮಾರ್ ಅವರು ಆಯೋಗದ ಮೇಲಿನ ಆರೋಪಗಳನ್ನು ಸಾರಾಸಗಟಾಗಿ ತಳ್ಳಿಹಾಕುವುದರ ಜೊತೆಗೆ, ಅನಗತ್ಯ ಹೇಳಿಕೆಗಳನ್ನೂ ನೀಡಿದ್ದಾರೆ. ತಮ್ಮ ಆರೋಪಗಳಿಗೆ ಸಾಕ್ಷ್ಯಗಳನ್ನು ನೀಡುವಂತೆ ಹಾಗೂ ಲಿಖಿತ ಪ್ರಮಾಣಪತ್ರ ಸಲ್ಲಿಸುವಂತೆ ರಾಹುಲ್ ಗಾಂಧಿ ಅವರಿಗೆ ಸವಾಲು ಹಾಕಿರುವ ಅವರು, ಪ್ರಮಾಣಪತ್ರ ಸಲ್ಲಿಸದೆ ಹೋದಲ್ಲಿ ಕ್ಷಮೆಯಾಚಿಸುವಂತೆ ಆಗ್ರಹಿಸಿದ್ದಾರೆ. ಆಯೋಗದ ಕಾರ್ಯ ಚಟುವಟಿಕೆಯ ಬಗ್ಗೆ ಪ್ರಶ್ನೆಗಳನ್ನೆತ್ತುವ ರಾಜಕೀಯ ಮುಖಂಡರು, ನಾಗರಿಕರಿಗೆ ಗಡುವು ಗೊತ್ತುಪಡಿಸುವುದಕ್ಕೆ ಇಲ್ಲವೇ ಷರತ್ತುಗಳನ್ನು ವಿಧಿಸುವುದಕ್ಕೆ ಚುನಾವಣಾ ಆಯುಕ್ತರಿಗೆ ಯಾವ ಅಧಿಕಾರವಿದೆ? ಚುನಾವಣಾ ನಿಯಮ ಗಳು ಮತ್ತು ಪೇಟೆಂಟ್ ನಿಯಮಗಳಿಗೆ ಸಂಬಂಧಿಸಿದ ನಿಯಮ 20(3)(ಬಿ), ರಾಹುಲ್ ಗಾಂಧಿ ಅವರ ಪ್ರಕರಣಕ್ಕೆ ಅನ್ವಯವಾಗುವುದಿಲ್ಲ. ಕಾಂಗ್ರೆಸ್ ಗೆಲುವು ಸಾಧಿಸಿರುವ ಕ್ಷೇತ್ರಗಳಲ್ಲಿನ ಮತಪಟ್ಟಿಗಳಲ್ಲೂ ಲೋಪಗಳಿವೆ ಎಂದು ಆರೋಪಿಸಿರುವ ಬಿಜೆಪಿ ನಾಯಕ ಅನುರಾಗ್ ಠಾಕೂರ್

ಅವರಿಂದ ಆಯೋಗ ಯಾವ ಪ್ರಮಾಣಪತ್ರವನ್ನೂ ಕೇಳಿಲ್ಲ. ಜ್ಞಾನೇಶ್ ಕುಮಾರ್ ಅವರು ಸುದ್ದಿಗೋಷ್ಠಿಯಲ್ಲಿ ಬಳಸಿರುವ ಭಾಷೆ ಮತ್ತು ಧ್ವನಿ, ಸಾಂವಿಧಾನಿಕ ಸಂಸ್ಥೆಯೊಂದರ ಅಧಿಕಾರಿಗೆ ತಕ್ಕುದಾಗಿಲ್ಲ. ಅವರ ಮಾತು, ಸಾಂವಿಧಾನಿಕ ಪರಿಭಾಷೆ ಗಿಂತಲೂ ಹೆಚ್ಚಾಗಿ ರಾಜಕೀಯದ ಭಾಷೆಯಂತಿತ್ತು: ಗ್ರಹಿಕೆಗಿಂತಲೂ ಮಿಗಿಲಾದ ಪೂರ್ವಗ್ರಹವನ್ನು ಹಾಗೂ ಅರ್ಥೈಸಿಕೊಳ್ಳುವುದಕ್ಕೆ ಬದಲಾಗಿ ತಿರಸ್ಕರಿಸುವ ಧಾಟಿಯನ್ನು ಹೊಂದಿತ್ತು. ಮನೆಯ ಸಂಖ್ಯೆಯನ್ನು ಸೊನ್ನೆ ಎಂದು ದಾಖಲಿಸಿರುವ ನಮೂದುಗಳು, ನಕಲಿ ಹೆಸರುಗಳು ದೊಡ್ಡ ಪ್ರಮಾಣದಲ್ಲಿವೆ ಎನ್ನುವ ಆರೋಪಗಳನ್ನು ಉಪೇಕ್ಷೆ ಎಂದು ತಳ್ಳಿಹಾಕಿರುವ ಚುನಾವಣಾ ಆಯುಕ್ತರು, ವ್ಯತ್ಯಾಸಗಳೇನಾದರೂ ಇದ್ದಲ್ಲಿ ಮತಪಟ್ಟಿ ಅಂತಿಮಗೊಳ್ಳುವ ಮೊದಲು ಸರಿಪಡಿಸುವ ಅವಕಾಶ ರಾಜಕೀಯ ಪಕ್ಷಗಳಿಗಿದೆ ಎಂದು ವಾದಿಸಿದ್ದಾರೆ.

**ಮತದಾರರ ಪಟ್ಟಿಯಲ್ಲಿನ ಅಕ್ರಮಗಳ ಕುರಿತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಮಾಡಿರುವ ಆರೋಪಗಳಿಗೆ ಸಂಬಂಧಿಸಿದಂತೆ ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ಅವರು ನೀಡಿರುವ ಪ್ರತಿಕ್ರಿಯೆ ತೃಪ್ತಿಕರವಾಗಿಲ್ಲ. ಬೆಂಗಳೂರಿನ ಮಹದೇವಪುರ ವಿಧಾನಸಭಾ ಕ್ಷೇತ್ರದ ಮತಪಟ್ಟಿಯಲ್ಲಿನ ದೋಷಗಳನ್ನು ಉಲ್ಲೇಖಿಸಿ, ಮತದಾರರ ಪಟ್ಟಿ ತಯಾರಿಕೆಯಲ್ಲಿ ಅಕ್ರಮ ನಡೆದಿದೆ ಎಂದು ರಾಹುಲ್ ಗಾಂಧಿ ಆರೋಪಿಸಿದ್ದರು.**

ಆದರೆ, ರಾಹುಲ್ ಗಾಂಧಿ ಅವರು ಉಲ್ಲೇಖಿಸಿರುವ ಮತದಾರರ ಪಟ್ಟಿಯಲ್ಲಿ ಉತ್ಪ್ರೇಕ್ಷೆಯ ಸಂಗತಿಗಳೇನೂ ಕಾಣಿಸುತ್ತಿಲ್ಲ ಹಾಗೂ ಆರೋಪಕ್ಕೆ ಸಂಬಂಧಿಸಿದಂತೆ ಆಯೋಗ ಕೇಳುತ್ತಿರುವ ಸಾಕ್ಷ್ಯ, ಅದು ಸಿದ್ಧಪಡಿಸಿರುವ ದಾಖಲೆಗಳಲ್ಲೇ ಇದೆ. ನಿರ್ವಸಿತರ ವಿಳಾಸವನ್ನು ಮನೆ ಸಂಖ್ಯೆ ಸೊನ್ನೆ ಎಂದು ಗುರ್ತಿಸುವ ವಿಶ್ಲೇಷಣೆ ನಂಬಿಕೆಗೆ ಅರ್ಹವಾಗಿಲ್ಲ. ಮತದಾನದ ವೀಡಿಯೋಗಳನ್ನು ಸಾರ್ವಜನಿಕವಾಗಿ ಬಿಡುಗಡೆಗೊಳಿಸುವುದರಿಂದ ಮತದಾರರ ಖಾಸಗೀತನಕ್ಕೆ ಧಕ್ಕೆಯಾಗು ತ್ತದೆ ಎನ್ನುವ ಹೇಳಿಕೆಯೂ ಒಪ್ಪತಕ್ಕದ್ದಲ್ಲ. ಡಿಜಿಟಲ್ ಮತಪಟ್ಟಿಗಳ ಒದಗಿಸುವಿಕೆ ಹಾಗೂ ಬಿಹಾರದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಗೆ ಸಂಬಂಧಿಸಿದ ನಿರ್ದಿಷ್ಟ ಪ್ರಶ್ನೆಗಳನ್ನೂ ಆಯೋಗ ನಿರ್ಲಕ್ಷಿಸಿದೆ.ರಾಹುಲ್ ಗಾಂಧಿ ಅವರು ಬಳಸಿರುವ 'ಮತ ಕಳವು' ಪದ ಪ್ರಯೋಗ ಅನುಚಿತ ಹಾಗೂ ದಾರಿತಪ್ಪಿಸುವಂತಿದೆ ಎಂದು ಚುನಾವಣಾ ಆಯೋಗ ಆಕ್ಷೇಪ ವ್ಯಕ್ತಪಡಿಸಿದೆ. ಆಯೋಗದ ಕಾರ್ಯಾಚರಣೆಯ ಬಗ್ಗೆ ಟೀಕೆ ಟಿಪ್ಪಣಿಗಳು ವ್ಯಕ್ತವಾದಾಗ, ಸರ್ಕಾರ ಮತ್ತು ಆಡಳಿತ ಪಕ್ಷದ ಬಗ್ಗೆ ಸಹಾನುಭೂತಿಯಿಂದಲೂ, ವಿರೋಧ ಪಕ್ಷಗಳ ಕುರಿತು ಕಠಿಣವಾಗಿಯೂ ಚುನಾವಣಾ ಆಯೋಗ ವರ್ತಿಸುತ್ತಿದೆ. ತನ್ನ ಕರ್ತವ್ಯಕ್ಕೆ ಸಂಬಂಧಿಸಿದಂತೆ ಪಾರದರ್ಶಕತೆ ಹಾಗೂ ಹೊಣೆಗಾರಿಕೆಯೊಂದಿಗೆ ಆಯೋಗ ರಾಜಿ ಮಾಡಿಕೊಳ್ಳುವಂತಿಲ್ಲ. ಆಡಳಿತ ಪಕ್ಷ ಹಾಗೂ ವಿರೋಧ ಪಕ್ಷಗಳ ನಡುವೆ ತಾರತಮ್ಯ ಮಾಡುತ್ತಿಲ್ಲ ಎಂದು ಆಯೋಗ ಹೇಳುತ್ತಿದೆ. ಆದರೆ, ಅದರ ನಿಷ್ಪಕ್ಷಪಾತ ಕಾರ್ಯ ಚಟುವಟಿಕೆಯ ಬಗ್ಗೆ ವಿರೋಧ ಪಕ್ಷಗಳಿಗೆ, ಬಹಳಷ್ಟು ನಾಗರಿಕರಿಗೆ ನಂಬಿಕೆ ಉಳಿದಿಲ್ಲ. ಮುಖ್ಯ ಚುನಾವಣಾಧಿಕಾರಿ ಅವರ ಸುದ್ದಿಗೋಷ್ಠಿ, ದಾಖಲೆಗಳಲ್ಲಿನ ಲೋಪಗಳನ್ನು ಸರಿಪಡಿಸುವುದಕ್ಕೆ ಚಾಲನೆ ನೀಡುವುದರ ಬದಲಾಗಿ. ಆರೋಪಗಳನ್ನು ಮತ್ತಷ್ಟು ದೃಢಪಡಿಸುವಂತೆ ಆಗಿರುವುದು ದುರದೃಷ್ಟಕರ.



# ತೂಕ ಇಳಿಸಲು ಬಯಸುವವರಿಗೆ ಬೆಸ್ಟ್ ಈ ಚೂರ್ಣ, ದಿನಾ 1 ಸ್ಪೂನ್ ತೆಗೊಂಡ್ರೆ ಒಳ್ಳೆಯದು

ನೀವು ಅಧಿಕ ತೂಕವನ್ನು ಹೊಂದಿದ್ದೀರಾ? ತೂಕ ಇಳಿಸಬೇಕೆಂದಿದ್ದರೆ ಈ ಪುಡಿಯನ್ನು ಪ್ರತಿದಿನ ಬೆಳಗ್ಗೆ ಖಾಲಿ ಹೊಟ್ಟೆಯಲ್ಲಿ ಉಗುರು ಬೆಚ್ಚಗಿನ ನೀರಿನಲ್ಲಿ ಕುಡಿಯಿರಿ. ಹೊಟ್ಟೆಯ ಕೊಬ್ಬನ್ನು ಕರಗಿಸುವುದಲ್ಲದೆ, ತೂಕವನ್ನೂ ಇಳಿಸುತ್ತದೆ. ಅಧಿಕ ತೂಕ ಅಥವಾ ಬೊಜ್ಜು ಹೊಂದಿರುವ ವ್ಯಕ್ತಿಗಳಿಗೆ ಆರೋಗ್ಯಕರ ತೂಕವನ್ನು ಸಾಧಿಸುವುದು ಮತ್ತು ನಿರ್ವಹಿಸುವುದು ಮುಖ್ಯವಾದರೂ, ಆಹಾರವು ಪೌಷ್ಟಿಕಾಂಶದ ಸಮತೋಲನದಲ್ಲಿ ಉಳಿಯುವಂತೆ ನೋಡಿಕೊಳ್ಳುವುದು ಅಷ್ಟೇ ಅವಶ್ಯಕ. ಅಧಿಕ ತೂಕ ಇರುವವರು ತೂಕ ಇಳಿಸಿಕೊಳ್ಳಲು ನಾನಾ ರೀತಿಯಲ್ಲಿ ಪ್ರಯತ್ನಿಸುತ್ತಾರೆ.

ತೂಕ ಇಳಿಸಿಕೊಳ್ಳಲು ಆಯುರ್ವೇದದಲ್ಲಿ ಹಲವು ಪರಿಣಾಮಕಾರಿ ಪುಡಿಗಳ ಬಗ್ಗೆ ಉಲ್ಲೇಖಿಸಲಾಗಿದೆ. ಅವುಗಳಲ್ಲಿ ಒಂದಾಗಿರುವ ಸುಲಭವಾದ ತೂಕ ಇಳಿಕೆಯ ಚೂರ್ಣದ ಬಗ್ಗೆ ತಿಳಿಸಲಿದ್ದೇವೆ. ಈ ಚೂರ್ಣವನ್ನು ಸೇವಿಸೋದ್ರಿಂದ ಬೊಜ್ಜು ಕಡಿಮೆ ಮಾಡಬಹುದು. ಈ ಪುಡಿಯನ್ನು ನೀವು ಮನೆಯಲ್ಲೇ ತಯಾರಿಸಿ ಸೇವಿಸಬಹುದು.

**ಬೊಜ್ಜು ಕರಗಿಸುವ ಪುಡಿ:** ನೀವು ಬೆಳಿಗ್ಗೆ 1 ಗ್ಲಾಸ್ ನೀರಿಗೆ 1 ಟೀ ಚಮಚ ಈ ಪುಡಿಯನ್ನು ಕುಡಿದರೆ, ಬೊಜ್ಜಿನ ಮೇಲೆ ಪರಿಣಾಮ ಬೀರಲು ಪ್ರಾರಂಭವಾಗುತ್ತದೆ. ಈ ಪುಡಿಯನ್ನು ತಯಾರಿಸಲು, ನೀವು ಅಡುಗೆಮನೆಯಲ್ಲಿ ಬಳಸುವ ಕೆಲವು ಮಸಾಲೆಗಳನ್ನು ಬಳಸಬೇಕು. ಇದರಲ್ಲಿ ಜೀರಿಗೆ, ಸೋಂಪು ಮತ್ತು ಓಂಕಾಳು ಸೇರಿವೆ. ಇದರ ಜೊತೆಗೆ, ಇಂಗು ಮತ್ತು ಕಪ್ಪು ಉಪ್ಪನ್ನು ಬಳಸಲಾಗುತ್ತದೆ. ತೂಕ ಇಳಿಸುವ ಪುಡಿಯನ್ನು ಯಾವ ರೀತಿ ತಯಾರಿಸುವುದು ಎನ್ನುವುದನ್ನು ತಿಳಿಯೋಣ.

**ಓಂಕಾಳು, ಸೋಂಪು ಮತ್ತು ಜೀರಿಗೆ ಪುಡಿಯ ಪ್ರಯೋಜನಗಳು:** ಈ ಪುಡಿಯನ್ನು ಸೇವಿಸುವುದರಿಂದ ಗ್ಯಾಸ್ಟ್ರಿಕ್, ಆಮ್ಲೀಯತೆ ಮತ್ತು ಹೊಟ್ಟೆ ಉಬ್ಬುವಿಕೆಯ ಸಮಸ್ಯೆ ಕಡಿಮೆಯಾಗುತ್ತದೆ. ಈ ಪುಡಿಯನ್ನು ತಿನ್ನುವುದು



ಜೀರ್ಣಾಂಗ ವ್ಯವಸ್ಥೆಯನ್ನು ಬಲಪಡಿಸುತ್ತದೆ. ಚಯಾಪಚಯ ಕ್ರಿಯೆ ವೇಗವಾಗಿರುತ್ತದೆ, ಇದರಿಂದಾಗಿ ಬೊಜ್ಜು ಕ್ರಮೇಣ ಕಡಿಮೆಯಾಗಲು ಪ್ರಾರಂಭಿಸುತ್ತದೆ. ಹೊಟ್ಟೆಯನ್ನು ತಂಪಾಗಿಡಲು, ಗ್ಯಾಸ್ಟ್ರಿಕ್ ಸಮಸ್ಯೆಯನ್ನು ತೆಗೆದುಹಾಕುವಲ್ಲಿ ಸೋಂಪು ಕಾಳು ಪರಿಣಾಮಕಾರಿಯಾಗಿದೆ.

ಜೀರಿಗೆ ಓಂಕಾಳಿನಲ್ಲಿ ಉತ್ಕರ್ಷಣ ನಿರೋಧಕ ಮತ್ತು ಉರಿಯೂತದ ಗುಣಲಕ್ಷಣಗಳು ಕಂಡುಬರುತ್ತವೆ, ಇದು ದೇಹದಿಂದ ಉರಿಯೂತವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.ಓಂಕಾಳಿನ ನೀರು ಹೊಟ್ಟೆಯ ಸಮಸ್ಯೆಗಳಾದ ಆಮ್ಲೀಯತೆ, ಅನಿಯಮಿತ ಮುಟ್ಟು, ಮುಟ್ಟಿನ ನೋವು, ಅತಿಸಾರ, ತೂಕ ನಷ್ಟ ಮತ್ತು ಹಲ್ಲುನೋವುಗಳಿಗೆ ಬಹಳ ಸಾಮಾನ್ಯವಾದ ಮನೆಮದ್ದಾಗಿದೆ.


**ತೂಕ ಇಳಿಸುವ ಪುಡಿಯನ್ನು ತಯಾರಿಸುವುದು ಹೇಗೆ:** ನೀವು ಸೋಂಪು, ಓಂಕಾಳು ಮತ್ತು ಜೀರಿಗೆಯನ್ನು ಸಮಾನ ಪ್ರಮಾಣದಲ್ಲಿ ತೆಗೆದುಕೊಳ್ಳಬೇಕು. ಈ ಮೂರು ಸಾಮಾಗ್ರಿಯನ್ನು ಬಾಣಲೆಯಲ್ಲಿ ಲಘುವಾಗಿ ಹುರಿದು ತಣ್ಣಗಾಗಲು ಇರಿಸಿ. ಈಗ ಈ ಮೂರು ವಸ್ತುಗಳನ್ನು ಮಿಕ್ಸರ್‌ನಲ್ಲಿ ನುಣ್ಣಗೆ ಪುಡಿ ಮಾಡಿ. ಪುಡಿಗೆ ಸ್ವಲ್ಪ ಕಪ್ಪು ಉಪ್ಪು ಮತ್ತು ಇಂಗು ಸೇರಿಸಿ. ಗಾಳಿಯಾಡದ ಪೆಟ್ಟಿಗೆಯಲ್ಲಿ ಸಂಗ್ರಹಿಸಿಡಿ.

**ತೂಕ ಇಳಿಸಿಕೊಳ್ಳಲು ಪುಡಿಯನ್ನು ಯಾವಾಗ ಸೇವಿಸಬೇಕು:** ಬೆಳಿಗ್ಗೆ ಎದ್ದ ನಂತರ, ನೀವು 1 ಗ್ಲಾಸ್ ಉಗುರು ಬೆಚ್ಚಗಿನ ನೀರಿನಲ್ಲಿ 1 ಟೀ ಚಮಚ ಪುಡಿಯನ್ನು ಸೇರಿಸಿ ಖಾಲಿ ಹೊಟ್ಟೆಯಲ್ಲಿ ಕುಡಿಯಬೇಕು. ಇದು ನಿಮ್ಮ ದೇಹದಲ್ಲಿ ಸಂಗ್ರಹವಾದ ಕೊಬ್ಬನ್ನು ಕಡಿಮೆ ಮಾಡುತ್ತದೆ. ಈ ಪುಡಿ ಬೊಜ್ಜು ಕಡಿಮೆ ಮಾಡುವಲ್ಲಿ ಪರಿಣಾಮಕಾರಿಯಾಗಿದೆ. ನೀವು ಬಯಸಿದರೆ ರಾತ್ರಿ ಮಲಗುವ ಮುನ್ನ ಬಿಸಿ ನೀರಿನೊಂದಿಗೆ ಈ ಪುಡಿಯನ್ನು ಸೇವಿಸಬಹುದು.

**ಹೆರಿಗೆಯ ನಂತರದ ತೂಕ ಇಳಿಕೆಗೂ ಸಹಕಾರಿ**

ವ್ಯಾಯಾಮ ಮತ್ತು ಆರೋಗ್ಯಕರ ಆಹಾರದೊಂದಿಗೆ ತೂಕ ಇಳಿಸಿಕೊಳ್ಳಲು ಇದು ತುಂಬಾ ಸಾಮಾನ್ಯವಾದ ಆರೋಗ್ಯಕರ ಪರಿಹಾರವಾಗಿದೆ. ಗರ್ಭಾವಸ್ಥೆಯಲ್ಲಿ ನೀವು ಗಳಿಸಿದ ಹೆಚ್ಚುವರಿ ಕಿಲೋಗಳನ್ನು ಇದರಿಂದ ಕಡಿಮೆ ಮಾಡಬಹುದು. ಗರ್ಭಧಾರಣೆಯ ನಂತರ ಜೀರ್ಣಕಾರಿ ಸಮಸ್ಯೆಗಳಿವೆ.

ಬೆಚ್ಚಗಿನ ಅಜ್ವೈನ್ ನೀರನ್ನು ಸೇವಿಸುವುದರಿಂದ ಮಲಬದ್ಧತೆ ಮತ್ತು ಅತಿಸಾರವನ್ನು ನಿವಾರಿಸಲು ಸಹಾಯ ಮಾಡುತ್ತದೆ, ಜೀರ್ಣಕಾರಿ ಕಾರ್ಯಗಳನ್ನು ಸುಧಾರಿಸುತ್ತದೆ.



# ಕಾಂಗ್ರೆಸ್ ಯೋಜನೆಗಳಿಂದ ಬಡವರ ಜೇಬಿಗೆ 1 ಲಕ್ಷ ಕೋಟಿ ಹಾಕುತ್ತಿದ್ದೇವೆ: ಡಿಸಿಎಂ

• **ಉದಯವಾಹಿನಿ, ಬೆಂಗಳೂರು**

ಕಾಂಗ್ರೆಸ್ ಸರ್ಕಾರಗಳ ವಿವಿಧ ಜನಪರ ಯೋಜನೆಗಳಿಂದ ಬಡವರ ಜೇಬಿಗೆ 1 ಲಕ್ಷ ಕೋಟಿ ಹಣವನ್ನು ಹಾಕುತ್ತಿದ್ದೇವೆ ಎಂದು ಡಿಸಿಎಂ ಡಿಕೆಶಿ ತಿಳಿಸಿದರು. ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿಯಲ್ಲಿ ನಡೆದ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಹಾಗೂ ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರ ಜನ್ಮದಿನಾಚರಣೆ ಹಿನ್ನಲೆಯಲ್ಲಿ ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ನಾಯಕರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ನಮ್ಮ ಸರ್ಕಾರ ಗ್ಯಾರಂಟಿ ಯೋಜನೆ ನೀಡಿ ಎರಡು ವರ್ಷವಾಗಿದೆ. ನೀವು ಇದರ ಬಗ್ಗೆ ಜನರಿಗೆ ನೆನಪಿಸುತ್ತಿರಬೇಕು. ನಾವು ಈ ಯೋಜನೆ ಜಾರಿ ಮಾಡಿ ನಿಮ್ಮ ಕೈಗೆ ಅಸ್ತ್ರ ನೀಡಿದ್ದೇವೆ. ನೀವು ಇದನ್ನು ಸರಿಯಾಗಿ ಬಳಸಿಕೊಳ್ಳಬೇಕು. ರೈತರ ಉಚಿತ ವಿದ್ಯುತ್ ಗೆ 20 ಸಾವಿರ ಕೋಟಿ, ವಿವಿಧ ಪಿಂಚಣಿ ಯೋಜನೆಗೆ 10 ಸಾವಿರ ಕೋಟಿ, ಪಂಚ ಗ್ಯಾರಂಟಿ ಯೋಜನೆಗೆ 52 ಸಾವಿರ ಕೋಟಿ, ಸಮಾಜ ಕಲ್ಯಾಣ ಯೋಜನೆಗಳಿಗೆ ಸೇರಿ 1 ಲಕ್ಷ ಕೋಟಿಯಷ್ಟು ಹಣವನ್ನು ನಮ್ಮ ಸರ್ಕಾರ ಬಡವರ ಜೇಬಿಗೆ ಹಾಕುತ್ತಿದೆ. ಈ 1 ಲಕ್ಷ ಕೋಟಿ ಹಣದಲ್ಲಿ ಬಿಜೆಪಿ ಅಥವಾ ದಳದವರ ಒಂದು ಕಾರ್ಯಕ್ರಮ ಇದೆಯೇ ನಾನು ಶಾಸಕನಾಗಿದ್ದಾಗ ಜೆ.ಹೆಚ್ ಪಟೇಲರ ಕಾಲದಲ್ಲಿ ಪಂಚಾಯ್ತಿಗಳಿಗೆ 1 ಲಕ್ಷ ಅನುದಾನ ನೀಡಲಾಗುತ್ತಿತ್ತು. ಕೃಷ್ಣ ಅವರ ಕಾಲದಲ್ಲಿ ಅದನ್ನು 5 ಲಕ್ಷಕ್ಕೆ ಏರಿಕೆ ಮಾಡಿದೆವು. 27 ಇಲಾಖೆಯನ್ನು ಪಂಚಾಯ್ತಿಗೆ ಸೇರಿಸಿದೆವು. ಪಂಚಾಯ್ತಿಗೆ ಈ ರೀತಿ ಶಕ್ತಿ ತುಂಬಿದ್ದು ಕಾಂಗ್ರೆಸ್ ಪಕ್ಷ ಎಂದು ತಿಳಿಸಿದರು.

ಜೆಡಿಎಸ್ ವಿಚಾರಕ್ಕೆ ಬಂದರೆ, ದೊಡ್ಡ ಗೌಡರು, ಅವರ ಮಕ್ಕಳು, ಮೊಮ್ಮಕ್ಕಳು ಯಾವ ತ್ಯಾಗ ಮಾಡಿದ್ದಾರೆ? ಇನ್ನು ಬಿಜೆಪಿ ವಿಚಾರಕ್ಕೆ ಬಂದರೆ ಸ್ವಾತಂತ್ರ್ಯ ಹೋರಾಟದಲ್ಲಿ

**ನಾನು ವಿದ್ಯಾರ್ಥಿಯಾಗಿದ್ದಾಗ ನಾನು ಜೆನರಲ್ ಹಾಸ್ಟೆಲ್ ನಲ್ಲಿದ್ದೆ. ನಮ್ಮ ಊರಿನಲ್ಲಿ ಆಗ ದೂರವಾಣಿ ಸಂಪರ್ಕ ಇರಲಿಲ್ಲ. ಅದನ್ನು ಪಡೆಯಬೇಕಾದರೆ ಮೂರರಿಂದ ನಾಲ್ಕು ವರ್ಷ ಬೇಕಾಗುತ್ತದೆ. ಆದರೆ ಇಂದು ಪ್ರತಿಯೊಬ್ಬರು ಎರಡು ಮೂರು ಫೋನ್ ಇಟ್ಟುಕೊಂಡಿದ್ದಾರೆ. ಈ ದೇಶಕ್ಕೆ ಕಂಪ್ಯೂಟರ್ ಹಾಗೂ ದೂರವಾಣಿ ತಂತ್ರಜ್ಞಾನದ ಕ್ರಾಂತಿ ತಂದವರು ರಾಜೀವ್ ಗಾಂಧಿ'' ಎಂದು ತಿಳಿಸಿದರು.**

ಅವರ ಕೊಡುಗೆ ಏನು? ಅಧಿಕಾರಕ್ಕೆ ಬಂದ ನಂತರ ಬಡವರಿಗೆ ಹೊಟ್ಟೆ ತುಂಬಿಸಿದ್ದಾರಾ ಜಮೀನು ಕೊಟ್ಟಿದ್ದಾರಾ ರೈತರಿಗೆ ಮೊದಲು ಉಚಿತ ವಿದ್ಯುತ್ ಕೊಟ್ಟಿದ್ದು ಬಂಗಾರಪ್ಪ ಹಾಗೂ ನಾನು ಸಚಿವನಾದ ಸಚಿವನಾದಾಗ 6 ತಾಸು ಇದ್ದ ವಿದ್ಯುತ್ ಅನ್ನು 7 ತಾಸಿಗೆ ಏರಿಸಿದೆ. ಮೊದಲು ಪ್ರತಿ ವರ್ಷ ಇದಕ್ಕಾಗಿ 800 ಕೋಟಿ ನೀಡುತ್ತಿದ್ದೆವು. ಈಗ 20 ಸಾವಿರ ಕೋಟಿ ನೀಡುತ್ತಿದ್ದೇವೆ'' ಎಂದು ತಿಳಿಸಿದರು.

ಇಂದು ಯುವಕರಿಗೆ ಬಹಳ ಸ್ಪೂರ್ತಿಯಾದಂತಹ ದಿನ. ಇತ್ತೀಚೆಗೆ ನಮ್ಮ ಯುವ ಮುಖಂಡ ಬಿ.ವಿ ಶ್ರೀನಿವಾಸ್ ಅವರು ರನ್ ಫಾರ್ ರಾಜೀವ್ ಎಂಬ ಮ್ಯಾರಥಾನ್ ಆಯೋಜಿಸಿದ್ದರು.

ಸುಮಾರು 15 ಸಾವಿರ ಜನ ಬೆಳಗ್ಗೆ 5.30ಕ್ಕೆ ಬಂದು ಸೇರಿದ್ದರು. ಇಲ್ಲಿ ಅನೇಕ ಜನಸಾಮಾನ್ಯರು ಭಾಗವಹಿಸಿದ್ದರು. ರಾಜೀವ್ ಗಾಂಧಿ ಅವರ ಕೊಡುಗೆಯನ್ನು ನಮ್ಮ ಜನ ಇಂದಿಗೂ ಸ್ಮರಿಸುತ್ತಿದ್ದಾರೆ'' ಎಂದರು. ಯುವಕರ ಮೇಲೆ ರಾಜೀವ್ ಗಾಂಧಿ ಅವರಿಗೆ ವಿಶೇಷ ಕಾಳಜಿ. ಸಂವಿಧಾನಕ್ಕೆ 74ನೇ ತಿದ್ದುಪಡಿ ತಂದು ಪಂಚಾಯ್ತಿಯಿಂದ ಪಾರ್ಲಿಮೆಂಟ್ ವರೆಗೂ ನಾಯಕರುವಂತೆ ನೋಡಿಕೊಂಡರು.



# ಇಮ್ಯೂನಿಟಿ ಹೆಚ್ಚಾಗಬೇಕಾ? ಈ ಸೂಪ್ ಕುಡಿರಿ ಸಾಕು.. ಶೀತ, ಕೆಮ್ಮು ದೂರ



ಇಮ್ಯೂನಿಟಿ ಪವರ್ ಹೆಚ್ಚಿಸಲು ಲೆಮನ್ ಕೊರಿಯಾಂಡರ್ ಸೂಪ್ ಇದು ಆರೋಗ್ಯಕ್ಕೂ, ಚಳಿಗಾಲದ ಉಷ್ಣಕ್ಕೂ ಸೂಪರ್. ಹೌದು, ಇತ್ತೀಚಿನ ದಿನಗಳಲ್ಲಿ ಸೂಪ್ ಜನಪ್ರಿಯ ಆಹಾರ ಕ್ರಮವಾಗಿದೆ.

ಇದು ಸುಲಭವಾಗಿ ಜೀರ್ಣವಾಗುವ ಹಾಗೂ ಪೋಷಕಾಂಶ ಭರಿತವಾದ ಒಂದು ಪಾನೀಯ. ಸೂಪ್ ಕುಡಿಯುವುದರಿಂದ ಹಸಿವು ನಿಯಂತ್ರಣಕ್ಕೆ ಬರುತ್ತದೆ. ದೇಹಕ್ಕೆ ಅಗತ್ಯವಾದ ಪೋಷಕಾಂಶಗಳು ಲಭಿಸುತ್ತವೆ ಮತ್ತು ತೂಕ ಇಳಿಕೆಗೂ ಸಹಕಾರಿಯಾಗಿದೆ. ನಾವಿಂದು ಈ ಲೇಖನದಲ್ಲಿ ನಿಂಬೆ ಕೊತ್ತಂಬರಿ ಸೂಪ್ ತಯಾರಿಸುವ ವಿಧಾನದ ಬಗ್ಗೆ ತಿಳಿಸಿದ್ದೇವೆ. ನಿಂಬೆ ಕೊತ್ತಂಬರಿ ಸೂಪ್ ತಯಾರಿಸುವುದು ಬಹಳ ಸುಲಭ. ಈ ಸೂಪ್‌ನಲ್ಲಿರುವ ನಿಂಬೆ ಹಣ್ಣು ವಿಟಮಿನ್ ಸಿ ಯಿಂದ ಸಮೃದ್ಧವಾಗಿದೆ. ಇದು ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಕೊತ್ತಂಬರಿ ಸೊಪ್ಪು ಜೀರ್ಣಕ್ರಿಯೆಗೆ ಸಹಾಯ ಮಾಡುತ್ತದೆ ಮತ್ತು ದೇಹದಿಂದ ವಿಷಕಾರಿ ಅಂಶಗಳನ್ನು ಹೊರಹಾಕಲು ಸಹಕಾರಿಯಾಗಿದೆ. ಇದಲ್ಲದೆ, ಈ ಸೂಪ್‌ನಲ್ಲಿ ಕಡಿಮೆ ಕ್ಯಾಲೋರಿಗಳಿರುವುದರಿಂದ ತೂಕ ಇಳಿಸುವವರಿಗೆ ಇದು ಉತ್ತಮ ಆಯ್ಕೆಯಾಗಿದೆ. ನಿಂಬೆ ಕೊತ್ತಂಬರಿ ಸೂಪ್ ಒಂದು ಹಿತವಾದ, ಹುಳಿ ಮತ್ತು ಪರಿಮಳಯುಕ್ತ ಸೂಪ್ ಆಗಿದೆ. ಇದನ್ನು ತರಕಾರಿ ಸಾರು, ತಾಜಾ ಕೊತ್ತಂಬರಿ ಮತ್ತು ನಿಂಬೆ ರಸದಿಂದ ತಯಾರಿಸಲಾಗುತ್ತದೆ. ಇದು ಹಗುರವಾದ ಸೂಪ್ ಆಗಿದ್ದು, ಮಳೆಗಾಲ (ಋತುಮಾನ ಬದಲಾದಾಗ) ಬಂದಾಗ ಅಥವಾ ಬೆಚ್ಚಗಿನ ಮತ್ತು ಆರೋಗ್ಯಕರ ಏನನ್ನಾದರೂ ಸೇವಿಸಲು ಬಯಸಿದಾಗ ಸಾಮಾನ್ಯವಾಗಿ ಸವಿಯಲಾಗುತ್ತದೆ. ಈ ಸೂಪ್‌ಗೆ ತಾಜಾ ನಿಂಬೆ ಹಣ್ಣು, ಕೊತ್ತಂಬರಿ ಸೊಪ್ಪು, ತರಕಾರಿಗಳು ಮತ್ತು ಮಸಾಲೆ ಪದಾರ್ಥಗಳು ಬೇಕಾಗುತ್ತವೆ. ಮೊದಲಿಗೆ, ಸಣ್ಣಗೆ ಹೆಚ್ಚಿದ ತರಕಾರಿಗಳನ್ನು ಸ್ವಲ್ಪ ಎಣ್ಣೆಯಲ್ಲಿ ಹುರಿಯಬೇಕು. ನಂತರ ನೀರು ಸೇರಿಸಿ, ನಿಂಬೆ ರಸ ಮತ್ತು ಕೊತ್ತಂಬರಿ ಸೊಪ್ಪು ಹಾಕಿ ಕುದಿಸಬೇಕು.

## ನಿಂಬೆ ಕೊತ್ತಂಬರಿ ಸೂಪ್ ತಯಾರಿಸಲು ಬೇಕಾದ ಪದಾರ್ಥಗಳು

- ತರಕಾರಿ ಸಾರು ಅಥವಾ ನೀರು - 4 ಕಪ್
- ತಾಜಾ ಕೊತ್ತಂಬರಿ (ಸಣ್ಣಗೆ ಹೆಚ್ಚಿದ) - 2 ಚಮಚ
- ಹಸಿ ಮೆಣಸಿನಕಾಯಿ - 1
- ಕಾರ್ನ್‌ಫ್ಲೋರ್ - 1 ಚಮಚ
- ನಿಂಬೆ ಹಣ್ಣಿನ ರಸ - 1 ಚಮಚ
- ತುರಿದ ಶುಂಠಿ - 1 ಚಮಚ
- ಜಜ್ಜಿದ ಬೆಳ್ಳುಳ್ಳಿ - 1 ಎಸಳು
- ಎಣ್ಣೆ ಅಥವಾ ಬೆಣ್ಣೆ - 1 ಚಮಚ
- ಉಪ್ಪು - ರುಚಿಗೆ ತಕ್ಕಷ್ಟು
- ಕಾಳುಮೆಣಸು - ಅಗತ್ಯಕ್ಕೆ ತಕ್ಕಷ್ಟು

**ನಿಂಬೆ ಕೊತ್ತಂಬರಿ ಸೂಪ್ ತಯಾರಿಸುವ ವಿಧಾನ**

ಮೊದಲೇ ಹೇಳಿದಂತೆ, ಈ ಸೂಪ್ ಮಾಡುವ ವಿಧಾನವು ಸರಳವಾಗಿದೆ. ಮೊದಲಿಗೆ, ಒಂದು ಬಾಣಲೆಯಲ್ಲಿ ಎಣ್ಣೆ ಅಥವಾ ಬೆಣ್ಣೆಯನ್ನು ಬಿಸಿ ಮಾಡಬೇಕು. ನಂತರ, ಅದಕ್ಕೆ ಶುಂಠಿ, ಬೆಳ್ಳುಳ್ಳಿ ಮತ್ತು ಹಸಿ ಮೆಣಸಿನಕಾಯಿಯನ್ನು ಹಾಕಿ ಒಂದು ನಿಮಿಷ ಹುರಿಯಬೇಕು. ಹೀಗೆ ಮಾಡಿದರೆ ಸೂಪ್ ಅದ್ಭುತ ಪರಿಮಳ (ವಾಸನೆ) ಬರುತ್ತದೆ. ನಂತರ, ತರಕಾರಿ ಸಾರನ್ನು (ವೆಜಿಟಬಲ್ ಸ್ಟಾಕ್) ಹಾಕಿ ಕುದಿಯಲು ಬಿಡಬೇಕು. ಸಾರು ಕುದಿಯಲು ಪ್ರಾರಂಭಿಸಿದಾಗ, 2 ಚಮಚ ನೀರಿನಲ್ಲಿ ಮಿಶ್ರಣ ಮಾಡಿದ ಒಂದು ಚಮಚ ಕಾರ್ನ್‌ಫ್ಲೋರ್ ಮಿಶ್ರಣವನ್ನು ಸೇರಿಸಬೇಕು. ಇದನ್ನು ನಿಧಾನವಾಗಿ ಸೇರಿಸುತ್ತಾ, ಸೂಪ್ ಸ್ವಲ್ಪ ದಪ್ಪವಾಗುವವರೆಗೆ ತಿರುಗಿಸುತ್ತಾ ಇರಬೇಕು. ಅಂತಿಮ ಹಂತದಲ್ಲಿ, ಉರಿಯನ್ನು ಆಫ್ ಮಾಡಿ. ಈಗಾಗಲೇ ಕತ್ತರಿಸಿದ ತಾಜಾ ಕೊತ್ತಂಬರಿ ಸೊಪ್ಪು ಮತ್ತು ಒಂದು ನಿಂಬೆಯ ರಸವನ್ನು ಸೇರಿಸಬೇಕು. ಎಲ್ಲವನ್ನೂ ಚೆನ್ನಾಗಿ ಮಿಕ್ಸ್ ಮಾಡಿ. ಈಗ ರುಚಿಗೆ ತಕ್ಕಷ್ಟು ಉಪ್ಪು ಮತ್ತು ಕಾಳುಮೆಣಸಿನ ಪುಡಿಯನ್ನು ಸೇರಿಸಬೇಕು. ಇಷ್ಟು ಮಾಡಿದರೆ ಬಿಸಿ ಬಿಸಿಯಾದ ನಿಂಬೆ ಕೊತ್ತಂಬರಿ ಸೂಪ್ ಸಿದ್ಧ. ಇದನ್ನು ಬಿಸಿ ಇರುವಾಗಲೇ ಸವಿಯಬಹುದು. ಇದರ ಮೇಲೆ ಸ್ವಲ್ಪ ಕಾಳುಮೆಣಸಿನ ಪುಡಿ ಹಾಕಿದರೆ, ರುಚಿ ಮತ್ತಷ್ಟು ಹೆಚ್ಚುತ್ತದೆ.

# ರಾಮಾಯಣ



ಶ್ರೀರಾಮನು ಅರಣ್ಯದಲ್ಲಿದ್ದ ಋಷಿಗಳನ್ನು ಸಂದರ್ಶಿಸಿದ್ದು

• **ಹಿಂದಿನ ಸಂಚಿಕೆಯಿಂದ** 116 **ನೆಯ ಅಧ್ಯಾಯ**

ಆ ರಾಕ್ಷಸನು ಗುಳಿಬಿದ್ದ ಕಣ್ಣುಗಳುಳ್ಳವನೂ ದೊಡ್ಡ ಮುಖವುಳ್ಳವನೂ ಡೊಂಕಾದ ಶರೀರವುಳ್ಳವನೂ ಏರುತಗ್ಗುಗಳಿರುವ ಹೊಟ್ಟೆಯುಳ್ಳವನೂ ನೋಡುವುದಕ್ಕೆ ಅಸಹ್ಯಕರನೂ ಅತ್ಯಂತ ನಿಡಿದಾದ ಶರೀರವುಳ್ಳವನೂ ಅತಿಘೋರರೂಪನೂ ವಿಕಟಾಂಗನೂ ಆಗಿದ್ದನು. ಅವನು ರಕ್ತದಿಂದ ನೆನೆದ ಶರೀರವುಳ್ಳವನಾಗಿ ವ್ಯಾಘ್ರಚರ್ಮವನ್ನು ಹೊದ್ದುಕೊಂಡು ಸಮಸ್ತ ಪ್ರಾಣಿಗಳಿಗೂ ಭಯವನ್ನು ಹುಟ್ಟಿಸುವವನಾಗಿ, ಮನುಷ್ಯರನ್ನು ಕೋರೆದಾಡೆಗಳಿಂದ ಅಗಿದು ನುಂಗುವವನಾಗಿದ್ದನು. ಆ ರಾಕ್ಷಸನು ಬೊಬ್ಬಿಡುತ್ತ ಯಮನಂತೆ ಬಾಯಿಬಿಟ್ಟುಕೊಂಡು ಮೂರು ಸಿಂಹಗಳನ್ನೂ ನಾಲ್ಕು ವ್ಯಾಘ್ರಗಳನ್ನೂ ಎರಡು ಗೂಳಿಗಳನ್ನೂ ಹತ್ತು ಸಾರಂಗಗಳನ್ನೂ ಒಂದು ಆನೆಯ ತಲೆಯನ್ನೂ ತನ್ನ ಶೂಲದಿಂದ ಪೋಣಿಸಿಕೊಂಡು ಮೇಲಕ್ಕೆ ನೆಗಹಿಕೊಂಡಿದ್ದನು. ಅವನು ಸೀತಾಲಕ್ಷ್ಮಣಸಮೇತನಾದ ಶ್ರೀರಾಮನನ್ನು ಕಂಡು ಪ್ರಳಯಕಾಲದ ಯಮನು ಪ್ರಜೆಗಳನ್ನು ಅಟ್ಟಿಬರುವಂತೆ ಅಟ್ಟಿಕೊಂಡು ಬಂದು ಸಮಸ್ತ ಭೂಮಂಡಲವೂ ಕಂಪನವಾಗುವ ಹಾಗೆ ಕೂಗುತ್ತ ಅವರನ್ನು ಅಡ್ಡಗಟ್ಟಿ ಬಲಾತ್ಕಾರದಿಂದ ರಾಮಲಕ್ಷ್ಮಣರ ಮಧ್ಯದಲ್ಲಿದ್ದ ಸೀತಾದೇವಿಯನ್ನು ಸೆಳೆದನು. ಅನಂತರ ರಾಮಲಕ್ಷ್ಮಣರನ್ನು ಕುರಿತು ಎಲೈ ಮನುಷ್ಯರೆ, ನೀವು ಈ ವನಕ್ಕೆ ಬರಬಹುದೆ ನೀವು ನಾರುಬಟ್ಟೆಗಳನ್ನೂ ಬಿಲ್ಲು ಬಾಣ ಖಡ್ಗಗಳನ್ನೂ ಧರಿಸಿಕೊಂಡು ಸ್ತ್ರೀಸಮೇತರಾಗಿ ಅಂತ್ಯಕಾಲವು ಸಂಭವಿಸಿದ್ದರಿಂದ ಈ ಅರಣ್ಯಕ್ಕೆ ಬಂದಿರಿ, ತಪಸ್ವಿಗಳಾದ ನಿಮಗೆ ಈ ಸ್ತ್ರೀಸಹವಾಸವೇತಕ್ಕೆ

**ನೀವು ಮಹಾಪಾಪಿಗಳು :** ಅಧರ್ಮಚಾರಿಗಳು. ನಾನು ಈ ವನದುರ್ಗದಲ್ಲಿ ಸಂಚರಿಸುತ್ತಿರುವೆನು. ನನ್ನ ಹೆಸರು ವಿರಾಧ. ನಾನು ನಿತ್ಯವೂ ಋಷಿಗಳ ಮಾಂಸವನ್ನು ಭಕ್ಷಿಸಿಕೊಂಡಿರುವೆನು. ಕೋಮಲಾಂಗಿಯಾದ ಈಕೆಯು ನನಗೆ ಸ್ತ್ರೀಯಾಗುವಳು. ಇನ್ನು ನಿಮ್ಮಿಬ್ಬರ ರಕ್ತಪಾನವನ್ನು ಮಾಡುವೆನು ಎಂದು ನುಡಿದನು. ಆ ಮಾತನ್ನು ಕೇಳಿ ಸೀತಾದೇವಿಯು ಬಿರುಗಾಳಿಯಿಂದ ಚಲಿಸುವ ಬಾಳೆಯ ಗಿಡದಂತೆ ನಡುಗುತ್ತಿದ್ದಳು. ಶ್ರೀರಾಮನು ವಿರಾಧನ ಹತ್ತಿರದಲ್ಲಿದ್ದ ಸೀತಾದೇವಿಯನ್ನು ಕಂಡು ಮುಖಕಾಂತಿಗುಂದಿ ಲಕ್ಷ್ಮಣನನ್ನು ನೋಡಿ ಎಲೈ ಲಕ್ಷ್ಮಣ, ಜನಕಮಹಾರಾಯನ ಕುಮಾರಿಯಾಗಿ ನನ್ನ ಪತ್ನಿಯಾದ ಸೀತಾದೇವಿಗೆ ರಾಕ್ಷಸನ ಸಮೀಪದಲ್ಲಿರುವಂಥ ದುರವಸ್ಥೆಯು ಪ್ರಾಪ್ತವಾಯಿತು. ಅತ್ಯಂತ ಸುಖಶರೀರಿಯಾಗಿ ಕೀರ್ತಿವಂತೆಯಾಗಿ ರಾಜಕುಮಾರಿಯಾದ ಸೀತಾದೇವಿಯನ್ನೂ ನಮ್ಮನ್ನೂ ವನಕ್ಕೆ ಕಳುಹಿಸಿದ ಕೈಕೇಯಾದೇವಿಯ ಮನೋರಥವು ಇಂದು ಸಫಲವಾಯಿತು. ಆ ದೇವಿಗೆ ನಮ್ಮನ್ನು ವನಕ್ಕೆ ಕಳುಹಿಸಿದುದರಿಂದಾದ ಸಂತೋಷಕ್ಕೆ ಸಮನ್ವ ರಾಜ್ಯಾಧಿಪತ್ಯದಿಂದ ಬಂದ ಸಂತೋಷವೂ ಸಾಟಿಯಾಗಲಾರದು. ಆಕೆಯು ಮನಸ್ಸಿಗೆ ಹರ್ಷವನ್ನುಂಟುಮಾಡಿಕೊಳ್ಳಲಿ. ನನಗೆ ಸೀತಾದೇವಿಗೆ ಪರಪುರುಷನ ಸ್ಪರ್ಶವಾಗುವುದಕ್ಕಿಂತಲೂ ಅಧಿಕವಾದ ದುಃಖವಿಲ್ಲ. ಲಕ್ಷ್ಮಣ, ನನ್ನ ಪಟ್ಟಾಭಿಷೇಕವನ್ನು ನಿಲ್ಲಿಸಿ ನನ್ನನ್ನು ವನಕ್ಕೆ ಕಳುಪಿಸಿದರೂ ಇಂಥ ದುಃಖವುಂಟಾಗಲಿಲ್ಲ ಎಂದನು.

**ಮುಂದುವರಿಯುವುದು...**

## ಕಲಾ ಸಾಹಿತ್ಯ



**ವೈ.ಕೆ. ಸಂಧ್ಯಾ ಶರ್ಮ**
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

# ಭರವಸೆಯ ನೃತ್ಯ ಕಲಾವಿದೆ ಆರಾಧನಾ ಎಬಿತ್- ಗೆಜ್ಜೆಪೂಜೆ

ಆಳವಾದ ನೃತ್ಯಾಭ್ಯಾಸ, ಶಿಸ್ತು-ಬದ್ಧತೆಗಳಿಗೆ ಹೆಸರಾದ ನೃತ್ಯಗುರು ಪ್ರಸಿದ್ಧ ನೃತ್ಯಜ್ಞೆ ಡಾ. ಜಯ ಶ್ರೀ ರವಿ ಲಯಾಭಿನಯ ಕಲ್ಚುರಲ್ ಫೌಂಡೇಶನ್' ನೃತ್ಯಸಂಸ್ಥೆಯ ಸ್ಥಾಪಕಿ. ವಿಶ್ವವಿಖ್ಯಾತ ನೃತ್ಯಪಟು ಡಾ. ಸುಂದರಿ ಸಂತಾನಂ ಅವರಿಂದ 108 ಮಾರ್ಗದ ಕರಣಗಳನ್ನು ಅಭ್ಯಾಸ ಮಾಡಿದ ವೈಶಿಷ್ಟ್ಯ ಇವರದು. ವಿಶ್ವಾದ್ಯಂತ ನೃತ್ಯಪ್ರದರ್ಶನಗಳನ್ನು ನೀಡಿ ಸನ್ಮಾನ್ಯರಾದ ವಿದುಷಿ ಜಯಶ್ರೀ ಅವರ ನುರಿತ ಗರಡಿಯಲ್ಲಿ ರೂಪುಗೊಳ್ಳುತ್ತಿರುವ ನೃತ್ಯಶಿಲ್ಪ ಕು. ಆರಾಧನಾ ಎಬಿತ್, ಎಂಜಿನಿಯರ್ ದಂಪತಿಗಳಾದ ಶ್ರೀ ಟಿ.ವಿ. ಎಬಿತ್ ಮತ್ತು ವಿ. ವಸಂತರ ಪುತ್ರಿ. ಬಾಲಪ್ರತಿಭೆ ಹತ್ತರ ಬಾಲೆ, ಆರಾಧನಾ, ಕಳೆದ ಐದುವರ್ಷಗಳಿಂದ ಗುರು ಜಯಶ್ರೀ ಮತ್ತು ಅವರ ಪುತ್ರಿ ಗುರು ಶ್ರೀರಕ್ಷಾ ಹೆಗ್ಡೆ ಅವರಿಂದ ಭರತನಾಟ್ಯವನ್ನು ಆಸ್ಥೆಯಿಂದ ಅಭ್ಯಸಿಸುತ್ತಿರುವ ಐದನೆಯ ತರಗತಿಯ ಪುಟಾಣಿ. ಕರಕುಶಲ ಕಲೆ, ಕ್ರೀಡೆಯಲ್ಲಿ ಅನೇಕ ಚಿನ್ನದ ಪದಕ ಮತ್ತು ಪ್ರಮಾಣಪತ್ರಗಳನ್ನು ಗಳಿಸಿರುವ ಇವಳು ಕರ್ನಾಟಕ ಶಾಸ್ತ್ರೀಯ ಸಂಗೀತವನ್ನು ಕಲಿಯುತ್ತಿದ್ದಾಳೆ ಮತ್ತು ಪುಣೆಯ ಅಖಿಲ ಭಾರತೀಯ ಗಂಧರ್ವ ಮಹಾಮಂಡಲದ ಎರಡು ಪರೀಕ್ಷೆಗಳಲ್ಲಿ ಡಿಸ್ಟಿಂಕ್ಷನ್ನಲ್ಲಿ ಉತ್ತೀರ್ಣೆ.

ಉದಯೋನ್ಮುಖ ನೃತ್ಯಕಲಾವಿದೆ ಆರಾಧನಾ, ಇದೇ ತಿಂಗಳ 24 ಭಾನುವಾರ ಸಂಜೆ 5.15 ಕ್ಕೆ ನಗರದ ಬನ್ನೇರುಘಟ್ಟ - ಜಿಗಣಿ ಸಮೀಪದ ನಿಸರ್ಗ ಲೇಔಟ್ ಪುರಂದರ ಮಂಟಪದಲ್ಲಿ ತನ್ನ ಪ್ರಥಮ ಅಂಕುರ- ನೂಪುರ ಪೂಜೆಯನ್ನು ವಿದ್ಯುಕ್ತವಾಗಿ ನೆರವೇರಿಸಿಕೊಳ್ಳಲಿದ್ದಾಳೆ. ಅವಳ ಕಲಾಪ್ರದರ್ಶನವನ್ನು ಕಣ್ತುಂಬಿಕೊಳ್ಳಲು ಎಲ್ಲಾ ಕಲಾರಸಿಕರಿಗೂ ಆದರದ ಸ್ವಾಗತ.


ಕು. ಆರಾಧನಾಗೆ ನೃತ್ಯ ಬಾಲ್ಯದ ಒಲವು. ಅವಳ ಸುಪ್ತ ಪ್ರತಿಭೆಯನ್ನು ಗುರುತಿಸಿದ ಅವಳ ಕಲಾಸಕ್ತ ತಂದೆ-ತಾಯಿ, ಐದರ ಪುಟಾಣಿಯನ್ನು ಖ್ಯಾತ ನೃತ್ಯಗುರು ಡಾ. ಜಯಶ್ರೀ ಅವರಲ್ಲಿ ಭರತನಾಟ್ಯ ಕಲಿಯಲು ಸೇರಿಸಿದರು. ಬಹು ಚೂಟಿಯಾದ ಆರಾಧನಾ, ಆಸಕ್ತಿ, ಶಿಸ್ತಿನ ಕಲಿಕೆ ಮತ್ತು ಬದ್ಧತೆ ಪರಿಶ್ರಮಗಳಿಂದ ನೃತ್ಯ ಕಲಿಯತೊಡಗಿದಳು. ಬೇಗೂರು ರಸ್ತೆಯಲ್ಲಿರುವ ಕ್ರೈಸ್ಟ್ ಅಕಾಡೆಮಿಯಲ್ಲಿ 5 ನೆಯ ತರಗತಿಯಲ್ಲಿ ಓದುತ್ತಿರುವ ಇವಳು ಬಹುಮುಖ ಪ್ರತಿಭೆ. ಓದಿನಲ್ಲೂ ಮುಂದಿರುವ ಇವಳು, ನೃತ್ಯ- ಸಂಗೀತ ( ಗುರು ಶ್ರೀಮತಿ. ಶ್ರುತಿ ಮನ್ಸಬ್ದರ್) - ಕರಕುಶಲ ಕಲೆ ಮತ್ತು ಒಲಂಪೈಡ್ಸ್ ಕ್ರೀಡೆಗಳಲ್ಲಿ, ಬ್ಯಾಡ್ಮಿಂಟನ್, ಸ್ವಿಮ್ಮಿಂಗ್, ಸ್ಕೇಟಿಂಗ್, ಸೈಕ್ಲಿಂಗ್ ಮುಂತಾದ ಕ್ರೀಡಾ ಪ್ರಕಾರಗಳಲ್ಲಿ ತನ್ನ ವಿವಿಧ ಪ್ರತಿಭೆಗಳನ್ನು ಪ್ರದರ್ಶಿಸಿ ಅನೇಕ ಸ್ವರ್ಣ ಪದಕ ಹಾಗೂ ಪ್ರಮಾಣಪತ್ರಗಳನ್ನು ಗಳಿಸಿರುವ ಅಗ್ಗಳಿಕೆ ಇವಳದು. 2022 -23 ರ ಸಾಲಿನಲ್ಲಿ ಶಾಲೆಯಿಂದ ವೆಲ್ ಡಿಸಿಪ್ಲಿನ್ಡ್ ಪ್ರಶಸ್ತಿ ಗಳಿಸಿರುವ ಆರಾಧನಾಗೆ ತುಂಬಾ ಒಳ್ಳೆಯ ಭವಿಷ್ಯವಿದೆ. ಸಕಲ ಕಲಾ ಪಾರಂಗತೆಯಾದ ಈ ಉದಯೋನ್ಮುಖ ಕಲಾವಿದೆಗೆ ಹಾರ್ದಿಕ ಅಭಿನಂದನೆಗಳು.



# ರೊಬೊಟಿಕ್ ತಂತ್ರಜ್ಞಾನ; ಬೆನ್ನುಮೂಳೆ ಶಸ್ತ್ರಚಿಕಿತ್ಸೆ ಯಶಸ್ವಿ

• **ಉದಯವಾಹಿನಿ, ಬೆಂಗಳೂರು**

ನಾರಾಯಣ ಹೆಲ್ತ್ ಸಿಟಿ ಆಸ್ಪತ್ರೆಯ ವೈದ್ಯರು ಬೆನ್ನುಮೂಳೆ ಸಮಸ್ಯೆಯಿಂದ ಬಳಲುತ್ತಿದ್ದ ಮೂವರಿಗೆ ರೊಬೊಟಿಕ್ ತಂತ್ರಜ್ಞಾನದ ನೆರವಿನಿಂದ ಯಶಸ್ವಿಯಾಗಿ ಶಸ್ತ್ರಚಿಕಿತ್ಸೆ ನಡೆಸಿದ್ದಾರೆ. ಬೆನ್ನುಮೂಳೆ ಕ್ಷಯ ರೋಗದಿಂದ ಬಳಲುತ್ತಿದ್ದ 14 ವರ್ಷದ ಉಷಾ ಎಚ್. ಎಂ.. ಸ್ಕೋಲಿಯೋಸಿಸ್ ಸಮಸ್ಯೆ ಎದುರಿಸುತ್ತಿದ್ದ 17 ವರ್ಷದ ಸಾಜಿಯಾ ಐಮನ್ ಮತ್ತು ಬ್ರೂಸೆಲ್ಲಾ ಸೋಂಕಿನಿಂದ ಬಳಲುತ್ತಿದ್ದ 34 ವರ್ಷದ ವೆಂಕೋಬ ಅವರು ರೊಬೊಟಿಕ್



ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದರು. ಸ್ಪೈನ್ ರೊಬೊಟ್, ಒ-ಆರ್ಮ್ ಇಂಟ್ರಾ ಆಪರೇಟಿವ್ ಇಮೇಜಿಂಗ್, ಸ್ಪೈನಲ್ ನ್ಯಾವಿಗೇಷನ್ ನ್ಯೂರೋಮಾನಿಟರಿಂಗ್ ಎಂಬ ಅತ್ಯಾಧುನಿಕ ತಂತ್ರಜ್ಞಾನಗಳನ್ನು ಬಳಸಿಕೊಂಡು, ಮೂರು ಸಂಕೀರ್ಣ ಬೆನ್ನುಮೂಳೆ ಶಸ್ತ್ರಚಿಕಿತ್ಸೆಗಳನ್ನು ಯಶಸ್ವಿಯಾಗಿ ನಡೆಸಲಾಗಿದೆ ಎಂದು ಆಸ್ಪತ್ರೆಯ ವೈದ್ಯರು ತಿಳಿಸಿದ್ದಾರೆ. ಈಗಾಗಲೇ ಆಸ್ಪತ್ರೆಯು 10 ಸಾವಿರಕ್ಕೂ ಹೆಚ್ಚು ಯಶಸ್ವಿ ಮೂಳೆ ಶಸ್ತ್ರಚಿಕಿತ್ಸೆಗಳನ್ನು ನಡೆಸಿದೆ. ಸಂಕೀರ್ಣ ಬೆನ್ನುಮೂಳೆ ಸಮಸ್ಯೆಗಳನ್ನು ಹೊಂದಿರುವವರಿಗೆ, ಅತ್ಯಾಧುನಿಕ ತಂತ್ರಜ್ಞಾನ ಬಳಸಿಕೊಂಡು ಶಸ್ತ್ರಚಿಕಿತ್ಸೆ ನಡೆಸಲಾಗುತ್ತಿದೆ ಎಂದು ಆಸ್ಪತ್ರೆಯ ಬೆನ್ನುಮೂಳೆ ಶಸ್ತ್ರಚಿಕಿತ್ಸೆ ವಿಭಾಗದ ಸಲಹೆಗಾರ ಡಾ. ವಿನು ರಾಜ್ ಹೇಳಿದ್ದಾರೆ. ಪೊಲೀಸ್ ಅಧಿಕಾರಿಯಾಗಬೇಕೆಂಬ ಕನಸು ಹೊಂದಿದ್ದೆ. ಬೆನ್ನುಮೂಳೆ ಸಮಸ್ಯೆಯು ನನ್ನ ಕನಸಿಗೆ ಭಂಗವನ್ನುಂಟು ಮಾಡಿತ್ತು.

ಸರಿಯಾಗಿ ನಡೆಯಲು ಸಾಧ್ಯವಾಗದೆ ನಿರಾಶಳಾಗಿದ್ದೆ. ಶಸ್ತ್ರಚಿಕಿತ್ಸೆಯ ಬಳಿಕ ದಿನದಿಂದ ದಿನಕ್ಕೆ ಬಲಿಷ್ಠಳಾಗುತ್ತಿದ್ದೇನೆ ಎಂದು ಉಷಾ ಎಚ್.ಎಂ. ತಿಳಿಸಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ.

**ವೃಷಭ** ವ್ಯಾಪಾರದ ಉದ್ದೇಶದಿಂದ ಕೈಗೊಂಡ ಪ್ರಯಾಣ ದೀರ್ಘಾವಧಿಯಲ್ಲಿ ಪ್ರಯೋಜನಕಾರಿ ಎಂದು ಸಾಬೀತಾಗುತ್ತದೆ. ಮದುವೆ ಕೇವಲ ಲೈಂಗಿಕತೆಯ ಬಗ್ಗೆ ಮಾತ್ರವಿದೆ ಎಂದು ಹೇಳುವವರು, ಸುಳ್ಳು ಹೇಳುತ್ತಿದ್ದಾರೆ.

**ಮಿಥುನ** ನಿಮ್ಮ ಪ್ರೀತಿ ಒಂದು ಹೊಸ ಎತ್ತರವನ್ನು ತಲುಪುತ್ತದೆ. ಈ ದಿನವು ನಿಮ್ಮ ಪ್ರೀತಿಪಾತ್ರರ ನಗುವಿನಿಂದ ಪ್ರಾರಂಭವಾಗುತ್ತದೆ, ಮತ್ತು ಪರಸ್ಪರರ ಕನಸಿನಲ್ಲಿ ಕೊನೆಗೊಳ್ಳುತ್ತದೆ.

**ಕರ್ಕಾಟಕ** ಉದ್ಯೋಗದಲ್ಲಿರುವ ಜನರು ಕೆಲಸದ ಸ್ಥಳದಲ್ಲಿ ಬುದ್ಧಿವಂತಿಕೆಯಿಂದ ನಡೆಯುವ ಅಗತ್ಯವಿದೆ. ಜನರೊಂದಿಗೆ ಮಾತನಾಡುವಲ್ಲಿ ನೀವು ನಿಮ್ಮ ಅಮೂಲ್ಯವಾದ ಸಮಯವನ್ನು ಹಾಳುಮಾಡಬಹುದು.

**ಸಿಂಹ** ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ.

**ಕನ್ಯಾ** ಹೆಚ್ಚು ಖರೀದಿಸಲು ಧಾವಿಸುವ ಮೊದಲು ಈಗಾಗಲೇ ಹೊಂದಿರುವುದನ್ನು ಬಳಸಿ. ಗುಂಪಿನಲ್ಲಿದ್ದಾಗ ನೀವೇನು ಹೇಳುತ್ತೀರೆಂದು ಎಚ್ಚರ ವಹಿಸಿ. ಹಠಾತ್ ಟೀಕೆಗಳಿಗೆ ತೀವ್ರವಾಗಿ ಟೀಕೆ ಎದುರಿಸಬೇಕಾಗಬಹುದು.

**ತುಲಾ** ನಿಮ್ಮ ಸಂತೋಷವನ್ನು ನಿಮ್ಮ ಪೋಷಕರ ಜೊತೆ ಹಂಚಿಕೊಳ್ಳಿ. ಒಂಟಿತನ ಮತ್ತು ಖಿನ್ನತೆಯ ಭಾವನೆ ಅಳಿಸಿಹಾಕಿ ಅವರಿಗೆ ತಾವು ಅಮೂಲ್ಯವೆಂದು ಭಾವನೆ ಬರುವ ಹಾಗೆ ಮಾಡಿ.

**ವೃಶ್ಚಿಕ** ನಿಮ್ಮ ಶೀಘ್ರ ಕ್ರಮ ನಿಮ್ಮ ಸುದೀರ್ಘವಾದ ಸಮಸ್ಯೆಯನ್ನು ಪರಿಹರಿಸುತ್ತದೆ. ಎಲ್ಲಾದರೂ ಹೂಡಿಕೆ ಮಾಡಿರುವ ಜನರು, ಇಂದಿನ ದಿನ ಅವರಿಗೆ ಆರ್ಥಿಕ ನಷ್ಟ ಸಂಭವಿಸಬಹುದು.

**ಧನಸ್ಸು** ಸೃಜನಶೀಲ ಕೆಲಸ ನಿಮ್ಮನ್ನು ಶಾಂತವಾಗಿರಿಸುತ್ತವೆ. ಮನೆಯ ಅಗತ್ಯಗಳನ್ನು ನೋಡುತ್ತಾ, ನೀವು ನಿಮ್ಮ ಜೀವನ ಸಂಗಾತಿಯೊಂದಿಗೆ ಯಾವುದೇ ಅಮೂಲ್ಯ ವಸ್ತುವನ್ನು ಖರೀದಿಸಬಹುದು.

**ಮಕರ** ಹೊರಾಂಗಣ ಚಟುವಟಿಕೆಗಳು ಇಂದು ದಣವು ಮತ್ತು ಒತ್ತಡ ತರುತ್ತವೆ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು.

**ಕುಂಭ** ದ್ವೇಷ ಪ್ರೀತಿಗಿಂತ ಹೆಚ್ಚು ಶಕ್ತಿಶಾಲಿಯಾಗಿದ್ದು ನಿಮ್ಮ ದೇಹದ ಮೇಲೆ ಪ್ರಾಣಾಂತಿಕ ಪರಿಣಾಮ ಬೀರುವದರಿಂದ ನಿಮ್ಮ ದ್ವೇಷವನ್ನು ಸಾಯಿಸಲು ಒಂದು ಸಮರಸದ ಸ್ವಭಾವವನ್ನು ರೂಪಿಸಿಕೊಳ್ಳಿ.

**ಮೀನ** ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ.

● ಹಿಂಗಾರು ಹಂಗಾಮಿನ ವಿವಿಧ ಬೆಳಗಳ ಮೇಲೆ ದುಷ್ಪರಿಣಾಮ ಉಂಟು ಮಾಡಿರುವ ಮಳೆ ಇನ್ನೂ ಬಿಡುವ ಲಕ್ಷಣಗಳೇ ಇಲ್ಲ

# ಸೂರ್ಯರಶ್ಮಿ ನೆಲಕ್ಕೆ ಸೋಕಿಲ್ಲ, ಹೊಲಗಳಲ್ಲಿ ಬೆಳೆಗಳಿಗಿಂತ ಕಳೆ ಮೇಲುಗೈ

• ಉದಯವಾಹಿನಿ, ಕುಷ್ಟಗಿ

ಒಂದು ತಿಂಗಳಿನಿಂದ ನಿರಂತರವಾಗಿ ಸುರಿಯುತ್ತಿರುವ ಜಿಟಿ ಜಿಟಿ ಮಳೆಯಿಂದಾಗಿ ಸೂರ್ಯರಶ್ಮಿ ನೆಲಕ್ಕೆ ಸೋಕಿಲ್ಲ. ಹೊಲಗಳಲ್ಲಿ ಬೆಳೆಗಳಿಗಿಂತ ಕಳೆ ಮೇಲುಗೈ ಸಾಧಿಸಿದೆ. ತೇವಾಂಶ ಹೆಚ್ಚಾಗಿ ಬೆಳೆಗಳು ಹಾನಿಗೊಳಗಾಗುತ್ತಿದ್ದು, ರೈತರನ್ನು ಆತಂಕಕ್ಕೆ ದೂಡಿದೆ.

ಹಿಂಗಾರು ಹಂಗಾಮಿನ ವಿವಿಧ ಬೆಳಗಳ ಮೇಲೆ ದುಷ್ಪರಿಣಾಮ ಉಂಟು ಮಾಡಿರುವ ಮಳೆ ಇನ್ನೂ ಬಿಡುವ ಲಕ್ಷಣಗಳೇ ಇಲ್ಲ. ಇದೇ ಪರಿಸ್ಥಿತಿ ಮುಂದುವರಿದರೆ ಬೆಳೆಗಳು ಸಂಪೂರ್ಣ ಕೈಕೊಡುವ ಸಾಧ್ಯತೆ ಕಣ್ಮುಂದಿರುವುದರಿಂದ ಹಸಿ ಬರದ ಛಾಯೆ ಆವರಿಸಿದೆ. ಕೃಷಿ ಬೆಳೆಗಳ ಜೊತೆಗೆ ತರಕಾರಿ, ಹಣ್ಣುಗಳು ಸೇರಿ ತೋಟಗಾರಿಕೆ ಬೆಳೆಗಳು ಹಾನಿಗೊಳಗಾಗಿವೆ. ಹೆಸರು ಕಾಯಿಯಲ್ಲಿನ ಕಾಳುಗಳು ಮೊಳಕೆಯೊಡೆದು ಬಹುತೇಕ ಹಾಳಾಗಿದೆ. ಎಳ್ಳು ಕೊಯಿಲಿಗೆ ಬಂದಿದೆ, ಕೊಯಿಲಾಗಿದ್ದನ್ನು ಗೂಡು ಹಾಕಲಾಗಿದ್ದು ಬಿಸಿಲು ಇಲ್ಲದೆ ಜಿನುಗು ಮಳೆಯಿಂದ ಕೊಳೆಯುವ ಹಂತ ತಲುಪಿವೆ. ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿದೆ ಎಂದು ಕುಷ್ಟಗಿಯ ರೈತ ಹನುಮಂತ ಕುರಿ ಅಸಹಾಯಕತೆ ವ್ಯಕ್ತಪಡಿಸಿದರು. ತಾಲ್ಲೂಕು ಹಾಗೂ ಸುತ್ತಲಿನ ಪ್ರದೇಶದಲ್ಲಿ ಬಹಳಷ್ಟು ಜನರು ದಾಳಿಂಬೆ ಬೆಳೆದಿದ್ದು, ಕಾಯಿಗಳಿಗೆ ರೋಗ ತಗುಲಿದೆ. ಹೊಲಗಳಲ್ಲಿ ನೀರು ಸಂಗ್ರಹವಾಗಿ ಗಿಡಗಳಿಗೂ ಹಾನಿಯಾಗುತ್ತಿದೆ. ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಬೆಳೆದರೂ ನಿರಂತರ ಮಳೆಗೆ ಬೆಳೆ ಹಾಳುಗುತ್ತಿದೆ ಎಂಬ ಕೊರಗು ದಾಳಿಂಬೆ ಬೆಳೆಗಾರರದ್ದು.

ಅತಿಯಾದ ಮಳೆಯಿಂದ ತಾಲ್ಲೂಕಿನಲ್ಲಿ ನೀರು ಸಂಗ್ರವಹಾಗಿ ತೇವಾಂಶ ಹೆಚ್ಚಿದೆ. ಈ ಕಾರಣಕ್ಕೆ ಕಾಯಿಕಟ್ಟುವ ಮೊದಲೇ ಮೊಗ್ಗುಗಳು ಉದುರುತ್ತಿವೆ. ಕಟ್ಟಿದ ಕಾಯಿಗಳೂ ನೆಲಕ್ಕೆ ಬೀಳುತ್ತಿವೆ. ಇನ್ನು ಹತ್ತಿ ಬೆಳೆ ನಸುಗೆಂಪು ಬಣಕ್ಕೆ ತಿರುಗಿದ್ದು ಬೆಳವಣಿಗೆ ಕುಂಠಿತಗೊಂಡಿದೆ ಎಂದು ಮೆಣೆದಾಳದ ರೈತ ದುರುಗಪ್ಪ ಗೊರ್ಲೂಟಿ, ಹನುಮಗೌಡ ಇತರರು ಗೋಳು ತೋಡಿಕೊಂಡರು.

**ಸಜ್ಜೆ ತೆನೆಯಲ್ಲೇ ಮೊಳಕೆ:** ಮುಂಗಾರು ಹಂಗಾಮಿನಲ್ಲಿ ಬೆಳೆದ ಸಜ್ಜೆ ಬೆಳೆ ಅತ್ಯುತ್ತಮವಾಗಿದೆ. ತೆನೆಗಳು ಕಾಳು ತುಂಬಿಕೊಂಡಿವೆ. ಆದರೆ ನಿರಂತರ ಮಳೆ ಜಿನುಗುತ್ತಿರುವುದರಿಂದ ತೇವಾಂಶ ಹೆಚ್ಚಿ ತೆನೆಯಲ್ಲಿಯೇ ಮೊಳಕೆಯೊಡೆಯುತ್ತಿರುವುದು ರೈತರ ನಿದ್ದೆಗೆಡಿಸಿದೆ.



ಉದಯವಾಹಿನಿ ಚಿತ್ರ

**ಜಿಟಿಜಿಟಿ ಮಳೆ: ಹಸಿಬರದ ಛಾಯೆ**

> ಕಪ್ಪುಮಣ್ಣಿನ ಭೂಮಿಯಿರುವ ಕಡೆ ಮಳೆಯಿಂದ ಹಾನಿಯಾಗಿದೆ. ಹೆಸರು ಫಸಲು ಪಡೆಯುತ್ತಿದ್ದಾಗಲೇ ರೈತರಿಗೆ ಸಂಕಷ್ಟ ಎದುರಾಗಿದೆ. ಮಳೆ ಸಂಪೂರ್ಣವಾಗಿ ನಿಂತರಷ್ಟೇ ಅನುಕೂಲವಾಗುತ್ತದೆ.
>
> -ರುದ್ರೇಶಪ್ಪ ಟಿ.ಎಸ್., ಕೃಷಿ ಇಲಾಖೆ ಜಂಟಿ ನಿರ್ದೇಶಕ

### ಬೀಜೋತ್ಪಾದನೆ ಹತ್ತಿಗೆ ಕುತ್ತು

ಬೀಜೋತ್ಪಾದನೆ ಹತ್ತಿ ಬೆಳೆ ಹಾನಿಗೊಳಗಾಗುತ್ತಿರುವುದು ಸಾಕಷ್ಟು ಹಣ ಖರ್ಚು ಮಾಡಿರುವ ರೈತರು ಆತಂಕಕ್ಕೀಡಾಗಿದ್ದಾರೆ. ಹತ್ತಿಗೆ ಹತ್ತು ಕುತ್ತು' ಎಂಬ ಮಾತು ಈ ಬಾರಿ ಅಕ್ಷರಶಃ ನಿಜವಾಗುವಂತಿದೆ. ಎರಡು ಕ್ವಿಂಟಲ್‌ಗಿಂದ ಹೆಚ್ಚಿನ ಬೀಜ ತೆಗೆದುಕೊಳ್ಳುವುದಿಲ್ಲ ಎಂದೆ ಖಾಸಗಿ ಕಂಪನಿಗಳ ಅಸಹಕಾರಕ್ಕೆ ರೈತರು ಹೋರಾಟ ಮಾಡುವ ಹಂತಕ್ಕೆ ಬಂದಿದ್ದರು. ಈ ವಿಷಯದಲ್ಲಿ ಸ್ವತಃ ಜಿಲ್ಲಾಧಿಕಾರಿ ಸುರೇಶ ಇಟ್ನಾಳ ಹೆಚ್ಚಿನ ಮುತುವರ್ಜಿ ವಹಿಸಿ ರೈತರ ನೆರವಿಗೆ ಬಂದಿದ್ದಲ್ಲದೆ ಬೀಜೋತ್ಪಾದನೆ ಕಂಪನಿಗಳಿಗೆ ಎಚ್ಚರಿಕೆ ನೀಡಬೇಕಾಯಿತು. ನಂತರ ಬೀಜದ ಕಂಪನಿಗಳು ಎಷ್ಟೇ ಬೀಜ ಬೆಳೆದರೂ ಖರಿದುಸುವುದಾಗಿ ಭರವಸೆ ನೀಡಿದ್ದು. ಆದರೆ ಈಗಿನ ಪರಿಸ್ಥಿತಿ ನೋಡಿದರೆ ಒಂದು ತಾಲ್ಲೂಕಿಗೆ ಕನಿಷ್ಟ ಒಂದು ಕ್ವಿಂಟಲ್ ಆದರೂ ಹತ್ತಿ ಬೀಜಗಳ ಬರುತ್ತವೆಯೋ ಇಲ್ಲವೋ ಎನ್ನುತ್ತಾರೆ ಮದಲಗಟ್ಟಿಯ ರೈತ ಹನುಮಗೌಡ ಪಾಟೀಲ.

### 136 ಹೆಕ್ಟೇರ್ ಪ್ರದೇಶದಲ್ಲಿ ಹಾನಿ

ನಿರಂತರವಾಗಿ ಜಿಟಿಜಿಟಿ ಮಳೆಗೆ ಜಿಲ್ಲೆಯಲ್ಲಿ ಒಟ್ಟು 136 ಹೆಕ್ಟೇರ್ ಪ್ರದೇಶದಲ್ಲಿ ವಿವಿಧ ಬೆಳೆಗಳು ಹಾನಿಯಾಗಿವೆ ಎಂದು ಕೃಷಿ ಇಲಾಖೆ ಪ್ರಾಥಮಿಕ ವರದಿಯನ್ನು ತಯಾರಿಸಿದೆ. ಕಪ್ಪುಮಣ್ಣಿನ ಭೂಮಿಯಿರುವ ಕುಷ್ಟಗಿ ಹಾಗೂ ಕುಕನೂರು ಭಾಗದಲ್ಲಿ ಹಾನಿ ಪ್ರಮಾಣ ಹೆಚ್ಚಿದೆ. ಮೆಕ್ಕಜೋಳ 28 ಹೆಕ್ಟೇರ್ ಹತ್ತಿ 21 ಹಾಗೂ ತೊಗರಿ 54 ಹೆಕ್ಟೇರ್ ಪ್ರದೇಶದಲ್ಲಿ ಹಾಳಾಗಿದೆ. ಕುಕನೂರು ಭಾಗದಲ್ಲಿ ಹೆಸರಿಗೆ ಜಾಸ್ತಿ ಸಮಸ್ಯೆಯಾಗಿದೆ ಎನ್ನುತ್ತಾರೆ ಕೃಷಿ ಇಲಾಖೆ ಅಧಿಕಾರಿಗಳು.

## ಆರೇ ತಿಂಗಳಲ್ಲಿ ಕಿತ್ತುಹೋದ ಸೇತುವೆ: ಗುಣಮಟ್ಟದ ಕುರಿತು ಪ್ರಶ್ನೆ

• ಉದಯವಾಹಿನಿ, ಯಲಬುರ್ಗಾ

ಕಳೆದ ಒಂದು ವಾರದಲ್ಲಿ ಸುರಿದ ಮಳೆಗೆ ತಾಲ್ಲೂಕಿನ ಗೆದಗೇರಿ-ಮಲ್ಲಸಮುದ್ರ ಗ್ರಾಮದ ಸಂಪರ್ಕ ರಸ್ತೆ ಮಧ್ಯೆ ಇರುವ ಕಿರು ಸೇತುವೆ ಸಂಪೂರ್ಣ ಕಿತ್ತುಹೋಗಿದೆ. ನಿರ್ಮಾಣಗೊಂಡು ಕೇವಲ ಆರೇಳು ತಿಂಗಳಲ್ಲೇ ಒಂದೆರೆಡು ಮಳೆಗೆ ಕಿತ್ತುಹೋಗಿದ್ದು, ಕಾಮಗಾರಿಯ ಗುಣಮಟ್ಟದ ಕುರಿತು ಸಾರ್ವಜನಿಕರಲ್ಲಿ ಪ್ರಶ್ನೆ ಹುಟ್ಟುಹಾಕುವಂತೆ ಮಾಡಿದೆ. ರೈತಾಪಿ ಜನರು ಹಾಗೂ ಜಾನುವಾರುಗಳು ತಮ್ಮ ಜಮೀನು ಮತ್ತು ಅಕ್ಕಪಕ್ಕದ ಗ್ರಾಮಕ್ಕೆ ಈ ಸೇತುವೆ ಸಂಪರ್ಕ ಕಲ್ಪಿಸಿತ್ತು

ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಗಮದವರ ಉಸ್ತುವಾರಿಯಲ್ಲಿ ನಿರ್ಮಾಣಗೊಂಡಿದ್ದ ಈ ಸೇತುವೆಯ ನಿರ್ಮಾಣದ ಹಂತದಲ್ಲಿಯೇ ಸಾಕಷ್ಟು ಮೇಲಧಿಕಾರಿಗಳಿಗೆ, ಜನಪ್ರತಿನಿಧಿಗಳಿಗೆ ದೂರು ನೀಡಿದ್ದರೂ ಯಾವುದೇ ಕ್ರಮಕ್ಕೆ ಮುಂದಾಗದೇ ಇರುವ ಕಾರಣ ಈ ಅವ್ಯವಸ್ಥೆಗೆ ಕಾರಣವಾಗಿದೆ. ಅಲ್ಲದೇ ಕೆಲಸಕ್ಕೆ ಅಡ್ಡಿಪಡಿಸುತ್ತಿದ್ದಾರೆ ಎಂದು ಪೊಲೀಸ್ ಠಾಣೆಗೆ ದೂರು ನೀಡುವಂತೆ ಜನಪ್ರತಿನಿಧಿಗಳು ಅಧಿಕಾರಿಗಳಿಗೆ ಹೇಳಿ ಸಾರ್ವಜನಿಕರು ಕೂಡಾ ಕಳಪೆ ಕಾಮಗಾರಿಯನ್ನು ಪ್ರಶ್ನಿಸದಂತೆ ನೋಡಿಕೊಳ್ಳುತ್ತಿದ್ದರು' ಎಂದು ಗೆದಗೇರಿ ಜನಪರಹೋರಾಟ ಸಮಿತಿಯ ಪದಾಧಿಕಾರಿ ಹನುಮೇಶ, ಮಹೇಶಗೌಡ ಪಾಟೀಲ ಆರೋಪಿಸುತ್ತಾರೆ.

ನಿರೀಕ್ಷೆಗಿಂತಲೂ ಹೆಚ್ಚಿನ ಪ್ರಮಾಣದಲ್ಲಿ ಮಳೆ ಸುರಿದಿದ್ದರಿಂದಾಗಿ ಹೆಚ್ಚಿನ ಪ್ರಮಾಣದಲ್ಲಿ ನೀರಿನ ಹರಿವು ಉಂಟಾಗಿ ಸೇತುವೆಗೆ ಅಳವಡಿಸಿದ ಕೊಳವೆಗಳಿಗೆ ಅಡ್ಡ ಗಿಡಗಂಟಿ ಸಿಲುಕಿ ನೀರು ಹರಿಯದೇ ಅಕ್ಕಪಕ್ಕದಲ್ಲಿ ನುಗ್ಗಿ ಈ ಅವಾಂತರಕ್ಕೆ ಕಾರಣವಾಗುತ್ತದೆ. ಈ ಬಗ್ಗೆ ಮೇಲಧಿಕಾರಿಗಳ ಗಮನಕ್ಕೆ ತರಲಾಗಿದೆ. ಅಲ್ಲದೇ ಸಾಮಾನ್ಯ ಸಭೆಯಲ್ಲಿಯೂ ನಿಗಮದ ಅಧಿಕಾರಿಗಳಿಗೆ ತ್ವರಿತವಾಗಿ ಕ್ರಮಕೈಗೊಳ್ಳಲು ಸೂಚಿಸಲಾಗಿದೆ' ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸಂತೋಷ ಪಾಟೀಲ ತಿಳಿಸಿದ್ದಾರೆ. ರೈತರು ತಮ್ಮ ತಮ್ಮ ಹೊಲಮನೆಗಳಿಗೆ ತಿರುಗಾಡುವ ಬಹುಮುಖ್ಯ ರಸ್ತೆಯಾಗಿದ್ದರಿಂದ ತ್ವರಿತವಾಗಿ ಗುಣಮಟ್ಟದಲ್ಲಿ ನಿರ್ಮಾಣಗೊಳ್ಳುವುದು ಅಗತ್ಯವಿದೆ. ನಾಲ್ಕು ಹಾಗೂ ಎರಡು ಚಕ್ರಗಳ ವಾಹನಗಳು ಕೂಡಾ ಸಾಕಷ್ಟು ಸಂಖ್ಯೆಯಲ್ಲಿ ಇದೇ ರಸ್ತೆಯ ಮೇಲೆ ಸಂಚಾರಗೊಳ್ಳುವುದರಿಂದ ರೈತರಿಗೆ ತೀವ್ರ ತೊಂದರೆಯಾಗಿದೆ. ಸಂಬಂಧಪಟ್ಟ ಕೆಆರ್‌ಐಡಿಎಲ್ ಅಧಿಕಾರಿಗಳ ಗಮನಕ್ಕೆ ತಂದಿದ್ದು ಅವರು ಕೂಡ ಈಗಾಲೇ ಮರು ನಿರ್ಮಾಣಕ್ಕಾಗಿ ಅಂದಾಜುಪಟ್ಟಿ ಸಿದ್ದಗೊಳಿಸಿ ಅನುದಾನ ಮಂಜೂರಾತಿಗೆ ಕೋರಿಕೆ ಸಲ್ಲಿಸಿದ್ದಾರೆ. ಮಳೆ ಸುರಿಯುತ್ತಿರುವುದರಿಂದ ಕಾಮಗಾರಿ ಪ್ರಾರಂಭಗೊಂಡಿಲ್ಲ ಮಳೆ ನಿಂತ ಕೂಡಲೇ ಕೆಲಸ ಪ್ರಾರಂಭಗೊಳ್ಳುತ್ತದೆ. ಸಂತೋಷ ಪಾಟೀಲ ಬಿರಾದಾರ ಇಒ ತಾಪಂ ಯಲಬುರ್ಗಾ.



ಉದಯವಾಹಿನಿ ಚಿತ್ರ

> ತಾಂತ್ರಿಕ ಕಾರಣಗಳನ್ನು ಹೇಳಿಕೊಂಡು ದಿನಗಳನ್ನು ನೂಕುತ್ತಾ ಸಾಗಿದರೆ ಸಾರ್ವಜನಿಕರು ನಿತ್ಯ ಯಾತನೆ ಅನುಭವಿಸಬೇಕಾಗುತ್ತದೆ. ಕಾರಣ ಮೇಲಧಿಕಾರಿಗಳು ಹೊಸದಾಗಿ ಮರು ನಿರ್ಮಾಣಕ್ಕೆ ಕ್ರಮಕೈಗೊಳ್ಳಬೇಕಾಗಿದೆ.
>
> -ಗೆದಗೇರಿ ಗ್ರಾಮಸ್ಥರು

## ಅಜ್ಜಂಪುರ ಪಟ್ಟಣ ಪಂಚಾಯಿತಿ ಅಧಿಕಾರ ಬಿಜೆಪಿ ತೆಕ್ಕೆಗೆ

• ಉದಯವಾಹಿನಿ, ಅಜ್ಜಂಪುರ

ಇಲ್ಲಿನ ಪಟ್ಟಣ ಪಂಚಾಯಿತಿಗೆ ನಡೆದ ಚುನಾವಣೆ ಫಲಿತಾಂಶ ಪ್ರಕಟವಾಗಿದ್ದು, ಅಧಿಕಾರದ ಚುಕ್ಕಾಣಿ ಬಿಜೆಪಿ ಪಾಲಾಗಿದೆ. ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೇರಿದ ಬಳಿಕ ಮೊದಲ ಬಾರಿಗೆ ಚುನಾವಣೆ ನಡೆದಿತ್ತು. ಮೊದಲ ಚುನಾವಣೆಯಲ್ಲೇ ಬಿಜೆಪಿ ಅಧಿಕಾರ ಹಿಡಿದಿದೆ. 11 ವಾರ್ಡ್ ಗಳ ಪೈಕಿ 6 ವಾರ್ಡ್ ನಲ್ಲಿ ಬಿಜೆಪಿ ಅಭ್ಯರ್ಥಿಗಳು ಗೆದ್ದಿದ್ದು, 5 ವಾರ್ಡ್ ಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಸಾಧಿಸಿದ್ದಾರೆ. ತರೀಕೆರೆ ಕ್ಷೇತ್ರದ ಕಾಂಗ್ರೆಸ್ ಶಾಸಕ ಜಿ.ಎಚ್.ಶ್ರೀನಿವಾಸ್ ಮತ್ತು ಬಿಜೆಪಿ ಮಾಜಿ ಶಾಸಕ ಡಿ.ಎಸ್. ಸುರೇಶ್ ಅವರಿಗೆ ಈ ಚುನಾವಣೆ ಪ್ರತಿಷ್ಠೆಯಾಗಿತ್ತು. ಫಲಿತಾಂಶ ಪ್ರಕಟವಾಗುತ್ತಿದ್ದಂತೆ ಬಿಜೆಪಿ ಕಾರ್ಯಕರ್ತರು ಸಂಭ್ರಮಿಸಿದರು.



ಉದಯವಾಹಿನಿ ಚಿತ್ರ

## ಯುವಜನತೆ ಸೇನೆ ಸೇರಿ ದೇಶ ಸೇವೆ ಮಾಡಬೇಕು

• ಉದಯವಾಹಿನಿ, ಕುಂದಾಪುರ

ದೇಶ ಸೇವೆಗೆ ಹಲವು ದಾರಿಗಳಿರಬಹುದು, ಆದರೆ ಸೇನೆಗೆ ಸೇರಿಕೊಳ್ಳುವ ಮೂಲಕ ಯುವ ಜನತೆ ಜೀವನೋಪಾಯದ ಜೊತೆಗೆ ದೇಶ ಸೇವೆಯಲ್ಲಿ ತೊಡಗಬಹುದು ಎಂದು ವಾಯುಸೇನೆಯ ನಿವೃತ್ತ ಅಧಿಕಾರಿ ಗುಂಡ್ಮಿ ಚಂದ್ರಶೇಖರ ನಾಯರಿ ಕರೆ ನೀಡಿದ್ದಾರೆ.79ನೇ ಸ್ವಾತಂತ್ರ್ಯೋತ್ಸವ ಅಂಗವಾಗಿ ಇಲ್ಲಿನ ಕೋಟದ ಪಂಚವರ್ಣ ಯುವಕ ಮಂಡಲ ಮತ್ತು ಪಂಚವರ್ಣ ಮಹಿಳಾ ಮಂಡಲದಲ್ಲಿ ಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿ ಮಾತನಾಡಿದರು.

ಭಾರತ ಜನತೆ ನಿರಾಳವಾಗಿ ಜೀವನ ಸಾಗಿಸಲು ಸೇನೆ ಪಾತ್ರ ಗಣನೀಯವಾದದ್ದು ಎಂದು ದೇಶದ ಸೇನಾಬಲ, ಅದರ ಕಾರ್ಯವೈಖರಿಯನ್ನು ಬಿಚ್ಚಿಟ್ಟರು. ದೇಶದ ಯುವ ಸಮೂಹ ಸೈನ್ಯದಲ್ಲಿ ಕಾರ್ಯನಿರ್ವಹಿಸಲು ಪೋಷಕರ ಸಹಕಾರವನ್ನು ಒತ್ತಿ ಹೇಳಿದರು. ಪಂಚವರ್ಣ ಸಂಘಟನೆಯ ಸಾಮಾಜಿಕ ಕಾರ್ಯಗಳನ್ನು ಶ್ಲಾಘಿಸಿದರು.



ಉದಯವಾಹಿನಿ ಚಿತ್ರ

## ಲಘು ಭೂಕಂಪನ ಬೆಚ್ಚಿಬಿದ್ದ ಜನತೆ

• ಉದಯವಾಹಿನಿ ವಾಡಿ

ಪಟ್ಟಣ ಸಮೀಪದ ಇಂಗಳಗಿ ಗ್ರಾಮದಲ್ಲಿ ಲಘು ಭೂಕಂಪನದ ಹಾಗೆ ಭೂಮಿಯಿಂದ ಭಯಾನಕ ಸೌಂಡ್ ಬಂದಿದೆ. ಇದರಿಂದ ಬೆಚ್ಚಿಬಿದ್ದ ಜನತೆ, ಭೂಮಿ ಕಂಪನವಾಗಿದೆ ಎಂದು ಭಾವಿಸಿ ಜನರು ಮನೆಯಿಂದ ಹೊರಗಡೆ ಕುಳಿತಿದ್ದಾರೆ. ಗ್ರಾಮದಲ್ಲಿ ಭಯಯದ ವಾತಾವರಣ ಸೃಷ್ಟಿಯಾಗಿದೆ. ನಾವು ಮನೆಯಲ್ಲಿ ಊಟ ಮಾಡುತ್ತಿರುವಾಗ ಸುಮಾರು ರಾತ್ರಿ 9 ಗಂಟೆಗೆ ಭೂಮಿಯಿಂದ ಭಯಾನಕ ದೊಡ್ಡ ಪ್ರಮಾಣದಲ್ಲಿ ಸೌಂಡ್ ಬಂದು, ಭೂಮಿ ಕಂಪನವಾಗಿದೆ. ಇದರಿಂದ ಕುಟುಂಬ ಸಮೇತ ಮನೆ ಹೊರಗಡೆ ಬಂದಿದ್ದೇವೆ. ಎಂದು ಗ್ರಾಮದ ನಿವಾಸಿ ಮಹೆಬೂಬಪಾಷಾ, ಆನಂದ ಆಡಕಿ ತಿಳಿಸಿದ್ದಾರೆ. ಭೂಕಂಪನದ ಕುರಿತು ಅಧಿಕೃತವಾಗಿ ಯಾವುದೇ ಮಾಹಿತಿ ಇನ್ನೂ ಲಭ್ಯವಾಗಿಲ್ಲ. ಸ್ಥಳೀಯ ಎಸಿಸಿ ಸಿಮೆಂಟ್ ಕಂಪನಿಯಲ್ಲಿ ಯಾವುದೇ ಗಣಿಗಾರಿಕೆ ಬ್ಲಾಸ್ಟಿಂಗ್ ಮಾಡಿರುವುದಿಲ್ಲ. ಎಂದು ತಿಳಿಸಿದ್ದಾರೆ.

## ಪ್ರೌಢಶಾಲೆಗೆ ಜಿಪಂ ಸಿಇಒ ಭೇಟಿ

• ಉದಯವಾಹಿನಿ ಬಳ್ಳಾರಿ

ಕುರುಗೋಡು ಪಟ್ಟಣದ ಸರ್ಕಾರಿ ಹಿರಿಯ ಪ್ರೌಢ ಶಾಲೆಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಭೇಟಿ ನೀಡಿ ಕೊಠಡಿಗಳ ದುರಸ್ಥಿ ಕುರಿತು ಪರಿಶೀಲಿಸಿದರು.

ಬಳಿಕ ಪಟ್ಟಣದ ಹರಿಪ್ರಿಯಾ ಕಾಲೋನಿಯಲ್ಲಿರುವ 13 ನೇ ಕೇಂದ್ರ ಅಂಗನವಾಡಿಗೆ ಭೇಟಿ ನೀಡಿ ಪರಿಶೀಲಿಸಿದರು. ನಂತರ ಡಿ.ದೇವರಾಜ ಅರಸು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯಕ್ಕೆ ಭೇಟಿ ಅಲ್ಲಿನ ಸ್ಥಿತಿ-ಗತಿ ವೀಕ್ಷಿಸಿದರು. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಫಲಿತಾಂಶ ಕಡಿಮೆಯಾಗಿರುವುದರ ಕುರಿತು ಬಿಇಒಗಳೊಂದಿಗೆ ಚರ್ಚಿಸಿ ಸೂಕ್ತ ನಿರ್ದೇಶನ ನೀಡಿದರು. ಪಟ್ಟಣದ ಶಾಲಾ ಶೌಚಾಲಯಗಳ ಸೂಕ್ತ ನಿರ್ವಹಣೆ ಕಾಯ್ದುಕೊಳ್ಳಬೇಕು ಎಂದು ಸೂಚಿಸಿದರು.

## ನಶಾಮುಕ್ತ ಭಾರತ ಅಭಿಯಾನ

• ಉದಯವಾಹಿನಿ ಹುಬ್ಬಳ್ಳಿ

ತಾಲ್ಲೂಕಿನ ಅದರಗುಂಚಿ ಗ್ರಾಮದ ಸಿ.ಐ.ಸಿ ಸರ್ಕಾರಿ ಪ್ರೌಢಶಾಲೆಯಲ್ಲಿ ನಶಾ ಭಾರತ ಅಭಿಯಾನ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ದೇಶದಲ್ಲಿ ಹೆಚ್ಚಾಗಿ ಯುವಕರು ಇದ್ದಾರೆ. ಯುವಕರು ಮಾದಕ ವಸ್ತುಗಳಿಗೆ ದಾಸರಾಗುತ್ತಿದ್ದಾರೆ. ಮಾದಕ ವಸ್ತುಗಳನ್ನು ಬಳಸದಂತೆ ಯುವಕರಿಗೆ ತಿಳಿ ಹೇಳಬೇಕಿದೆ. ಈ ನಿಟ್ಟಿನಲ್ಲಿ ನಶಾ ಮುಕ್ತ ಭಾರತ ಅಭಿಯಾನ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ. ಸದೃಢ ದೇಶ ಕಟ್ಟಲು ಯುವಕರ ಕೊಡುಗೆ ಅವಶ್ಯಕ ಎಂದು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ನಶಾ ಮುಕ್ತ ಭಾರತ ಅಭಿಯಾನದ ಪ್ರಮಾಣ ವಚನವನ್ನು ವಿದ್ಯಾರ್ಥಿಗಳು ಸ್ವೀಕರಿಸಿದರು.



ಉದಯವಾಹಿನಿ ಚಿತ್ರ

## ಹಣೆಬರಹವೆಂದು ವಿದ್ಯಾರ್ಥಿಗಳು ಕೈಕಟ್ಟಿ ಕುಳಿತರೆ ಯಶಸ್ಸು ಅಸಾಧ್ಯ

• ಉದಯವಾಹಿನಿ, ಚಿಂಚೋಳಿ

ವಿದ್ಯಾರ್ಥಿಗಳು ಹಣೆಬರಹವೆಂದು ಕೈಕಟ್ಟಿ ಕುಳಿತರೆ ಯಶಸ್ಸು ಅಸಾಧ್ಯ, ಹಣೆಬರಹ ಎಂಬುದು ಅಪ್ಪಟ ಸುಳ್ಳು ವಿದ್ಯಾರ್ಥಿಗಳ ಶ್ರಮವೇ ನಿಮ್ಮನ್ನು ಯಶಸ್ಸಿಗೆ ಕೊಂಡ್ಯುಯುತ್ತದೆ ಎಂದು ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕ ಡಾ.ಮೀರಾಜ್ ಪಾಶಾ ಹೇಳಿದರು. ಪಟ್ಟಣದ ಚಂದಾಪೂರದ ಸರಕಾರಿ ಬಾಲಕರ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಹಾಗೂ ಎನ್.ಎಸ್.ಎಸ್,ಯುಕೋಕ್ಲಬ್ ಚಟುವಟಿಕೆಗಳ ಉದ್ಘಾಟನಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು,ವಿದ್ಯಾರ್ಥಿಗಳು ಯಾವುದೇ ದುಶ್ಚಟಗಳಿಗೆ ಬಲಿಯಾಗದೆ ಹಗಲಿರುಳು ಕಷ್ಟಪಟ್ಟು ವಿದ್ಯಾಭ್ಯಾಸ ಮಾಡಿದರೆ ಉನ್ನತಮಟ್ಟದ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದರು.

ಕೆಪಿಎಸ್ ಮುಖ್ಯಗುರು ಸುಸ್ರತ್ ಮೊಯಿಜೋದ್ದಿನ್ ,ಕಾಲೇಜಿನ ಪ್ರಾಂಶುಪಾಲ ಡಾ.ಮಲ್ಲಿಕಾರ್ಜುನ ಪಾಲಾಮೂರ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಹಣಮಂತ ಕೋರೆ, ಡಾ.ಶಮಸೋದ್ದಿನ್, ಶ್ರೀಶೈಲ್, ಅಮಿತಕುಮಾರ, ಶಿವಕುಮಾರಪಾಟೀಲ ಚಕ್ರವರ್ತಿ ಇದ್ದರು. ಇದಕ್ಕೂ ಮೊದಲು ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ಹೂಗುಚ್ಛ,ಪೆನ್ನು ನೀಡಿ ಸ್ವಾಗತಿಸಿದರು.



ಉದಯವಾಹಿನಿ ಚಿತ್ರ

> ಶಿಸ್ತುಬದ್ಧ ಯೋಜನೆ ಸೂಕ್ತ ಸಮಯದ ಬಳಕೆಯಿಂದ ಅಭ್ಯಾಸ ಮಾಡಬೇಕು,ಸಮಯ ವ್ಯರ್ಥ ಮಾಡದೆ ಸಮಯಕ್ಕೆ ಹೆಚ್ಚಿನ ಮಹತ್ವ ನೀಡಬೇಕು ವಿದ್ಯಾರ್ಥಿಗಳು ಹೆಚ್ಚಿನ ಗಮನ ಅಭ್ಯಾಸ ಕಡೆ ಕೊಡಬೇಕು.
>
> -ಎಸ್.ಕೆ.ಹಸನ್ ಅಗ್ನಿಶಾಮಕ ಠಾಣೆಯ ಅಧಿಕಾರಿ

## ಸೊಳ್ಳೆಗಳಿಂದ ಹರಡಬಹುದಾದ ಖಾಯಿಲೆಗಳ ಕುರಿತು ಜನಜಾಗೃತಿ

• ಉದಯವಾಹಿನಿ, ಸಿಂಧನೂರು

ಸಮೀಪದ ಜವಳಗೇರಾ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸೊಳ್ಳೆಗಳಿಂದ ಹರಡಬಹುದಾದ ಖಾಯಿಲೆಗಳ ಕುರಿತು ಜಂಗಮರಹಟ್ಟಿ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದ ಕುರಿತು ಆಡಳಿತ ವೈದ್ಯಾಧಿಕಾರಿಗಳಾದ ಲಾಲಬ್ ಪಟೇಲ್ ಅವರು ಮಾತನಾಡಿದೂರು. ಪ್ರತಿ ವರ್ಷದಂತೆ ಆಗಸ್ಟ್ 20 ರಂದು ಸೊಳ್ಳೆ ದಿನವನ್ನು ಆಚರಿಸಲಾಗುತ್ತದೆ. ಈ ದಿನವನ್ನು ಸರ್ ರೋನಾಲ್ಡ್ ರಾಸ್ ಅವರ ಸ್ಮರಣಾರ್ಥವಾಗಿ ಆಚರಿಸಲಾಗುತ್ತದೆ. ಅವರು 1897ರಲ್ಲಿ ಮಲೇರಿಯಾ ರೋಗವು ಸೊಳ್ಳೆಯಿಂದ ಹರಡುತ್ತದೆ ಎಂದು ಸಾಬೀತುಪಡಿಸಿದರು. ನಂತರ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಮಾತನಾಡಿ ಸಾರ್ವಜನಿಕರಿಗೆ ಮತ್ತು ಆಶಾ ಕಾರ್ಯಕರ್ತರಿಗೆ ಸೊಳ್ಳೆ ದಿನಾಚರಣೆ ಕುರಿತು ಪ್ರತಿಜ್ಞಾ ವಿಧಿಯನ್ನು ಭೋದಿಸಿದರು

ಸೊಳ್ಳೆಗಳಿಂದ ಹರಡುವ ರೋಗಗಳಾದ ಮಲೇರಿಯಾ, ಡೆಂಗೀ, ಚಿಕುನ್‌ಗುನ್ಯ, ಮೆದುಳು ಜ್ವರ ಹಾಗೂ ಆನೆಕಾಲು ರೋಗಗಳಿಂದ ನನ್ನನ್ನು ಹಾಗೂ ನನ್ನ ಕುಟುಂಬವನ್ನು ರಕ್ಷಿಸಲು ನಾನು ಪ್ರತಿಜ್ಞೆ ಮಾಡುತ್ತೇನೆ. ನನ್ನ ಮನೆಯ ಸುತ್ತ-ಮುತ್ತ ನೀರು ನಿಲ್ಲದಂತೆ ಹಾಗೂ ಪರಿಸರದಲ್ಲಿ ಸ್ವಚ್ಛತೆಯನ್ನು ಕಾಯ್ದುಕೊಳ್ಳುತ್ತೇನೆ.

ಸೊಳ್ಳೆ ಕಡಿತದಿಂದ ಪಾರಾಗಲು ಮಲಗುವಾಗ ಸೊಳ್ಳೆ ಪರದೆಯ ಬಳಕೆ ಹಾಗೂ ಇತರ ಸ್ವಯಂ ರಕ್ಷಣಾ ವಿಧಾನಗಳನ್ನು ಅನುಸರಿಸುತ್ತೇನೆ ಮತ್ತು ನೆರೆಹೊರೆಯವರನ್ನೂ ಪ್ರೇರೇಪಿಸುತ್ತೇನೆ. ವೈದ್ಯರು, ಆರೋಗ್ಯ ಸಿಬ್ಬಂದಿ ಹಾಗೂ ಆಶಾ ಸ್ವಯಂ ಸೇವಕರು ತಿಳಿಸುವ ಮುಂಜಾಗ್ರತಾ ಕ್ರಮಗಳನ್ನು ಪಾಲಿಸುತ್ತೇನೆ. ಎಂದು ಪ್ರತಿಜ್ಞಾ ವಿಧಿಯನ್ನು ಭೋದಿಸಿದರು .



ಉದಯವಾಹಿನಿ ಚಿತ್ರ

> ದಿನಾಚರಣೆಯ ಉದ್ದೇಶ ಸೊಳ್ಳೆಯಿಂದ ಹರಡುವ ರೋಗಗಳ ಬಗ್ಗೆ ಜನರಿಗೆ ಜಾಗೃತಿ ಮೂಡಿಸುವುದು. ಮಲೇರಿಯಾ, ಡೆಂಗ್ಯೂ, ಚಿಕುನ್‌ಗುನ್ಯಾ, ಆನೆಕಾಲು, ಮೆದುಳು ಜ್ವರ ಮುಂತಾದ ಸೊಳ್ಳೆಯ ಕಚ್ಚುವಿಕೆಯಿಂದ-ಹರಡುವ ರೋಗಗಳನ್ನು ತಡೆಗಟ್ಟುವ ಬಗ್ಗೆ ತಿಳಿಸುವುದು.ಸೊಳ್ಳೆ ನಿಯಂತ್ರಣ ಕ್ರಮಗಳನ್ನು ಪಾಲಿಸಲು ಸಾರ್ವಜನಿಕರಿಗೆ ಪ್ರೇರಣೆ ನೀಡುವುದು ಮುಖ್ಯವಾಗಿದೆ -ಲಾಲಬ್ ಪಟೇಲ್

## ಗೋಕಾಕ ಪ್ರವಾಹ ಪೀಡಿತ ಪ್ರದೇಶ ವೀಕ್ಷಿಸಿದ ಜಿಲ್ಲಾಧಿಕಾರಿ

• ಉದಯವಾಹಿನಿ ಗೋಕಾಕ

ಘಟಪ್ರಭಾ ಹಾಗೂ ಮಾರ್ಕಂಡೇಯ ನದಿಗಳಿಂದ ಮುಳುಗಡೆ ಆಗುವ ನಾಲ್ಕು ಸೇತುವೆಗಳನ್ನು ಹೊಸದಾಗಿ ನಿರ್ಮಿಸಲು ಉದ್ದೇಶಿಸಲಾಗಿದೆ. ಇದಕ್ಕಾಗಿ ಪ್ರಕೃತಿ ವಿಕೋಪ ಪರಿಹಾರ ನಿಧಿ ಅಡಿ 11 ಕೋಟಿ ಹಣವಿದೆ. ಇದರೊಂದಿಗೆ ಲೋಕೋಪಯೋಗಿ ಇಲಾಖೆಯಿಂದ ಮತ್ತಷ್ಟು ಅನುದಾನ ಪಡೆದು, ಬೇಸಿಗೆಯಲ್ಲಿ ಸೇತುವೆ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು' ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಹೇಳಿದರು. ಘಟಪ್ರಭಾ ನದಿ ಪ್ರವಾಹದಿಂದ ಮುಳುಗಡೆಯಾದ ಇಲ್ಲಿನ ಲೋಳಸೂರ ಸೇತುವೆಯನ್ನು ಪರಿಶೀಲಿಸಿ ಅವರು ಮಾತನಾಡಿದರು. ಲೋಳಸೂರ ಹಾಗೂ ಶಿಂಗಳಾಪುರ ಸೇತುವೆ ಪ್ರತಿವರ್ಷ ಮುಳುಗುತ್ತಿದೆ. ಇದರೊಂದಿಗೆ ಮಾರ್ಕಂಡೇಯ ನದಿಯಿಂದಾಗಿ ಚಿಕ್ಕೋಳಿ ಸೇತುವೆ ಕೂಡ ಮುಳುಗುತ್ತವೆ. ರೈತರು ಹಾಗೂ ಜನರಿಗೆ ಸಾಕಷ್ಟು ನಷ್ಟವಾಗುತ್ತಿರುವುದು ಗಮನಕ್ಕೆ ಬಂದಿದೆ. ಇದರ ಗಂಭೀರತೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರ ಗಮನಕ್ಕೆ ತಂದು ಶಾಶ್ವತ ಪರಿಹಾರವನ್ನು ಇದೇ ವರ್ಷ ಕಂಡುಕೊಳ್ಳಲಾಗುವುದು' ಎಂದರು. ನದಿಗಳ ನೀರು ಏರಿದ್ದರಿಂದ ಗೋಕಾಕ ನಗರದ 200 ಮನೆಗಳಿಗೆ ನೀರು ನುಗ್ಗಿದೆ. ಗೋಕಾಕದ ಮುನ್ಸಿಪಲ್ ಶಾಲೆಯಲ್ಲಿ ತೆರೆದ 2 ಕಾಳಜಿ ಕೇಂದ್ರದಲ್ಲಿ ಜನರಿಗೆ ವ್ಯವಸ್ಥೆ ಮಾಡಲಾಗಿದೆ ಎಂದರು. ಪ್ರತಿವರ್ಷ ಮುಳುಗಡೆಯಾಗುವ ಮನೆಗಳ ಪಟ್ಟಿ ಮಾಡಲಾಗಿದೆ. ಶಾಶ್ವತವಾಗಿ ಸ್ಥಳಾಂತರ ಮಾಡಬೇಕು ಎಂಬುದು ಅವರ ಬಹಳ ವರ್ಷಗಳ ಬೇಡಿಕೆಯಾಗಿದೆ.

ಈ ವಿಚಾರದಲ್ಲಿ ಜಿಲ್ಲಾಡಳಿತ ಸಕಾರಾತ್ಮಕ ಹೆಜ್ಜೆ ಇಡಲಿದೆ. ಪ್ರಸ್ತಾವ ಸಲ್ಲಿಸಲಾಗುವುದು' ಎಂದೂ ಅವರು ಭರವಸೆ ನೀಡಿದರು.

ವಿಳಂಬ ಇಲ್ಲದಂತೆ ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ನಿಯಮಗಳ ರೀತ್ಯ ಪರಿಹಾರ ನೀಡಲು ಕ್ರಮ ವಹಿಸುವಂತೆ ಆದೇಶ

# ಮಳೆ ಹಾನಿ: ಕೂಡಲೇ ಪರಿಹಾರ ನೀಡಲು ಈಶ್ವರ ಖಂಡ್ರೆ ಸೂಚನೆ

• ಉದಯವಾಹಿನಿ ಬೀದರ

ಬೀದರ್ ಜಿಲ್ಲೆಯಲ್ಲಿ ಕಳೆದ 2-3 ದಿನಗಳಿಂದ ಸುರಿದ ಧಾರಾಕಾರ ಮಳೆಯಿಂದ ಕಡಿತಗೊಂಡಿರುವ ರಸ್ತೆ ಮತ್ತು ವಿದ್ಯುತ್ ಸಂಪರ್ಕವನ್ನು ಕೂಡಲೇ ಪುನರ್ ಸ್ಥಾಪಿಸುವಂತೆ ಮತ್ತು ವಿಳಂಬವಿಲ್ಲದೆ ಪರಿಹಾರ ವಿತರಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಜಿಲ್ಲಾಡಳಿತಕ್ಕೆ ಆದೇಶ ನೀಡಿದ್ದಾರೆ.

ವಿಧಾನಮಂಡಳ ಅಧಿವೇಶನ ನಡೆಯುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿರುವ ಸಚಿವರು, ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆದ ತುರ್ತು ಸಭೆಯಲ್ಲಿ, ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯಿತ್ತಿ ಸಿಇಒ, ತಹಶೀಲ್ದಾರ್ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಂದ ಮಳೆ ಹಾನಿಯ ಸ್ಥಿತಿ-ಗತಿ ಮತ್ತು ರಕ್ಷಣೆ ಹಾಗೂ ಪರಿಹಾರ ಕಾಮಗಾರಿಗಳ ಮಾಹಿತಿ ಪಡೆದರು. ಮಳೆ ಮತ್ತು ಪ್ರವಾಹದಂತ ಪರಿಸ್ಥಿತಿಯಿಂದ ಜಾನುವಾರುಗಳು ಮೃತಪಟ್ಟಿದ್ದು, ಮನೆಗಳಿಗೆ ಹಾನಿ ಆಗಿದೆ, ಈ ಬಗ್ಗೆ ಸಮಗ್ರ ವರದಿ ಸಿದ್ಧಪಡಿಸಲು ಮತ್ತು ತಗ್ಗು ಪ್ರದೇಶದ ಮನೆಗಳಿಗೆ ನೀರು ನುಗ್ಗಿ, ದವಸ, ಧಾನ್ಯ, ಬಟ್ಟೆ, ಪಾತ್ರೆ, ಇತ್ಯಾದಿ ಹಾಳಾಗಿರುವ ಪ್ರಕರಣಗಳಲ್ಲಿ ತುರ್ತಾಗಿ 5 ಸಾವಿರ ರೂಪಾಯಿ ಪರಿಹಾರ ನೀಡಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು. ಮನೆಗಳಿಗೆ ಆಗಿರುವ ಹಾನಿಯ ಪ್ರಮಾಣದ ನಿರ್ಧಾರಣೆಯ ಬಗ್ಗೆ ಎಂಜಿನಿಯರುಗಳನ್ನು ತತ್ ಕ್ಷಣವೇ ಕಳುಹಿಸಿ 48 ಗಂಟೆಯೊಳಗೆ ವರದಿ ತರಿಸಿಕೊಂಡು, ವಿಳಂಬ ಇಲ್ಲದಂತೆ ಎನ್.ಡಿ.ಆರ್.ಎಫ್. ಮತ್ತು ಎಸ್ .ಡಿ.ಆರ್.ಎಫ್. ನಿಯಮಗಳ ರೀತ್ಯ ಪರಿಹಾರ ನೀಡಲು ಕ್ರಮ ವಹಿಸುವಂತೆ ಆದೇಶಿಸಿದರು.

ಕೃಷಿ, ತೋಟಗಾರಿಕೆ ಮತ್ತು ರೇಷ್ಮೆ ಬೆಳೆ ಹಾನಿ ಆಗಿದ್ದು, ಈ ಬಗ್ಗೆ ಸಮಗ್ರ ಸಮೀಕ್ಷೆ ನಡೆಸಿ, ವರದಿ ಸಿದ್ಧಪಡಿಸಿ ಸರ್ಕಾರಕ್ಕೆ ಕಳಿಸಲು ಸೂಚಿಸಿದ ಅವರು, ಸೇತುವೆಗಳು ಕುಸಿದು ರಸ್ತೆ ಸಂಪರ್ಕ ಕಳೆದುಕೊಂಡಿರುವ ಗ್ರಾಮಗಳಿಗೆ ತುರ್ತಾಗಿ ಸಂಪರ್ಕ ಕಲ್ಪಿಸಲು ತಿಳಿಸಿದ ಸಚಿವರು ಪುನರ್ ನಿರ್ಮಾಣ ಮಾಡುವ ಅಗತ್ಯ ಇರುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಕೂಡಲೇ ಪ್ರಸ್ತಾವನೆ ಸಲ್ಲಿಸಲು ತಿಳಿಸಿದರು.

ಔರಾದ್, ಕಮಲನಗರ ಸೇರಿದಂತೆ ಹಲವೆಡೆ ಸೇತುವೆಗಳು ಕೊಚ್ಚಿಹೋಗಿದ್ದರೂ, ಕೆಲವರು ಅದೇ ಮಾರ್ಗವಾಗಿ ತಮ್ಮ ಖಾಸಗಿ ವಾಹನದಲ್ಲಿ ಸಂಚರಿಸುತ್ತಿದ್ದು, ಅನಾಹುತ ಸಂಭವಿಸಿದಂತೆ ಪೊಲೀಸ್ ಕಾವಲು ಹಾಕಲು, ತಾತ್ಕಾಲಿಕ ತಡೆಗೋಡೆ ಅಳವಡಿಸಲು ಹಾಗೂ ಸೇತುವೆ ದುರಸ್ತಿಗೆ ತುರ್ತು ಕ್ರಮ ಕೈಗೊಳ್ಳಲು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರಿಗೆ ಸ್ಪಷ್ಟ ನಿರ್ದೇಶನ ನೀಡಿದರು.

**ಸಾಂಕ್ರಾಮಿಕ ರೋಗ ನಿಯಂತ್ರಣಕ್ಕೆ ಸೂಚನೆ:** ಪ್ರವಾಹ ಪರಿಸ್ಥಿತಿ ಉಂಟಾದಾಗ, ಮನೆಗಳಿಗೆ ನೀರು ನುಗ್ಗಿದಾಗ ನಾನಾ ಬಗೆಯ ಸಾಂಕ್ರಾಮಿಕ ರೋಗಗಳು ಕಾಣಿಸಿಕೊಳ್ಳುತ್ತವೆ. ಈ ಹಿನ್ನೆಲೆಯಲ್ಲಿ ಔರಾದ್, ಕಮಲನಗರ ತಾಲ್ಲೂಕು ಸೇರಿದಂತೆ ಜಿಲ್ಲೆಯಲ್ಲಿ ಮಳೆ ನೀರು ನುಗ್ಗಿರುವ ಪ್ರದೇಶಗಳಲ್ಲಿ ಸಮುದಾಯ ಆರೋಗ್ಯದ ಬಗ್ಗೆ ನಿಗಾ ಇಡುವಂತೆ ಸೂಚಿಸಿದರು. ಜಿಲ್ಲೆಯಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರ ಸೇರಿದಂತೆ ಯಾವುದೇ ಆಸ್ಪತ್ರೆ ಸೋರುತ್ತಿದ್ದರೆ, ಗೋಡೆ ಶಿಥಿಲವಾಗಿದ್ದರೆ ರೋಗಿಗಳನ್ನು ಸ್ಥಳಾಂತರಿಸುವಂತೆ ಸೂಚಿಸಿದರು. ನೆರೆಯ ಮಹಾರಾಷ್ಟ್ರದಿಂದ ನದಿಗೆ ನೀರು ಹರಿಯ ಬಿಟ್ಟರೆ ಮತ್ತೆ ಸಮಸ್ಯೆ ಎದುರಾಗುತ್ತದೆ. ಹೀಗಾಗಿ ಕೆಳದಂಡೆಯ ಜನರಿಗೆ ಮುನ್ನೆಚ್ಚರಿಕೆ ನೀಡಲು ಸೂಚಿಸಿದ ಈಶ್ವರ ಖಂಡ್ರೆ, ಕೆಲವೇ ಮನೆಗಳಿರುವ ಕಡೆ ಪದೇ ಪದೇ ಪ್ರವಾಹದಿಂದ ಸಮಸ್ಯೆ ಎದುರಾಗುವುದನ್ನು ತಪ್ಪಿಸಲು ಮತ್ತು ಶಾಶ್ವತ ಪರಿಹಾರ ಕಲ್ಪಿಸಲು ಅವರಿಗೆ ಬೇರೆಡೆ ಸರ್ಕಾರಿ ಜಮೀನು ನೀಡಿ ಸ್ಥಳಾಂತರಿಸಲು ಪ್ರಸ್ತಾವನೆ ಸಲ್ಲಿಸಲು ತಿಳಿಸಿದರು.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯಿತ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಪಾಲ್ಗೊಂಡಿದ್ದರು.

**ಜಿಲ್ಲಾಡಳಿತಕ್ಕೆ ಖಡಕ್ ಆದೇಶ**




### ವಾಟ್ಸ್ ಆ್ಯಪ್ ಮೂಲಕ ಮಾಹಿತಿ ನೀಡಬೇಕು

ಕಳಪೆ ಕಾಮಗಾರಿಯಿಂದ ರಸ್ತೆ, ಸೇತುವೆ ಇತ್ಯಾದಿ ಹಾಳಾಗಿದ್ದರೆ ಆ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸುವಂತೆಯೂ ತಿಳಿಸಿದ ಈಶ್ವರ ಖಂಡ್ರೆ, ಇಂದು ಸಂಜೆ ಅಥವಾ ರಾತ್ರಿಯೊಳಗೆ ವಿದ್ಯುತ್ ಸಂಪರ್ಕಗಳ ಪುನರ್ ಸ್ಥಾಪನೆಗೆ ಕ್ರಮ ಕೈಗೊಳ್ಳಬೇಕು, ಆಗದಿದ್ದರೆ ವಾಟ್ಸ್ ಅಪ್ ಮೂಲಕ ಮಾಹಿತಿ ನೀಡಬೇಕು ಎಂದು ವಿದ್ಯುತ್ ಸರಬರಾಜು ಇಲಾಖೆಗೆ ಸೂಚಿಸಿದರು. ಅಂಗನವಾಡಿ, ಸರ್ಕಾರಿ ಶಾಲೆ ಮತ್ತು ಕಾಲೇಜು ಕಟ್ಟಡಗಳ ಛಾವಣಿಯಲ್ಲಿ ಸೋರಿಕೆ ಆಗುತ್ತಿದ್ದರೆ, ಕೊಠಡಿ ಅಥವಾ ಕಟ್ಟಡ ಶಿಥಿಲವಾಗಿದ್ದರೆ ಕೂಡಲೇ ಸ್ಥಳಾಂತರಕ್ಕೆ ಕ್ರಮ ಕೈಗೊಳ್ಳಲು ಮತ್ತು ಈ ಬಗ್ಗೆ ಸಮಗ್ರ ಮಾಹಿತಿ ತರಿಸಿಕೊಂಡು ವರದಿ ಸಲ್ಲಿಸಲು ತಿಳಿಸಿದ ಸಚಿವರು, ಯಾವುದೇ ಶಾಲೆಯಲ್ಲಿ ದುರಂತ ಸಂಭವಿಸಿದರೆ ಸಂಬಂಧಿತ ಶಾಲಾ ಶಿಕ್ಷಣ ಅಧಿಕಾರಿಗಳನ್ನೇ ಹೊಣೆ ಮಾಡುವುದಾಗಿ ಎಚ್ಚರಿಸಿದರು.

### ರಷ್ಯಾ-ಉಕ್ರೇನ್ ಶಾಂತಿ ಒಪ್ಪಂದ ಮಾಡಿಸಿದರೆ ಸ್ವರ್ಗಕ್ಕೆ ಹೋಗುತ್ತೇನೆ; ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್

# ರಷ್ಯಾ-ಉಕ್ರೇನ್ ಒಪ್ಪಂದದ ಬಗ್ಗೆ ಭಾವನಾತ್ಮಕ ಹೇಳಿಕೆ ನೀಡಿದ ಟ್ರಂಪ್

**ವಾಷಿಂಗ್ಟನ್:** ರಷ್ಯಾ-ಉಕ್ರೇನ್ ಯುದ್ಧ ನಿಲ್ಲಿಸಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಗಲಿರುಳೂ ಶ್ರಮಿಸುತ್ತಿದ್ದಾರೆ. ಉಭಯ ದೇಶಗಳ ನಡುವೆ ಶಾಂತಿ ಒಪ್ಪಂದ ಮಾಡಿಸುವಲ್ಲಿ ಟ್ರಂಪ್ ಅವರ ಪ್ರಯತ್ನಗಳು ಜಾಗತಿಕ ಮಟ್ಟದಲ್ಲಿ ಗಮನ ಸೆಳೆಯುತ್ತಿವೆ. ಈ ಮಧ್ಯೆ, ರಷ್ಯಾ-ಉಕ್ರೇನ್ ಕದನ ವಿರಾಮ ಒಪ್ಪಂದದ ಕುರಿತು ಭಾವುಕರಾಗಿ ಮಾತನಾಡಿರುವ ಡೊನಾಲ್ಡ್ ಟ್ರಂಪ್, ಉಕ್ರೇನ್ ಶಾಂತಿ ಒಪ್ಪಂದವು ನಾನು ಸ್ವರ್ಗಕ್ಕೆ ಹೋಗುವ ಸಾಧ್ಯತೆಗಳನ್ನು ಹೆಚ್ಚಿಸುತ್ತದೆ ಎಂದು ಹೇಳಿದ್ದಾರೆ.



ಉಕ್ರೇನ್‌ನಲ್ಲಿ ಶಾಂತಿ ನೆಲೆಸುವಂತೆ ಮಾಡುವಲ್ಲಿ ಯಶಸ್ವಿಯಾದರೆ, ನಾನು ಸ್ವರ್ಗಕ್ಕೆ ಹೋಗುವ ಸಾಧ್ಯತೆ ಹೆಚ್ಚಿರುತ್ತದೆ. ನಾನು ಮುತ್ತಿನ ದ್ವಾರದ ಮೂಲಕ ಸ್ವರ್ಗವನ್ನು ತಲುಪುವ ಸಾಧ್ಯತೆಗಳು ಪ್ರಸ್ತುತ ಕಡಿಮೆ ಇದೆ ಎಂದು ಅಮೆರಿಕ ಅಧ್ಯಕ್ಷರು ಫಾಕ್ಸ್ ನ್ಯೂಸ್‌ಗೆ ನೀಡಿದ ಸಂದರ್ಶನದಲ್ಲಿ ಹೇಳಿದ್ದಾರೆ. ಡೊನಾಲ್ಡ್ ಟ್ರಂಪ್ ಅವರ ಈ ಹೇಳಿಕೆಯನ್ನು ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೀವಿಟ್ ಕೂಡ ಪುನರುಚ್ಚರಿಸಿದ್ದು, ಅಧ್ಯಕ್ಷರು ಈ ವಿಚಾರದಲ್ಲಿ ನಿಜವಾಗಿಯೂ ಗಂಭೀರವಾಗಿದ್ದಾರೆ.

> 2024ರ ಅಧ್ಯಕ್ಷೀಯ ಚುನಾವಣೆ ಪ್ರಚಾರ ಸಂದರ್ಭದಲ್ಲಿ, ಪೆನ್ಸಿಲ್ವೇನಿಯಾದ ಬಟ್ಲರ್‌ನಲ್ಲಿ ಡೊನಾಲ್ಡ್ ಟ್ರಂಪ್ ಅವರ ಹತ್ಯಾಯತ್ನ ನಡೆದಿತ್ತು. ಈ ಘಟನೆ ಬಳಿಕ ಟ್ರಂಪ್ ಹೆಚ್ಚು ಧಾರ್ಮಿಕ ಸ್ವರವನ್ನು ಅಳವಡಿಸಿಕೊಂಡಿದ್ದಾರೆ. ಜನವರಿಯಲ್ಲಿ ನಡೆದ ತಮ್ಮ ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಮಾತನಾಡಿದ್ದ ಟ್ರಂಪ್, ಅಮೆರಿಕವನ್ನು ಮತ್ತೆ ಶ್ರೇಷ್ಠಗೊಳಿಸಲು ದೇವರು ನನ್ನನ್ನು ರಕ್ಷಿಸಿದ್ದಾನೆ.
> **ಡೊನಾಲ್ಡ್ ಟ್ರಂಪ್**, ಅಮೆರಿಕ ಅಧ್ಯಕ್ಷ

ಉಕ್ರೇನ್‌ನಲ್ಲಿ ಶಾಂತಿ ನೆಲೆಸುವಂತೆ ಮಾಡುವುದು ಅವರ ಪ್ರಾಥಮಿಕ ಆದ್ಯತೆಯಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ನೊಬೆಲ್ ಶಾಂತಿ ಪ್ರಶಸ್ತಿ ಗೆಲ್ಲುವ ಪ್ರಯತ್ನದ ಭಾಗವಾಗಿ ಉಕ್ರೇನ್‌ನಲ್ಲಿ ರಷ್ಯಾದ ಯುದ್ಧವನ್ನು ಕೊನೆಗೊಳಿಸಲು ಬಯಸುತ್ತೇನೆ ಎಂದು 79 ವರ್ಷದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಈ ಹಿಂದೆ ಹೇಳಿದ್ದರು. ಇದೀಗ ಸ್ವರ್ಗಕ್ಕೆ ಹೋಗುವ ಇಚ್ಛೆಯಿಂದ ತಾನು ರಷ್ಯಾ-ಉಕ್ರೇನ್ ನಡುವೆ ಶಾಂತಿ ಒಪ್ಪಂದ ಮಾಡಿಸಲು ಪ್ರಯತ್ನಿಸುತ್ತಿರುವುದಾಗಿ ಅವರು ಪ್ರತಿಪಾದಿಸಿದ್ದಾರೆ. ಸಾಂಪ್ರದಾಯಿಕ ಮಾನದಂಡಗಳ ಪ್ರಕಾರ ಮೂರು ಬಾರಿ ವಿವಾಹವಾಗಿರುವ ಮತ್ತು ಎರಡು ಬಾರಿ ದೋಷಾರೋಪಣೆಗೆ ಗುರಿಯಾಗಿರುವ ಡೊನಾಲ್ಡ್ ಟ್ರಂಪ್ ಸಂತರಲ್ಲ, ಹಲವಾರು ಹಗರಣಗಳಲ್ಲಿ ಟ್ರಂಪ್ ಹೆಸರು ಕೇಳಿಬಂದಿದ್ದು, ಕ್ರಿಮಿನಲ್ ಶಿಕ್ಷೆಗೊಳಗಾದ ಮೊದಲ ಅಮೆರಿಕನ್ ಅಧ್ಯಕ್ಷ ಎಂಬ ಅಪಖ್ಯಾತಿಯೂ ಅವರ ಹೆಗಲೇರಿದೆ.

ಅಮೆರಿಕದ ಧಾರ್ಮಿಕ ಬಲಪಂಥೀಯರಿಂದ ಬಲವಾದ ಬೆಂಬಲವನ್ನು ಹೊಂದಿರುವ ಡೊನಾಲ್ಡ್ ಟ್ರಂಪ್, ತಮ್ಮ ಎರಡನೇ ಅಧ್ಯಕ್ಷೀಯ ಅವಧಿಯಲ್ಲಿ ಧಾರ್ಮಿಕ ನಂಬಿಕೆಯನ್ನು ಬಲವಾಗಿ ಸ್ವೀಕರಿಸಿದ್ದಾರೆ. ಅಧ್ಯಕ್ಷರು ಪೌಲಾ ವೈಟ್ ಎಂಬ ಅಧಿಕೃತ ಆಧ್ಯಾತ್ಮಿಕ ಸಲಹೆಗಾರರನ್ನು ನೇಮಿಸಿಕೊಂಡಿದ್ದು, ಶ್ವೇತಭವನದಲ್ಲಿ ಹಲವಾರು ಪ್ರಾರ್ಥನಾ ಸಭೆಗಳನ್ನು ಕೂಡ ಆಯೋಜಿಸಿದ್ದಾರೆ.

ರಷ್ಯಾ-ಉಕ್ರೇನ್ ನಡುವೆ ಕದನ ವಿರಾಮ ಒಪ್ಪಂದ ಜಾರಿ ಮಾಡಿಸುವ ಉದ್ದೇಶದಿಂದ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಅಲಾಸ್ಕಾದಲ್ಲಿ ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರನ್ನು ಮತ್ತು ಶ್ವೇತಭವನದಲ್ಲಿ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಟ್ರಂಪ್-ಪುಟಿನ್ ಅಲಾಸ್ಕಾ ಸಭೆ ಯಾವುದೇ ಅಂತಿಮ ನಿರ್ಧಾರ ತೆಗೆದುಕೊಳ್ಳುವಲ್ಲಿ ವಿಫಲವಾಗಿದ್ದರೂ, ಇಬ್ಬರೂ ನಾಯಕರು ಸಭೆ ಯಶಸ್ವಿಯಾಗಿದೆ ಎಂದು ಹೇಳಿದ್ದಾರೆ.

**ಜಾಗತಿಕ ಮಟ್ಟದಲ್ಲಿ ಗಮನ**

**ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಸ್ವರ್ಗಕ್ಕೆ ಹೋಗುವ ಇಚ್ಛೆಯಿಂದ ರಷ್ಯಾ-ಉಕ್ರೇನ್ ನಡುವೆ ಶಾಂತಿ ಒಪ್ಪಂದ ಮಾಡಿಸಲು ಪ್ರಯತ್ನಿಸುತ್ತಿದ್ದಾರಂತೆ. ಹೀಗಂತ ಖುದ್ದು ಟ್ರಂಪ್ ಅವರೇ ಹೇಳಿಕೊಂಡಿದ್ದು, ಉಕ್ರೇನ್‌ನಲ್ಲಿ ಶಾಂತಿ ನೆಲೆಸುವಂತೆ ಮಾಡಿದರೆ ನಾನು ಸ್ವರ್ಗಕ್ಕೆ ಹೋಗುವ ಸಾಧ್ಯತೆ ಹೆಚ್ಚಾಗಿರುತ್ತದೆ ಎಂದು ಹೇಳಿದ್ದಾರೆ. ಡೊನಾಲ್ಡ್ ಟ್ರಂಪ್ ಭಾವನಾತ್ಮಕವಾಗಿ ಮಾತನಾಡುವುದು ವಿರಳ. ಅಂತದ್ದರಲ್ಲಿ ಉಕ್ರೇನ್ ಶಾಂತಿಗೆ ಸಂಬಂಧಿಸಿದಂತೆ ಅವರ ಭಾವುಕ ನುಡಿಗಳು ಇದೀಗ ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ.**

## ಭೀಕರ ಅಪಘಾತದಲ್ಲಿ ಬಸ್‌ಗೆ ಬೆಂಕಿ ಹೊತ್ತಿಕೊಂಡು 73 ಜನ ಸಾವು

**ಕಾಬೂಲ್:** ಪಶ್ಚಿಮ ಅಫ್ಘಾನಿಸ್ತಾನದಲ್ಲಿ ನಡೆದ ಅಪಘಾತದಲ್ಲಿ ಬಸ್‌ಗೆ ಬೆಂಕಿ ಹೊತ್ತಿಕೊಂಡು 17 ಮಕ್ಕಳು ಸೇರಿ 73 ಜನರು ಸಾವನ್ನಪ್ಪಿದ್ದಾರೆ. ಅವರಲ್ಲಿ ಹೆಚ್ಚಿನವರು ಇರಾನ್‌ನಿಂದ ಗಡೀಪಾರು ಮಾಡಲಾದ ಅಫ್ಘಾನ್ ವಲಸಿಗರು ಎಂದು ಮೂಲಗಳು ತಿಳಿಸಿವೆ. ಕಾಬೂಲ್‌ಗೆ ಹೋಗುವ ಮಾರ್ಗದಲ್ಲಿ ಕಳೆದ ರಾತ್ರಿ ಹೆರಾತ್ ಪ್ರಾಂತ್ಯದಲ್ಲಿ ಟ್ರಕ್, ಮೋಟಾರ್ ಸೈಕಲ್‌ಗೆ ಡಿಕ್ಕಿ ಹೊಡೆದ ನಂತರ ಬಸ್ ಬೆಂಕಿಗೆ ಆಹುತಿಯಾಗಿದೆ ಎಂದು ಹೆರಾತ್‌ನಲ್ಲಿ ಇರುವ ತಾಲಿಬಾನ್‌ನ ಮಾಹಿತಿ ಮತ್ತು ಸಂಸ್ಕೃತಿ ನಿರ್ದೇಶಕ ಅಹದುಲ್ಲಾ ಮೊಟ್ಟಾಕಿ ಹೇಳಿದ್ದಾರೆ.



ಬಸ್‌ನಲ್ಲಿದ್ದ ಎಲ್ಲರೂ ಸಾವನ್ನಪ್ಪಿದ್ದಾರೆ, ಜೊತೆಗೆ ಇತರ ವಾಹನಗಳ ಇಬ್ಬರು ಸಾವನ್ನಪ್ಪಿದ್ದಾರೆ ಎಂದು ಅವರು ಹೇಳಿದರು. ಇತ್ತೀಚಿನ ತಿಂಗಳುಗಳಲ್ಲಿ ಇರಾನ್‌ನಲ್ಲಿ ನಡೆಯುತ್ತಿರುವ ಸಂಘರ್ಷದಾಗಿ ದಾಖಲೆರಹಿತ ಅಫ್ಘಾನ್ ವಲಸಿಗರನ್ನು ಗಡೀಪಾರು ಮಾಡುವ ಪ್ರಕ್ರಿಯೆಯನ್ನು ಹೆಚ್ಚಿಸಿದೆ. ಎಲ್ಲಾ ಪ್ರಯಾಣಿಕರು ಅಫ್ಘಾನಿಸ್ತಾನ-ಇರಾನ್ ಗಡಿಯ ಬಳಿಯ ಇಸ್ಲಾಂ ಕ್ವಾಲಾಪಟ್ಟಣದಲ್ಲಿ ವಾಹನ ಹತ್ತಿದ ವಲಸಿಗರು ಎಂದು ಪ್ರಾಂತೀಯ ಗವರ್ನರ್ ವಕ್ತಾರ ಮೊಹಮ್ಮದ್ ಯೂಸುಫ್ ಸಯೀದಿ ಸುದ್ದಿ ಸಂಸ್ಥೆಗೆ ತಿಳಿಸಿದರು, ಪಟ್ಟಣವನ್ನು ಉಲ್ಲೇಖಿಸಿ.

ಹೆರಾತ್ ಪೊಲೀಸರು ಬಸ್ ಚಾಲಕನ ಅತಿಯಾದ ವೇಗ, ನಿರ್ಲಕ್ಷ್ಯ ದಿಂದಾಗಿ ಅಪಘಾತ ಸಂಭವಿಸಿದೆ ಎಂದು ವರದಿ ಮಾಡಿದೆ.1970 ರ ದಶಕದಿಂದ, ಲಕ್ಷಾಂತರ ಆಫ್ಘನ್ನರು ಇರಾನ್ ಮತ್ತು ಪಾಕಿಸ್ತಾನಕ್ಕೆ ಪಲಾಯನ ಮಾಡಿದ್ದಾರೆ, 1979 ರಲ್ಲಿ ಸೋವಿಯತ್ ಅಫ್ಘಾನಿಸ್ತಾನದ ಆಕ್ರಮಣದ ಸಮಯದಲ್ಲಿ ಮತ್ತು 2021 ರಲ್ಲಿ ತಾಲಿಬಾನ್ ಅಧಿಕಾರಕ್ಕೆ ಮರಳಿದ ನಂತರ ದೊಡ್ಡ ಮಟ್ಟದಲ್ಲಿ ನೆರೆ ದೇಶಕ್ಕೆ ಹೋಗಿದ್ದಾರೆ.

ಇದು ಇರಾನ್‌ನಲ್ಲಿ ಬೆಳೆಯುತ್ತಿರುವ ಅಫ್ಘಾನ್ ವಿರೋಧಿ ಭಾವನೆಗೆ ಕಾರಣವಾಗಿದೆ, ನಿರಾಶ್ರಿತರು ವ್ಯವಸ್ಥಿತ ತಾರತಮ್ಯವನ್ನು ಎದುರಿಸುತ್ತಿದ್ದಾರೆ.

ದಾಖಲೆರಹಿತ ಆಫ್ಘನ್ನರು ಸ್ವಯಂಪ್ರೇರಣೆಯಿಂದ ಹೊರಡಲು ಇರಾನ್ ಈ ಹಿಂದೆ ಜುಲೈನಲ್ಲಿ ಗಡುವನ್ನು ನೀಡಿತ್ತು. ಆದರೆ ಜೂನ್‌ನಲ್ಲಿ ಇಸ್ರೇಲ್‌ನೊಂದಿಗಿನ ಸಂಕ್ಷಿಪ್ತ ಯುದ್ಧದ ನಂತರ, ಇರಾನಿನ ಅಧಿಕಾರಿಗಳು ರಾಷ್ಟ್ರೀಯ ಭದ್ರತಾ ಕಾಳಜಿಗಳನ್ನು ಆರೋಪಿಸಿ ಲಕ್ಷಾಂತರ ಆಫ್ಘನ್ನರನ್ನು ಬಲವಂತವಾಗಿ ಹಿಂದಿರುಗಿಸಿದ್ದಾರೆ.

ಜನವರಿಯಿಂದ 1.5 ಮಿಲಿಯನ್‌ಗಿಂತಲೂ ಹೆಚ್ಚು ಆಫ್ಘನ್ನರು ಇರಾನ್ ತೊರೆದಿದ್ದಾರೆ ಎಂದು ಯುಎನ್ ನಿರಾಶ್ರಿತರ ಸಂಸ್ಥೆ ತಿಳಿಸಿದೆ ಇದರಲ್ಲಿ ಕೆಲವರು ತಲೆಮಾರುಗಳಿಂದ ಇರಾನ್‌ನಲ್ಲಿದ್ದರು ಎಂದಿದೆ. ತಾಲಿಬಾನ್ ಸರ್ಕಾರದ ಅಡಿಯಲ್ಲಿ ದೇಶಕ್ಕೆ ಬಲವಂತವಾಗಿ ಹಿಂದಿರುಗಿದ ಪ್ರಜೆಗಳ ಸಂಖ್ಯೆ ಹೆಚ್ಚುತ್ತಿರುವುದನ್ನು ನಿಭಾಯಿಸುವ ಸಾಮರ್ಥ್ಯ ಅಫ್ಘಾನಿಸ್ತಾನಕ್ಕೆ ಇಲ್ಲ ಎಂದು ತಜ್ಞರು ಎಚ್ಚರಿಸಿದ್ದಾರೆ. ಪಾಕಿಸ್ತಾನದಿಂದ ಹಿಂದಿರುಗಿದವರ ದೊಡ್ಡ ಒಳಹರಿವಿನೊಂದಿಗೆ ದೇಶವು ಈಗಾಗಲೇ ಹೋರಾಡುತ್ತಿದೆ.

## ಕ್ರಿಮಿನಲ್ ಆರೋಪದಲ್ಲಿ ಬಂಧಿತ ಪಿಎಂ, ಸಿಎಂ ಪದಚ್ಯುತಗೊಳಿಸುವ ಮಸೂದೆಗೆ ಮಮತಾ ಖಂಡನೆ

**ಕೋಲ್ಕತ್ತ:** ಕ್ರಿಮಿನಲ್ ಆರೋಪದ ಮೇಲೆ ಬಂಧಿತರಾದ ಪ್ರಧಾನಿ, ಸಿಎಂ, ಮಂತ್ರಿಗಳನ್ನು ಪದಚ್ಯುತಗೊಳಿಸುವ ಸಾಂವಿಧಾನಿಕ ತಿದ್ದುಪಡಿ ಮಸೂದೆಯನ್ನು ಪಶ್ಚಿಮ ಬಂಗಾಳ ಸಿಎಂ ಮಮತಾ ಬ್ಯಾನರ್ಜಿ ಬುಧವಾರ ಖಂಡಿಸಿದ್ದಾರೆ. ಇದು ಭಾರತದಲ್ಲಿ ಪ್ರಜಾಪ್ರಭುತ್ವ ಯುಗವನ್ನು ಶಾಶ್ವತವಾಗಿ ಕೊನೆಗೊಳಿಸುತ್ತದೆ ಎಂದು ಆರೋಪಿಸಿದ್ದಾರೆ.



ಈ ಕುರಿತಂತೆ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, ತಿದ್ದುಪಡಿ ಮಸೂದೆಯು ತುರ್ತು ಪರಿಸ್ಥಿತಿಗಿಂತ ದೊಡ್ಡದಾಗಿದೆ, ದೇಶದ ನ್ಯಾಯಾಂಗದ ಸ್ವಾತಂತ್ರ್ಯವನ್ನು ಅಂತ್ಯಗೊಳಿಸುತ್ತದೆ ಎಂದು ಹೇಳಿದ್ದಾರೆ. ಗಂಭೀರ ಕ್ರಿಮಿನಲ್ ಆರೋಪಗಳ ಮೇಲೆ ಬಂಧಿಸಲ್ಪಟ್ಟ ಪ್ರಧಾನಿ, ಸಿಎಂ, ಮಂತ್ರಿಗಳನ್ನು 30 ದಿನಗಳ ಕಾಲ ಪದಚ್ಯುತಗೊಳಿಸುವ ಮೂರು ಮಸೂದೆಗಳನ್ನು ಕೇಂದ್ರ ಸಚಿವ ಅಮಿತ್ ಶಾ ಬುಧವಾರ ಲೋಕಸಭೆಯಲ್ಲಿ ಮಂಡಿಸಿದ್ದು, ಇದಕ್ಕೆ ವಿರೋಧ ಪಕ್ಷಗಳಿಂದ ತೀವ್ರ ವಿರೋಧ ವ್ಯಕ್ತವಾಗಿದೆ. ಬಳಿಕ, ಈ ಕರಡು ಮಸೂದೆಗಳನ್ನು ಸಂಸತ್ತಿನ ಜಂಟಿ ಸಮಿತಿಗೆ ಒಪ್ಪಿಸಲಾಗಿದೆ.


130ನೇ ಸಾಂವಿಧಾನಿಕ ತಿದ್ದುಪಡಿ ಮಸೂದೆಯನ್ನು ನಾನು ಖಂಡಿಸುತ್ತೇನೆ. ಇದು ತುರ್ತು ಪರಿಸ್ಥಿತಿಯನ್ನೂ ಮೀರಿದ್ದಾಗಿದೆ. ಭಾರತದ ಪ್ರಜಾಪ್ರಭುತ್ವ ಯುಗವನ್ನು ಶಾಶ್ವತವಾಗಿ ಕೊನೆಗೊಳಿಸುವ ಒಂದು ಹೆಜ್ಜೆ ಯಾಗಿದೆ ಎಂದು ನಾನು ಖಂಡಿಸುತ್ತೇನೆ. ಈ ಕಠಿಣ ಹೆಜ್ಜೆ ಭಾರತದಲ್ಲಿ ಪ್ರಜಾಪ್ರಭುತ್ವ ಮತ್ತು ಒಕ್ಕೂಟ ವ್ಯವಸ್ಥೆಗೆ ಅಂತ್ಯಕಾಲವಾಗಿದೆ ಎಂದಿದ್ದಾರೆ. ಪ್ರಜಾಪ್ರಭುತ್ವವನ್ನು ಉಳಿಸಲು ಯಾವುದೇ ಬೆಲೆ ತೆತ್ತಾದರೂ ಮಸೂದೆಯನ್ನು ವಿರೋಧಿಸಬೇಕು ಎಂದು ಅವರು ಪ್ರತಿಪಾದಿಸಿದ್ದಾರೆ.

ಈ ಮಸೂದೆಯನ್ನು ಜನಾದೇಶದ ಮೇಲೆ ಹಸ್ತಕ್ಷೇಪ ಮಾಡಲು ಜಾರಿ ನಿರ್ದೇಶನಾಲಯ ಮತ್ತು ಸಿಬಿಐನಂತಹ ಸಂಸ್ಥೆಗಳ ಚುನಾಯಿತವಲ್ಲದ ಅಧಿಕಾರಿಗಳಿಗೆ ಚುನಾಯಿತ ರಾಜ್ಯ ಸರ್ಕಾರಗಳ ಕಾರ್ಯನಿರ್ವಹಣೆಯಲ್ಲಿ ಹಸ್ತಕ್ಷೇಪ ಮಾಡಲು ವ್ಯಾಪಕ ಅಧಿಕಾರವನ್ನು ಹಸ್ತಾಂತರಿಸಲು ಕೇಂದ್ರ ಸರ್ಕಾರವನ್ನು ಸಬಲೀಕರಣಗೊಳಿಸಲು ರಚಿಸಲಾಗಿದೆಎಂದು ಮಮತಾ ದೂರಿದ್ದಾರೆ.

# ಅಮರಾವತಿ ನಿರ್ಮಾಣ ಹೊಣೆ ಸಿಂಗಾಪುರದ ಹೆಗಲಿಗೆ

**ಹೈದರಾಬಾದ್:** ಆರು ವರ್ಷಗಳ ನಂತರ ಆಂಧ್ರ ಪ್ರದೇಶ ರಾಜಧಾನಿ ಅಮರಾವತಿ ನಿರ್ಮಾಣ ಕಾರ್ಯಗಳು ಪುನರಾರಂಭಗೊಳ್ಳುತ್ತಿದೆ. ಅಮರಾವತಿ ರೂಪಿಸುವ ಹೊಣೆಯನ್ನು ಸಿಂಗಾಪುರಕ್ಕೆ ವಹಿಸಿಕೊಡುವ ಸಾಧ್ಯತೆಗಳಿದ್ದು, ಹೊಸ ಅಮರಾವತಿ ನಿರ್ಮಾಣಕ್ಕೆ ಮತ್ತೆ ಚಾಲನೆ ಸಿಗುತ್ತಿದೆ. 2019ರಲ್ಲಿ, ವೈಎಸ್‌ಆರ್ ಕಾಂಗ್ರೆಸ್ ಗೆಲುವಿನ ನಂತರ, ಅಮರಾವತಿ ನಿರ್ಮಾಣ ಕಾರ್ಯಕ್ಕೆ ಹಿನ್ನಡೆಯಾಗಿತ್ತು.

2024 ರಲ್ಲಿ ಎನ್ ಚಂದ್ರಬಾಬು ನಾಯ್ಡು ಅವರ ತೆಲುಗು ದೇಶಂ ಪಕ್ಷದ ಮರಳುವಿಕೆಯು ಪುನರ್ರಚನೆಗೆ ಬಾಗಿಲು ತೆರೆದಿದೆ. ಅಮರಾವತಿ ಮತ್ತು ಹೂಡಿಕೆದಾರರ ನಂಬಿಕೆಯನ್ನು ಪುನಃಸ್ಥಾಪಿಸಲು ನಿರ್ಧರಿಸಿದ ನಾಯ್ಡು ಮತ್ತು ಅವರ ಮಗ, ಐಟಿ, ಕೈಗಾರಿಕಾ ಸಚಿವ ನಾರಾ ಲೋಕೇಶ್, ಅದರ ನಾಯಕತ್ವವನ್ನು ಮನವೊಲಿಸಲು ಕಳೆದ ತಿಂಗಳ ಕೊನೆಯಲ್ಲಿ ಸಿಂಗಾಪುರಕ್ಕೆ ಭೇಟಿ ನೀಡಿದರು.



ಈ ಸಂಪರ್ಕವು ಉದ್ದೇಶಪೂರ್ವಕ ಮತ್ತು ವೈಯಕ್ತಿಕವಾಗಿತ್ತು. ಲೀ ಕುವಾನ್ ಯೂ ಕುಟುಂಬದೊಂದಿಗಿನ ತಮ್ಮ ದೀರ್ಘ ಸಂಬಂಧವನ್ನು ನಾಯ್ಡು ಅವರು ಬಳಸಿಕೊಂಡರು, ಲೋಕೇಶ್ ಜೊತೆಗೆ ಎಲ್‌ಕೆವೈ ಅವರ ಮಗನನ್ನೂ ಭೇಟಿಯಾದರು. ಭೇಟಿಯ ಸಮಯದಲ್ಲಿ, ಆಂಧ್ರ ನಿಯೋಗವು ಸಿಂಗಾಪುರದ ವಿದೇಶಾಂಗ ಸಚಿವರು, ಅಧ್ಯಕ್ಷರನ್ನು ಭೇಟಿಯಾಗಿ, ಪಾಲುದಾರಿಕೆಯನ್ನು ಆಂಧ್ರಪ್ರದೇಶದ ಬೆಳವಣಿಗೆಯ ಕಥೆಯ ಕೇಂದ್ರಬಿಂದುವಾಗಿ ರೂಪಿಸಿತು. ಸಭೆಗಳ ನಂತರ, ಗಮನಾರ್ಹ ಸಾರ್ವಜನಿಕ ಸಂಕೇತದಲ್ಲಿ, ಸಿಂಗಾಪುರ ಸರ್ಕಾರವು ಲಿಂಕ್ಡ್‌ಇನ್‌ನಲ್ಲಿ ಅಮರಾವತಿಯೊಳಗೆ ವಿಭಿನ್ನ ಸ್ವರೂಪ ದಲ್ಲಿ ಮತ್ತೆ ಪ್ರವೇಶಿಸುತ್ತಿದೆ ಎಂದು ಪೋಸ್ಟ್ ಮಾಡಿತು.

ಹೊಸ ಸ್ವರೂಪ ಈ ಬಾರಿ, ಸಿಂಗಾಪುರ ಅಮರಾವತಿಯ ಬೀಜ ಬಂಡವಾಳ ಯೋಜನೆಯಲ್ಲಿ ನೇರವಾಗಿ ಹೂಡಿಕೆ ಮಾಡುವುದಿಲ್ಲ. ಬದಲಾಗಿ, ಪಾಲುದಾರಿಕೆ ವಿಶಾಲ ಹೆಚ್ಚು ವೈವಿಧ್ಯಮಯವಾಗಿರುತ್ತದೆ. ಅಮರಾವತಿಗೆ ನಗರ ಯೋಜನೆ, ತಂತ್ರಜ್ಞಾನ ನೆರವು, ರಾಜ್ಯಾದ್ಯಂತ ಮೂಲಸೌಕರ್ಯ, ಲಾಜಿಸ್ಟಿಕ್ಸ್ ಹೂಡಿಕೆಗಳಿಗೆ ಪ್ರಚೋದನೆ, ಪ್ರಮುಖ ಹಣಕಾಸು ಬದ್ಧತೆಯ ಮೇಲೆ ಗಮನ ಹರಿಸಲಾಗುವುದು. ಆಂಧ್ರಪ್ರದೇಶದಲ್ಲಿ 45,000 ಕೋಟಿ ರೂ. ಹೂಡಿಕೆ ಮಾಡಲು ಸಿಂಗಾಪುರದ ಸಾರ್ವಭೌಮ ಸಂಪತ್ತು ನಿಧಿ, ಜಿಐಸಿ ಜೊತೆ ಈಗಾಗಲೇ ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ಸಿಂಗಾಪುರ ಭೇಟಿಯ ನಂತರ, ಲೋಕೇಶ್ ದೆಹಲಿಗೆ ಪ್ರಯಾಣ ಬೆಳೆಸಿ ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರನ್ನು ಭೇಟಿ ಮಾಡಿ ಚರ್ಚೆಗಳ ಬಗ್ಗೆ ವಿವರಿಸಿದರು. ಪಶ್ಚಿಮದಲ್ಲಿ ಹೆಚ್ಚುತ್ತಿರುವ ಅನಿಶ್ಚಿತತೆಗಳೊಂದಿಗೆ ಟ್ರಂಪ್ ಯುಗದ ಹೊಸ ಸುಂಕಗಳ ಸಾಧ್ಯತೆಯೂ ಸೇರಿದಂತೆ ದೆಹಲಿ ಪೂರ್ವ ಏಷ್ಯಾದೊಂದಿಗೆ ಸಂಬಂಧಗಳನ್ನು ಬಲಪಡಿಸಲು ಉತ್ಸುಕವಾಗಿದೆ. ಕೇಂದ್ರವು ಬೆಂಬಲ ನೀಡಿದೆ, ಶೀಘ್ರದಲ್ಲೇ ಔಪಚಾರಿಕ ಘೋಷಣೆಯನ್ನು ನಿರೀಕ್ಷಿಸಲಾಗಿದೆ ಎಂದು ಮೂಲಗಳು ಹೇಳುತ್ತವೆ.

## ಚರ್ಚ್, ಮಸೀದಿ ತಂಟೆಗೆ ಹೋಗದ ಸರ್ಕಾರ ದೇವಾಲಯ ವಿಚಾರಕ್ಕೂ ಬರಬಾರದು ; ರಾಮಭದ್ರಾಚಾರ್ಯ

**ಮಥುರಾ:** ಖ್ಯಾತ ರಾಮಕಥಾ ನಿರೂಪಕ, ಪದ್ಮವಿಭೂಷಣ ಪ್ರಶಸ್ತಿ ಪುರಸ್ಕೃತ ಜಗದ್ಗುರು ರಾಮಭದ್ರಾಚಾರ್ಯ ಅವರು ವೃಂದಾವನದ ಠಾಕೂರ್ ಬಂಕೆ ಬಿಹಾರಿ ದೇವಾಲಯದ ನಿಯಂತ್ರಣವನ್ನು ತೆಗೆದುಕೊಳ್ಳುವ ಉತ್ತರ ಪ್ರದೇಶ ಸರ್ಕಾರದ ಕ್ರಮವನ್ನು ಪ್ರಶ್ನಿಸಿ, ಮಸೀದಿಗಳು, ಚರ್ಚ್‌ಗಳ ವಿರುದ್ಧ ಕ್ರಮ ಕೈಗೊಳ್ಳಲು ಸಾಧ್ಯವಾಗದಿದ್ದರೆ ದೇವಾಲಯಗಳನ್ನು ಅಂತಹ ಕ್ರಮಗಳಿಂದ ರಕ್ಷಿಸಬೇಕು ಎಂದು ಕೇಳಿಕೊಂಡಿದ್ದಾರೆ.



> **ದೇವಾಲಯಕ್ಕಾಗಿ ಟ್ರಸ್ಟ್ ಸ್ಥಾಪಿಸುವ ಮತ್ತು ಬಂಕೆ ಬಿಹಾರಿ ಕಾರಿಡಾರ್ ಅನ್ನು ಅಭಿವೃದ್ಧಿಪಡಿಸುವ ರಾಜ್ಯ ಸರ್ಕಾರದ ಯೋಜನೆಗೆ ಅವರು ತೀವ್ರ ಅಸಮ್ಮತಿ ವ್ಯಕ್ತಪಡಿಸಿದರು. ದೇವಾಲಯಕ್ಕಾಗಿ ಟ್ರಸ್ಟ್ ರಚಿಸುವ ಸರ್ಕಾರದ ನಿರ್ಧಾರವನ್ನು ನಾನು ಒಪ್ಪುವುದಿಲ್ಲ ಎಂದು ರಾಮಭದ್ರಾಚಾರ್ಯ ವೃಂದಾವನದ ತುಳಸಿ ಪೀಠ ಛತ್ತೀಸ್‌ಗಢ ಕುಂಜ್‌ನಲ್ಲಿ ಸುದ್ದಿಗಾರರಿಗೆ ತಿಳಿಸಿದರು. ಅಲ್ಲಿ ಅವರು ವಾರಪೂರ್ತಿ ಶ್ರೀಮದ್ ಭಾಗವತ ಕಥಾ ಪಠಣವನ್ನು ನಡೆಸುತ್ತಿದ್ದರು.**

ಸರ್ಕಾರವು ಯಾವುದೇ ಮಸೀದಿ ಅಥವಾ ಚರ್ಚ್ ಅನ್ನು ಸ್ವಾಧೀನಪಡಿಸಿಕೊಳ್ಳಲು ಸಾಧ್ಯವಾಗದಿದ್ದಾಗ ದೇವಾಲಯಗಳನ್ನು ತನ್ನ ನಿಯಂತ್ರಣಕ್ಕೆ ತರಲು, ಅವುಗಳ ಹಣವನ್ನು ವಶಪಡಿಸಿಕೊಳ್ಳಲು ಏಕೆ ಬಯಸುತ್ತದೆ ಎಂದು ನನಗೆ ಅರ್ಥವಾಗುತ್ತಿಲ್ಲ ಎಂದು ಅವರು ಹೇಳಿದರು. ದೇವಾಲಯಕ್ಕೆ ಭೇಟಿ ನೀಡುವ ಲಕ್ಷಾಂತರ ಭಕ್ತರಿಗೆ ಉತ್ತಮ ಸೌಲಭ್ಯಗಳ ಅಗತ್ಯವನ್ನು ಉತ್ತರ ಪ್ರದೇಶ ಸರ್ಕಾರವು ಸುಗ್ರೀವಾಜ್ಞೆಯ ಮೂಲಕ ಟ್ರಸ್ಟ್ ಸ್ಥಾಪಿಸಲು ಮತ್ತು ಕಾರಿಡಾರ್ ನಿರ್ಮಿಸಲು ಕಾರಣವೆಂದು ಉಲ್ಲೇಖಿಸಿದೆ.

## ಫೆಬ್ರವರಿಯಲ್ಲಿ ಬಾಂಗ್ಲಾ ಸಾರ್ವತ್ರಿಕ ಚುನಾವಣೆ

**ಢಾಕಾ:** ಮುಂದಿನ ವರ್ಷ ಫೆಬ್ರವರಿಯಲ್ಲಿ ಸಾರ್ವತ್ರಿಕ ಚುನಾವಣೆಗಳನ್ನು ನಡೆಸುವ ಬದ್ಧತೆಯಲ್ಲಿ ಬಾಂಗ್ಲಾದೇಶದ ಮಧ್ಯಂತರ ಸರ್ಕಾರ ಅಚಲ ಎಂದು ಕಾನೂನು ಸಲಹೆಗಾರ ಆಸಿಫ್ ನಜ್ರುಲ್ ಹೇಳಿದ್ದಾರೆ. ಸರ್ಕಾರವು ಚುನಾವಣೆಗೆ ಎಲ್ಲಾ ಸಿದ್ಧತೆಗಳೊಂದಿಗೆ ಮಾಡಿಕೊಳ್ಳುತ್ತಿದೆ ಎಂದು ನಜ್ರುಲ್ ಅವರನ್ನು ಸರ್ಕಾರಿ ಸ್ವಾಮ್ಯದ ಬಾಂಗ್ಲಾದೇಶ ಸಂಗ್ಬಾದ್ ಸಂಸ್ಥೆ ಉಲ್ಲೇಖಿಸಿದೆ.



ಚುನಾವಣೆಗಳು ಫೆಬ್ರವರಿಯಲ್ಲಿ ನಡೆಯಲಿವೆ ಮತ್ತು ಈ ಬಗ್ಗೆ ಸರ್ಕಾರದ ನಿಲುವು ಅಚಲವಾಗಿ ಉಳಿದಿದೆ ಎಂದು ಅವರು ಕ್ಯಾಬಿನೆಟ್ ವಿಭಾಗದಲ್ಲಿ ನಡೆದ ಸಭೆಯ ನಂತರ ಹೇಳಿದರು. ಮುಂದಿನ ವರ್ಷ ಫೆಬ್ರವರಿಯಲ್ಲಿ ಪ್ರಮುಖ ಸುಧಾರಣೆಗಳಿಲ್ಲದೆ ಮತ್ತು ಮಧ್ಯಂತರ ಸರ್ಕಾರ ಪ್ರಾರಂಭಿಸಿದ ವಿಚಾರಣೆಗಳನ್ನು ಪೂರ್ಣಗೊಳಿಸದೆ ಚುನಾವಣೆಗಳು ನಡೆಯುವ ಸಾಧ್ಯತೆಯನ್ನು ತಳ್ಳಿಹಾಕಿದ ರಾಷ್ಟ್ರೀಯ ನಾಗರಿಕ ಪಕ್ಷದ ನಾಯಕರ ಹೇಳಿಕೆಗಳ ನಂತರ, ಚುನಾವಣೆಗಳ ಕುರಿತು ಹೆಚ್ಚುತ್ತಿರುವ ಊಹಾಪೋಹಗಳ ನಡುವೆ ಕಾನೂನು ಸಲಹೆಗಾರರ ಹೇಳಿಕೆಗಳು ಬಂದವು. ಈ ವಿಷಯದ ಕುರಿತು ಪ್ರತಿಕ್ರಿಯಿಸಿದ ನಜ್ರುಲ್, ಚುನಾವಣೆಗಳ ಸಮಯದ ಬಗ್ಗೆ ರಾಜಕೀಯ ಪಕ್ಷಗಳು ಹೇಳಿಕೆಗಳನ್ನು ನೀಡುವುದು ರಾಜಕೀಯ ಪ್ರಕ್ರಿಯೆಯ ಭಾಗವಾಗಿದೆ ಎಂದು ಹೇಳಿದರು.

ನೀವು ಇದನ್ನು ಯಾವಾಗಲೂ ನೋಡಿದ್ದೀರಿ. ಸಾಂಪ್ರದಾಯಿಕವಾಗಿ ಬಾಂಗ್ಲಾದೇಶದಲ್ಲಿ, ಇಂತಹ ರಾಜಕೀಯ ಹೇಳಿಕೆಗಳನ್ನು ನೀಡಲಾಗುತ್ತಿತ್ತು ಮತ್ತು ಈಗಲೂ ಅದೇ ನಡೆಯುತ್ತಿದೆ. ಸರ್ಕಾರದ ಪರವಾಗಿ, ಫೆಬ್ರವರಿಯಲ್ಲಿ ಚುನಾವಣೆ ಪೂರ್ಣಗೊಳ್ಳುತ್ತದೆ ಎಂದು ನಾವು ನಿಸ್ಸಂದಿಗ್ಧವಾಗಿ ಹೇಳುತ್ತಿದ್ದೇವೆ ಎಂದು ಅವರು ಹೇಳಿದರು.

ಮುಖ್ಯ ಸಲಹೆಗಾರ ಮುಹಮ್ಮದ್ ಯೂನಸ್ ಜಾಗತಿಕವಾಗಿ ಗೌರವಾನ್ವಿತ ವ್ಯಕ್ತಿ ಮತ್ತು ಘೋಷಿಸಲಾದ ವೇಳಾಪಟ್ಟಿಯ ಪ್ರಕಾರ ಚುನಾವಣೆ ನಡೆಯಲಿದ್ದು, ಅವರ ಬದ್ಧತೆಯಿಂದ ದೂರ ಸರಿಯುವ ಪ್ರಶ್ನೆಯೇ ಇಲ್ಲ ಎಂದು ನಜ್ರುಲ್ ಹೇಳಿದರು.


> **ಈ ಚರ್ಚೆಯಲ್ಲಿ ಯಾವುದೇ ಪ್ರಮುಖ ಗುಣಾತ್ಮಕ ಬದಲಾವಣೆಯಾಗಿಲ್ಲ. ಆದ್ದರಿಂದ, ಚುನಾವಣಾ ಸಮಯದ ಬಗ್ಗೆ ಏನು ಹೇಳಿದರೂ ಅದನ್ನು ರಾಜಕೀಯ ಪ್ರಕ್ರಿಯೆಯ ಭಾಗವಾಗಿ ನೋಡಬೇಕು, ಆದಾಗ್ಯೂ, ಚುನಾವಣೆಗಳನ್ನು ನಡೆಸುವ ಜವಾಬ್ದಾರಿ ಅಂತಿಮವಾಗಿ ಸರ್ಕಾರದ್ದೇ ಹೊರತು ಯಾವುದೇ ರಾಜಕೀಯ ಪಕ್ಷದ ಮೇಲಲ್ಲ ಎಂದು ನಜ್ರುಲ್ ಹೇಳಿದರು.**

ಈ ತಿಂಗಳ ಆರಂಭದಲ್ಲಿ, ಫೆಬ್ರವರಿಯಲ್ಲಿ ಸಾರ್ವತ್ರಿಕ ಚುನಾವಣೆಗಳು ನಡೆಯಲಿವೆ ಎಂದು ಯೂನಸ್ ಹೇಳಿದರು ಮತ್ತು ನಂತರ ಚುನಾವಣಾ ಆಯೋಗವು ತಿಂಗಳ ಮೊದಲ ವಾರದಲ್ಲಿ ಚುನಾವಣೆಗಳು ನಡೆಯಲಿವೆ ಎಂದು ಘೋಷಿಸಿತು. ಇವು ಬಾಂಗ್ಲಾದೇಶದ 13 ನೇ ಸಂಸತ್ ಚುನಾವಣೆಗಳು. ಈ ವಾರದೊಳಗೆ ಇದಕ್ಕಾಗಿ ಮಾರ್ಗಸೂಚಿಯನ್ನು ಪ್ರಕಟಿಸಲಾಗುವುದು ಎಂದು ಚುನಾವಣಾ ಆಯೋಗದ ಅಧಿಕಾರಿಗಳು ತಿಳಿಸಿದ್ದಾರೆ.

# ಅಮೆರಿಕ ಬಿಟ್ಹಾಕಿ ನಿಮ್ಮ ಸರಕುಗಳನ್ನು ನಮಗೆ ಸಾಗಾಕಿ

### ಭಾರತಕ್ಕೆ ರಷ್ಯಾ ಬಿಗ್ ಆಫರ್, ಈ ದೋಸ್ತಿ ಫ್ಲವರ್ ಅಲ್ಲ ಫೈಯರ್, ಭಾರತದ ಸರಕುಗಳ ಮೇಲೆ ಶೇ. 50ರಷ್ಟು ಸುಂಕ ಹೇರಿರುವ ಅಮೆರಿಕ

**ಮಾಸ್ಕೋ:** ಭಾರತದ ಸರಕುಗಳ ಮೇಲೆ ಶೇ. 50ರಷ್ಟು ಸುಂಕ ಹೇರಿಕೆ ಮಾಡಿ, ನಿಮಗೆ ನಾವಲ್ಲದಿದ್ದರೆ ಇನ್ಯಾರು ಗತಿ ಎಂದು ಬೀಗುತ್ತಿದ್ದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ರಷ್ಯಾ ಭಾರತಕ್ಕೆ ನೀಡಿರುವ ಆಫರ್ ಕೇಳಿ ಅಕ್ಷರಶಃ ನಡುಗಿದ್ದಾರೆ. ಹೌದು, ಅಮೆರಿಕದ ಮಾರುಕಟ್ಟೆಯನ್ನು ಪ್ರವೇಶಿಸಲು ಭಾರತದ ಸರಕುಗಳ ತೊಂದರೆ ಎದುರಿಸುತ್ತಿದ್ದರೆ, ಭಾರತವು ತನ್ನ ಉತ್ಪನ್ನಗಳನ್ನು ರಷ್ಯಾಕ್ಕೆ ರಫ್ತು ಮಾಡಬಹುದು ಎಂದು ರಷ್ಯಾದ ಹಿರಿಯ ರಾಜತಾಂತ್ರಿಕರೊಬ್ಬರು ಘೋಷಿಸಿದ್ದಾರೆ. ಹೌದು, ಅಮೆರಿಕದ ಹೆಚ್ಚುವರಿ ಸುಂಕದಿಂದ ತೊಂದರೆ ಅನುಭವಿಸುತ್ತಿರುವ ಭಾರತಕ್ಕೆ, ರಷ್ಯಾ ಶತಮಾನದ ಆಫರ್ ನೀಡಿದೆ. ಭಾರತವು ತನ್ನ ಸರಕುಗಳನ್ನು ರಷ್ಯಾಗೆ ರಫ್ತು ಮಾಡುವ ಮೂಲಕ, ತನ್ನ ವ್ಯಾಪಾರವನ್ನು ಯಾವುದೇ ಅಡೆತಡೆ ಇಲ್ಲದೇ ಮುಂದುವರೆಸಬಹುದು ಎಂದು ರಷ್ಯಾ ಹೇಳಿದೆ.



**ಸವಾಲಿನ ಪರಿಸ್ಥಿತಿ ಸೃಷ್ಟಿ**

ರಷ್ಯಾದ ಕಚ್ಚಾ ತೈಲ ಖರೀದಿಗೆ ಸಂಬಂಧಿಸಿದಂತೆ ಭಾರತದ ಮೇಲೆ ಅಮೆರಿಕದ ಒತ್ತಡವು ಸಮರ್ಥನೀಯವಲ್ಲ ನವದೆಹಲಿಗೆ ಸವಾಲಿನ ಪರಿಸ್ಥಿತಿಯನ್ನು ಸೃಷ್ಟಿಸಿದೆ. ಆದರೆ ಭಾರತ ತನ್ನ ಉತ್ಪನ್ನಗಳನ್ನು ರಷ್ಯಾಗೆ ರಫ್ತು ಮಾಡುವ ಮೂಲಕ ತನ್ನ ನಷ್ಟವನ್ನು ಸರಿದೂಗಿಸಿಕೊಳ್ಳಬಹುದು ಎಂದು ರಷ್ಯಾದ ಉಪ ಮುಖ್ಯಸ್ಥ ರೋಮನ್ ಬಾಬುಷ್ಕಿನ್ ಹೇಳಿದ್ದಾರೆ. ಭಾರತೀಯ ಸರಕುಗಳ ಮೇಲೆ ಶೇ. 25ರಷ್ಟು ಸುಂಕದ ಜೊತೆಗೆ, ರಷ್ಯಾದಿಂದ ಕಚ್ಚಾತೈಲ ಖರೀದಿಸುತ್ತಿರುವುದಕ್ಕಾಗಿ ಶೇ. 25ರಷ್ಟು ದಂಡದ ರೂಪದ ಸುಂಕವನ್ನು ವಾಷಿಂಗ್ಟನ್ ವಿಧಿಸಿದೆ. ಹೆಚ್ಚುವರಿ ಸುಂಕವು ಆಗಸ್ಟ್ 27ರಿಂದ ಜಾರಿಗೆ ಬರಲಿದೆ.

**ಓವರ್ ಟು ರೋಮನ್ ಬಾಬುಷ್ಕಿನ್:** ಭಾರತೀಯ ಸರಕುಗಳು ಅಮೆರಿಕ ಮಾರುಕಟ್ಟೆಯನ್ನು ಪ್ರವೇಶಿಸಲು ತೊಂದರೆಗಳನ್ನು ಎದುರಿಸುತ್ತಿದ್ದರೆ, ರಷ್ಯಾ ಮಾರುಕಟ್ಟೆಯು ಭಾರತೀಯ ರಫ್ತುಗಳನ್ನು ಸ್ವಾಗತಿಸುತ್ತದೆ ಎಂದು ರಾಜಧಾನಿ ಮಾಸ್ಕೋದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ರಷ್ಯಾದ ಉಪ ಮುಖ್ಯಸ್ಥ ರೋಮನ್ ಬಾಬುಷ್ಕಿನ್ ಹೇಳಿದ್ದಾರೆ. ರಷ್ಯಾದ ಕಚ್ಚಾತೈಲ ಖರೀದಿಗೆ ಸಂಬಂಧಿಸಿದಂತೆ ಭಾರತದ ಮೇಲೆ ಅಮೆರಿಕ ವಿಧಿಸಿರುವ ನಿರ್ಬಂಧಗಳ ಕುರಿತು ಮಾತನಾಡಿದ ಬಾಬುಷ್ಕಿನ್, ಇದು ನ್ಯಾಯಸಮ್ಮತವಲ್ಲ.

ಬಾಹ್ಯ ಒತ್ತಡದ ಹೊರತಾಗಿಯೂ ಭಾರತ-ರಷ್ಯಾ ಇಂಧನ ಸಹಕಾರ ಮುಂದುವರಿಯುತ್ತದೆ ಎಂದು ನಮಗೆ ವಿಶ್ವಾಸವಿದೆ ಎಂದು ಸೂಚ್ಯವಾಗಿ ಹೇಳಿದರು. ಭಾರತ, ರಷ್ಯಾ ನಡುವಿನ ರಾಜತಾಂತ್ರಿಕ, ಸಾಂಸ್ಕೃತಿಕ, ವಾಣಿಜ್ಯ ಸಂಬಂಧಗಳಿಗೆ ದಶಕಗಳ ಇತಿಹಾಸವಿದೆ. ಈ ಸಂಬಂಧಗಳು ಅತ್ಯಂತ ಗಟ್ಟಿಯಾಗಿದ್ದು, ಸಂಕಷ್ಟಗಳು ಎದುರಾದಾಗ ಉಭಯ ದೇಶಗಳು ಪರಸ್ಪರರ ನೆರವಿಗೆ ಬರುವುದನ್ನು ರೂಢಿಸಿಕೊಂಡಿವೆ. ಪ್ರಸ್ತುತ ಜಾಗತಿಕ ರಾಜಕೀಯ ಪರಿಸ್ಥಿತಿಗಳು, ಭಾರತ ಮತ್ತು ರಷ್ಯಾದ ಜಂಟಿ ಸಹಭಾಗಿತ್ವದ ಅಗತ್ಯತೆಯನ್ನು ಕೂಗಿ ಹೇಳುತ್ತಿವೆ. ನಾವು ಇದಕ್ಕೆ ಸ್ಪಂದಿಸುತ್ತೇವೆ ಎಂದು ರೋಮನ್ ಬಾಬುಷ್ಕಿನ್ ಭರವಸೆ ವ್ಯಕ್ತಪಡಿಸಿದ್ದಾರೆ.

ರಷ್ಯಾ ಮತ್ತು ಭಾರತದ ಆರ್ಥಿಕತೆಯನ್ನು ಕೆಲವರು ಸತ್ತ ಆರ್ಥಿಕತೆ ಎಂದು ಕರೆದಿದ್ದಾರೆ. ನಮ್ಮ ಆರ್ಥಿಕತೆ ಜೀವಂತವಾಗಿದೆ ಮಾತ್ರವಲ್ಲದೇ ಸದೃಢವಾಗಿದೆ ಎಂಬುದನ್ನು ನಾವು ಜಗತ್ತಿಗೆ ತೋರಿಸುತ್ತೇವೆ. ಭಾರತದ ಸರಕುಗಳ ರಷ್ಯನ್ ಮಾರುಕಟ್ಟೆ ಪ್ರವೇಶಿಸುವುದನ್ನು ನಾನು ಎದುರು ನೋಡುತ್ತಿದ್ದೇನೆ ಎಂದು ರಷ್ಯಾದ ಉಪ ಮುಖ್ಯಸ್ಥರು ಹೇಳಿರುವುದು ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ.

> **ತಾನೊಂದು ಬಗೆದರೆ ದೈವವೊಂದ ಬಗೆದಂತೆ ಎಂಬ ನಾಣ್ಣುಡಿ ಸದ್ಯ ಭಾರತದ ಮೇಲೆ ಶೇ. 50ರಷ್ಟು ಸುಂಕ ಹೇರಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಸರಿಯಾಗಿ ಅನ್ವಯಿಸುತ್ತದೆ. ಅಮೆರಿಕದ ಹೆಚ್ಚುವರಿ ಸುಂಕದ ಹೊಡೆತದಿಂದ ತಪ್ಪಿಸಿಕೊಳ್ಳಲು ದಾರಿ ಹುಡುಕುತ್ತಿದ್ದ ಭಾರತಕ್ಕೆ, ರಷ್ಯಾ ಬಿಗ್ ಆಫರ್‌ವೊಂದನ್ನು ನೀಡಿದೆ. ಭಾರತ ತನ್ನ ಉತ್ಪನ್ನಗಳನ್ನು ರಷ್ಯನ್ ಮಾರುಕಟ್ಟೆಯಲ್ಲಿ ಮಾರಾಟ ಮಾಡಬಹುದು.**
> **ರೋಘಮನ್ ಬಾಬುಷ್ಕಿನ್**, ರಷ್ಯಾದ ಉಪ ಮುಖ್ಯಸ್ಥ

**ಹೆಚ್ಚಾಯ್ತು ಅಮೆರಿಕದ ಚಿಂತೆ**

**ಭಾರತದ ಮೇಲೆ ಹೆಚ್ಚುವರಿ ಸುಂಕಗಳನ್ನು ಹೇರಿದ್ದ ಅಮೆರಿಕ ಈಗ ರಷ್ಯಾದ ಆಫರ್ ಕೇಳಿ ದಂಗಾಗಿದೆ. ಸುಂಕದ ಮೂಲಕ ಭಾರತವನ್ನು ಮಣಿಸಬಹುದು ಎಂದುಕೊಂಡಿದ್ದ ಟ್ರಂಪ್ ಆಡಳಿತ, ನಮ್ಮ ಸುಂಕಗಳು ಭಾರತ-ರಷ್ಯಾ ವಾಣಿಜ್ಯ ಸಹಕಾರವನ್ನು ಹೆಚ್ಚಿಸುತ್ತಿರುವುದನ್ನು ನೋಡಿ ಕಂಗಾಲಾಗಿದೆ. ಇತ್ತೀಚೆಗೆ ಸಂದರ್ಶನವೊಂದರಲ್ಲಿ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಅವರು, ರಷ್ಯಾದಿಂದ ಕಚ್ಚಾತೈಲ ಖರೀದಿಸುತ್ತಿರುವ ಭಾರತದ ಮೇಲೆ ಹೆಚ್ಚುವರಿ ಸುಂಕ ಏರುವುದರಿಂದ ಯುರೋಪಿಯನ್ ಮಾರುಕಟ್ಟೆಗೆ ಯಾವುದೇ ನಷ್ಟವಾಗುವುದಿಲ್ಲ. ಆದರೆ ಚೀನಾಗೆ ಸುಂಕ ವಿಧಿಸಿದರೆ ಜಾಗತಿಕ ಮಾರುಕಟ್ಟೆಯಲ್ಲಿ ತೈಲ ಬೆಲೆ ಹೆಚ್ಚಳ ಕಾಣಲಿದೆ ಎಂದು ಹೇಳಿದ್ದರು. ಅಮೆರಿಕದ ಈ ದ್ವಿಮುಖ ನೀತಿಗೆ ಈಗ ರಷ್ಯಾದ ಆಫರ್ ಕೌಂಟರ್ ಕೊಟ್ಟಂತಿದ್ದು, ಭಾರತ ಈ ನಿಟ್ಟಿನಲ್ಲಿ ಏನು ನಿರ್ಧಾರ ತಳೆಯಲಿದೆ ಎಂಬುದನ್ನು ಕಾದು ನೋಡಬೇಕಿದೆ.**

## ಮಿನಿ ನ್ಯೂಸ್

### ತ್ರಿವರ್ಣ ಧ್ವಜದ ಬದಲು ಕಾಂಗ್ರೆಸ್ ಧ್ವಜ ಹಾರಾಟ

**ಕೊಚ್ಚಿ:** ಇಲ್ಲಿನ ಎಲ್ಲೂರಿನಲ್ಲಿರುವ ಸಿಪಿಐ(ಎಂ) ಶಾಖೆ ಸಮಿತಿಯು ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ರಾಷ್ಟ್ರಧ್ವಜದ ಬದಲು ಕಾಂಗ್ರೆಸ್ ಪಕ್ಷದ ಧ್ವಜ ಹಾರಿಸಿದೆ. ಎಡ ಪಕ್ಷದ ಹಿರಿಯ ನಾಗರಿಕರ ವೇದಿಕೆಯ ಪದಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವ ಸ್ಥಳೀಯ ನಾಯಕರೊಬ್ಬರು ತಪ್ಪಾಗಿ ಕಾಂಗ್ರೆಸ್ ಧ್ವಜವನ್ನು ಹಾರಿಸಿ ಅಪಮಾನಿಸಿದ್ದಾರೆ.

ಹಲವಾರು ಸ್ಥಳೀಯ ನಾಯಕರು, ಸದಸ್ಯರ ಮಧ್ಯ ಇದು ನಡೆದಿದ್ದು ಭಾರಿ ಮುಜುಗರಕ್ಕೀಡು ಮಾಡಿದೆ. ಕಾಂಗ್ರೆಸ್ ಪಕ್ಷದ ಧ್ವಜವನ್ನು ಕೇವಲ 10 ನಿಮಿಷಗಳ ಕಾಲ ಹಾರಿಸಲಾಗಿತ್ತು ನಂತರ ಅದನ್ನು ತಕ್ಷಣವೇ ತೆಗೆದು ಹಾಕಲಾಯಿತು ಎಂದು ಮುಖಂಡರೊಬ್ಬರು ತಿಳಿಸಿದ್ದಾರೆ ಆದಾಗ್ಯೂ, ಘಟನೆಯ ಫೋಟೋಗಳು, ವಿಡಿಯೋಗಳು ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿವೆ. ತಪ್ಪಾಗಿದೆ ಇದಕ್ಕೆ ಕಾರಣರಾದವರ ವಯಸು ಮತ್ತು ಸಂದರ್ಭಗಳನ್ನು ಪರಿಗಣಿಸಿ, ಪಕ್ಷವು ಶಿಸ್ತು ಕ್ರಮ ಕೈಗೊಳ್ಳಲು ನಿರ್ಧರಿಸಿದೆ ಎಂದು ಸಿಪಿಐ(ಎಂ) ಜಿಲ್ಲಾ ಹಿರಿಯ ನಾಯಕರೊಬ್ಬರು ಹೇಳಿದರು.

### ರೇಖಾ ಗುಪ್ತಾ ಮೇಲೆ ಹಲ್ಲೆ

**ನವದೆಹಲಿ:** ಬುಧವಾರ ಬೆಳಿಗ್ಗೆ ಮನವಿ ಪತ್ರ ಸಲ್ಲಿಸಲು ಬಂದ ವ್ಯಕ್ತಿಯೊಬ್ಬ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಮೇಲೆ ಹಲ್ಲೆ ನಡೆಸಿದ್ದಾನೆ. ಇಲ್ಲಿನ ಸಿವಿಲ್ ಲೈನ್ಸ್‌ನಲ್ಲಿರುವ ಅಧಿಕೃತ ನಿವಾಸದಲ್ಲಿ ನಡೆದ ಜನ್ ಸುನ್ವೈ ಕಾರ್ಯಕ್ರಮದ ಸಂದರ್ಭದಲ್ಲಿ ದೆಹಲಿ ಸಿಎಂ ರೇಖಾ ಗುಪ್ತಾ ಮೇಲೆ ಹಲ್ಲೆ ನಡೆದಿದೆ ಎಂದು ಬಿಜೆಪಿ ತಿಳಿಸಿದೆ.

ಆ ವ್ಯಕ್ತಿಯನ್ನು ಬಂಧಿಸಲಾಗಿದೆ, ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಸಾರ್ವಜನಿಕ ಮನವಿ ವಿಚಾರಣೆಯ ಸಮಯದಲ್ಲಿ ಅವರು ಮೊದಲು ಸುಮಾರು 35 ವರ್ಷದ ವ್ಯಕ್ತಿ ಸಿಎಂಗೆ ಕೆಲವು ದಾಖಲೆಗಳನ್ನು ನೀಡಿದರು ಮತ್ತು ನಂತರ ಅವರ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಅವರು ಹೇಳಿದರು. ದೆಹಲಿ ಬಿಜೆಪಿ ಅಧ್ಯಕ್ಷ ವೀರೇಂದ್ರ ಸಚ್‌ದೇವ ಮುಖ್ಯಮಂತ್ರಿಯ ಮೇಲಿನ ದಾಳಿಯನ್ನು ಬಲವಾಗಿ ಖಂಡಿಸಿದ್ದಾರೆ.

### ದೆಹಲಿಯ 50ಕ್ಕೂ ಹೆಚ್ಚು ಶಾಲೆಗಳಿಗೆ ಮತ್ತೆ ಬಾಂಬ್ ಬೆದರಿಕೆ

**ನವದೆಹಲಿ:** ರಾಷ್ಟ್ರ ರಾಜಧಾನಿ ದೆಹಲಿ ಶಾಲೆಗಳಿಗೆ ಬಾಂಬ್ ಬೆದರಿಕೆ ಕರೆಗಳು ನಿರಂತರವಾಗತೊಡಗಿದೆ. ಈ ಹಿಂದೆ ಹಲವಾರು ಶಾಲೆಗಳಿಗೆ ಬಾಂಬ್ ಬೆದರಿಕೆ ಕರೆಗಳು ಬಂದಿರುವ ಬೆನ್ನಲ್ಲೇ ಬುಧವಾರ ಅಲ್ಲಿನ ಐವತ್ತಕ್ಕೂ ಹೆಚ್ಚಿನ ಶಾಲೆಗಳಿಗೆ ಇ-ಮೇಲ್ ಮೂಲಕ ಬಾಂಬ್ ಬೆದರಿಕೆಗಳು ಬಂದಿವೆ. ತಕ್ಷಣ ಅಲರ್ಟ್ ಆದ ಪೊಲೀಸರು ಮತ್ತು ಇತರ ತುರ್ತು ಸಂಸ್ಥೆಗಳು ಶೋಧ ಕಾರ್ಯಾಚರಣೆಯನ್ನು ಆರಂಭಿಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ದೆಹಲಿ ಅಗ್ನಿಶಾಮಕ ಸೇವೆಗಳ ಪ್ರಕಾರ, ಮಾಳ್ವಿಯಾ ನಗರದ ಎಸ್‌ಕೆವಿ ಮತ್ತು ಪ್ರಸಾದ್ ನಗರದ ಆಂಧ್ರ ಶಾಲೆ ಎಂಬ ಎರಡು ಶಾಲೆಗಳಿಗೆ ಬಾಂಬ್ ಬೆದರಿಕೆಗಳ ಬಗ್ಗೆ ಕ್ರಮವಾಗಿ ಬೆಳಿಗ್ಗೆ 7.40 ಮತ್ತು 7.42 ಕ್ಕೆ ಮಾಹಿತಿ ಬಂದಿದೆ.

ಅದೇ ರೀತಿ ನಗರದ ಇತರ ಹಲವಾರು ಪ್ರದೇಶಗಳಲ್ಲಿರುವ ಶಾಲೆಗಳಿಗೂ ಬಾಂಬ್ ಬೆದರಿಕೆ ಕರೆಗಳು ಬಂದಿವೆ ಹೀಗಾಗಿ ಪೊಲೀಸ್ ತಂಡಗಳು, ಅಗ್ನಿಶಾಮಕ ಸಿಬ್ಬಂದಿ ಮತ್ತು ಬಾಂಬ್ ನಿಷ್ಕ್ರಿಯ ದಳಗಳು ತಕ್ಷಣ ಆವರಣಕ್ಕೆ ಧಾವಿಸಿದವು. ಆಗಸ್ಟ್ 18 ರಂದು ನಗರದಾದ್ಯಂತ 32 ಶಾಲೆಗಳಿಗೆ ಇದೇ ರೀತಿಯ ಬೆದರಿಕೆಗಳು ಬಂದ ಕೇವಲ ಎರಡು ದಿನಗಳ ನಂತರ ಹೊಸ ಬೆದರಿಕೆಗಳು ಬರುತ್ತಿರುವುದು ಆತಂಕ ತಂದಿದೆ, ಆದರೆ ಇದುವರೆಗೂ ಬಂದಿರುವ ಎಲ್ಲಾ ಕರೆಗಳು ಹುಸಿಯಾಗಿವೆ ಎನ್ನುವುದು ಸಮಾಧಾನಕರ ವಿಷಯವಾದರೂ ಭವಿಷ್ಯದಲ್ಲಿ ಏನಾಗುವುದೋ ಎನ್ನುವ ಆತಂಕ ಪೋಷಕರನ್ನು ಕಾಡತೊಡಗಿದೆ.

### ಗಾಜಾ ಮೇಲೆ ಮುಂದಿನ ಹಂತದ ಕಾರ್ಯಾಚರಣೆ ಸಂಸತ್ತಿನ ಅನುಮೋದನೆ ಪಡೆದ ಇಸ್ರೇಲ್


**ಟೆಲ್ ಅವೀವ್:** ಗಾಜಾ ನಗರವನ್ನೇ ಗುರಿಯಾಗಿಸಿ ಮುಂದಿನ ಹಂತದ ಸೇನಾ ಕಾರ್ಯಾಚರಣೆ ನಡೆಸಲು ಇಸ್ರೇಲ್ ಸಿದ್ಧತೆ ನಡೆಸಿದೆ. ಈ ಕುರಿತು ಇಸ್ರೇಲ್ ಸೇನಾ ಮುಖ್ಯಸ್ಥರು ಅಲ್ಲಿನ ಸಂಸತ್ತಿನ ಅನುಮೋದನೆಯನ್ನು ಬುಧವಾರ ಪಡೆದಿದ್ದಾರೆ ಎಂದು ವರದಿಯಾಗಿದೆ. 22 ತಿಂಗಳ ಯುದ್ಧದ ಬಳಿಕ ಪ್ಯಾಲೆಸ್ಟೀನ್‌ನ ಅತಿ ದೊಡ್ಡ ನಗರವನ್ನು ವಶಕ್ಕೆ ಪಡೆಯುವ ಪ್ರಸ್ತಾವವನ್ನು ಇಸ್ರೇಲ್‌ನ ಭದ್ರತಾ ಸಚಿವಾಲಯವು ಮುಂದಿಟ್ಟಿತ್ತು. ಇದಾಗಿ ಒಂದು ದಿನದ ನಂತರ ಸಂಸತ್ತು ಸೇನೆಗೆ ಅನುಮೋದನೆ ನೀಡಿದೆ.

ಗಾಜಾ ಪಟ್ಟಿಯಲ್ಲಿ ಕೈಗೊಳ್ಳಬೇಕಾದ ರಕ್ಷಣಾ ಕಾರ್ಯಾಚರಣೆಯ ನೀಲನಕ್ಷೆಗೆ ಅನುಮೋದನೆ ದೊರೆತಿದೆ ಎಂದು ಇಸ್ರೇಲ್‌ನ ಸಶಸ್ತ್ರ ದಳದ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ಎಯಾಲ್ ಜಮೀರ್ ಹೇಳಿದ್ದಾರೆ. ಇದಕ್ಕೆ ನಿರ್ದಿಷ್ಟ ವೇಳಾಪಟ್ಟಿಯನ್ನು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ನೀಡಿಲ್ಲ. ಇಸ್ರೇಲ್ ಈ ಹಿಂದೆ ನಡೆಸಿದ ಕಾರ್ಯಾಚರಣೆಯಲ್ಲಿ ಹಲವರು ಮೃತಪಟ್ಟು, ಸಾಕಷ್ಟು ಜನ ನಿರ್ವಸತಿಗರಾಗಿದ್ದಾರೆ.

### ಅಫ್ಘಾನಿಸ್ತಾನ ಬಸ್ ದುರಂತ 76 ಮಂದಿ ಸಾವು

**ಗುಜ್ರಾ:** ಪಶ್ಚಿಮ ಅಫ್ಘಾನಿಸ್ತಾನದಲ್ಲಿ ನಿರಾಶ್ರಿತರಿದ್ದ ಬಸ್ ಹಾಗೂ ಎರಡು ವಾಹನಗಳ ಮಧ್ಯೆ ಅಪಘಾತ ಸಂಭವಿಸಿದ್ದು, ಘಟನೆಯಲ್ಲಿ ಮೃತಪಟ್ಟವರ ಸಂಖ್ಯೆ 76 ದಾಟಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇರಾನ್‌ನಿಂದ ಆಗಮಿಸಿದ್ದ ಅಫ್ಘಾನ್ ನಿರಾಶ್ರಿತರನ್ನು ಬಸ್ ಮೂಲಕ ರಾಜಧಾನಿ ಕಾಬೂಲ್‌ಗೆ ಕರೆದುಕೊಂಡು ಬರಲಾಗುತಿತ್ತು. ಘಟನೆಯಲ್ಲಿ ಇನ್ನೂ ಮೂರು ಜನ ಗಂಭೀರ ಗಾಯಗೊಂಡಿದ್ದಾರೆ. ಮೃತ ದೇಹಗಳನ್ನು ಸೇನಾ ಆಸ್ಪತ್ರೆಗೆ ಸ್ಥಳಾಂತರಿಸಿದ್ದು, ಇದರಲ್ಲಿ ಹೆಚ್ಚಿನ ಸಂಖ್ಯೆಯ ಮಕ್ಕಳು ಕೂಡ ಇದ್ದಾರೆ ಎಂದು ಹೇಳಿದ್ದಾರೆ.

ರಾತ್ರಿ ಗುಜ್ರಾ ಪ್ರಾಂತ್ಯದಲ್ಲಿ ನಿರಾಶ್ರಿತರಿದ್ದ ಬಸ್. ಇಂಧನ ತುಂಬಿದ ಟ್ರಕ್, ಬೈಕ್ ನಡುವೆ ಅಪಘಾತವಾಗಿದೆ. ಇದರಿಂದ ಬೆಂಕಿ ಹೊತ್ತಿಕೊಂಡಿದ್ದು, ಮೃತಪಟ್ಟವರ ದೇಹಗಳು ಗುರುತಿಸಲಾಗದ ಸ್ಥಿತಿಯಲ್ಲಿವೆ ಎಂದು ಪೊಲೀಸರು ತಿಳಿಸಿದ್ದಾರೆ. ರಾತ್ರಿ ಜರುಗಿದ ಬಸ್ ದುರಂತವು ಅಫ್ಘಾನಿಸ್ತಾನದಲ್ಲಿ ಇತ್ತೀಚೆಗೆ ನಡೆದ ಅತಿ ದೊಡ್ಡ ಅಪಘಾತವಾಗಿದೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಕಳಪೆ ರಸ್ತೆ ಕಾಮಗಾರಿ ಹಾಗೂ ರಸ್ತೆ ಸುರಕ್ಷಾ ನಿಯಮಗಳನ್ನು ಸರಿಯಾಗಿ ಪಾಲನೆ ಮಾಡದೇ ಇರುವುದರಿಂದ ಅಫ್ಘಾನಿಸ್ತಾನದಲ್ಲಿ ನಿರಂತರವಾಗಿ ರಸ್ತೆ ಅಪಘಾತ ಪ್ರಕರಣಗಳು ವರದಿಯಾಗುತ್ತಿವೆ. ಇರಾನ್ ಹಾಗೂ ಪಾಕಿಸ್ತಾನ ಮೂಲದಿಂದ ಈ ವರ್ಷದಲ್ಲಿ ಸುಮಾರು 1.5 ಮಿಲಿಯನ್ ಜನರು ಅಫ್ಘಾನಿಸ್ತಾನಕ್ಕೆ ಮರಳಿ ಬಂದಿದ್ದಾರೆ.



# ಅಪ್ಪುಗೆ ಮಾಡಿದ ದ್ವಿತ್ವ ಕಥೆ ವೆಬ್ ಸಿರೀಸ್

ನಿರ್ದೇಶಕ ಹಾಗೂ ನಟ ಪವನ್‌ಕುಮಾರ್, ಪವರ್‌ಸ್ಟಾರ್ ಪುನೀತ್ ರಾಜ್‌ಕುಮಾರ್ ಅವರಿಗಾಗಿ ಕಥೆಯೊಂದನ್ನ ಮಾಡಿ ಸಿನಿಮಾ ಮಾಡಲು ತಯಾರಿಯನ್ನ ಮಾಡಿಕೊಂಡಿದ್ದರು. ಆದ್ರೆ ವಿಧಿಯಾಟ ಆ ಸಿನಿಮಾ ಸೆಟ್ಟೇರಲಿಲ್ಲ. ಪುನೀತ್ ರಾಜ್‌ಕುಮಾರ್ ತುಂಬಾ ಇಷ್ಟಪಟ್ಟ ಕಥೆ ದ್ವಿತ್ವ ಆಗಿತ್ತು. ಇದೀಗ ಈ ಕಥೆ ಬಗ್ಗೆ ನಿರ್ದೇಶಕ ಪವನ್‌ಕುಮಾರ್ ಹೊಸ ವಿಚಾರವೊಂದನ್ನ ಹಂಚಿಕೊಂಡಿದ್ದಾರೆ. ಈ ಕಥೆ ವೆಬ್ ಸಿರೀಸ್ ಆಗಲಿದೆ ಅನ್ನೋ ಅಭಿಪ್ರಾಯವನ್ನ ವ್ಯಕ್ತಪಡಿಸಿದ್ದಾರೆ ಪವನ್ ಕುಮಾರ್. ದ್ವಿತ್ವ ಸಿನಿಮಾವನ್ನ ಪುನೀತ್‌ರಾಜ್ ಕುಮಾರ್ ಅವರಿಗಾಗಿ ಮಾಡುವುದಕ್ಕೆ ಅದ್ದೂರಿಯಾಗಿ ಪ್ಲ್ಯಾನ್ ಮಾಡಿದ್ದ ನಿರ್ದೇಶಕ ಪವನ್‌ಕುಮಾರ್ ಆ ಕಥೆಯನ್ನ ಹಾಗೆ ಉಳಿಸಿಕೊಂಡಿದ್ದಾರೆ. ಮತ್ಯಾರಿಗೂ ಸಿನಿಮಾ ಮಾಡೋಕೆ ಮುಂದಾಗಿಲ್ಲ.

ಈಗ ಆ ಕಥೆಯನ್ನ ವೆಬ್ ಸಿರೀಸ್ ಮಾಡುವುದಾಗಿ ಹೇಳಿಕೊಂಡಿದ್ದಾರೆ. ಇತ್ತೀಚೆಗೆ ಶೋಧ ಸಿನಿಮಾದ ಸುದ್ದಿಗೋಷ್ಠಿ ವೇಳೆ ಪ್ರತಿಕ್ರಿಯೆ ನೀಡಿದ್ದಾರೆ. ಅಂದಹಾಗೆ ದ್ವಿತ್ವ ಸಿನಿಮಾ ಅಂದುಕೊಂಡತಾಗಿದ್ರೆ ಹೊಂಬಾಳೆ ಸಂಸ್ಥೆ ನಿರ್ಮಾಣ ಮಾಡಬೇಕಿತ್ತು. ಅಪ್ಪು ಅಭಿಮಾನಿಗಳಿಗೆ ಇದೊಂದು ವಿಭಿನ್ನ ರೀತಿಯ ಸಿನಿಮಾ ಕೊಡುವ ನಿಟ್ಟಿನಲ್ಲಿ ಪವನ್ ಕುಮಾರ್ ಈ ಎಲ್ಲಾ ತಯಾರಿಯನ್ನ ಮಾಡಿಕೊಂಡಿದ್ದರು.

ನಿರ್ದೇಶಕ ಪವನ್‌ಕುಮಾರ್ ನಿರ್ದೇಶನದಿಂದ ಈಗ ನಟನೆಯ ಕಡೆ ವಾಲಿದ್ದಾರೆ. ಯೋಗರಾಜ್ ಭಟ್ ನಿರ್ದೇಶನದ ಗಾಳಿಪಟ-2 ಸಿನಿಮಾದಲ್ಲಿ ನಟಿಸಿದ್ದ ಪವನ್‌ಕುಮಾರ್, ಇದೀಗ ಶೋಧ ಸಿನಿಮಾದ ಮುಖ್ಯ ಪಾತ್ರದಲ್ಲಿ ನಟಿಸಿದ್ದಾರೆ. ಈ ವೇಳೆ ದ್ವಿತ್ವ ಕಥೆ ಬಗ್ಗೆ ಹಲವು ವಿಚಾರಗಳನ್ನ ಹಂಚಿಕೊಂಡಿದ್ದಾರೆ. ಸೈಕಲಾಜಿಕಲ್ ಥ್ರಿಲ್ಲರ್ ಕಥೆ ಇರುವ ಈ ದ್ವಿತ್ವ ಕಥೆ ಸದ್ಯದಲ್ಲೇ ವೆಬ್ ಸಿರೀಸ್ ಆಗುವ ಸುಳಿವು ನೀಡಿದ್ದಾರೆ ನಿರ್ದೇಶಕ ಪವನ್‌ಕುಮಾರ್. ಸಿನಿಮಾವಾಗುತ್ತೋ ಅಥವಾ ವೆಬ್ ಸಿರೀಸ್ ಆಗುತ್ತೋ ಕಾದು ನೋಡಬೇಕು.

# ಸಾಕಿದ ಬೆಕ್ಕಿನಿಂದ ಮುಖಕ್ಕೆ ಗಾಯ

ಬಾಲಿವುಡ್ ಸೂಪರ್ ಮಾಡೆಲ್ ಉರ್ಫಿ ಜಾವೇದ್ ಮಾಡಿಕೊಳ್ಳುವ ಅವಾಂತರಗಳು ಅಷ್ಟಿಷ್ಟಲ್ಲ. ಈ ಬಾರಿ ಮುಖಕ್ಕೆ ಗಾಯ ಮಾಡಿಕೊಂಡಿದ್ದಾರೆ. ಕಣ್ಣಿನ ಕೆಳಗೆ ಗಾಯವಾಗಿದ್ದು ರಕ್ತ ಸುರಿದಿದೆ. ಇದರ ಫೋಟೋ ಹಾಗೂ ವೀಡಿಯೋವನ್ನ ಉರ್ಫಿ ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ.

ಅಷ್ಟಕ್ಕೂ ಉರ್ಫಿಯ ಈ ಗತಿಗೆ ಕಾರಣವೇನು ಅನ್ನೋದಕ್ಕೆ ಅವರೇ ಉತ್ತರ ಕೊಟ್ಟಿದ್ದಾರೆ. ಮನೆಯ ಮುದ್ದಿನ ಸಾಕು ಬೆಕ್ಕು ಉರ್ಫಿಯನ್ನ ಈ ರೀತಿ ಪರಚಿದೆ. ಪರಿಣಾಮ ಕಣ್ಣಿನ ಕೆಳಗೆ ಹೆಚ್ಚಾಗ್ಗೇ ಗಾಯವಾಗಿದ್ದು ಉರ್ಫಿ ಆಸ್ಪತ್ರೆ ಸೇರಿಕೊಂಡಿದ್ರು. ಇದೀಗ ಚಿಕಿತ್ಸೆ ಪಡೆದು ಮನೆಗೆ ಮರಳಿರುವ ಉರ್ಫಿ ಮನೆಯಲ್ಲಿ ವಿಶ್ರಾಂತಿ ಪಡೆಯುತ್ತಿದ್ದಾರೆ.

ಉರ್ಫಿಗೆ ಬೆಕ್ಕು ಮಾಡಿರುವ ಗಾಯ ಕೊಂಚ ಹೆಚ್ಚಾಗ್ಗೇ ಹಾನಿ ಮಾಡಿದಂತೆ ಕಾಣುತ್ತೆ. ಮುಖದಲ್ಲಿ ಕಲೆಯಾಗುವ ಸಾಧ್ಯತೆ ಇರೋದ್ರಿಂದ ಉರ್ಫಿ ಮುಂದೆ ಪ್ಲಾಸ್ಟಿಕ್ ಸರ್ಜರಿಗೆ ಒಳಗಾಗಬೇಕಾದ ಸಂದರ್ಭವೂ ಎದುರಾಗಬಹುದು. ಮೇಕಪ್ ಹಾಗೂ ಡಿಸೈನರ್ ಬಟ್ಟೆಗಳಿಂದ ಫೇಮಸ್ ಆಗಿರೋ ಉರ್ಫಿ ಇನ್ನೊಂದಷ್ಟು ದಿನ ಗಾಯದಿಂದ ಒದ್ದಾಡಬೇಕಾದ ಪರಿಸ್ಥಿತಿ ತಂದುಕೊಂಡಿದ್ದಾರೆ. ಮೂಕ ಪ್ರಾಣಿ ಮೇಲೆ ಏನೂ ದೂಷಿಸುವಂತಿಲ್ಲ. ಅಷ್ಟಕ್ಕೂ ಉರ್ಫಿ ಮೇಲೆ ಈ ಸಾಕು ಬೆಕ್ಕಿಗೆ ಅದೇನು ಕೋಪವಿತ್ತೋ ಏನೋ ಜೋರಾಗೇ ಪರಚಿದೆ. ಇದಕ್ಕೆ ಉರ್ಫಿ ಮಾತ್ರ ಸಿಕ್ಕಾಪಟ್ಟೆ ಸಂಕಷ್ಟ ಪಡಬೇಕಾಗಿ ಬಂದಿದೆ.



ಊರ್ಫಿ ಮನೆಯಲ್ಲಿ ವಿಶ್ರಾಂತಿ

# ಕೆಡಿ ನಿರ್ದೇಶಕನಿಗೆ ಲಕ್ಷ ಲಕ್ಷ ವಂಚನೆ



ಕೆಡಿ ಚಿತ್ರದ ನಿರ್ದೇಶಕ, ನಟ ಪ್ರೇಮ್‌ಗೆ ಎಮ್ಮೆ ಕೊಡಿಸೋದಾಗಿ ಹೇಳಿ ಗುಜರಾತ್ ಮೂಲದ ವ್ಯಕ್ತಿಯೊಬ್ಬ ಲಕ್ಷ ಲಕ್ಷ ಹಣ ವಂಚನೆ ಮಾಡಿದ್ದಾರೆಂದು ತಿಳಿದುಬಂದಿದೆ. ಕೆಡಿ ಸಿನಿಮಾ ನಿರ್ದೇಶಕ ಪ್ರೇಮ್ ಹೈನುಗಾರಿಕೆಗಾಗಿ ಗುಜರಾತ್ ಮೂಲದ ಎರಡು ಎಮ್ಮೆಗಳನ್ನ ಖರೀದಿಸಲು ಮುಂಗಡವಾಗಿ 25,000 ಹಣ ನೀಡಿದ್ದರು.

ಬಳಿಕ ಗುಜರಾತ್ ಮೂಲದ ವನರಾಜ್ ಭಾಯ್ ಎಮ್ಮೆ ವಿಡಿಯೋ ಹಾಗೂ ಫೋಟೋಗಳನ್ನ ವಾಟ್ಸಪ್ ಮೂಲಕ ಕಳಿಸಿದ್ದರು. ತದನಂತರ 3,75,000 ರೂ.ಗಳನ್ನ ಪ್ರೇಮ್ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಿದ್ದರು. ಇದಾದ 1 ವಾರದೊಳಗೆ ಎಮ್ಮೆ ಕಳುಹಿಸುವುದಾಗಿ ಹೇಳಿದ್ದ ವ್ಯಕ್ತಿ ಮತ್ತೆ 50,000 ಹಣ ವರ್ಗಾವಣೆ ಮಾಡುವಂತೆ ಹೇಳಿದ್ದು, ಒಟ್ಟು 4.5ಲಕ್ಷ ಹಣವನ್ನ ನಿರ್ದೇಶಕ ಪ್ರೇಮ್ ವನರಾಜ್ ಎಂಬಾತನಿಗೆ ವರ್ಗಾಯಿಸಿದ್ದರು. ಆದ್ರೆ, ಹಣ ಪಡೆದ ಬಳಿಕ ಎಮ್ಮೆ ಕೊಡಿಸ್ತೀನಿ ಅಂದವನು ನಾಪತ್ತೆಯಾಗಿದ್ದಾನೆ. ಫೋನ್ ಸ್ವಿಚ್ ಆಫ್ ಮಾಡಿಕೊಂಡಿದ್ದ ವನರಾಜ್ ಭಾಯ್ ವಿಳಾಸಕ್ಕೆ ನಿರ್ದೇಶಕ ಪ್ರೇಮ್ ತಮ್ಮ ಹುಡುಗರನ್ನ ಕಳುಹಿಸಿ ಹುಡುಕಾಡಿಸಿದ್ದರು. ಆದ್ರೆ, ಹಣ ಪಡೆದ ವನರಾಜ್ ಕೈಗೆ ಸಿಕ್ಕಿಲ್ಲ ಎಂದು ದೂರು ನೀಡಿದ್ದರು. ಹಣ ಪಡೆದ ವನರಾಜ್ ಭಾಯ್ ಎಮ್ಮೆಯನ್ನೂ ನೀಡದೇ ಹಣವನ್ನ ಮರಳಿ ಕೊಡದೇ ವಂಚಿಸಿದ್ದಾರೆಂದು ಆರೋಪ ಮಾಡಲಾಗಿತ್ತು. ಚಂದ್ರಾ ಲೇಔಟ್ ಪೊಲೀಸ್ ಠಾಣೆಯಲ್ಲಿ ಪ್ರೇಮ್ ಅವರು ಮ್ಯಾನೇಜರ್ ದಶಾವರ ಚಂದ್ರು ಮುಖಾಂತರ ದೂರು ದಾಖಲಿಸಿದ್ದರು. ಚಂದ್ರಾ ಲೇಔಟ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾದ ಬಳಿಕ ಎರಡು ಎಮ್ಮೆಗಳನ್ನ ಕಳುಹಿಸಿಕೊಟ್ಟಿದ್ದಾರೆ ಎನ್ನಲಾಗ್ತಿದೆ. ಜುಲೈ 22ರಿಂದ ಜುಲೈ 24ರ ಮಧ್ಯೆ ಹಣ ಕಳುಹಿಸಿದ್ದ ನಿರ್ದೇಶಕ ಪ್ರೇಮ್‌ಗೆ ಕಳೆದೊಂದು ವಾರದ ಹಿಂದೆ ಎರಡು ಎಮ್ಮೆಗಳನ್ನ ಕಳುಹಿಸಿಕೊಟ್ಟಿದ್ದಾರೆ ಎಂದು ಸ್ಪಷ್ಟನೆ ನೀಡಿದ್ದಾರೆ. ಇನ್ನು ಮ್ಯಾನೇಜರ್ ದಶಾವರ ಚಂದ್ರು ಕೂಡಾ ಸ್ಪಷ್ಟನೆ ನೀಡಿದ್ದು, ವನರಾಜ್ ಎಂಬುವವರ ಫೋನ್ ಸ್ವಿಚ್ ಆಫ್ ಆಗಿತ್ತು, ತದನಂತರ ಎಮ್ಮೆ ಕಳುಹಿಸಿಕೊಟ್ಟಿದ್ದಾರೆ ಎಂದಿದ್ದಾರೆ. ಇನ್ನು ಪ್ರೇಮ್ ಆಪ್ತ ಮೂಲಗಳ ಮಾಹಿತಿ ಪ್ರಕಾರ ಹಣ ವಾಪಾಸ್ ಕೊಡೋದಾಗಿ ಗುಜರಾತ್ ಮೂಲದ ವನರಾಜ್ ಒಪ್ಪಿಕೊಂಡಿದ್ದಾರೆ ಎನ್ನಲಾಗ್ತಿದೆ.

# ಹಾರರ್ ಅವತಾರದಲ್ಲಿ ಶ್ರೀವಲ್ಲಿ



ವಿಶ್ವದಾದ್ಯಂತ ದೀಪಾವಳಿಗೆ ಧಮಾಕಾ

ರಶ್ಮಿಕಾ ಮಂದಣ್ಣ ಅಭಿನಯದ ಹಾರರ್-ಕಾಮಿಡಿ-ಥ್ರಿಲ್ಲರ್ ಜಾನರ್‌ನ ಥಮಾ ಸಿನಿಮಾದ ಫಸ್ಟ್ ಲುಕ್ ಟೀಸರ್ ರಿಲೀಸ್ ಆಗಿದೆ. ಕೇವಲ ಸೌತ್‌ನಲ್ಲಷ್ಟೇ ಅಲ್ಲದೇ ಭಾರತೀಯ ಚಿತ್ರರಂಗದಲ್ಲಿ ನಟಿ ರಶ್ಮಿಕಾ ಮಂದಣ್ಣ ಗ್ಲಾಮರಸ್ ಪಾತ್ರಗಳ ಮೂಲಕ ಅಭಿಮಾನಿಗಳ ಮನಸ್ಸನ್ನ ಕದ್ದಿದ್ದಾರೆ. ಇದೀಗ ತಮ್ಮ 'ಥಮ' ಸಿನಿಮಾದ ಮೂಲಕ ಬೆಚ್ಚಿಬೀಳಿಸೋಕೆ ಹೊಸ ಪ್ರಯೋಗ ಮಾಡಿದ್ದಾರೆ. ಇದೇ ವರ್ಷ ದೀಪಾವಳಿಗೆ ಸಿನಿಮಾ ತೆರೆಗೆ ಬರಲಿದ್ದು, ಸಿನಿಮಾದ ಟೀಸರ್ ರಿಲೀಸ್ ಆಗಿದೆ. ರಶ್ಮಿಕಾ ವಿಭಿನ್ನವಾಗಿ ಕಾಣಿಸಿಕೊಂಡಿರುವ ಈ ಸಿನಿಮಾದಲ್ಲಿ ಅತಿದೊಡ್ಡ ತಾರಾಗಣವಿದೆ. ಆಯುಷ್ಮಾನ್ ಖುರಾನಾ, ರಶ್ಮಿಕಾ ಮಂದಣ್ಣ, ಪರೇಶ್ ರಾವಲ್, ನವಾಜುದ್ದೀನ್ ಸಿದ್ದಿಕ್ ಸೇರಿದಂತೆ ಮುಂತಾದವರು ಚಿತ್ರದ ತಾರಾಗಣದಲ್ಲಿದ್ದಾರೆ.

ರಶ್ಮಿಕಾ ವಿಶೇಷವಾಗಿ ತಾಡಾಕಾ ಅನ್ನೋ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದು, ತಮ್ಮ ವಿಭಿನ್ನ ಪ್ರಯತ್ನದಿಂದ ಮತ್ತಷ್ಟು ಗಮನ ಸೆಳೆಯುತ್ತಿದ್ದಾರೆ. ಮ್ಯಾಡ್‌ಡಾಕ್ ನಿರ್ಮಾಣ ಸಂಸ್ಥೆ ಈ ಸಿನಿಮಾವನ್ನ ನಿರ್ಮಾಣ ಮಾಡಿದ್ದು, ಈ ಮೊದಲು ಹಲವಾರು ಹಾರರ್ ಸಿನಿಮಾಗಳನ್ನ ನಿರ್ಮಾಣ ಮಾಡಿದೆ. ರಶ್ಮಿಕಾ ಮಂದಣ್ಣ ಪುಷ್ಪ-2, ಛಾವಾ ಚಿತ್ರಗಳ ಬಿಗ್ ಸಕ್ಸಸ್‌ನ ನಂತರ 'ಥಮ' ಸಿನಿಮಾ, ವಿಶ್ವದಾದ್ಯಂತ ದೀಪಾವಳಿಗೆ ಧಮಾಕಾ ಮಾಡಲು ಬರುತ್ತಿದೆ. ರಶ್ಮಿಕಾ ನಯಾ ಅವತಾರವನ್ನ ಅವರ ಭಕ್ತಗಣ, ಪ್ರೇಕ್ಷಕ ವರ್ಗ ಯಾವರೀತಿ ಸ್ವೀಕಾರ ಮಾಡುತ್ತೆ ಕಾದು ನೋಡ್ಬೇಕು.

# 4 ದಶಕದ ನಂತರ ಒಂದೇ ತೆರೆಯಲಿ ಸೂಪರ್‌ಸ್ಟಾರ್ಸ್!

ಸೂಪರ್ ಸ್ಟಾರ್ ರಜನಿಕಾಂತ್ ಹಾಗೂ ಉಳಗನಾಯಗನ್ ಕಮಲ್ ಹಾಸನ್ ಅವರಿಗೆ ಈಗಾಗಲೇ 70 ವರ್ಷಗಳು ದಾಟಿದ್ದರೂ ಗ್ಯಾಂಗ್ ಸ್ಟರ್‌ಗಳಾಗಿ ಸಿನಿಮಾದಲ್ಲಿ ಮಿಂಚಲಿದ್ದಾರೆ. ಈ ಸಿನಿಮಾಗೆ ನಿರ್ದೇಶಕ ಯಾರು. ದಕ್ಷಿಣ ಭಾರತದ ಸೂಪರ್ ಸ್ಟಾರ್‌ಗಳಾದ ರಜನಿಕಾಂತ್ ಹಾಗೂ ಕಮಲ್



ಹಾಸನ್ ಅವರು 46 ವರ್ಷಗಳ ನಂತರ ಒಂದೇ ಸಿನಿಮಾದಲ್ಲಿ ಕಾಣಿಸಿಕೊಳ್ಳಲ್ಲಿದ್ದಾರೆ. ಲೆಜೆಂಡರಿ ಹೀರೋಗಳು ಸ್ಕ್ರೀನ್ ಶೇರ್ ಮಾಡಿಕೊಳ್ಳುತ್ತಿರುವುದು ದೊಡ್ಡ ಮಟ್ಟದಲ್ಲಿ ಸುದ್ದಿಯಾಗುತ್ತಿದ್ದು ಈ ಸಿನಿಮಾವನ್ನು ಲೋಕೇಶ್ ಕನಕರಾಜ್ ಅವರು ನಿರ್ದೇಶನನ ಮಾಡಲಿದ್ದಾರೆ ಎಂದು ಹೇಳಲಾಗುತ್ತಿದೆ.

ಸೂಪರ್ ಸ್ಟಾರ್ ರಜನಿಕಾಂತ್ ಹಾಗೂ ಉಳಗನಾಯಗನ್ ಕಮಲ್ ಹಾಸನ್ ಅವರಿಗೆ ಈಗಾಗಲೇ 70 ವರ್ಷಗಳು ದಾಟಿದ್ದರೂ ಗ್ಯಾಂಗ್‌ಸ್ಟರ್‌ಗಳಾಗಿ ಸಿನಿಮಾದಲ್ಲಿ ಮಿಂಚಲಿದ್ದಾರಂತೆ. ಈ ಕುರಿತು ಸಿನಿಮಾ ಸ್ಕ್ರಿಪ್ಟ್ ಅನ್ನು ಕೊರೊನಾಗಿಂತ ಮೊದಲೇ ಸಿದ್ಧವಾಗಿತ್ತು. ಆದರೆ ಇಷ್ಟು ದಿನ ಈ ಸ್ಕ್ರಿಪ್ಟ್ ಅನ್ನು ಹಾಗೇ ಇಡಲಾಗಿತ್ತು. ಈಗ ಮತ್ತೆ ಇದು ಮುನ್ನೆಲೆಗೆ ಬಂದಿದ್ದು ಹೆಸರಿಡದ ಸಿನಿಮಾ ಮತ್ತೊಂದು ಹಂತಕ್ಕೆ ಹೋಗುವ ನಿರೀಕ್ಷೆ ಇದೆ ಎನ್ನಲಾಗಿದೆ. ದಿಗ್ಗಜ ನಟರು ಅಭಿನಯಿಸಲಿದ್ದಾರೆ ಎನ್ನುವ ಸಿನಿಮಾ ಇನ್ನು ಮಾತುಕತೆಯಲ್ಲಿದೆ. ಇದರ ನಡುವೆ ಲೋಕೇಶ್ ಕನಕರಾಜ್ ಅವರು ಕಾರ್ತಿ ಜೊತೆ ಖೈದಿ-2 ಸಿನಿಮಾವನ್ನು ಕೈಗೆತ್ತಿಕೊಂಡಿದ್ದಾರೆ. ರಜನಿಕಾಂತ್ ಹಾಗೂ ಕಮಲ್ ಹಾಸನ್ ಅವರ ಮುಂಬರುವ ದೊಡ್ಡ ಪ್ರಾಜೆಕ್ಟ್ ಇದಾಗಿದ್ದು, ಹೀಗಾಗಿ ಅವರಿಗಾಗಿ ನಿರ್ದೇಶಕರು ಇನ್ನಷ್ಟು ಕಾಯಬೇಕಾಗಿದೆ ಎಂದು ಹೇಲಾಗುತ್ತಿದೆ. ಈ ಹಿಂದೆ ರಜನಿಕಾಂತ್ ಹಾಗೂ ಕಮಲ್ ಹಾಸನ್ ಅವರು ಹಲವು ಸಿನಿಮಾಗಳಲ್ಲಿ ನಟಿಸಿ ಜನರ ಮನ ಗೆದ್ದಿದ್ದರು.



# ಟಾಪ್ 5 ರೊಳಗಿದ್ದ ರೋಹಿತ್, ಕೊಹ್ಲಿ ಹೆಸರು ಇದ್ದಕ್ಕಿದ್ದಂತೆ ನಾಪತ್ತೆ..!

ಐಸಿಸಿ ಹೊಸದಾಗಿ ಬಿಡುಗಡೆ ಮಾಡಿದ ಏಕದಿನ ಬ್ಯಾಟ್ಸ್‌ಮನ್‌ಗಳ ಶ್ರೇಯಾಂಕ ಪಟ್ಟಿಯಲ್ಲಿ ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಅವರ ಹೆಸರುಗಳು ಕಾಣೆಯಾಗಿವೆ. ಇದು ತಾಂತ್ರಿಕ ದೋಷವಾಗಿರಬಹುದು ಎಂದು ಹಿಂದೂಸ್ತಾನ್ ಟೈಮ್ಸ್ ವರದಿ ಮಾಡಿದೆ. ಐಸಿಸಿ ನಿಯಮಗಳ ಪ್ರಕಾರ, 9-12 ತಿಂಗಳ ಕಾಲ ಪಂದ್ಯ ಆಡದಿದ್ದರೆ ಮಾತ್ರ ಶ್ರೇಯಾಂಕದಿಂದ ಹೊರಗುಳಿಯಲಾಗುತ್ತದೆ. ಆದರೆ ಇಬ್ಬರೂ ಇತ್ತೀಚೆಗೆ ಪಂದ್ಯಗಳನ್ನು ಆಡಿದ್ದಾರೆ. ಐಸಿಸಿ ಈ ತಪ್ಪನ್ನು ಶೀಘ್ರದಲ್ಲೇ ಸರಿಪಡಿಸುವ ನಿರೀಕ್ಷೆಯಿದೆ.

ಐಸಿಸಿ, ಏಕದಿನ ಬ್ಯಾಟ್ಸ್‌ಮನ್‌ಗಳ ನೂತನ ರ್‍ಯಾಂಕಿಂಗ್ ಪಟ್ಟಿಯನ್ನು ಪ್ರಕಟಿಸಿದೆ. ಇದರಲ್ಲಿ ಅತ್ಯಂತ ಆಶ್ಚರ್ಯಕರ ವಿಷಯವೆಂದರೆ ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಅವರ ಹೆಸರು ಈ ಪಟ್ಟಿಯಿಂದ ಕಾಣೆಯಾಗಿರುವುದು. ವಾಸ್ತವವಾಗಿ ಈ ಇಬ್ಬರು ಆಟಗಾರರು ಇತ್ತೀಚಿನ ಐಸಿಸಿ ರ್‍ಯಾಂಕಿಂಗ್‌ನಿಂದ ಹೊರಗುಳಿದಿಲ್ಲ, ಬದಲಿಗೆ ಕಣ್ಮರೆಯಾಗಿದ್ದಾರೆ.

ಕಳೆದ ವಾರ ಐಸಿಸಿ ಬಿಡುಗಡೆ ಮಾಡಿದ್ದ ಪಟ್ಟಿಯಲ್ಲಿ ಏಕದಿನ ಬ್ಯಾಟ್ಸ್‌ಮನ್ ಶ್ರೇಯಾಂಕದಲ್ಲಿ, ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಇಬ್ಬರೂ ಟಾಪ್ 5 ರಲ್ಲಿ ಸ್ಥಾನ ಪಡೆದಿದ್ದರು. ಆದರೆ, ಹೊಸ ಶ್ರೇಯಾಂಕ ಪಟ್ಟಿಯಲ್ಲಿ ಇವರಿಬ್ಬರ ಹೆಸರು ನಾಪತ್ತೆಯಾಗಿದೆ.

**ಕೊಹ್ಲಿ, ರೋಹಿತ್ ಹೆಸರು ನಾಪತ್ತೆ**

ಕಳೆದ ವಾರದ ಏಕದಿನ ಶ್ರೇಯಾಂಕದಲ್ಲಿ ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಇಬ್ಬರೂ ಟಾಪ್ 5 ರಲ್ಲಿದ್ದರು. ರೋಹಿತ್ ಶರ್ಮಾ 756 ರೇಟಿಂಗ್ ಅಂಕಗಳೊಂದಿಗೆ 2ನೇ ಸ್ಥಾನದಲ್ಲಿದ್ದರೆ, ಕೊಹ್ಲಿ ಕೂಡ 736 ರೇಟಿಂಗ್ ಅಂಕಗಳೊಂದಿಗೆ 4ನೇ ಸ್ಥಾನದಲ್ಲಿದ್ದರು. ಆದರೆ ಆಗಸ್ಟ್ 19ರಂದು ಹೊರಬಂದ ಶ್ರೇಯಾಂಕದಲ್ಲಿ, ಈ ಇಬ್ಬರು ಆಟಗಾರರು ಟಾಪ್ 10 ರೊಳಗೂ ಕಾಣಿಸಿಕೊಂಡಿಲ್ಲ.

**ಹೆಸರು ಕಾಣದಿರಲು ಕಾರಣವೇನು**

ಈಗ ಪ್ರಶ್ನೆ ಏನೆಂದರೆ ರೋಹಿತ್ ಮತ್ತು ವಿರಾಟ್ ಐಸಿಸಿ ಏಕದಿನ ಶ್ರೇಯಾಂಕದಿಂದ ಹಠಾತ್ತನೆ ಹೊರಬಿದ್ದಿರುವುದಕ್ಕೆ ಕಾರಣವೇನು ಇದರ ಹಿಂದೆ ಯಾವುದೇ ನಿಯಮವಿದೆಯೇ ಅಥವಾ ಇದು ಐಸಿಸಿಯು ಮಾಡಿದ ತಪ್ಪೇ. ಮೊದಲನೆಯದಾಗಿ, ಐಸಿಸಿ ಶ್ರೇಯಾಂಕ ನಿಯಮಗಳ ಪ್ರಕಾರ, ಒಬ್ಬ ಆಟಗಾರ ನಿವೃತ್ತರಾಗಿದ್ದರೆ ಅಥವಾ 9-12 ತಿಂಗಳೊಳಗೆ ಯಾವುದೇ ಏಕದಿನ ಪಂದ್ಯವನ್ನು ಆಡದಿದ್ದರೆ ಮಾತ್ರ ಏಕದಿನ ಶ್ರೇಯಾಂಕದ ಟಾಪ್ 100 ರಲ್ಲಿ ಸ್ಥಾನ ಪಡೆಯುವುದಿಲ್ಲ.

# ತಾರತಮ್ಯ ನಡೆಯುತ್ತಿದೆ

ಶ್ರೇಯಸ್ ಕಡೆಗಣನೆಗೆ ಮಾಜಿ ಆಟಗಾರರ ಅಸಮಾಧಾನ

ನಿರೀಕ್ಷೆಯಂತೆ 2025 ರ ಏಷ್ಯಾಕಪ್‌ಗೆ ಭಾರತ ತಂಡ ಪ್ರಕಟಿಸಲಾಗಿದೆ. ಸೂರ್ಯಕುಮಾರ್ ಯಾದವ್ ತಂಡವನ್ನು ಮುನ್ನಡೆಸಿದರೆ, ಶುಭ್‌ಮನ್ ಗಿಲ್ ಉಪನಾಯಕನಾಗಿ ಕಾಣಿಸಿಕೊಳ್ಳಲಿದ್ದಾರೆ.

ಆಯ್ಕೆಯಾಗಿರುವ ತಂಡದಲ್ಲಿ ಈಗಾಗಲೇ ನಿರೀಕ್ಷಿಸಿದ್ದ ಹೆಸರುಗಳೇ ಸೇರಿವೆ. ಆದಾಗ್ಯೂ ಟಿ20 ಕ್ರಿಕೆಟ್‌ನಲ್ಲಿ ಅಮೋಘ ಪ್ರದರ್ಶನ ನೀಡಿರುವ ಶ್ರೇಯಸ್ ಅಯ್ಯರ್ ಅವರನ್ನು ಕಡೆಗಣಿಸಿರುವುದು ಸಾಕಷ್ಟು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಏಕದಿನ ವಿಶ್ವಕಪ್, ಚಾಂಪಿಯನ್ಸ್ ಟ್ರೋಫಿ ಹಾಗೂ ಐಪಿಎಲ್‌ನಲ್ಲಿ ಭರ್ಜರಿ ಪ್ರದರ್ಶನ ನೀಡಿದ್ದ ಶ್ರೇಯಸ್ ಅಯ್ಯರ್ ಅವರನ್ನು ಏಷ್ಯಾಕಪ್‌ಗೆ ಆಯ್ಕೆ ಮಾಡಬೇಕೆಂಬ ಕೂಗು ಜೋರಾಗಿ ಕೇಳಿಬಂದಿತ್ತು. ಆದರೆ ಆಯ್ಕೆ ಮಂಡಳಿ ಅಯ್ಯರ್ ಅವರನ್ನು 20 ಸದಸ್ಯರ ತಂಡದಲ್ಲೂ ಸೇರಿಲ್ಲ. ಇದು ಭಾರತದ ಮಾಜಿ ಆರಂಭಿಕ ಆಟಗಾರರಾದ ಕೃಷ್ಣಮಾಚಾರಿ ಶ್ರೀಕಾಂತ್, ಅಭಿಷೇಕ್ ನಾಯರ್ ಮತ್ತು ರವಿಚಂದ್ರನ್ ಅಶ್ವಿನ್ ಅವರ ಅಸಮಾಧಾನಕ್ಕೆ ಕಾರಣವಾಗಿದೆ.

ಕೃಷ್ಣಮಾಚಾರಿ ಶ್ರೀಕಾಂತ್ ತಮ್ಮ ಯೂಟ್ಯೂಬ್ ಚಾನೆಲ್ ಈ ಬಗ್ಗೆ ಅಸಮಾಧಾನ ಹೊರಹಾಕಿದ್ದು, 'ಶ್ರೇಯಸ್ ಅಯ್ಯರ್ ವಿರುದ್ಧ ಪಕ್ಷಪಾತ ಮಾಡಲಾಗುತ್ತಿದೆ . ಅವರು ಯಾವ ತಪ್ಪು ಮಾಡಿದರು ಶ್ರೇಯಸ್ ಅಯ್ಯರ್ ಚಾಂಪಿಯನ್ಸ್ ಟ್ರೋಫಿ ಸೇರಿದಂತೆ ಕೆಲವು ಸಮಯದ ಉತ್ತಮ ಪ್ರದರ್ಶನ ನೀಡಿದರು. ಹೀಗಾಗಿ ಅವರ ಪ್ರದರ್ಶನವನ್ನು ಏಕೆ ಪರಿಗಣಿಸಲಿಲ್ಲ' ಎಂದು ಬಿಸಿಸಿಐಗೆ ಪ್ರಶ್ನೆ ಮಾಡಿದ್ದಾರೆ. ಹಾಗೆಯೇ ಟೀಂ ಇಂಡಿಯಾದ ಅನುಭವಿ ಆಲ್‌ರೌಂಡರ್ ರವಿಚಂದ್ರನ್ ಅಶ್ವಿನ್ ತಮ್ಮ ಯೂಟ್ಯೂಬ್ ಚಾನೆಲ್ನಲ್ಲಿ, 'ಶ್ರೇಯಸ್ ಅವರ ದಾಖಲೆಯನ್ನು ನೀವು ನೋಡಿದ್ದೀರಿ, ತಂಡದಿಂದ ಹೊರಗುಳಿದ ನಂತರವೂ, ಅವರು ಚಾಂಪಿಯನ್ಸ್ ಟ್ರೋಫಿಯಲ್ಲಿ ತಂಡದ ಪರ ಅದ್ಭುತ ಪ್ರದರ್ಶನ ನೀಡಿದ್ದರು. ಹಾಗೆಯೇ ಕೆಕೆಆರ್ ತಂಡ ಐಪಿಎಲ್ ಗೆಲ್ಲುವಂತೆ ಮಾಡಿದ್ದರೂ, ಅವರನ್ನು ತಂಡದಿಂದ ಬಿಡುಗಡೆ ಮಾಡಲಾಯಿತು . ಆ ನಂತರ ಪಂಜಾಬ್ ತಂಡವನ್ನು ಸೇರಿಕೊಂಡಿದ್ದ ಅಯ್ಯರ್ 11 ವರ್ಷಗಳ ನಂತರ ಪಂಜಾಬ್ ಕಿಂಗ್ಸ್ ತಂಡವನ್ನು ಫೈನಲ್‌ಗೆ ಕರೆದೊಯ್ದರು. ಈ ಎಲ್ಲಾ ಪ್ರದರ್ಶನದ ನಡುವೆಯೂ ಅವರನ್ನು ಕಡೆಗಣಿಸಿರುವುದು ನನಗೆ ತುಂಬಾ ಬೇಸರ ತರಿಸಿದೆ ಎಂದಿದ್ದಾರೆ.ಈ ಹಿಂದೆ ಟೀಂ ಇಂಡಿಯಾದ ಸಹಾಯಕ ಕೋಚ್ ಆಗಿದ್ದ ಅಭಿಷೇಕ್ ನಾಯರ್ ಕೂಡ ಇದಕ್ಕೆ ಆಕ್ರೋಶ ಹೊರಹಾಕಿದ್ದು, ಏಷ್ಯಾಕಪ್ ತಂಡದಲ್ಲಿ ಸ್ಥಾನ ಪಡೆಯಲು ಶ್ರೇಯಸ್ ಬಲಿಷ್ಠ ಸ್ಪರ್ಧಿಯಾಗಿದ್ದರು. ಆದಾಗ್ಯೂ ಅವರನ್ನು ಮೀಸಲು ಆಟಗಾರನಾಗಿಯೂ ಆಯ್ಕೆ ಮಾಡಿಲ್ಲ. ಅವರನ್ನು ಮೀಸಲು ಆಟಗಾರನಾಗಿ ಆಯ್ಕೆ ಮಾಡದಿರಲು ಏನು ಸಮರ್ಥನೆ ಇರಬಹುದೆಂದು ನನಗೆ ನಿಜವಾಗಿಯೂ ಅರ್ಥವಾಗುತ್ತಿಲ್ಲ ಎಂದಿದ್ದಾರೆ.



# ಹರ್ಷಿತ್ ಆಯ್ಕೆಗೆ ಅನುಭವಿಗಳ ಅಪಸ್ವರ



ಈತ ಎಲ್ಲಿಂದ ಬಂದ

2025 ರ ಏಷ್ಯಾಕಪ್‌ಗಾಗಿ ಟೀಂ ಇಂಡಿಯಾವನ್ನು ಪ್ರಕಟಿಸಿದ ಬಳಿಕ ತಂಡದ ಅನೇಕ ಮಾಜಿ ಅನುಭವಿ ಆಟಗಾರರು ತಂಡದ ಆಯ್ಕೆಯ ಬಗ್ಗೆ ಪ್ರಶ್ನೆಗಳನ್ನು ಎತ್ತಲು ಪ್ರಾರಂಭಿಸಿದ್ದಾರೆ. ಅದರಲ್ಲೂ ಭಾರತ ತಂಡದ ಪರ ಏಕೈಕ ಪಂದ್ಯವನ್ನಾಡಿರುವ ಯುವ ವೇಗಿ ಹರ್ಷಿತ್ ರಾಣಾ ಆಯ್ಕೆಯ ಬಗ್ಗೆ ಭಾರತದ ಮಾಜಿ ಕ್ರಿಕೆಟಿಗ ಕೆ. ಶ್ರೀಕಾಂತ್ ಪ್ರಶ್ನೆಗಳನ್ನು ಎತ್ತಿದ್ದಾರೆ. ಈ ಹರ್ಷಿತ್ ರಾಣಾ ಈ ತಂಡದಲ್ಲಿ ಎಲ್ಲಿಂದ ಬಂದರು ಎಂದು ಪ್ರಶ್ನೆ ಮಾಡಿರುವ ಶ್ರೀಕಾಂತ್, 'ಐಪಿಎಲ್‌ನಲ್ಲಿ ಹರ್ಷಿತ್ ರಾಣಾ ಅವರ ಪ್ರದರ್ಶನ ತುಂಬಾ ಕಳಪೆಯಾಗಿತ್ತು. ಹೀಗಿರುವಾಗ ಅವರನ್ನು ಆಯ್ಕೆ ಮಾಡುವ ಮೂಲಕ ನೀವು ಇತರ ಆಟಗಾರರಿಗೆ ಯಾವ ಸಂದೇಶವನ್ನು ನೀಡುತ್ತಿದ್ದೀರಿ. ಹರ್ಷಿತ್ ರಾಣಾ ಬದಲಿಗೆ ವಾಷಿಂಗ್ಟನ್ ಸುಂದರ್ ತಂಡದಲ್ಲಿ ಸ್ಥಾನ ಪಡೆಯಬೇಕಿತ್ತು ಎಂದು ಶ್ರೀಕಾಂತ್ ಅಭಿಪ್ರಾಯಪಟ್ಟಿದ್ದಾರೆ. ಶ್ರೀಕಾಂತ್ ತಮ್ಮ ಯೂಟ್ಯೂಬ್ ಚಾನೆಲ್‌ನಲ್ಲಿ, 'ಹರ್ಷಿತ್ ರಾಣಾ ಎಲ್ಲಿಂದ ಬಂದರು ಅವರು ಐಪಿಎಲ್‌ನಲ್ಲಿ ತುಂಬಾ ಕಳಪೆ ಪ್ರದರ್ಶನ ನೀಡಿದ್ದರು. ಅವರ ಎಕಾನಮಿ ರೇಟ್ ಪ್ರತಿ ಓವರ್‌ಗೆ 10 ರನ್‌ಗಳಿಗಿಂತ ಹೆಚ್ಚಿತ್ತು. ಹೀಗಿರುವಾಗ ಅವರನ್ನು ತಂಡಕ್ಕೆ ಆಯ್ಕೆ ಮಾಡುವ ಮೂಲಕ ಪ್ರಸಿದ್ಧ್ ಕೃಷ್ಣ ಮತ್ತು ಸಿರಾಜ್‌ಗೆ ನೀವು ಯಾವ ಸಂದೇಶವನ್ನು ನೀಡುತ್ತಿದ್ದೀರಿ ಎಂಬ ಪ್ರಶ್ನೆಯನ್ನು ಬಿಸಿಸಿಐ ಮುಂದಿಟ್ಟಿದ್ದಾರೆ. ಹಾಗೆಯೇ ಶಿವಂ ದುಬೆ ಆಯ್ಕೆಯ ಬಗ್ಗೆಯೂ ಅಸಮಾಧಾನಗೊಂಡಿರುವ ಅವರು, ಶಿವಂ ದುಬೆ ಬದಲಿಗೆ ವಾಷಿಂಗ್ಟನ್ ಸುಂದರ್‌ಗೆ ಅವಕಾಶ ಸಿಗಬೇಕಿತ್ತು. ಏಕೆಂದರೆ ಸುಂದರ್ ನಿಮಗೆ 6ನೇ ಬೌಲಿಂಗ್ ಆಯ್ಕೆಯ ಜೊತೆಗೆ ಬ್ಯಾಟಿಂಗ್‌ನಲ್ಲೂ ನೆರವಾಗುತ್ತಿದ್ದರು. ಆದರೆ ನೀವು ಅವರನ್ನು ಕಡೆಗಣಿಸಿ, ತಿಲಕ್ ವರ್ಮಾ, ಅಭಿಷೇಕ್ ಶರ್ಮಾ ಅಥವಾ ಶಿವಂ ದುಬೆ ಅವರನ್ನು ಆರನೇ ಬೌಲರ್ ಆಗಿ ನೋಡುತ್ತಿದ್ದೀರಿ.

# ಸಂಜು ಸ್ಯಾಮ್ಸನ್ ಹೊಗಳಿದ್ರಾ ಗಂಭೀರ್..

2025 ರ ಏಷ್ಯಾಕಪ್‌ಗೆ ಭಾರತ ಟಿ20 ತಂಡವನ್ನು ಆಯ್ಕೆ ಮಾಡಲಾಗಿದೆ. ಮೀಸಲು ಆಟಗಾರರು ಸೇರಿದಂತೆ ಒಟ್ಟು 20 ಸದಸ್ಯರನ್ನು ಈ ಟೂರ್ನಿಗೆ ಆಯ್ಕೆ ಮಾಡಲಾಗಿದೆ. ಆದಾಗ್ಯೂ ಆಯ್ಕೆಯಾಗಿರುವ ಈ 20 ಆಟಗಾರರಲ್ಲಿ ಆಡುವ ಹನ್ನೊಂದರ ಬಳಗದಲ್ಲಿ ಯಾರಿಗೆ ಅವಕಾಶ ಸಿಗುತ್ತದೆ ಎಂಬುದು ಪ್ರಶ್ನೆಯಾಗಿದೆ. ಕೆಲವರ ಸ್ಥಾನ ಈಗಾಗಲೇ ಖಚಿತವಾಗಿದೆಯಾದರೂ, ಇನ್ನು ಕೆಲವರು ತಮ್ಮ ಸ್ಥಾನವನ್ನು ಮಾತ್ರ ಅಲ್ಲದೆ ಪ್ಲೇಯಿಂಗ್ 11ನಿಂದಲೂ ಕೂಡ ಹೊರಬೀಳುವ ಸಾಧ್ಯತೆಗಳಿವೆ.

ಆ ರೀತಿ ಆಡುವ ಹನ್ನೊಂದರ ಬಳಗದಿಂದ ಹೊರಬೀಳಬಹುದಾದ




ಆಟಗಾರರ ಪಟ್ಟಿಯಲ್ಲಿ ಆರಂಭಿಕ ಸಂಜು ಸ್ಯಾಮ್ಸನ್ ಅವರ ಹೆಸರು ಮುಂಚೂಣಿಯಲ್ಲಿದೆ. ಇತ್ತೀಚಿನ ದಿನಗಳಲ್ಲಿ ಭಾರತ ಟಿ20 ತಂಡದ ಆರಂಭಿಕನಾಗಿ ಕಣಕ್ಕಿಳಿಯುತ್ತಿದ್ದ ಸಂಜು, ಇದೀಗ ತಮ್ಮ ಆರಂಭಿಕ ಸ್ಥಾನವನ್ನು ಕಳೆದುಕೊಳ್ಳುವ ಸನಿಹದಲ್ಲಿದ್ದಾರೆ.

ವಾಸ್ತವವಾಗಿ, ಸಂಜು ಅವರ ಇತ್ತೀಚಿನ ಟಿ20 ಫಾರ್ಮ್ ಸ್ವಲ್ಪ ಕಳಪೆಯಾಗಿದೆ. ಕಳೆದ 5 ಟಿ20 ಇನ್ನಿಂಗ್ಸ್‌ಗಳಲ್ಲಿ ಅವರು ಕೇವಲ 51 ರನ್ ಮಾತ್ರ ಗಳಿಸಿದ್ದಾರೆ. ಆದರೆ ಅದಕ್ಕೂ ಮೊದಲು, ಅವರು ಆಡಿದ 5 ಇನ್ನಿಂಗ್ಸ್‌ಗಳಲ್ಲಿ 3 ಶತಕಗಳನ್ನು ಬಾರಿಸಿದ್ದರು. ಅಂದರೆ, ಸಂಜು ಸ್ಯಾಮ್ಸನ್ ಆರಂಭಿಕನಾಗಿ ಅದ್ಭುತ ಪ್ರದರ್ಶನ ನೀಡಿದ್ದಾರೆ ಎನ್ನಬಹುದು.

ಆದರೀಗ ಏಷ್ಯಾಕಪ್‌ಗೆ ಪ್ರಕಟವಾಗಿರುವ ತಂಡದಲ್ಲಿ ಸಂಜು ಆರಂಭಿಕನಾಗಿ ಕಣಕ್ಕಿಳಿಯುವುದು ಅನುಮಾನವಾಗಿದೆ. ಏಕೆಂದರೆ ಅವರ ಜಾಗಕ್ಕೆ ಶುಭ್‌ಮನ್ ಗಿಲ್ ಅವರನ್ನು ಆಯ್ಕೆ ಮಾಡಲಾಗಿದೆ. ಇದು ಸಾಲದೆಂಬಂತೆ ಅವರನ್ನು ಉಪನಾಯಕನನ್ನಾಗಿ ನೇಮಿಸಲಾಗಿದೆ. ಇದರರ್ಥ ತಂಡದಲ್ಲಿ ಗಿಲ್ ಆಡುವುದು ಖಚಿತವಾಗಿದೆ. ಹೀಗಿರುವಾಗ ಸಂಜು ತಮ್ಮ ಸ್ಥಾನವನ್ನು ಕಳೆದುಕೊಳ್ಳಬಹುದು.

ಸಂಜು ಸ್ಯಾಮ್ಸನ್ ಈ ಚುಟುಕು ಮಾದರಿಯಲ್ಲಿ ಆರಂಭಿಕನಾಗಿ ಆಡಿದ್ದೆ ಹೆಚ್ಚು. ಹೀಗಿರುವಾಗ ಅವರನ್ನು ಗೇಮ್ ಫಿನಿಶರ್ ಪಾತ್ರದಲ್ಲಿ ಕಾಣುವುದು ಸ್ವಲ್ಪ ಕಷ್ಟ. ಅಲ್ಲದೆ ಎರಡನೇ ವಿಕೆಟ್ ಕೀಪರ್ ಆಗಿ ಆಯ್ಕೆಯಾಗಿರುವ ಜಿತೇಶ್ ಶರ್ಮಾ ಈ ಹಿಂದೆ ಐಪಿಎಲ್‌ನಲ್ಲಿ ಆರ್‌ಸಿಬಿ ಪರ ಗೇಮ್ ಫಿನಿಶರ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದರು. ಹೀಗಾಗಿ ಸಂಜು ಬದಲಿಗೆ ಜಿತೇಶ್‌ಗೆ ಆಯ್ಕೆದಾರರು ಮಣೆ ಹಾಕಿದರೆ ಅಚ್ಚರಿ ಪಡಬೇಕಾಗಿಲ್ಲ.

ಇನ್ನು ಸಂಜುರನ್ನು ಆರಂಭಿಕನಾಗಿ ಅಲ್ಲದೆ ಬೇರೆ ಕ್ರಮಾಂಕದಲ್ಲಿ ಆಡಿಸಬಹುದು ಅಂದುಕೊಂಡರೆ, ಅದು ಕೂಡ ಆಗದ ಮಾತು. ಏಕೆಂದರೆ, ಬ್ಯಾಟಿಂಗ್ ಕ್ರಮಾಂಕದಲ್ಲಿ ಎಡ, ಬಲ ಸಂಯೋಜನೆಯನ್ನು ಪರಿಗಣನೆಗೆ ತೆಗದುಕೊಂಡರೆ, ತಿಲಕ್ ವರ್ಮಾ ಮೂರನೇ ಕ್ರಮಾಂಕದಲ್ಲಿ ಬರಲಿದ್ದಾರೆ. ಆ ಬಳಿಕ ಸೂರ್ಯ, ಶಿವಂ ದುಬೆ, ಹಾರ್ದಿಕ್ ಪಾಂಡ್ಯ ಬರಲಿದ್ದಾರೆ.



**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**